ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜೂನ್ 12 ಬುಧವಾರ 2024

45

ಸಂಪುಟ: 45 | ಸಂಚಿಕೆ: 57 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಸಹಚರರ ಹೇಳಿಕೆ ಆಧರಿಸಿ ನಟ ದರ್ಶನ್ ಬಂಧನ



ಬೆಂಗಳೂರು: ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಕೊಲೆ ಕೇಸ್‌ನಲ್ಲಿ ಚಾಲೆಂಜಿಂಗ್ ಸ್ಟಾರ್ ದರ್ಶನ್ ಬಂಧನವಾಗಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಖಚಿತಪಡಿಸಿದ್ದಾರೆ. ಬೆಂಗಳೂರಿನ ಕಾಮಾಕ್ಷಿಪಾಳ್ಯದ ಸತ್ವ ಅಪಾರ್ಟ್‌ಮೆಂಟ್ ಬಳಿಯ ಮೋರಿಯಲ್ಲಿ ಸುಮಾರು 35 ವರ್ಷದ ಯುವಕನ ಶವ ಪತ್ತೆಯಾದ ಹಿನ್ನೆಲೆಯಲ್ಲಿ ಪ್ರಕರಣದ ಜಾಡು ಹಿಡಿದು ತನಿಖೆ ಮಾಡುತ್ತಾ ಹೋದ ಪೊಲೀಸರಿಗೆ ಇದರಲ್ಲಿ ನಟ ದರ್ಶನ್ ಮತ್ತು ಅವರ ಸಹಚರರ ಕೊಲೆಯ ಕೈವಾಡವಿರುವುದು ಪತ್ತೆಯಾಯಿತು. ಅದರಂತೆ ಇಂದು ಬೆಳಗ್ಗೆ ● 9ನೇ ಪುಟಕ್ಕೆ

ಅಭಿಮಾನಿಯ ಅಪಹರಣ, ಚಿತ್ರಹಿಂಸೆ, ಹತ್ಯೆ ಆರೋಪ...

ನಟ ದರ್ಶನ್ ಬಂಧನ

● ಇವರೊಂದಿಗೆ ಗೆಳತಿ ಪವಿತ್ರಾಗೌಡ ಸೇರಿ ಒಟ್ಟು 13 ಮಂದಿ ಸೆರೆ ● ಎಲ್ಲರೂ 6 ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ● ದರ್ಶನ್ ದಾಂಪತ್ಯದಲ್ಲಿ ಮಧ್ಯ ಪ್ರವೇಶಿಸಿದ ಪವಿತ್ರಾಗೌಡ ಟೀಕಿಸಿ ಅವಾಚ್ಯ ಸಂದೇಶ ಕಳಿಸಿದ ಚಿತ್ರದುರ್ಗದ ರೇಣುಕಾಸ್ವಾಮಿ ಹತ್ಯೆ ನಡೆದಿತ್ತು



ಬೆಂಗಳೂರು, ಜೂ.11–ತಮ್ಮದೇ ಅಭಿಮಾನಿಯನ್ನು ಅಪಹರಿಸಿ, ಚಿತ್ರಹಿಂಸೆ ನೀಡಿ, ಹತ್ಯೆ ಮಾಡಿದ ಆರೋಪದ ಮೇರೆಗೆ ಬೆಂಗಳೂರಿನ ಕಾಮಾಕ್ಷಿಪಾಳ್ಯ ಠಾಣೆ ಪೊಲೀಸರು ಚಾಲೆಂಜಿಂಗ್ ಸ್ಟಾರ್ ದರ್ಶನ್ ಅವರನ್ನು ಬಂಧಿಸಿದ್ದಾರೆ.

ದರ್ಶನ ಗೆಳತಿ ನಟಿ ಪವಿತ್ರಾಗೌಡ ಅವರ ಪೋಸ್ಟ್‌ಗಳಲ್ಲಿ ಅಶ್ಲೀಲವಾಗಿ ಕಾಮೆಂಟ್ ಮಾಡಿದ ಹಾಗೂ ಆಕೆಗೆ ಅಶ್ಲೀಲ ಸಂದೇಶ ರವಾನಿಸಿದ ಎಂಬ ಕಾರಣಕ್ಕಾಗಿ ಚಿತ್ರದುರ್ಗದ ತಮ್ಮ ಕಟ್ಟಾ ಅಭಿಮಾನಿ ರೇಣುಕಾಸ್ವಾಮಿ (33) ಎಂಬಾತನನ್ನು ಅಪಹರಿಸಿ ಬೆಂಗಳೂರಿಗೆ ಕರೆತಂದು ಹತ್ಯೆ ಮಾಡಿದ ನಂತರ ಶವವನ್ನು ರಾಜ ಕಾಲುವೆಗೆ ಎಸೆದ ಈ ಪ್ರಕರಣದಲ್ಲಿ ದರ್ಶನ್, ಪವಿತ್ರಾ ಗೌಡ ಸೇರಿದಂತೆ 13 ಮಂದಿಯನ್ನು ಬಂಧಿಸಲಾಗಿದೆ. ದರ್ಶನ್‌ನನ್ನು ಮೈಸೂರಿನ ಎಂ.ಜಿ. ರಸ್ತೆಯಲ್ಲಿರುವ ರ್‍ಯಾಡಿಸನ್ ಬ್ಲೂ ಹೋಟೆಲ್ ಬಳಿ ಇಂದು ಬೆಳಿಗ್ಗೆ ಬಂಧಿಸಲಾಯಿತು.












ನಟ ದರ್ಶನ್‌ನನ್ನು ಪೊಲೀಸರು ನ್ಯಾಯಾಲಯಕ್ಕೆ ಕರೆದೊಯ್ಯುತ್ತಿರುವುದು.

ಈ ಪ್ರಕರಣದಲ್ಲಿ ಪವಿತ್ರಾಗೌಡ ಮೊದಲ ಆರೋಪಿಯಾದರೆ, ದರ್ಶನ್ ಎರಡನೇ ಆರೋಪಿಯಾಗಿದ್ದಾರೆ. ನಂತರ ಕ್ರಮವಾಗಿ ದರ್ಶನ್ ಮತ್ತು ಪವಿತ್ರಾ ಆಪ್ತ ಕೆ.ಪವನ್, ದರ್ಶನ್ ಸ್ನೇಹಿತ ಸೋನಿ ಬ್ರೂಕ್ ರೆಸ್ಟೋರೆಂಟ್ ಮಾಲೀಕ ವಿನಯ್, ಪ್ರದೋಷ್, ನಂದೀಶ್, ದೀಪಕ್, ಲಕ್ಷ್ಮಣ್, ನಾಗರಾಜ್, ಕಾರ್ತೀಕ್, ನಿಖಿಲ್, ಕೇಶವಮೂರ್ತಿ, ಚಿತ್ರದುರ್ಗ ಜಿಲ್ಲಾ ದರ್ಶನ್ ಅಭಿಮಾನಿ ಸಂಘದ ಅಧ್ಯಕ್ಷ ರಾಘವೇಂದ್ರ ಅಲಿಯಾಸ್ ರಾಘು ಬಂಧಿತರು. ಇವರೆಲ್ಲರನ್ನು ಹೆಚ್ಚಿನ ತನಿಖೆಗಾಗಿ 6 ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ನೀಡಿ ಬೆಂಗಳೂರಿನ 24ನೇ ಎಸಿಎಂಎಂ ನ್ಯಾಯಾಲಯದ ನ್ಯಾಯಾಧೀಶರಾದ ವಿಶ್ವನಾಥ್ ಸಿ.ಗೌಡರ್ ಆದೇಶಿಸಿದ್ದಾರೆ.

ರೋಚಕ ವಿವರ: ದರ್ಶನ್‌ನ ಅಪ್ಪಟ ಅಭಿಮಾನಿಯಾಗಿದ್ದು, ದರ್ಶನ್ ಮತ್ತು ವಿಜಯಲಕ್ಷ್ಮಿ ದಂಪತಿ ● 5ನೇ ಪುಟಕ್ಕೆ

ದರ್ಶನ್ ಅಪ್ಪಟ ಅಭಿಮಾನಿ ರೇಣುಕಾಸ್ವಾಮಿ

● ಪತ್ನಿ ಮೂರು ತಿಂಗಳ ಗರ್ಭಿಣಿ ● ನೆಚ್ಚಿನ ನಾಯಕನ ಕುಟುಂಬದ ಬಗ್ಗೆ ಕಾಳಜಿ ಹೊಂದಿದ್ದೆ ಇವರ ಜೀವಕ್ಕೆ ಕುತ್ತಾಯಿತು



ಮೃತ ರೇಣುಕಾಸ್ವಾಮಿ

ಬೆಂಗಳೂರು: ಚಿತ್ರದುರ್ಗದ ರೇಣುಕಾಸ್ವಾಮಿ ನಟ ದರ್ಶನ್ ಅವರ ಅಪ್ಪಟ ಅಭಿಮಾನಿ. ಈತ ಚಿತ್ರದುರ್ಗದ ಲಕ್ಷ್ಮೀವೆಂಕಟೇಶ್ವರ ಬಡಾವಣೆಯಲ್ಲಿ ವಾಸವಿದ್ದ. ಅಪೋಲೊ ಮೆಡಿಕಲ್ ಶಾಪ್‌ನಲ್ಲಿ ಕೆಲಸ ಮಾಡುತ್ತಿದ್ದ.

ಬೆಸ್ಕಾಂ ನಿವೃತ್ತ ಅಧಿಕಾರಿ ಶಿವನಗೌಡ ಮತು ರತ್ನಪ್ರಭ ದಂಪತಿ ಪುತ್ರ ರೇಣುಕಾಸ್ವಾಮಿಗೆ ಕಳೆದ ವರ್ಷದ ಜೂನ್ 28ರಂದು ವಿವಾಹವಾಗಿದ್ದು, ಇನ್ನು ಕೆಲವೇ ದಿನಗಳಲ್ಲಿ ಮೊದಲ ವಾರ್ಷಿಕೋತ್ಸವ ಆಚರಿಸುವುದರಲ್ಲಿದ್ದ. ಅದಲ್ಲದೆ ರೇಣುಕಾಸ್ವಾಮಿ ಪತ್ನಿ ಈಗ ಮೂರು ತಿಂಗಳ ಗರ್ಭಿಣಿ. ಪತಿಯನ್ನು ಕಳೆದುಕೊಂಡ ನೋವಿನಲ್ಲಿ ಪತ್ನಿ ಮತ್ತು ರೇಣುಕಾಸ್ವಾಮಿ ಪೋಷಕರು ತೀವ್ರ ದುಃಖದಲ್ಲಿದ್ದಾರೆ. ರೇಣುಕಾಸ್ವಾಮಿ ಭಜರಂಗದಳದಲ್ಲಿಯೂ ಗುರುತಿಸಿಕೊಂಡಿದ್ದ. 3 ವರ್ಷದ ಹಿಂದೆ ಭಜರಂಗದಳ ಸುರಕ್ಷಾ ಪ್ರಮುಖ ಆಗಿದ್ದ. ನಟ ದರ್ಶನ್ ಅವರಿಗೆ ಆತ್ಮೀಯವಾಗಿರುವ ನಟಿ ● 5ನೇ ಪುಟಕ್ಕೆ

ನನಗೆ ನ್ಯಾಯ ಕೊಡಿಸಿ: ಮಾಧ್ಯಮದ ಮುಂದೆ ರೇಣುಕಾಸ್ವಾಮಿ ಪತ್ನಿ ಕಣ್ಣೀರು

ಚಿತ್ರದುರ್ಗ, ಜೂ.11–ನನ್ನ ಗಂಡ ದರ್ಶನ್ ಅಭಿಮಾನಿಯಲ್ಲ, ನಾನು ಗರ್ಭಿಣಿ ಇದೀನಿ. ನಂಗೆ ಹೀಗೆ ಆಗಬಾರದಿತ್ತು ಎಂದು ರೇಣುಕಾಸ್ವಾಮಿ ಪತ್ನಿ ಸಹನಾ ಕಣ್ಣೀರು ಹಾಕಿದ್ದಾರೆ. ನನ್ನ ಗಂಡನಿಗೆ ವಾರ್ನ್ ಮಾಡಬೇಕಿತ್ತು, ಪ್ರಾಣ ಯಾಕೆ ತೆಗೆಯಬೇಕಿತ್ತು, ನನ್ನ ಕಷ್ಟ ಯಾರಿಗೂ ಬರಬಾರದು, ನನಗೆ ನ್ಯಾಯ ಕೊಡಿಸಿ ಎಂದು ಮಾಧ್ಯಮದ ಮುಂದೆ ಕಣ್ಣೀರು ಹಾಕಿದ್ದಾರೆ.

ನಗರಕ್ಕೆ ಮೃತ ದೇಹ ಆಗಮಿಸಿದ ವೇಳೆ ಗಂಡನ ಶವವನ್ನು ನೋಡಿ ಕಣ್ಣೀರು ಹಾಕಿದ ಅವರು, ನಾನು ರೇಣುಕಾಸ್ವಾಮಿ ಜೊತೆಗೆ ಮದುವೆಯಾಗಿ 1 ವರ್ಷ ಆಗಿದೆ, ಇದೀಗ ನಾನು ಗರ್ಭಿಣಿಯಾಗಿದ್ದೀನಿ, ಈ ಮಗುವಿನ ಜವಾಬ್ದಾರಿ ಯಾರದು ಎಂದು ಪ್ರಶ್ನೆ ಮಾಡಿದ್ದಾರೆ.

ಮೊನ್ನೆಯಷ್ಟೇ ಕರೆ ಮಾಡಿ ಮಾತಾಡಿದ್ದು ಕೊನೆ. ನಾನು ಗಂಡನನ್ನು ಕಳೆದುಕೊಂಡಿದ್ದು, ಮುಂದಿನ ನನ್ನ ಜೀವನ ನಿರ್ವಹಣೆ ಹೇಗೆ ಮಾಡಬೇಕು. ನನ್ನ ಗಂಡನನ್ನು ಕೊಲೆ ಮಾಡಿದ್ದಾರೆ. ಈ ಕೊಲೆಗೆ ● 5ನೇ ಪುಟಕ್ಕೆ



ಪವಿತ್ರಾಗೌಡ

ಗೆಳತಿಗೆ ಅವಾಚ್ಯ ಮೆಸೇಜ್ ಕಳಿಸಿದ್ದೇ ಹತ್ಯೆಗೆ ಕಾರಣ

ಬೆಂಗಳೂರು: ಚಿತ್ರದುರ್ಗ ಮೂಲದ ರೇಣುಕಾ ಸ್ವಾಮಿ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿ ನಟ ದರ್ಶನ್ ಸೇರಿ 10ಕ್ಕೂ ಹೆಚ್ಚು ಮಂದಿಯನ್ನು ವಶಕ್ಕೆ ಪಡೆದು ತೀವ್ರ ವಿಚಾರಣೆ ನಡೆಸಲಾಗುತ್ತಿದೆ ಎಂದು ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ. ದಯಾನಂದ್ ತಿಳಿಸಿದ್ದಾರೆ. ಬೆಸ್ಕಾಂ ನಿವೃತ್ತ ನೌಕರನ ಮಗನಾಗಿರುವ ರೇಣುಕಾಸ್ವಾಮಿ ಅಪೋಲೋ ಮೆಡಿಕಲ್‌ನಲ್ಲಿ ಕೆಲಸ ಮಾಡುತ್ತಿದ್ದ. ಈತ ಕೂಡ ನಟ ದರ್ಶನ್ ಅಭಿಮಾನಿ. ಈತನ ಕೊಲೆ ಪ್ರಕರಣಕ್ಕೆ ಸಂಬಂಧಿಸಿ ಚಿತ್ರದುರ್ಗದ ದರ್ಶನ್ ಅಭಿಮಾನಿ ಸಂಘದ ರಾಘವೇಂದ್ರ, ವಿನಯ್ ಎಂಬುವವರನ್ನು ಸಹ ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ. ಕಾಮಾಕ್ಷಿಪಾಳ್ಯದ ಸತ್ವ ಅಪಾರ್ಟ್‌ಮೆಂಟ್ ಬಳಿಯ ಮೋರಿಯಲ್ಲಿ ಶವ ಪತ್ತೆಯಾಗಿದ್ದು, ನಾಯಿಗಳು ಕಚ್ಚಿ ● 5ನೇ ಪುಟಕ್ಕೆ

ಖ್ಯಾತ ಸರೋದ್ ವಾದಕ ಪಂಡಿತ್ ರಾಜೀವ್ ತಾರಾನಾಥ್ ಇನ್ನಿಲ್ಲ

● ಇಂದು ಬೆಳಗ್ಗೆ 9ರಿಂದ ಮಧ್ಯಾಹ್ನ 12ರವರೆಗೆ ಕುವೆಂಪುನಗರ ನಿವಾಸದಲ್ಲಿ ಅಂತಿಮ ದರ್ಶನಕ್ಕೆ ವ್ಯವಸ್ಥೆ ● ಮಧ್ಯಾಹ್ನ 2 ಗಂಟೆಗೆ ಚಾಮುಂಡಿಬೆಟ್ಟ ತಪ್ಪಲಲ್ಲಿ ಅಂತ್ಯಕ್ರಿಯೆ

ಶ್ರದ್ಧಾಂಜಲಿ ಪುಟ–4



ಮೈಸೂರು, ಜೂ.11(ಎಸ್‌ಬಿಡಿ)– ಅಂತಾರಾಷ್ಟ್ರೀಯ ಖ್ಯಾತಿಯ ಸರೋದ್ ವಾದಕರಾದ ಪಂಡಿತ್ ರಾಜೀವ್ ತಾರಾನಾಥ(92) ಅವರು ವಯೋಸಹಜ ಅನಾರೋಗ್ಯದಿಂದ ಮಂಗಳವಾರ ಸಂಜೆ ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು.

ಕುವೆಂಪುನಗರ ಜ್ಞಾನಗಂಗಾ ಶಾಲೆ ಸಮೀಪ, ಪಂಚಮಂತ್ರ ರಸ್ತೆಯಲ್ಲಿರುವ ಮನೆ ಬಳಿ ಬುಧವಾರ ಬೆಳಗ್ಗೆ 9ರಿಂದ ಮಧ್ಯಾಹ್ನ 12 ಗಂಟೆವರೆಗೆ ಪಂಡಿತ್ ರಾಜೀವ್ ತಾರಾನಾಥರ ಪಾರ್ಥಿವ ಶರೀರದ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಿದ್ದು, ಮಧ್ಯಾಹ್ನ 2 ಗಂಟೆಗೆ ಚಾಮುಂಡಿಬೆಟ್ಟ ತಪ್ಪಲಿನ ಚಿತಾಗಾರದಲ್ಲಿ ಅಂತ್ಯಕ್ರಿಯೆ ನಡೆಸಲಾಗುತ್ತದೆ ಎಂದು ತಿಳಿದುಬಂದಿದೆ. ಇವರ ಪುತ್ರ ಚೇತನ್ ತಾರಾನಾಥ್ ಅಮೆರಿಕಾದಲ್ಲಿದ್ದಾರೆ.

ರಾಜೀವ್ ತಾರಾನಾಥ್ ಅವರು ತಿಂಗಳ ಹಿಂದೆ ಬಿದ್ದು ಗಾಯಗೊಂಡಿದ್ದರು. ಖಾಸಗಿ ಆಸ್ಪತ್ರೆಯಲ್ಲಿ ಶಸ್ತ್ರ ಚಿಕಿತ್ಸೆಗೆ ಒಳಗಾಗಿ ಚೇತರಿಸಿಕೊಳ್ಳುತ್ತಿದ್ದರು. ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ. ಮಹದೇವಪ್ಪ ಆಸ್ಪತ್ರೆಗೆ ತೆರಳಿ ಅವರ ಆರೋಗ್ಯ ವಿಚಾರಿಸಿದರಲ್ಲದೆ, ಸಂಪೂರ್ಣ ಚಿಕಿತ್ಸಾ ವೆಚ್ಚವನ್ನು ಸರ್ಕಾರವೇ ಭರಿಸುವುದಾಗಿ ಭರವಸೆ ನೀಡಿದ್ದರು. ಎಂಎಲ್‌ಸಿ ನಾಗರಾಜ್ ಯಾದವ್ ಸೇರಿದಂತೆ ಹಲವು ಗಣ್ಯರು ಆಸ್ಪತ್ರೆಗೆ ಭೇಟಿ ನೀಡಿದ್ದರು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಮಂಗಳವಾರ ಸಂಜೆ 7 ಗಂಟೆ ಸುಮಾರಿಗೆ ಸರೋದ್ ದಿಗ್ಗಜ ರಾಜೀವ್ ತಾರಾನಾಥ್ ಉಸಿರು ನಿಲ್ಲಿಸಿದರು.

ಉತ್ತಮ ವಿದ್ಯಾರ್ಥಿ–ಮೇಷ್ಟ್ರು: ರಾಯಚೂರು ಜಿಲ್ಲೆಯ ಪಂಡಿತ್ ತಾರಾನಾಥ ಹಾಗೂ ಸುಮತಿಬಾಯಿ ● 9ನೇ ಪುಟಕ್ಕೆ

ಸ್ತಬ್ಧವಾದ ಸರೋದ್ ಸಾಧಕನಿಗೆ ಗಣ್ಯರ ಕಂಬನಿ

ಮೈಸೂರು: ಪದ್ಮಶ್ರೀ ಪಂಡಿತ್ ರಾಜೀವ್ ತಾರಾನಾಥ್ ಅವರ ಅಗಲಿಕೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಚಿವರುಗಳು ಕಂಬನಿ ಮಿಡಿದಿದ್ದಾರೆ.

ಶ್ರೇಷ್ಠ ಮಾನವತಾವಾದಿ: ಜಗತ್ಪ್ರಸಿದ್ಧ ಸರೋದ್ ವಾದಕ, ಕರ್ನಾಟಕದ ಹೆಮ್ಮೆಯ ಸುಪುತ್ರ ಪಂಡಿತ ರಾಜೀವ್ ತಾರಾನಾಥ್ ಅವರ ನಿಧನದಿಂದ ದು:ಖಿತನಾಗಿದ್ದೇನೆ. ಕರ್ನಾಟಕದ ಕೀರ್ತಿ ಪತಾಕೆಯನ್ನು ವಿಶ್ವದಾದ್ಯಂತ ಹಾರಿಸಿದ ರಾಜೀವ್ ತಾರಾನಾಥರ ಅಗಲಿಕೆ ಕರ್ನಾಟಕಕ್ಕೆ ಮಾತ್ರವಲ್ಲ ಇಡೀ ಸಂಗೀತಲೋಕಕ್ಕೆ ತುಂಬಲಾರದ ನಷ್ಟ. ರಾಜೀವ್ ತಾರಾನಾಥ್ ಖ್ಯಾತ ಸಂಗೀತ ಕಲಾವಿದರು ಮಾತ್ರ ಆಗಿರಲಿಲ್ಲ, ಅದನ್ನು ಮೀರಿ ಶ್ರೇಷ್ಠ ಮಾನವತಾವಾದಿಯಾಗಿದ್ದರು. ಅವರ ಕುಟುಂಬದ ಸದಸ್ಯರು ಮತ್ತು ಅಭಿಮಾನಿಗಳ ಶೋಕದಲ್ಲಿ ನಾನೂ ಭಾಗಿಯಾಗಿದ್ದೇನೆ. ಅವರ ಆತ್ಮಕ್ಕೆ ಶಾಂತಿ ಕೋರುವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಕ್ಸ್‌ನಲ್ಲಿ ಸಂತಾಪಿಸಿದ್ದಾರೆ.

ಶೋಷಿತರಿಗೂ ಸಂಗೀತ ಧಾರೆ: ಖ್ಯಾತ ಸರೋದ್ ವಾದಕರಾದ ಪಂಡಿತ್ ರಾಜೀವ್ ತಾರಾನಾಥ್ ಅವರು ನಮ್ಮನ್ನು ಅಗಲಿದ್ದು, ಅವರಿಗೆ ನನ್ನ ಗೌರವಪೂರ್ವಕ ನಮನಗಳು ಸಲ್ಲಿಸುತ್ತೇನೆ. ತಮ್ಮ ಬದುಕಲ್ಲಿ ಬಹಳಷ್ಟು ಬಡ ಮಕ್ಕಳು ಹಾಗೂ ಶೋಷಿತ ವರ್ಗದ ಪ್ರತಿಭೆಗಳಿಗೆ ಉಚಿತವಾಗಿ ಸಂಗೀತ ಹೇಳಿಕೊಟ್ಟ ತಾರಾನಾಥರು ಅಂತಾರಾಷ್ಟ್ರೀಯ ಮಟ್ಟದ ಮಹಾನ್ ಕಲಾವಿದರಾಗಿದ್ದರು. ಇತ್ತೀಚೆಗಷ್ಟೇ ಅವರನ್ನು ಭೇಟಿ ಮಾಡಿ ● 9ನೇ ಪುಟಕ್ಕೆ

ಮೈಸೂರು ಮಿತ್ರ ಬುಧವಾರ 12 ಜೂನ್ 2024

ಜೂ.16ರಂದು ವಿ.ಶ್ರೀನಿವಾಸ ಪ್ರಸಾದ್ ಸ್ಮರಣಾರ್ಥ 'ಸ್ವಾಭಿಮಾನಿಗೆ ಗಾನ ನಮನ'



ಮೈಸೂರು, ಜೂ.11(ಜಿಎ)–ಮೈಸೂರಿನ ಸಮಾನಮನಸ್ಕ ಗೆಳೆಯರ ಬಳಗ ಮತ್ತು ಚಾಮರಾಜ ನಗರದ ರಂಗ ವಾಹಿನಿ ವತಿಯಿಂದ ಮೈಸೂರಿನ ರಮಾಗೋವಿಂದ ರಂಗ ಮಂದಿರಲ್ಲಿ ಜೂ.16 ರಂದು ಸಂಜೆ 5 ಗಂಟೆಗೆ ವಿ.ಶ್ರೀನಿವಾಸ್ ಪ್ರಸಾದ್ ಸ್ಮರಣಾರ್ಥ 'ಸ್ವಾಭಿಮಾನಿಗೆ ಗಾನನಮನ' ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಸಿ.ಹರಕುಮಾರ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಸ್ವಾಭಿಮಾನಿಗೆ ಗಾನನಮನ'ಕ್ಕೆ ರಂಗಾಯಣದ ಮಾಜಿ ನಿರ್ದೇಶಕ ಹೆಚ್. ಜನಾರ್ಧನ್ (ಜನ್ನಿ) ಚಾಲನೆ ನೀಡಲಿದ್ದಾರೆ. ಭಾಗ್ಯಲಕ್ಷ್ಮೀ ವಿ.ಶ್ರೀನಿವಾಸ್‌ಪ್ರಸಾದ್ ಅವರು ವಿ.ಶ್ರೀನಿವಾಸ್ ಪ್ರಸಾದ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಿದ್ದಾರೆ. ಮೈಸೂರು ವಿಶ್ವವಿದ್ಯಾನಿಲಯ ಕಾಲೇಜು ಅಭಿವೃದ್ಧಿ ಮಂಡಳಿ ನಿರ್ದೇಶಕ ಪ್ರೊ.ಡಿ. ಆನಂದ್ ಉಪಸ್ಥಿತರಿರಲಿದ್ದಾರೆ ಎಂದರು. ಕಾರ್ಯಕ್ರಮದಲ್ಲಿ ಯಾವುದೇ ವೇದಿಕೆ ಕಾರ್ಯಕ್ರಮವಿರುವುದಿಲ್ಲ. ಗಾಯಕ, ಗಾಯಕಿಯರು ಹೋರಾಟ, ಜನಪದ ಮತ್ತು ಭಾವಗೀತೆಗಳನ್ನು ಹಾಡಲಿದ್ದಾರೆ. ಪ್ರಮುಖವಾಗಿ ವಿ.ಶ್ರೀನಿವಾಸ್ ಪ್ರಸಾದ್ ಅವರು ಕೇಳುತ್ತಿದ್ದ ಹಾಡುಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದ್ದು, ಅವುಗಳನ್ನು ಪ್ರಸ್ತುತಪಡಿಸಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಸಿ.ಎಂ.ನರಸಿಂಹಮೂರ್ತಿ, ಎನ್.ಶಂಕರ್, ಬದನಾಳು ಬಸವಣ್ಣ, ಸೋಮಯ್ಯ ಮಲೆಯೂರು, ಕೆ.ಆರ್. ಗೋಪಾಲಕೃಷ್ಣ ಉಪಸ್ಥಿತರಿದ್ದರು.

ನೀಟ್ ಅಕ್ರಮ ತನಿಖೆಗೆ ಆಗ್ರಹಿಸಿ ಮೈಸೂರಲ್ಲಿ ಪ್ರತಿಭಟನೆ

ಮೈಸೂರು, ಜೂ.11(ಜಿಎ)–ನೀಟ್ ಭ್ರಷ್ಟಾಚಾರ ಹಾಗೂ ಪರೀಕ್ಷಾ ಅಕ್ರಮದ ಬಗ್ಗೆ ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಆಗ್ರಹಿಸಿ ಎಐಡಿಎಸ್‌ಓ ವತಿಯಿಂದ ನಗರದ ಹಳೆ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.

ಈ ವೇಳೆ ಎಐಡಿಎಸ್‌ಓ ಜಿಲ್ಲಾ ಕಾರ್ಯದರ್ಶಿ ಚಂದ್ರಕಲಾ ಮಾತನಾಡಿ, ಜೂ.4ರಂದು ಪ್ರಕಟಗೊಂಡ ನೀಟ್ ಫಲಿತಾಂಶದ ಪಾರದರ್ಶಕತೆಯ ಕುರಿತು ದೇಶವ್ಯಾಪಿ ವಿದ್ಯಾರ್ಥಿಗಳು ಹಾಗೂ ಪಾಲಕರು ಹಲವಾರು ಪ್ರಶ್ನೆಗಳನ್ನು ಎತ್ತಿದ್ದಾರೆ. ಯುಜಿಸಿ ಪರೀಕ್ಷಾ ಮಾರ್ಗಸೂಚಿ ಅನ್ವಯ ಅಂಕಗಳನ್ನು ನೀಡಿದ್ದಲ್ಲಿ ವಿದ್ಯಾರ್ಥಿಗಳು ಪಡೆಯಬಹುದಾದ ಅಂಕಗಳೊಂದಿಗೆ ವಿದ್ಯಾರ್ಥಿಗಳು ಪಡೆದಿರುವ ಅಂಕಗಳು ಹೊಂದಿಕೆಯಾಗುತ್ತಿಲ್ಲ. ಕೆಲವು ವಿದ್ಯಾರ್ಥಿಗಳಿಗೆ ಹೆಚ್ಚುವರಿ ಅಂಕ ನೀಡಿರುವುದಾಗಿ ಎನ್‌ಟಿಎ ಸಮಜಾಯಿಷಿ ನೀಡಿದೆ. ಆದರೆ, ಹೆಚ್ಚುವರಿ ಅಂಕ ನೀಡಿರುವ ಮಾನದಂಡ ಸಂಪೂರ್ಣವಾಗಿ ಪಕ್ಷಪಾತಿಯಾಗಿದೆ. ಈ ವರ್ಷ ಪ್ರಕಟಿಸಲಾಗಿದ್ದ ಮಾರ್ಗಸೂಚಿ ಅನ್ವಯ ಹೆಚ್ಚುವರಿ ಅಂಕಗಳನ್ನು ನೀಡಲು ಅವಕಾಶವಿಲ್ಲ. ಆಶ್ಚರ್ಯಕರವೆಂಬಂತೆ, ಒಂದೇ ಕೇಂದ್ರದಲ್ಲಿ ಪರೀಕ್ಷೆ ಬರೆದ ವಿದ್ಯಾರ್ಥಿಗಳು ಸಮಾನ ಅಂಕಗಳಿಸಿದ್ದಾರೆ. ಇದರೊಂದಿಗೆ, ಪರೀಕ್ಷೆಗೂ ಮುನ್ನವೇ ಪ್ರಶ್ನೆಪತ್ರಿಕೆಗಳು ಸೋರಿಕೆಯಾಗಿದ್ದವು ಈ ಕುರಿತು ಸಮರ್ಪಕ ತನಿಖೆ ನಡೆಸಲಾಗಿಲ್ಲ ಎಂಬ ಆರೋಪವಿದೆ ಎಂದು ಕಿಡಿಕಾರಿದರು. ಅನಿರೀಕ್ಷಿತ ಕೆಟ್ಟ ಫಲಿತಾಂಶದಿಂದಾಗಿ ಈಗಾಗಲೇ ಕೆಲ ವಿದ್ಯಾರ್ಥಿಗಳು ಆತ್ಮಹತ್ಯೆಗೆ ತುತ್ತಾಗಿದ್ದಾರೆ. ನೀಟ್ ಪರೀಕ್ಷೆ ಫಲಿತಾಂಶದಲ್ಲಿನ ಪಾರದರ್ಶಕತೆ ಕೊರತೆ ಮತ್ತು ಭ್ರಷ್ಟಾಚಾರದ ಕುರಿತು ಸಾಕಷ್ಟು ಆರೋಪಗಳು ಕೇಳಿಬಂದಿವೆ. ಪ್ರತಿಭಟನೆಯಲ್ಲಿ ಎಐ ಡಿಎಸ್‌ಓ ಉಪಾಧ್ಯಕ್ಷರಾದ ನಿತಿನ್, ಸ್ವಾತಿ, ಪದಾಧಿಕಾರಿಗಳಾದ ಚಂದ್ರಿಕಾ, ಹೇಮಾ, ಅಂಜಲಿ ತೇಜು, ವಿದ್ಯಾರ್ಥಿಗಳು ಇದ್ದರು.



ನೀಟ್ ಭ್ರಷ್ಟಾಚಾರ ಹಾಗೂ ಪರೀಕ್ಷಾ ಅಕ್ರಮದ ಬಗ್ಗೆ ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಆಗ್ರಹಿಸಿ ಎಐಡಿಎಸ್‌ಓ ವತಿಯಿಂದ ಮೈಸೂರಿನ ಹಳೆ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.

> "ರಾಜ್ಯಮಟ್ಟದಲ್ಲಿ ಜಂಟಿ ಪ್ರವೇಶ ಪರೀಕ್ಷೆ ಜಾರಿಯಲ್ಲಿದ್ದಾಗ, ಭ್ರಷ್ಟಾಚಾರದ ಕಾರಣ ನೀಡಿಯೇ ಅಖಿಲ ರಾಷ್ಟ್ರ ಮಟ್ಟದ ನೀಟ್ ಪರೀಕ್ಷೆ ಪ್ರಾರಂಭಿಸಲಾಗಿತ್ತು. ಭ್ರಷ್ಟಾಚಾರದ ಕುರಿತು ತನಿಖೆ ನಡೆಸಿ ಸಂಬಂಧಪಟ್ಟವರಿಗೆ ಸೂಕ್ತ ಶಿಕ್ಷೆ ವಿಧಿಸುವುದರ ಬದಲಿಗೆ ಪರೀಕ್ಷಾ ಪದ್ಧತಿ ಬದಲಾಯಿಸುವುದು ಪರಿಹಾರವಲ್ಲ ಎಂದು ನಾವು ಆ ಸಂದರ್ಭದಲ್ಲಿ ಎಚ್ಚರಿಕೆ ನೀಡಿದ್ದೆವು. ನಮ್ಮ ಎಚ್ಚರಿಕೆ ಇಂದು ನಿಜವಾಗಿದೆ. ಸರ್ಕಾರದ ಪರೀಕ್ಷಾ ವ್ಯವಸ್ಥೆಯ ಸಂಪೂರ್ಣ ವ್ಯಾಪಾರೀಕರಣದಿಂದಾಗಿ ಇಡೀ ವೈದ್ಯಕೀಯ ಪ್ರವೇಶ ಪರೀಕ್ಷೆ ಕುಸಿತಕ್ಕೊಳಗಾಗುತ್ತಿದೆ. ಅಮಾಯಕ ವಿದ್ಯಾರ್ಥಿಗಳು ಬಲಿಪಶುಗಳಾಗಿದ್ದಾರೆ. ಹೀಗಾಗಿ ಪ್ರಕರಣದ ಕುರಿತು ನ್ಯಾಯಾಂಗ ತನಿಖೆ ನಡೆಸಬೇಕು. ಇದರಲ್ಲಿ ಭಾಗಿಯಾದ ಎಲ್ಲ ವ್ಯಕ್ತಿಗಳಿಗೂ ಕಠಿಣ ಶಿಕ್ಷೆ ವಿಧಿಸಬೇಕು.
> –ಪ್ರತಿಭಟನಾಕಾರರು.

ಕ್ಯಾನ್ಸರ್ ಸರ್ವೈಯರ್ ಮಾಸಾಚರಣೆ



ಮೈಸೂರಿನ ಅಪೋಲೊ ಆಸ್ಪತ್ರೆಯ ಕ್ಯಾನ್ಸರ್ ಇನ್‌ಸ್ಟಿಟ್ಯೂಟ್ ವತಿಯಿಂದ ಕ್ಯಾನ್ಸರ್ ಸರ್ವೈಯರ್ ಮಾಸಾಚರಣೆ ಅಂಗವಾಗಿ ವಾಕಥಾನ್ ಆಯೋಜಿಸಲಾಗಿತ್ತು. ಈ ವೇಳೆ ಅಪೋಲೊ ಬಿಜಿಎಸ್ ಆಸ್ಪತ್ರೆಯ ಕನ್ಸಲ್ಟೆಂಟ್ ಶಸ್ತ್ರಚಿಕಿತ್ಸಾ ಆನ್ಕೊಲೊಜಿಸ್ಟ್ ಡಾ.ರಮ್ಯಾ ಯೇತಡ್ಕ, ಅಪೋಲೊ ಬಿಜಿಎಸ್ ಆಸ್ಪತ್ರೆಯ ಕನ್ಸಲ್ಟೆಂಟ್ ವೈದ್ಯಕೀಯ ಆನ್ಕೊಲೊಜಿಸ್ಟ್ ನವೀನ್ ಜಯರಾಮ್ ಅನ್ವೇಕರ್, ಅಪೋಲೊ ಬಿಜಿಎಸ್ ಆಸ್ಪತ್ರೆಯ ಉಪಾಧ್ಯಕ್ಷ ಮತ್ತು ಘಟಕ ಮುಖ್ಯಸ್ಥ ಎನ್.ಜಿ.ಭರತೀಶ ರೆಡ್ಡಿ, ಡಾ.ನವೀನ್ ಜಯರಾಮ್ ಅನ್ವೇಕರ್ ಮತ್ತು ಸಮುದಾಯದ ಪ್ರಮುಖ ಸದಸ್ಯರು ಉಪಸ್ಥಿತರಿದ್ದರು.

ನಂಜನಗೂಡಿನಲ್ಲಿ ಸಾಮೂಹಿಕ ಧರ್ಮೋಪನಯನ...



ನಂಜನಗೂಡು ನಗರದ ಸೃಜನ ಸೇವಾಭಿವೃದ್ಧಿ ನ್ಯಾಸ್ ಟ್ರಸ್ಟ್ ವತಿಯಿಂದ ಆಯೋಜಿಸಲಾಗಿದ್ದ ಧರ್ಮೋಪನಯನ ಮಹೋತ್ಸವದಲ್ಲಿ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ರಾಜ್ಯ ಉಪಾಧ್ಯಕ್ಷ ನಂ.ಶ್ರೀಕಂಠಕುಮಾರ್ ವಟುಗಳಿಗೆ ಶುಭ ಕೋರಿದರು. ಸಮಿತಿ ಸದಸ್ಯ ಶಂಕರನಾರಾಯಣ, ದಿನೇಶ್, ಟ್ರಸ್ಟ್ ಅಧ್ಯಕ್ಷ ಟಿ.ಎನ್.ಗೋಪಿನಾಥ್, ಉಪಾಧ್ಯಕ್ಷ ವೆಂಕಟೇಶ್, ಶ್ರೀಕಂಠಪ್ರಸನ್ನ, ರಘು ನಾಗರಾಜು ಬಾಲಸುಬ್ರಹ್ಮಣ್ಯ, ಗುರು, ಸುಧಾಮಣಿ, ಸತೀಶ್ ದಳವಾಯಿ, ನಾಗಸಂದ್ರ, ಪುಷ್ಪ, ಸಾವಿತ್ರಿ ಮತ್ತಿತರರಿದ್ದರು.

ರಫ್ತು ನಿರ್ವಹಣಾ ತರಬೇತಿ ಕಾರ್ಯಕ್ರಮ

ಮೈಸೂರು, ಜೂ.11–ಬೆಂಗಳೂರಿನ ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರ, ಮೈಸೂರು ಜಿಲ್ಲಾ ಕೈಗಾರಿಕಾ ಕೇಂದ್ರಗಳ ಸಂಯುಕ್ತ ಆಶ್ರಯದಲ್ಲಿ ಕೈಗಾರಿಕೋದ್ಯಮಿಗಳು ಹಾಗೂ ವಾಣಿಜ್ಯೋದ್ಯಮಿಗಳಿಗೆ ಜೂ.24ರಿಂದ 29ರವರೆಗೆ 6 ದಿನಗಳ ರಫ್ತು ನಿರ್ವಹಣಾ ತರಬೇತಿ ಕಾರ್ಯಕ್ರಮವನ್ನು ಮೈಸೂರಿನ ಹೋಟೆಲ್ ಪ್ರೆಸಿಡೆಂಟ್‌ನಲ್ಲಿ ಏರ್ಪಡಿಸಲಾಗಿದೆ.

ತರಬೇತಿ ಕಾರ್ಯಕ್ರಮದಲ್ಲಿ ಅಂತರರಾಷ್ಟ್ರೀಯ ವ್ಯಾಪಾರಗಳು, ರಫ್ತು ವ್ಯವಹಾರಗಳಿಗೆ ಸಂಬಂಧಿಸಿದ ವಿದೇಶಿ ನೀತಿ ನಿಯಮಗಳು, ರಫ್ತು ಉತ್ಪನ್ನಗಳ ಮೌಲ್ಯ ಹಾಗೂ ಬೆಲೆ ನಿಗದಿಪಡಿಸುವುದು, ವಿವಿಧ ಕೈಗಾರಿಕಾ ಹಾಗೂ ಇತರೆ ಉತ್ಪನ್ನಗಳಿಗೆ ರಫ್ತು ವಲಯಗಳಲ್ಲಿನ ಬೇಡಿಕೆ, ರಫ್ತು ನಿರ್ವಹಣೆ ಮತ್ತು ಮಾರುಕಟ್ಟೆ, ಕೇಂದ್ರ ಅಬಕಾರಿ ಮತ್ತು ಸುಂಕಗಳ ಕುರಿತ ನಿಯಮಾವಳಿಗಳು, ರಫ್ತು ಉತ್ತೇಜನಾ ಸಂಸ್ಥೆಗಳ ನೆರವು, ರಫ್ತು ಉತ್ಪನ್ನಗಳ ವಿಮೆ ಮತ್ತು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ರಫ್ತುದಾರರಿಗೆ ದೊರೆಯುವ ರಿಯಾಯಿತಿ ಮತ್ತು ಪ್ರೋತ್ಸಾಹಗಳು ಹಾಗೂ ಇತರೆ ರಫ್ತು ವ್ಯವಹಾರಗಳ ಬಗ್ಗೆ ಸಂಬಂಧಪಟ್ಟ ಇಲಾಖೆ/ಸಂಸ್ಥೆಗಳ ಅಧಿಕಾರಿಗಳು ತರಬೇತಿದಾರರಿಗೆ ಮಾಹಿತಿ ನೀಡುವರು. ಆಸಕ್ತ ಉದ್ಯಮಿಗಳು ಹಾಗೂ ವಾಣಿಜ್ಯದಾರರು ಮೈಸೂರಿನ ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರದ ಉಪ ನಿರ್ದೇಶಕರ ಬಳಿ ಹೆಸರು ನೋಂದಾಯಿಸಿಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ. ಸಂ.948181 5035 ಅಥವಾ vipcmysore@gmail.com ಇ–ಮೇಲ್ ಮೂಲಕ ಸಂಪರ್ಕಿಸಬಹುದು ಎಂದು ರಫ್ತು ಮಾಹಿತಿ ಕೇಂದ್ರದ ವಿ.ಟಿ.ಪಿ.ಸಿ.ಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೆಳೆ ವಿಮೆ ಬಗ್ಗೆ ರೈತರಲ್ಲಿ ಜಾಗೃತಿ ಅಭಿಯಾನ

ಮೈಸೂರು, ಜೂ.11– ಮಾನ್ಸೂನ್‌ನಿಂದಾಗಿ ರೈತರು ಬಿತ್ತನೆಗೆ ಮುಂದಾಗಿರುವ ಹಿನ್ನೆಲೆಯಲ್ಲಿ ರೈತರಿಗೆ ಬೆಳೆ ವಿಮೆ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಅಭಿಯಾನಕ್ಕೆ ಚಾಲನೆ ನೀಡಲಾಗಿದೆ. ಹವಾಮಾನ ವೈಪರೀತ್ಯಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ರೈತರಿಗೆ ಆರ್ಥಿಕ ಸುರಕ್ಷಾ ಜಾಲವನ್ನು ರಚಿಸುವಲ್ಲಿ ಬೆಳೆ ವಿಮೆಯ ಪ್ರಾಮುಖ್ಯತೆಯನ್ನು ಅಭಿಯಾನವು ಸಾರಿ ಹೇಳುತ್ತದೆ.

30 ಸೆಕೆಂಡ್‌ಗಳ ದೂರದರ್ಶನ ಅಭಿಯಾನವು ರೈತರೊಂದಿಗೆ ಆಳವಾದ ಸಂಪರ್ಕವನ್ನು ರೂಪಿಸಲು ಮತ್ತು ಕ್ಷೇಮದ ಉದ್ಯಮದ ಮೊದಲ ಬೆಳೆ ವಿಮಾ ಯೋಜನೆ ಸುಕೃತಿಯನ್ನು ಪ್ರಕೃತಿಯೊಂದಿಗೆ ಸುಲಭವಾಗಿ ಪ್ರವೇಶಿಸಲು ಮನೆಯೊಳಗೆ ಅಭಿವೃದ್ಧಿಪಡಿಸಲಾಗಿದೆ. ಉತ್ಪನ್ನವು Google Play storeನಿಂದ ಡೌನ್‌ಲೋಡ್ ಮಾಡಬಹುದಾದ ಕ್ಷೇಮಾದ ಸ್ವಾಮ್ಯದ ಪ್ಲಾಟ್‌ಫಾರ್ಮ್‌ನಲ್ಲಿ ಲಭ್ಯವಿದೆ. ವಿಮೆ ಮಾಡಬಹುದಾದ ಆದಾಯ ಹೊಂದಿರುವ ಯಾವುದೇ ರೈತರು ಅಥವಾ ಕುಟುಂಬದ ಸದಸ್ಯರು ಈ ಗ್ರಾಹಕೀಯಗೊಳಿಸಬಹುದಾದ ಬೆಳೆ ವಿಮೆಯನ್ನು ಪ್ರತಿ ಎಕರೆಗೆ ರೂ 499ರಿಂದ ಖರೀದಿಸಬಹುದು. ಒಂದು ಪ್ರಮುಖ ಮತ್ತು ಸಣ್ಣ ಅಪಾಯದ ಸಂಯೋಜನೆಯಿಂದ 100ಕ್ಕೂ ಹೆಚ್ಚು ಬೆಳೆಗಳನ್ನು ರಕ್ಷಿಸಬಹುದು. ಅವರು ಅಪ್ಲಿಕೇಶನ್ ಡೌನ್‌ಲೋಡ್ ಮಾಡಿ, ನೋಂದಾಯಿಸಿ, ತಮ್ಮ ಫಾರ್ಮ್ ಅನ್ನು ಜಿಯೋ –ಟ್ಯಾಗ್ ಮಾಡಿ ಮತ್ತು ಪ್ರೀಮಿಯಂ ಪಾವತಿಸುವುದು. "ಬೆಳೆ ನಷ್ಟ ಮತ್ತು ಆದಾಯದ ಆಘಾತ ವನ್ನು ತಗ್ಗಿಸುವ ಬಗ್ಗೆ ಅರಿವು ಮೂಡಿಸಲು ನಾವು ತಂದೆ–ಮಗಳ ಸಂಬಂಧದ ನಂಬಲಾಗದಷ್ಟು ಶಕ್ತಿಯುತ ಚಿತ್ರಣವನ್ನು ಅವಲಂಬಿಸಿರುವುದಕ್ಕೆ ನನಗೆ ಸಂತೋಷವಾಗಿದೆ. ಬೆಳೆ ವಿಮೆಯ ಸಹಾಯದಿಂದ. ಆದಾಯದ ಆಘಾತಗಳಿಂದ ರಕ್ಷಿಸುವ ಮತ್ತು ಆರ್ಥಿಕ ಸ್ಥಿತಿಸ್ಥಾಪಕತ್ವವನ್ನು ನಿರ್ಮಿಸುವ ಪ್ರಾಮುಖ್ಯತೆ ತಿಳಿಸಲು ನಾವು ತಂದೆ ಮತ್ತು ಮಗಳ ನಡುವಿನ ಸಂಭಾಷಣೆಯ ಭಾವನಾತ್ಮಕ ಆಳವನ್ನು ಆರಿಸಿದ್ದೇವೆ. ವಯಸ್ಕರನ್ನು ಯೋಚಿಸಲು ಒತ್ತಾಯಿಸುವ ಅತ್ಯಂತ ಸರಳತೆಯಿಂದ ಮಕ್ಕಳು ಅತ್ಯಂತ ಕಟುವಾದ ಪ್ರಶ್ನೆಗಳನ್ನು ಕೇಳಬಹುದು. ಅಪಾಯಗಳಿಂದ ಉಂಟಾದ ಆರ್ಥಿಕ ನಷ್ಟವನ್ನು ತಗ್ಗಿಸಲು ಬೆಳೆ ವಿಮೆ ಖರೀದಿಸುವ ನಮ್ಮ ಸಂದೇಶವನ್ನು ಸಾಗಿಸಲು ನಾವು ಮುಗ್ಧತೆಯ ಕ್ಷಣವನ್ನು ಸೆರೆಹಿಡಿಯಲು ನಿರ್ಧರಿಸಿದ್ದೇವೆ ಎಂದು ಕ್ಷೇಮಾ ಜನರಲ್ ಇನ್ಶೂರೆನ್ಸ್ ಲಿಮಿಟೆಡ್‌ನ ಮುಖ್ಯ ಮಾರುಕಟ್ಟೆ ಅಧಿಕಾರಿ ಭಾಸ್ಕರ್ ಠಾಕೂರ್ ಹೇಳಿದರು.



ಕೃಷಿ ಮತ್ತು ಸಂಬಂಧಿತ ವಲಯಗಳು 2021–22ರ ಆವರ್ತಕ ಕಾರ್ಮಿಕ ಬಲ ಸಮೀಕ್ಷೆಯ ಪ್ರಕಾರ 45.5 ಪ್ರತಿಶತವನ್ನು ಒಳಗೊಂಡಿರುವ ಉದ್ಯೋಗಿಗಳ ಅತಿದೊಡ್ಡ ಪಾಲನ್ನು ತೊಡಗಿಸಿಕೊಂಡಿವೆ. ಭಾರತದ GDPಗೆ ಸುಮಾರು 15 ಪ್ರತಿಶತವನ್ನು ಕೊಡುಗೆ ನೀಡುತ್ತವೆ. ಆದಾಗ್ಯೂ, ಹವಾಮಾನ ಬದಲಾವಣೆಯಿಂದಾಗಿ ನೈಸರ್ಗಿಕ ವಿಪತ್ತು ಘಟನೆಗಳು ಹೆಚ್ಚು ಆಗಾಗ್ಗೆ ಮತ್ತು ತೀವ್ರವಾಗುತ್ತಿವೆ. ಇದು ರೈತರಿಗೆ ಅಸಮಾನವಾಗಿ ಪರಿಣಾಮ ಬೀರುತ್ತದೆ. 85 ಪ್ರತಿಶತ ರೈತರು ಸಾಧಾರಣ ವಾರ್ಷಿಕ ಆದಾಯ ಹೊಂದಿರುವುದರಿಂದ ಈ ನೈಸರ್ಗಿಕ ಅಪಾಯಗಳು ಬೆಳೆನಷ್ಟ ಮಾತ್ರವಲ್ಲದೆ ಕೆಟ್ಟ ಸಂದರ್ಭಗಳಲ್ಲಿ ಜೀವನೋಪಾಯಕ್ಕೂ ಕಾರಣವಾಗುತ್ತವೆ.

ಸನ್ಮತಿ ಮಹಿಳಾ ಫೌಂಡೇಶನ್‌ನಿಂದ ಶಾಲಾ ಮಕ್ಕಳಿಗೆ ಶುಲ್ಕ, ತಟ್ಟೆ ವಿತರಿಸಿ ಪರಿಸರ ದಿನಾಚರಣೆ



ಮೈಸೂರು: ಇತ್ತೀಚಿನ ವರ್ಷಗಳಲ್ಲಿ ವಾತಾವರಣದಲ್ಲಿ ಉಷ್ಣಾಂಶ ಹೆಚ್ಚಾಗುತ್ತಿದೆ. ಪರಿಸರ ಸಮತೋಲನ ಕಾಪಾಡಲು ವಿದ್ಯಾರ್ಥಿಗಳು ಗಿಡಗಳನ್ನು ನೆಡಬೇಕು, ಅವುಗಳ ಸಂರಕ್ಷಿಸಬೇಕು ಎಂದು ಸನ್ಮತಿ ಮಹಿಳಾ ಫೌಂಡೇಶನ್ ಅಧ್ಯಕ್ಷೆ ಸವಿತಾ ಗೋವಿಂದೇಗೌಡ ಅಭಿಪ್ರಾಯಪಟ್ಟರು.

ವಿಜಯನಗರದ ಯೋಗ ನರಸಿಂಹ ಸ್ವಾಮಿ ದೇವಸ್ಥಾನ ಬಳಿ ಇರುವ ಸವಿನೆನಪು ಫೌಂಡೇಶನ್‌ನ ದಿವಂಗತ ಸಂಜೀವಯ್ಯ ಸ್ಮಾರಕ ವಸತಿ ಶಾಲೆಯ ಮಕ್ಕಳಿಗೆ ಸನ್ಮತಿ ಮಹಿಳಾ ಫೌಂಡೇಶನ್ ವತಿಯಿಂದ ಪರಿಸರ ದಿನಾಚರಣೆ ಅಂಗವಾಗಿ ಮಕ್ಕಳಿಗೆ ಊಟದ ತಟ್ಟೆ, ಶಾಲಾ ಶುಲ್ಕ ಮತ್ತು ನೋಟ್ ಪುಸ್ತಕ, ವಿವಿಧ ಜಾತಿಯ ಗಿಡಗಳನ್ನು ವಿತರಿಸಿ ಮಕ್ಕಳಿಗೆ ಪರಿಸರ ಕಾಳಜಿಯ ಬಗ್ಗೆ ಅರಿವು ಮೂಡಿಸಿ ಮಾತನಾಡಿದ ಅವರು, ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ. ಭವಿಷ್ಯದ ಜನಾಂಗಕ್ಕೆ ಪರಿಸರ ವನ್ನು ಉಳಿಸಬೇಕಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸನ್ಮತಿ ಫೌಂಡೇಶನ್ ಉಪಾಧ್ಯಕ್ಷೆ ಜ್ಯೋತಿ ವಾಸುದೇವ್, ಕಾರ್ಯದರ್ಶಿ ಮಂಜುಳಾ, ಕೋಮಲ, ನಿರ್ದೇಶಕರಾದ ಸುಜಾತ, ಪ್ರೇಮ, ರಾಣಿ, ಮಮತಾ ಶ್ರೀಧರ್, ರಾಜೇಶ್ವರಿ ನಾಗರಾಜ್, ಹೇಮ ರಮೇಶ್, ನಾಗರತ್ನ ಇನ್ನಿತರರು ಹಾಜರಿದ್ದರು.

ಮೋದಿ ಸಂಪುಟದಲ್ಲಿ ದಲಿತರು, ಹಿಂದುಳಿದವರಿಗೆ ಅನ್ಯಾಯ

ಹಿಂದುಳಿತ ಜಾಗೃತ ವೇದಿಕೆ ಅಧ್ಯಕ್ಷ ಕೆ.ಎಸ್.ಶಿವರಾಮ್ ಆರೋಪ



ಮೈಸೂರು, ಜೂ.11(ಜಿಎ)–ಕೇಂದ್ರ ಸರ್ಕಾರದ ನೂತನ ಸಚಿವ ಸಂಪುಟದಲ್ಲಿ ದಲಿತರು ಮತ್ತು ಹಿಂದುಳಿದ ವರ್ಗ ದವರಿಗೆ ಅವಕಾಶ ನೀಡದೆ, ಬಿಜೆಪಿ ಮತ್ತೆ ಹಿಂದುಳಿದ, ದಲಿತ ವಿರೋಧಿಯಾಗಿದೆ ಎಂದು ಹಿಂದುಳಿದ ಜಾಗೃತ ವೇದಿಕೆ ಅಧ್ಯಕ್ಷ ಕೆ.ಎಸ್.ಶಿವರಾಮ್ ಆರೋಪಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೋದಿ ಅವರು ಈ ಬಾರಿ 400 ಕ್ಷೇತ್ರದಲ್ಲಿ ಗೆಲ್ಲುತ್ತೇವೆ ಎಂದು ಹೇಳುತ್ತಿದ್ದರು. ಆದರೆ, ಜನರು ಬಿಜೆಪಿಯನ್ನು ತಿರಸ್ಕರಿಸಿದ್ದಾರೆ. ಈ ನಡುವೆ ಮೋದಿ ಅವರು ನಿತೀಶ್ ಕುಮಾರ್ ಮತ್ತು ಚಂದ್ರಬಾಬು ನಾಯ್ಡು ಸಹಕಾರದಿಂದ ಸರ್ಕಾರ ರಚನೆ ಮಾಡಿದ್ದಾರೆ. ಆದರೆ, ಅವರ ಸಂಪುಟದಲ್ಲಿ ದಲಿತರು, ಹಿಂದುಳಿದವರಿಗೆ ಅವಕಾಶ ನೀಡದೆ, ಮತ್ತೆ ಮೇಲ್ವರ್ಗ ದವರಿಗೆ ಅವಕಾಶ ನೀಡಿದ್ದಾರೆ ಎಂದು ಹೇಳಿದರು.

ಕರ್ನಾಟಕದಿಂದ ಲೋಕಸಭೆಗೆ ಆಯ್ಕೆ ಆದವರಲ್ಲಿ ಒಕ್ಕಲಿಗರು, ಬ್ರಾಹ್ಮಣರಿಗೆ ಹೆಚ್ಚು ಆದ್ಯತೆ ನೀಡಿದ್ದಾರೆ. ಒಬ್ಬರೇ ಒಬ್ಬ ಹಿಂದುಳಿದ, ದಲಿತರಿಗೆ ಸಂಪುಟದಲ್ಲಿ ಅವಕಾಶ ನೀಡಿಲ್ಲ. ಆರ್‌ಆರ್‌ಎಸ್‌ನವರ ಮಾತು ಕೇಳಿಕೊಂಡು ಈ ರೀತಿ ಮಾಡುತ್ತಿರುವುದು ಸರಿಯಲ್ಲ. ಮಾಜಿ ಮುಖ್ಯಮಂತ್ರಿ ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮತ್ತು ವಿಪಕ್ಷ ನಾಯಕ ಆರ್.ಅಶೋಕ್ ಈ ವಿಷಯದಲ್ಲಿ ಸಂಪೂರ್ಣ ವಿಫಲರಾಗಿದ್ದೀರಿ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮೈತ್ರಿ ಸರ್ಕಾರಕ್ಕೆ ಆಯಸ್ಸು ಕಡಿಮೆ. ಬಿಜೆಪಿಯ ಸರ್ಕಾರ ಒಂದು ವರ್ಷ ದೊಳಗೆ ಪತನವಾಗುತ್ತದೆ. ನಿತೀಶ್ ಕುಮಾರ್ ಮತ್ತು ಚಂದ್ರಬಾಬು ನಾಯ್ಡು ಯಾರು ಎಂಬುದು ಎಲ್ಲರಿಗೂ ಗೊತ್ತಿದೆ. 2–3 ತಿಂಗಳಿನಲ್ಲಿ ಮೈತ್ರಿ ಸರ್ಕಾರದ ಚಿತ್ರಣ ತಿಳಿಯಲಿದೆ ಎಂದರು.

ಕಾಂಗ್ರೆಸ್ ಮುಖಂಡರ ಗ್ಯಾರಂಟಿ ಯೋಜನೆ ನಿಲ್ಲಿಸಿ ಹೇಳಿಕೆಗೆ ಪ್ರತಿಕ್ರಿಯಿಸಿ, ಗ್ಯಾರಂಟಿ ಯೋಜನೆಗಳಿರುವುದು ಜನರ ಕಲ್ಯಾಣಕ್ಕಾಗಿ ಹೊರತು ಮತದಾರರು ಮತ ನೀಡಲಿ ಎಂಬ ಯೋಜನೆಯಲ್ಲ. ರಾಜ್ಯದಲ್ಲಿ ಲೋಕಸಭಾ ಚುನಾವಣೆಯಲ್ಲಿ ಸೋತ ನಾಯಕರು ಸೋಲಿನ ಭರದಲ್ಲಿ ಈ ಮಾತುಗಳನ್ನಾಡುತ್ತಿದ್ದಾರೆ. ಈ ಬಗ್ಗೆ ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗುತ್ತದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಪ್ರಕಾಶ್, ಲೋಕೇಶ್ ಮಾದಪುರ, ಯೋಗೇಶ್ ಉಪ್ಪಾರ, ಮೊಗ್ಗಣ್ಣಚಾರ್ ಉಪಸ್ಥಿತರಿದ್ದರು.

ಇಂದು ಹಲವೆಡೆ ವಿದ್ಯುತ್ ವ್ಯತ್ಯಯ



ಮೈಸೂರು, ಜೂ.11–ಮಂಡಕಳ್ಳಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಜೂ.12ರಂದು ತುರ್ತು ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಅಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 5.30ರವರೆಗೆ ಜ್ಞಾನಗಂಗಾ ಬಡಾವಣೆ, ಶ್ರೀನಗರ, ಬಿ.ಟಿ.ಎ. ಬಡಾವಣೆ, ಮಹಾ ಲಕ್ಷ್ಮೀ ಬಡಾವಣೆ, ವೆಂಕಟಾದ್ರಿ ಬಡಾವಣೆ, ಸರೋಜ ಬಡಾವಣೆ, ಸಿದ್ದಪ್ಪ ಬಡಾವಣೆ, ವಸಂತ ಬಡಾವಣೆ, ಕೆಎಸ್‌ಆರ್‌ಟಿಸಿ ಬಡಾವಣೆ, ವಿಜಯಕುಮಾರ್ ಬಡಾವಣೆ, ಸ್ಕಿಲ್‌ಟೆಕ್ ಬಡಾವಣೆ, ಸಿದ್ದಲಿಂಗೇಶ್ವರ ಬಡಾವಣೆ, ಎಂಸಿಆರ್‌ಟಿಸಿ ಬಡಾವಣೆ, ಐಶ್ವರ್ಯ ಬಡಾವಣೆ, ಶಿವಾನಂದ ಭಾರತಿ ಬಡಾವಣೆ, ಬೆಮೆಲ್ ಬಡಾವಣೆ, ಶಾರದಾ ಬಡಾವಣೆ, ಗುರುಕುಲ ಬಡಾವಣೆ, ರೆಡ್‌ಇಡಿ ಬಡಾವಣೆ, ನೆಸ್ಲೆ ಬಡಾವಣೆ, ಟೀಚರಸ್ ಬಡಾವಣೆ, ಎಂ.ಕೆ. ಮಹೇಶ್ ಬಡಾವಣೆ, ಭವಾನಿ ಬಡಾವಣೆ, ಆರ್.ಕೆ.ಬಡಾವಣೆ, ತಿಬ್ಬಾದೇವಿ ಫಾರಂ, ಅವಲಕ್ಕಿ ಫ್ಯಾಕ್ಟರಿ, ಬಿಟಿಎ ಬಡಾವಣೆ, 'ಡಿ' ಜೋನ್ ಮೂಡಾ ಬಡಾವಣೆ, ಕೊಪ್ಪಲೂರು, ದೃಷ್ಟಿ ಎನ್‌ಕ್ಲೇವ್, ವಿನಾಯಕ ಎನ್‌ಕ್ಲೇವ್, ಹುಲುಗಾದ್ರಿ ಬಡಾವಣೆ, ಪುಷ್ಪಕುಮಾರಿ ಬಡಾವಣೆ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಚೆಸ್ಕಾಂ ಪ್ರಕಟಣೆ ತಿಳಿಸಿದೆ.

ನೀಟ್ ಯುಜಿ ಪರೀಕ್ಷೆ: ಉನ್ನತ ಮಟ್ಟದ ತನಿಖೆಗೆ ಆಗ್ರಹ


ಮೈಸೂರು, ಜೂ. 11–ವೈದ್ಯಕೀಯ ಪ್ರವೇಶಕ್ಕೆ ನಡೆದಿರುವ ನೀಟ್–ಯುಜಿ ಪರೀಕ್ಷೆಯಲ್ಲಿ ನಡೆದಿದೆ ಎನ್ನಲಾದ ಹಗರಣಕ್ಕೆ ಸಂಬಂಧಿಸಿ ಸುಪ್ರೀಂಕೋರ್ಟ್ ಮೇಲ್ವಿಚಾರಣೆಯಲ್ಲಿ ಉನ್ನತ ಮಟ್ಟದ ತನಿಖೆ ನಡೆಯಬೇಕು ಎಂದು ಕೆ ಆರ್ ಬ್ಯಾಂಕ್ ಉಪಾಧ್ಯಕ್ಷ ಬಸವರಾಜ್ ಬಸಪ್ಪ ಆಗ್ರಹಿಸಿದ್ದಾರೆ.

ಈ ಸಂಬಂಧ ಪತ್ರಿಕೆ ಹೇಳಿಕೆ ನೀಡಿರುವ ಅವರು, ಈ ಬಾರಿಯ ನೀಟ್ ಪರೀಕ್ಷೆ ಫಲಿತಾಂಶವು ಹಲವಾರು ಅನುಮಾನಗಳಿಗೆ ಎಡೆಮಾಡಿಕೊಟ್ಟಿದೆ. ವಿದ್ಯಾರ್ಥಿಗಳಿಗೆ ಆಗಿರುವ ಅನ್ಯಾಯವನ್ನು ಸರಿಪಡಿಸಿ, ನ್ಯಾಯ ಒದಗಿಸಲು ಹಗರಣದ ಪಾರದರ್ಶಕ ತನಿಖೆಯಾಗಬೇಕು ಎಂದರು. ಈ ಮೊದಲು ಜೂನ್ 14ರಂದು ನೀಟ್ ಫಲಿತಾಂಶ ಘೋಷಣೆ ದಿನಾಂಕ ನಿಗದಿಯಾಗಿತ್ತು. ಆದರೆ, ಜೂನ್ 4ರಂದು ಲೋಕಸಭೆ ಚುನಾವಣೆಯ ಫಲಿತಾಂಶದ ದಿನ ನೀಟ್ ಫಲಿತಾಂಶ ಪ್ರಕಟಿಸಿರುವುದು ಜನರ ಗಮನ ಬೇರೆಡೆ ಸೆಳೆಯಲು ಮಾಡಿದ ತಂತ್ರವಾಗಿರಬಹುದೆಂಬ ಅನುಮಾನ ಮೂಡಿದೆ. ನೀಟ್ ಫಲಿತಾಂಶದ ವಿರುದ್ಧ ತಮಿಳುನಾಡು ಸೇರಿದಂತೆ ಬೇರೆ ಬೇರೆ ರಾಜ್ಯಗಳು ಧ್ವನಿ ಎತ್ತಿವೆ. ಈ ರಾಜ್ಯಗಳೊಂದಿಗೆ ಕರ್ನಾಟಕವೂ ಸೇರಿದರೆ ಒಳ್ಳೆಯದು. ರಾಜ್ಯಕ್ಕೆ ನೀಟ್‌ಗಿಂತ ಈ ಹಿಂದಿನಂತೆ ಸಿಇಟಿ ಇದ್ದರೆ ಉತ್ತಮ ಎಂದು ಅಭಿಪ್ರಾಯಪಟ್ಟಿದ್ದಾರೆ.

ಜೂ.21ರಂದು 'ಸಂಭವಾಮಿ ಯುಗೇ ಯುಗೇ' ತೆರೆಗೆ

ಮೈಸೂರು,ಜೂ.11(ಜಿಎ)–ರಾಜಲಕ್ಷ್ಮಿ ಎಂಟರ್‌ಟೈನ್‌ಮೆಂಟ್ ಬ್ಯಾನರ್ ನಿರ್ಮಾಣದ 'ಸಂಭವಾಮಿ ಯುಗೇ ಯುಗೇ' ಚಿತ್ರ ಜೂ.21ರಂದು ರಾಜ್ಯಾದ್ಯಂತ ತೆರೆ ಕಾಣಲಿದೆ. ಚಿತ್ರದ ನಿರ್ದೇಶಕ ಚೇತನ್ ಚಂದ್ರಶೇಖರ್ ಶೆಟ್ಟಿ ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿ, ಚಿತ್ರದಲ್ಲಿ ನಾಲ್ಕು ಹಾಡು ಮತ್ತು ಎರಡು ಸಾಹಸ ದೃಶ್ಯಗಳಿದ್ದು, ಗ್ರಾಮೀಣ ಹಿನ್ನೆಲೆ ಇರುವ ಯುವಜನರನ್ನು ಆಕರ್ಷಿಸುವ ಕಥೆ ಹೊಂದಿದೆ. ಜನರಿಗೆ ಉತ್ತಮ ಮನರಂಜನೆ ದೊರೆಯಲಿದೆ. ಜಯ್‌ಶೆಟ್ಟಿ ನಾಯಕ ಪಾತ್ರದಲ್ಲಿ, ಮುಂಬೈನ ನಿಶಾ ರಜಪೂತ್ ನಾಯಕಿಯಾಗಿ ನಟಿಸಿದ್ದಾರೆ. ನಟಿಯರಾದ ಸುಧಾರಾಣಿ, ಮಧುರಾ, ನಟರಾದ ಬಲರಾಜ್ ವಾಡಿ, ಅಶ್ವಿನ್ ಹಾಸನ್ ಪ್ರಮುಖ ಪಾತ್ರದಲ್ಲಿ ಅಭಿನಯಿಸಿದ್ದಾರೆ ಎಂದು ಮಾಹಿತಿ ನೀಡಿದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

12.06.2024 ಬುಧವಾರ, ಮಳೆ ನಕ್ಷತ್ರ: ಮೃಗಶಿರ, 08.05.2024 ರಿಂದ 21.06.2024
ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ, ಶುಕ್ಲ ಪಕ್ಷ,
ತಿಥಿ: ಷಷ್ಠಿ ನಕ್ಷತ್ರ: ಮಖ, ರಾಹುಕಾಲ: ಮಧ್ಯಾಹ್ನ 12 ರಿಂದ 1.30 ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ತೀವ್ರ ತಲೆನೋವು, ಮೈಗ್ರೇನ್ ತಲೆನೋವು, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ಗಂಟೆಯಿಂದ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಪಾರ್ಕಿನ್‌ಸನ್ಸ್ ಕಾಯಿಲೆಯ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 10 ರಿಂದ.

■ **ಶ್ರೀ ಕುಲಾಲಗುಂಡ ಬ್ರಹ್ಮಾರ್ಯ ಕುಂಬಾರರ ಸಂಘ :** ವಧು–ವರರ ಮಾಹಿತಿ ಕೇಂದ್ರ ಉದ್ಘಾಟನಾ ಸಮಾರಂಭ, ಉದ್ಘಾಟನೆ : ಕ್ಷೇತ್ರದ ಧರ್ಮಾಧಿಕಾರಿ ಮೋಹನದಾಸ ಪರಮಹಂಸ ಸ್ವಾಮೀಜಿ, ಮುಖ್ಯ ಅತಿಥಿಗಳು : ಜಿಲ್ಲಾ ಪಂಚಾಯತ್ ಸಿಇಓ ಶ್ರೀಮತಿ ಗಾಯತ್ರಿ, ಡಾ. ಬಿ.ಎಸ್. ಕೃಷ್ಣಪ್ರಸಾದ್, ಆರ್. ಶ್ರೀನಿವಾಸ್, ಅಧ್ಯಕ್ಷತೆ : ಸಂಘದ ಅಧ್ಯಕ್ಷ ಹೆಚ್.ಎಸ್. ಪ್ರಕಾಶ್, ಸ್ಥಳ: ಸಂಘದ ಆವರಣ, ಡಿ. ಬನುಮಯ್ಯ ರಸ್ತೆ ಹಿಂಭಾಗ, ಬೆಳಗ್ಗೆ 10ಕ್ಕೆ.

■ **ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಕಾರ್ಮಿಕ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಪೊಲೀಸ್ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ಮಕ್ಕಳ ಸಹಾಯವಾಣಿ 1098 ಹಾಗೂ ಸ್ವಯಂಸೇವಾ ಸಂಸ್ಥೆಗಳು :** ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನ ಆಚರಣೆ, ಉದ್ಘಾಟನೆ : ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷ ರವೀಂದ್ರ ಹೆಗಡೆ, ಅಧ್ಯಕ್ಷತೆ : ಜಿಲ್ಲಾಧಿಕಾರಿ ಡಾ. ಕೆ.ವಿ. ರಾಜೇಂದ್ರ, ವಿಶೇಷ ಆಹ್ವಾನಿತರು : ಹಿರಿಯ ಸಿವಿಲ್ ನ್ಯಾಯಾಧೀಶ ಬಿ.ಜಿ. ದಿನೇಶ್, ಪೊಲೀಸ್ ಆಯುಕ್ತ ಬಿ. ರಮೇಶ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಎಂ.ಗಾಯತ್ರಿ, ಪೊಲೀಸ್ ಅಧೀಕ್ಷಕರಾದ ಸೀಮಾ ಲಾಟ್ಕರ್, ಅಪರ ಜಿಲ್ಲಾಧಿಕಾರಿ ಡಾ. ಪಿ.ಶಿವರಾಜು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಜಿ.ಟಿ.ದಿನೇಶ್‌ಕುಮಾರ್, ಸ್ಥಳ: ಬಿಲ್ಡರ್ಸ್ ಅಸೋಸಿಯೇಷನ್, ವಿಶ್ವೇಶ್ವರನಗರ, ಬೆಳಗ್ಗೆ 10ಕ್ಕೆ.

■ **ವಿಶ್ವಮಾನವ ಮೈಸೂರು ವಿಶ್ವವಿದ್ಯಾನಿಲಯ ನೌಕರರ ವೇದಿಕೆ, ನವ ವಿಶ್ವಮಾನವ ಟ್ರಸ್ಟ್:** ವಿಶ್ವ ಪರಿಸರ ದಿನಾಚರಣೆ ಪ್ರಯುಕ್ತ ಗಿಡ ನೆಡುವ ಕಾರ್ಯಕ್ರಮ, ಉಪಸ್ಥಿತರು: ಮೈಸೂರು ವಿವಿ ಕುಲಸಚಿವರಾದ ವಿ.ಆರ್.ಶೈಲಜಾ, ಡಾ.ಬಿ.ಟಿ.ಕವಿತಾ, ಪೊಲೀಸ್ ಅಧೀಕ್ಷಕಿ ಡಾ.ಬಿ.ಎನ್.ನಂದಿನಿ, ಉಪ ಪೊಲೀಸ್ ಆಯುಕ್ತರಾದ ಎಸ್. ಜಾಹ್ನವಿ, ಉಪ ಅರಣ್ಯ ಸಂರಕ್ಷಣಾಧಿಕಾರಿ ಪಿ.ಎ.ಸೀಮಾ, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಪತ್ರಾಂಕಿತ ವ್ಯವಸ್ಥಾಪಕರಾದ ಬಿ. ಪ್ರಮೀಳ, ಮಾಜಿ ಸಿಂಡಿಕೇಟ್ ಸದಸ್ಯ ಡಾ.ಇ.ಸಿ.ನಿಂಗರಾಜೇಗೌಡ, ವಿವಿ ಸಂಜೆ ಕಾಲೇಜು ಪ್ರಿನ್ಸಿಪಾಲ್ ಎಸ್.ಮಹದೇವಮೂರ್ತಿ, ಗಾಂಧಿ ಭವನ ವಿಶ್ರಾಂತ ನಿರ್ದೇಶಕ ಪ್ರೊ.ಎಸ್.ಶಿವರಾಜಪ್ಪ, ಪ್ರಾಧ್ಯಾಪಕರಾದ ಡಾ.ಹೆಚ್.ಪಿ. ಜ್ಯೋತಿ, ತೋಟಗಾರಿಕೆ ವಿಭಾಗದ ನಿರ್ದೇಶಕ ಮುಜಾವರ್, ಸ್ಥಳ: ವಿ.ವಿ. ಸಂಜೆ ಕಾಲೇಜು ಹಿಂಭಾಗ, ಬೆಳಗ್ಗೆ 10.30ಕ್ಕೆ.

■ **ಶರಣ ಸಾಹಿತ್ಯ ಪರಿಷತ್ತು, ಮೈಸೂರು ನಗರ ಘಟಕ, ಕದಳಿ ಮಹಿಳಾ ವೇದಿಕೆ :** ಕದಳಿ ರಜತೋತ್ಸವ ಪ್ರಯುಕ್ತ ಮನೆ ಮನೆಗೆ ಶರಣೆಯರ ಆಗಮನ, ಭಾಗವಹಿಸುವವರು : ವೇದಿಕೆ ಕಾರ್ಯದರ್ಶಿ ವಾಗ್ದೇವಿ, ವೇದಿಕೆ ಅಧ್ಯಕ್ಷೆ ಶಾರದಾ ಶಿವಲಿಂಗಸ್ವಾಮಿ, ಶರಣ ಸಾಹಿತ್ಯ ಪರಿಷತ್, ಮೈಸೂರು ನಗರ ಘಟಕ ಅಧ್ಯಕ್ಷ ಮ.ಗು. ಸದಾನಂದಯ್ಯ, ಪ್ರತಿದಿನ ಸಂಜೆ 5.30 ರಿಂದ.


ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಬದುಕು ಬದಲಿಸಿದ ಶೋಧ– ಬಾನುಲಿ ಸರಣಿ, ಪ್ರಸ್ತುತಿ– ಎನ್.ಎನ್. ಸುರೇಂದ್ರನಾಥ್ ಸಾತ್ವಿಕ್, 6.40 ನಾನು ನ. ರತ್ನ – ಬಾನುಲಿ ಸರಣಿ. ಖ್ಯಾತ ನಾಟಕಕಾರ ಹಾಗೂ ವಾಕ್ ಶ್ರವಣ ತಜ್ಞ ಡಾ. ನ.ರತ್ನ ಅವರ ಜೀವನಗಾಥೆ ಅವರದೇ ಧ್ವನಿಯಲ್ಲಿ, 6.50 ರೈತರಿಗೆ ಸಲಹೆ, 7.15 ಯೋಗೋತ್ಸವ : ಅಂತರರಾಷ್ಟ್ರೀಯ ಯೋಗ ದಿನದ ಅಂಗವಾಗಿ ಪ್ರಾಯೋಜಿತ ಕಾರ್ಯಕ್ರಮ. ಪ್ರಾಯೋಜಕರು: ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 9.00 ವೃತ್ತಿ ಮಾರ್ಗದರ್ಶನ –'ಭೂಗೋಳ ಶಾಸ್ತ್ರ ಅಂದರೆ ಜಿಯಾಗ್ರಫಿ ವಿಷಯದಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು' ಕುರಿತು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಭೂಗೋಳ ಶಾಸ್ತ್ರ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಮುಖ್ಯಸ್ಥರಾದ ಡಾ. ಚಂದ್ರಶೇಖರ್. ವೈ.ಪಿ.ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ್, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ–ಪಂಡಿತ್. ಹರಿಪ್ರಸಾದ್ ಚೌರಾಸಿಯಾ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ

ಮಧ್ಯಾಹ್ನ: 12.30 ದೇವರನಾಮ, 12.45 ಜನಪದ ಸಂಗೀತ, 1.20 ಭಾವಗೀತೆಗಳು : ಸೀಮಾ ರಾವ್‌ಕರ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ:ಪಿ. ಗುರುಪ್ರಸಾದ್–ಸ್ಯಾಕ್ಸೋಫೋನ್ ವಾದನ, 4.00 ಮಹಿಳಾರಂಗ–ಹೀಗಿದೆ ನೋಡಿ ನಮ್ ಜೋಡಿ ಹಿಂದೂಸ್ಥಾನಿ ಸಂಗೀತ ಕಲಾವಿದೆ ಹಾಗೂ ಶಿಕ್ಷಕಿ ವಿದೂಷಿ ಸೌಮ್ಯ ಜೈನ್ ಮತ್ತು ಅಂತರರಾಷ್ಟ್ರೀಯ ಭರತನಾಟ್ಯ ಕಲಾವಿದರಾದ ವಿದ್ವಾನ್ ಶ್ರೀಧರ್ ಜೈನ್ ಅವರೊಂದಿಗೆ ಮಾತುಕತೆ. ಪ್ರಸ್ತುತಿ: ಅಬ್ದುಲ್ ರಶೀದ್, 4.45 ಹಿಂದಿ ಪಾಠ – ಎಸ್. ಈಶ್ವರ್ ಭಟ್, 5.45 ನಾನು ನ. ರತ್ನ–ಬಾನುಲಿ ಸರಣಿ. ಖ್ಯಾತ ನಾಟಕಕಾರ ಹಾಗೂ ವಾಕ್ ಶ್ರವಣ ತಜ್ಞ ಡಾ. ನ. ರತ್ನ ಅವರ ಜೀವನಗಾಥೆ ಅವರದೇ ಧ್ವನಿಯಲ್ಲಿ, 6.50 ಕೃಷಿರಂಗ– ಸಾವಯವ ಸಂಪದ– ಸಾವಯವ ಕೃಷಿ ಬದುಕಿನ ಸಮಗ್ರ ಚಿತ್ರಣ ಕುರಿತ ಬಾನುಲಿ ಸರಣಿ – ತೋಟಗಾರಿಕಾ ಬೆಳೆಗಳಲ್ಲಿ ಸಸ್ಯಾಭಿವೃದ್ಧಿ ತಾಂತ್ರಿಕತೆಗಳು. ಈ ಕುರಿತು ನಾಗನಹಳ್ಳಿಯ ಸಾವಯವ ಕೃಷಿ ಸಂಶೋಧನಾ ಕೇಂದ್ರದ ಸಹಾಯಕ ಪ್ರಾಧ್ಯಾಪಕರಾದ ರಾಹುಲ್ ದಾಸ್ ಅವರೊಂದಿಗೆ ಸಂದರ್ಶನ. ಸಂದರ್ಶಕರು : ಎನ್. ಕೇಶವಮೂರ್ತಿ, 8.00 ಕ್ಷಿತಿಜ–ಸಾಹಿತ್ಯ ಸಾಧಕರೊಂದಿಗೆ ಸಂವಾದ. 9.30 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಪಂಡಿತ್. ಶಿವಕುಮಾರ್ ಶರ್ಮ–ಸಂತೂರ್ ವಾದನ, 10.00 ಜನಪದ ಸಂಗೀತ, 10.30 ಸವಿನೆನಪು.

ದಸರಾ ಆನೆ ಅಶ್ವತ್ಥಾಮ ನಿಗೂಢ ಸಾವು!



ಮರಣೋತ್ತರ ಪರೀಕ್ಷೆ: ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ಪಶುವೈದ್ಯ ಡಾ.ರಮೇಶ ಅಶ್ವತ್ಥಾಮ ಆನೆಯ ಮರಣೋತ್ತರ ಪರೀಕ್ಷೆ ನಡೆಸಿದರು. ದೇಹದ ಅಂಗಾಂಗ ಮಾದರಿಯನ್ನು ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ. ಬಳಿಕ ದಂತ ತೆಗೆದು, ಜೆಸಿಬಿಯಲ್ಲಿ ಗುಂಡಿ ತೋಡಿ ಕಳೇಬರ ಅಂತ್ಯಕ್ರಿಯೆ ನಡೆಸಲಾಗಿದೆ.

ದಸರಾ ಆನೆಗಳ ಸರಣಿ ಸಾವು

ನಾಡಹಬ್ಬ ದಸರಾ ಮಹೋತ್ಸವದಲ್ಲಿ ಪಾಲ್ಗೊಂಡಿದ್ದ ಕೆಲ ಆನೆಗಳ ಸರಣಿ ಸಾವು ಪ್ರಾಣಿ ಪ್ರಿಯರಲ್ಲಿ ಆತಂಕ ಉಂಟು ಮಾಡಿದೆ. ಒಂದೇ ವರ್ಷದ ಅವಧಿಯಲ್ಲಿ ಮಾಜಿ ಅಂಬಾರಿ ಆನೆ ಅರ್ಜುನ, ಬಲರಾಮ, ಗೋಪಾಲಸ್ವಾಮಿ, ದುರ್ಗಾಪರಮೇಶ್ವರಿ, ಈಗ ಅಶ್ವತ್ಥಾಮ ಮೃತಪಟ್ಟಿವೆ.

ಲಾರಿ ಹತ್ತಲು ಹಿಂದೇಟು ಹಾಕಿತ್ತು

2021ರ ದಸರಾ ಮಹೋತ್ಸವದಲ್ಲಿ ಪಾಲ್ಗೊಂಡು, ಶಿಬಿರಕ್ಕೆ ವಾಪಸ್ಸಾಗುವ ವೇಳೆ ಲಾರಿ ಹತ್ತಲು ಅಶ್ವತ್ಥಾಮ ಹಿಂದೇಟು ಹಾಕಿತ್ತು. ಸುಮಾರು ಒಂದೂವರೆ ಗಂಟೆ ತಂಟೆ ಮಾಡಿತ್ತು. ಬಳಿಕ ಅಭಿಮನ್ಯು, ಅರ್ಜುನನ ನೆರವಿನಿಂದ ಲಾರಿಗೆ ಹತ್ತಿಸಲಾಗಿತ್ತು.

ಮೈಸೂರು, ಜೂ.11(ಎಂಟಿವೈ)– ನಾಡಹಬ್ಬ ದಸರಾ ಮಹೋತ್ಸವ ಹಾಗೂ ಕೂಂಬಿಂಗ್ ಕಾರ್ಯಾಚರಣೆಯಲ್ಲಿ ಪಾಲ್ಗೊಳ್ಳುತ್ತಿದ್ದ ಅಶ್ವತ್ಥಾಮ(38) ಭೀಮನ ಕಟ್ಟೆ ಸಾಕಾನೆ ಶಿಬಿರದಲ್ಲಿ ಮೃತಪಟ್ಟಿದೆ.

ದಸರಾ ಆನೆಗಳ ಸಾವಿನ ಸರಣಿಗೆ ಪ್ರಾಣಿ ಪ್ರಿಯರು ಆತಂಕ ವ್ಯಕ್ತಪಡಿಸಿದ್ದಾರೆ. ಅಶ್ವತ್ಥಾಮನ ಅಕಾಲಿಕ ಸಾವಿಗೆ ಕಂಬನಿ ಮಿಡಿದಿದ್ದಾರೆ. ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ಹುಣಸೂರು ವನ್ಯಜೀವಿ ವಲಯದ ಆನೆಚೌಕೂರು ಭಾಗ–2ರ ಭೀಮನಕಟ್ಟೆ ಸಾಕಾನೆ ಶಿಬಿರದಲ್ಲೇ ಅಶ್ವತ್ಥಾಮ ಮೃತಪಟ್ಟಿದ್ದು, ಹಲವು ಅನುಮಾನಕ್ಕೆ ಎಡೆಮಾಡಿಕೊಟ್ಟಿದೆ. ಸಾಕಾನೆ ಶಿಬಿರಕ್ಕೆ ಕಾಡಾನೆ ನುಗ್ಗದಂತೆ ಎಚ್ಚರ ವಹಿಸುವ ನಿಟ್ಟಿನಲ್ಲಿ ಅಳವಡಿಸಿದ್ದ ಸೋಲಾರ್ ಬೇಲಿಯ ತಂತಿ ಅಶ್ವತ್ಥಾಮನ ಮೇಲೆ ಬಿದ್ದಿದ್ದು, ಈ ಆಘಾತದಲ್ಲಿ ಅಶ್ವತ್ಥಾಮ ಮೃತಪಟ್ಟಿದೆ ಎಂದು ಅರಣ್ಯಾಧಿಕಾರಿಗಳು ನಿರ್ಧರಿಸಿದ್ದಾರೆ. ಆದರೆ, ಸೋಲಾರ್ ಬೇಲಿಯಿಂದ ಆನೆ ಸಾಯುವಷ್ಟು ಶಾಕ್ ಹೊಡೆಯುವುದಿಲ್ಲ. ಸೋಲಾರ್ ತಂತಿಗೆ ಆಕಸ್ಮಿಕವಾಗಿ ವಿದ್ಯುತ್ ತಂತಿ ತಗುಲಿರುವ ಶಂಕೆಯನ್ನು ಪ್ರಾಣಿ ಪ್ರಿಯರು ವ್ಯಕ್ತಪಡಿಸಿದ್ದಾರೆ.

ಮಲಗಿದ್ದಲ್ಲೇ ಉಸಿರು ಚೆಲ್ಲಿದ ಅಶ್ವತ್ಥಾಮ: ಕಳೆದ ರಾತ್ರಿ ಅಶ್ವತ್ಥಾಮನನ್ನು ಕಟ್ಟಿಹಾಕಲಾಗಿತ್ತು. ಇಂದು ಬೆಳಗ್ಗೆ 5.30ಕ್ಕೆ ಶಿಬಿರಕ್ಕೆ ಬಂದ ಸಿಬ್ಬಂದಿ ಅಶ್ವತ್ಥಾಮ ಮಲಗಿರುವ ಸ್ಥಿತಿಯಲ್ಲಿ ಗಮನಿಸಿದ್ದಾರೆ. ದೂರದಿಂದಲೇ ಆನೆಗೆ ನಿಲ್ಲುವಂತೆ ಕಮಾಂಡ್ ಕೊಟ್ಟರೂ, ಸ್ಪಂದಿಸಿಲ್ಲ. ಸಮೀಪ ಬಂದು ನೋಡಿದಾಗ ಸೋಲಾರ್ ತಂತಿ ಅದರ ಮೇಲೆ ಬಿದ್ದಿರುವುದು ಕಂಡು ಬಂದಿದೆ. ಕೂಡಲೆ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದಿದ್ದಾರೆ. ಆನೆ ಮೇಲೆ ಬಿದ್ದಿದ್ದ ಸೋಲಾರ್ ತಂತಿಯನ್ನು ಸುರಕ್ಷಿತವಾಗಿ ಪಕ್ಕಕ್ಕೆ ಸರಿಸಿ ಪರಿಶೀಲಿಸಲಾಗಿದೆ. ಅಷ್ಟರಲ್ಲಾಗಲೇ ಅಶ್ವತ್ಥಾಮ ಮೃತಪಟ್ಟಿರುವುದು ಖಚಿತಪಟ್ಟಿದೆ.

2017ರಲ್ಲಿ ಹಾಸನ ಜಿಲ್ಲೆಯ ಸಕಲೇಶಪುರ ತಾಲೂಕಿನಲ್ಲಿ ಅಶ್ವತ್ಥಾಮನನ್ನು ಸೆರೆ ಹಿಡಿಯಲಾಗಿತ್ತು. ಶಾಂತ ಹಾಗೂ ಗಾಂಭೀರ್ಯ ಸ್ವಭಾವದ ಅಶ್ವತ್ಥಾಮನ 2021ರಲ್ಲಿ ದಸರೆಗೆ ಕರೆತರಲಾಗಿತ್ತು. ಅರಣ್ಯ ಭವನದಿಂದ ಅರಮನೆಗೆ ಕರೆತರುವ ಸಂದರ್ಭದಲ್ಲಿ ಕೋಟೆ ಮಾರಮ್ಮ ದೇವಾಲಯದ ಬಳಿ ಬಸ್ ಹಾರನ್‌ಗೆ ಹೆದರಿ ಪಾದಚಾರಿ ಮಾರ್ಗಕ್ಕೆ ನುಗ್ಗಿತ್ತು. ಈ ವೇಳೆ ಅಶ್ವತ್ಥಾಮನನ್ನು ಸಮಾಧಾನ ಮಾಡಿ, ಅರಮನೆಗೆ ಕರೆದೊಯ್ಯಲಾಗಿತ್ತು. ಕೆಲ ದಿನದ ಬಳಿಕ ಅರಮನೆಯಿಂದ ಬನ್ನಿಮಂಟಪದವರೆಗೆ ತಾಲೀಮು ನಡೆಸಿ ಸಜ್ಜುಗೊಳಿಸಲಾಗಿತ್ತು 2022 ಮತ್ತು 2023ರಲ್ಲಿ ಕೆಲ ಕಾರಣದಿಂದ ಅಶ್ವತ್ಥಾಮನನ್ನು ದಸರಾ ಮಹೋತ್ಸವಕ್ಕೆ ಕರೆತಂದಿರಲಿಲ್ಲ. ಮುಂದಿನ ವರ್ಷದಿಂದ ಎರಡನೇ ಹಂತದ ಆನೆಯಾಗಿ ಪರಿವರ್ತಿಸಲು ತರಬೇತಿ ನೀಡಲು ಉದ್ದೇಶಿಸಲಾಗಿತ್ತು. ಗಜಪಡೆ ನಾಯಕ ಅಭಿಮನ್ಯು ಪಡೆಯ ಸದಸ್ಯನಾಗಿದ್ದ ಅಶ್ವತ್ಥಾಮ ಕಾಡಾನೆ, ಹುಲಿ ಸೆರೆ ಕಾರ್ಯಾಚರಣೆಯಲ್ಲಿ ಪಾಲ್ಗೊಳ್ಳುತ್ತಿತ್ತು. ರಾಮನಗರ ಬಳಿ ಕಾಡಾನೆ ಕಾರ್ಯಾಚರಣೆಯಲ್ಲಿ ಪಾಲ್ಗೊಂಡು ಎರಡು ದಿನದ ಹಿಂದಷ್ಟೇ ಭೀಮನಕಟ್ಟೆ ಆನೆ ಕ್ಯಾಂಪ್‌ಗೆ ಮರಳಿತ್ತು ಆದರೆ, ಇಂದು ಮುಂಜಾನೆ ನಿಗೂಢವಾಗಿ ಮೃತಪಟ್ಟಿದೆ.



ಭೀಮನಕಟ್ಟೆ ಆನೆ ಕ್ಯಾಂಪ್‌ನಲ್ಲಿ ಮೃತಪಟ್ಟಿರುವ ದಸರಾ ಆನೆ ಅಶ್ವತ್ಥಾಮ.

ಅಶ್ವತ್ಥಾಮ ಸಾವಿಗೆ ಸಿಎಂ ಸಂತಾಪ



ಮೈಸೂರು ದಸರಾದಲ್ಲಿ ಪಾಲ್ಗೊಂಡು ಲಕ್ಷಾಂತರ ಜನರ ಮೆಚ್ಚುಗೆ ಗಳಿಸಿದ್ದ ಆನೆ ಅಶ್ವತ್ಥಾಮನ ಸಾವು ನೋವುಂಟುಮಾಡಿದೆ ಎಂದು ಸಿಎಂ ಸಿದ್ದರಾಮಯ್ಯ ಸಂತಾಪ ವ್ಯಕ್ತಪಡಿಸಿದ್ದಾರೆ. ತನ್ನ ಶಾಂತ ಸ್ವಭಾವ ಮತ್ತು ಗಾಂಭೀರ್ಯದಿಂದಾಗಿ ಬಹುಬೇಗನೇ ವಿಶ್ವವಿಖ್ಯಾತ ದಸರಾದ ಭಾಗವಾಗಿ ತಾಯಿ ಚಾಮುಂಡೇಶ್ವರಿಯ ಸೇವೆಗೈದಿದ್ದ ಅಶ್ವತ್ಥಾಮನ ನೆನಪು ನಮ್ಮ ಮನದಲ್ಲಿ ಶಾಶ್ವತವಾಗಿರಲಿದೆ ಎಂದು ಸ್ಮರಿಸಿದ್ದಾರೆ.

ತನಿಖೆ ನಡೆಸಿ, ವರದಿ ನೀಡಲು ಸಚಿವ ಖಂಡ್ರೆ ಸೂಚನೆ: ವಿಶ್ವ ವಿಖ್ಯಾತ ಮೈಸೂರು ದಸರಾ ಮಹೋತ್ಸವದ ಪ್ರಧಾನ ಆಕರ್ಷಣೆಯಾದ ಜಂಬೂಸವಾರಿಯಲ್ಲಿ ಪಾಲ್ಗೊಳ್ಳುತ್ತಿದ್ದ ಅಶ್ವತ್ಥಾಮ (38) ಆನೆಯ ನಿಧನಕ್ಕೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಸಂತಾಪ ಸೂಚಿಸಿದ್ದಾರೆ.

ಫೋಟೋ, ವಿಡಿಯೋ ವೈರಲ್ ಮಾಡುವುದಾಗಿ ಬೆದರಿಕೆ

ಪ್ರಿಯತಮನ ಹತ್ಯೆಗೈದ ಪ್ರಿಯತಮೆ, ಸಹೋದರ

ನಂಜನಗೂಡು ಟೌನ್‌ನಲ್ಲಿ ಸೋಮವಾರ ರಾತ್ರಿ ಘಟನೆ

ಮೈಸೂರು, ಜೂ.11(ಆರ್‌ಕೆ)–ಖಾಸಗಿ ಫೋಟೋ ಮತ್ತು ವಿಡಿಯೋಗಳನ್ನು ವೈರಲ್ ಮಾಡುತ್ತೇನೆಂದು ಬ್ಲಾಕ್‌ಮೇಲ್ ಮಾಡುತ್ತಿದ್ದ ಯುವಕನನ್ನು ಪ್ರಿಯತಮೆ ಮತ್ತು ಆಕೆಯ ಸಹೋದರ ಹತ್ಯೆಗೈದಿರುವ ಘಟನೆ ನಂಜನ ಗೂಡು ಪಟ್ಟಣದಲ್ಲಿ ಕಳೆದ ರಾತ್ರಿ ಸಂಭವಿಸಿದೆ.



ರಾಜೇಶ್

ಹೆಚ್.ಡಿ.ಕೋಟೆ ತಾಲೂಕು ಹಂಪಾಪುರ ಹೋಬಳಿ, ಸಿದ್ದೇಗೌಡನಹುಂಡಿಯ ನಿವಾಸಿ ರಾಜೇಶ್(35) ಕೊಲೆಯಾದವರು. ನಂಜನಗೂಡು ಪಟ್ಟಣದ ಶ್ರೀರಾಂಪುರ ಬಡಾವಣೆ ನಿವಾಸಿ ಲೇಟ್ ನಾರಾಯಣ ಅವರ ಪತ್ನಿ ಪ್ರೇಮಾ ಹಾಗೂ ಆಕೆ ಸಹೋದರ ಶಿವು ಹತ್ಯೆ ಮಾಡಿದ್ದು, ಅವರನ್ನು ಪೊಲೀಸರು ಬಂಧಿಸಿದ್ದಾರೆ.

ಮೈಸೂರಿನ ಕ್ಯಾತಮಾರನಹಳ್ಳಿಯ ಪ್ರೇಮಾರನ್ನು 15 ವರ್ಷಗಳ ಹಿಂದೆ ನಂಜನಗೂಡಿನ ನಾರಾಯಣರಿಗೆ ಕೊಟ್ಟು ಮದುವೆ ಮಾಡಲಾಗಿತ್ತು. ಈಗ್ಗೆ ಒಂದು ತಿಂಗಳ ಹಿಂದಷ್ಟೇ ನಾರಾಯಣ ಅವರು ಸಾವನ್ನಪ್ಪಿದ್ದರು.

ನಾರಾಯಣ ಅವರ ಸ್ನೇಹಿತನಾಗಿದ್ದ ರಾಜೇಶ್, ಆಗಾಗ ಪ್ರೇಮಾ ಅವರ ಮನೆಗೆ ಬಂದು–ಹೋಗುತ್ತಿದ್ದರಿಂದ ಅವರಿಬ್ಬರ ನಡುವೆ ಪರಸ್ಪರ ಸ್ನೇಹ ಬೆಳೆದಿತ್ತು. ಅವರ ಖಾಸಗಿ ಫೋಟೋ ಮತ್ತು ವಿಡಿಯೋಗಳನ್ನು ಇಬ್ಬರೂ ತಮ್ಮ ತಮ್ಮ ಮೊಬೈಲ್‌ನಲ್ಲಿ ಸಂಗ್ರಹಿಸಿಟ್ಟುಕೊಂಡಿದ್ದರು.

ಈ ನಡುವೆ ಪ್ರೇಮಾಗೆ ಹಣ ನೀಡಿದ್ದ ರಾಜೇಶ್, ವಾಪಸ್ ಕೊಡುವಂತೆ ಕೇಳಿದ್ದರಿಂದ ವೈಮನಸ್ಸು ಉಂಟಾಗಿತ್ತು. ತದ ನಂತರ ನೀನು ಮನೆಗೆ ಆಗಿಂದಾಗ್ಗೆ ಬಂದು ಹೋದರೆ, ಜನರು ಅನುಮಾನಪಡುತ್ತಾ ನನ್ನ ನಿಂದಿಸುತ್ತಾರೆ. ಹಾಗಾಗಿ ಇನ್ನು ನನ್ನ ಮನೆಗೆ ಬರಬೇಡ ಎಂದು ಪ್ರೇಮಾ ತಾಕೀತು ಮಾಡಿದ್ದರು.

ಎಷ್ಟೇ ಹೇಳಿದರೂ ಕೇಳದ ರಾಜೇಶ್, ಆಕೆ ಮನೆಗೆ ಹೋಗುವುದನ್ನು ಮುಂದುವರಿಸಿದಾಗ, ನನ್ನ ಮಾತು ಕೇಳದಿದ್ದರೆ ಸಂಬಂಧಿಕರಿಗೆ ಹೇಳುತ್ತೇನೆ ಎಂದು ಪ್ರೇಮಾ ಎಚ್ಚರಿಕೆ ನೀಡಿದಾಗ, ತಮ್ಮ ಖಾಸಗಿ ಫೋಟೋ ಹಾಗೂ ವಿಡಿಯೋಗಳನ್ನು ವೈರಲ್ ಮಾಡುವುದಾಗಿ ರಾಜೇಶ್ ಬೆದರಿಸಿದ್ದಾನೆ.

ಈ ವಿಷಯವನ್ನು ತನ್ನ ಸಹೋದರ ಶಿವುಗೆ ಹೇಳಿದ್ದ ಪ್ರೇಮಾ, ಪ್ರಮುಖ ವಿಷಯ ಮಾತನಾಡಬೇಕೆಂದು ಹೇಳಿ ರಾಜೇಶ್‌ನನ್ನು ಮನೆಗೆ ಕರೆಸಿಕೊಂಡು, ಇಬ್ಬರೂ ಸೋಮವಾರ ರಾತ್ರಿ ಆತನ ಮೇಲೆರಗಿದ್ದಾರೆ. ತನಗೆ ಅಪಾಯವಿದೆ ಎಂದು ಭಾವಿಸಿದ ಆತ ಅವರಿಂದ ತಪ್ಪಿಸಿಕೊಂಡು ಹೋಗುವಾಗ ಆರ್‌ಪಿ ರಸ್ತೆಯ 8ನೇ ಕ್ರಾಸ್ ಬಳಿ ಆತನ ಮೇಲೆ ಕಲ್ಲು ಚಪ್ಪಡಿ ಎತ್ತಿ ಹಾಕಿ ಹತ್ಯೆಗೈದಿದ್ದಾರೆ. ಸ್ಥಳಕ್ಕೆ ಧಾವಿಸಿದ ಅಡಿಷನಲ್ ಎಸ್ಪಿ ಡಾ. ನಂದಿನಿ, ಡಿವೈಎಸ್ಪಿ ರಘು, ಪಟ್ಟಣ ಠಾಣೆ ಇನ್ಸ್‌ಪೆಕ್ಟರ್ ಬಸವರಾಜು, ಸಬ್ ಇನ್ಸ್‌ಪೆಕ್ಟರ್ ಪ್ರಕಾಶ್ ಅವರು ಮಹಜರು ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದರು. ಕೊಲೆ ಆರೋಪಿಗಳನ್ನು ಬಂಧಿಸಿದ ಪೊಲೀಸರು, ಇಂದು ನ್ಯಾಯಾಲಯಕ್ಕೆ ಹಾಜರುಪಡಿಸಲಾಗಿ, ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ವಿರೋಧಪಕ್ಷದ ನಾಯಕ ಆರ್. ಅಶೋಕ್‌ಗೆ ಸಿಗದ ಸರ್ಕಾರಿ ವಸತಿ ಗೃಹ

ಬೆಂಗಳೂರು: ವಿಧಾನಸಭೆ ವಿರೋಧಪಕ್ಷದ ನಾಯಕ ಆರ್. ಅಶೋಕ ಅವರಿಗೆ ಇನ್ನೂ ಸರ್ಕಾರಿ ವಸತಿ ಗೃಹ ಹಂಚಿಕೆ ಮಾಡದೇ ಇರುವುದು ಟೀಕೆಗೆ ಕಾರಣವಾಗಿದೆ.




ಬಿಜೆಪಿ ವಿರೋಧಪಕ್ಷದ ನಾಯಕನ ಸ್ಥಾನಕ್ಕೆ ಆಯ್ಕೆ ಮಾಡಿದ್ದು ತಡವಾಗಿ. ವಿರೋಧಪಕ್ಷದ ನಾಯಕ ಸ್ಥಾನಕ್ಕೆ ಅಶೋಕ ಆಯ್ಕೆ ಆದ ಬಳಿಕ ಸರ್ಕಾರಿ ನಿವಾಸ ಕೋರಿ ನಾಲ್ಕು ಪತ್ರಗಳನ್ನು ಬರೆದರೂ ಸರ್ಕಾರದಿಂದ ಈವರೆಗೂ ಯಾವುದೇ ಪ್ರತಿಕ್ರಿಯೆ ಬಂದಿಲ್ಲ ಎಂದು ವಿರೋಧಪಕ್ಷದ ನಾಯಕರ ಕಚೇರಿ ಮೂಲಗಳು ಹೇಳಿವೆ.

ಅಶೋಕ ಅವರ ವಿಶೇಷ ಅಧಿಕಾರಿ ಈ ಸಂಬಂಧ ಮುಖ್ಯ ಕಾರ್ಯದರ್ಶಿಯವರನ್ನು ಎರಡು, ಮೂರು ಬಾರಿ ಭೇಟಿ ಮಾಡಿದ್ದರು. ಬೇಗನೆ ಕೊಡುತ್ತೇವೆ ಎಂದು ಹೇಳಿದರೂ ಇಲ್ಲಿಯವರೆಗೂ ಕೊಟ್ಟಿಲ್ಲ ಎಂದು ಮೂಲಗಳು ತಿಳಿಸಿವೆ.

ನಂ1, ಕುಮಾರಕೃಪಾ ಪೂರ್ವ, ನಂ 1 ರೇಸ್‌ವ್ಯೂ ಕಾಟೇಜ್, ರೇಸ್‌ಕೋರ್ಸ್ ರಸ್ತೆ, ನಂ 2, ರೇಸ್ ವ್ಯೂ ಕಾಟೇಜ್, ರೇಸ್ ಕೋರ್ಸ್ ರಸ್ತೆ ಈ ಮೂರರಲ್ಲಿ ಒಂದನ್ನು ಅಧಿಕೃತ ನಿವಾಸವಾಗಿ ಕೊಡಬೇಕು ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಮತ್ತು ಮುಖ್ಯಮಂತ್ರಿಯವರಿಗೆ ಪತ್ರ ಬರೆದಿದ್ದರು.

ಈ ಮೂರೂ ನಿವಾಸಗಳು ಖಾಲಿ ಇದ್ದು, ವಿಧಾನಸೌಧಕ್ಕೆ ಹತ್ತಿರದಲ್ಲೇ ಇರುವುದರಿಂದ ಮೂರರಲ್ಲಿ ಒಂದನ್ನು ಕೊಡುವಂತೆ ಅಶೋಕ ಕೋರಿದ್ದಾರೆ.

ರಾಷ್ಟ್ರಪತಿ ಭವನದಲ್ಲಿ ಓಡಾಡಿದ 'ವಿಚಿತ್ರ ಪ್ರಾಣಿ' ಚಿರತೆ ಅಲ್ಲ, ಬೆಕ್ಕು!



ಅಂತೂ ಪೊಲೀಸರ ಸ್ಪಷ್ಟನೆ

ನವದೆಹಲಿ: ಮೂರನೇ ಅವಧಿಗೆ ಪ್ರಧಾನಿಯಾಗಿ ನರೇಂದ್ರ ಮೋದಿ ಪ್ರಮಾಣ ವಚನ ಸ್ವೀಕಾರ ಸಮಾರಂಭದ ವೇಳೆ ರಾಷ್ಟ್ರಪತಿ ಭವನದಲ್ಲಿ ನಿಗೂಢ ಪ್ರಾಣಿಯೊಂದು ಅಡ್ಡಾಡುತ್ತಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ನೆಟ್ಟಿಗರು ಅದನ್ನು ಚಿರತೆ ಎಂದು ಕರೆದಿದ್ದಾರೆ.

ಪ್ರಮಾಣ ವಚನ ಸ್ವೀಕಾರ ಸಮಾರಂಭದ ನೇರ ಪ್ರಸಾರದ ವಿಡಿಯೋದಲ್ಲಿ, ಬಿಜೆಪಿ ಸಂಸದ ದುರ್ಗಾದಾಸ್ ಉಯಿಕೆ ಅವರು ಪ್ರಮಾಣ ವಚನ ಸ್ವೀಕರಿಸಿದ ನಂತರ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಅಭಿನಂದನೆ ಸ್ವೀಕರಿಸುವಾಗ, ಹಿಂಭಾಗದ ಮೆಟ್ಟಿಲಿನ ಮೇಲೆ ಪ್ರಾಣಿಯೊಂದು ನಡೆದುಕೊಂಡು ಹೋಗಿದೆ. ಇದರ ವಿಡಿಯೋ ವೈರಲ್ ಆಗಿದೆ. ಆ ಪ್ರಾಣಿ ಬೆಕ್ಕಿನ ರೀತಿ ಕಂಡು ಬಂದರೂ, ಅದರ ಗಾತ್ರವು ಅನುಮಾನಕ್ಕೆ ಕಾರಣವಾಗಿತ್ತು. ಕೆಲವರು ಇದು ಚಿರತೆ ಇರಬಹುದು ಎಂದು ಶಂಕಿಸಿದ್ದರು.

ಅಂತಿಮವಾಗಿ ದೆಹಲಿ ಪೊಲೀಸರು ಈ ಬಗ್ಗೆ ಸ್ಪಷ್ಟೀಕರಣ ನೀಡಿದ್ದು, ಇದು ಕೇವಲ ಬೆಕ್ಕು ಮತ್ತು ಯಾವುದೇ ಚಿರತೆ ಅಲ್ಲ ಎಂದು ಹೇಳುವ ಮೂಲಕ ವದಂತಿಗಳಿಗೆ ತೆರೆ ಎಳೆದರು.

ರಾಷ್ಟ್ರಪತಿ ಭವನದಲ್ಲಿ ನಡೆದ ಪ್ರಮಾಣ ವಚನ ಸ್ವೀಕಾರ ಸಮಾರಂಭದ ನೇರಪ್ರಸಾರದ ವೇಳೆ ಸೆರೆಯಾದ ಪ್ರಾಣಿಯ ಚಿತ್ರವನ್ನು ಕೆಲವು ಮಾಧ್ಯಮಗಳು ಮತ್ತು ಸಾಮಾಜಿಕ ಜಾಲತಾಣಗಳು ಚಿರತೆ ಎಂದು ತೋರಿಸುತ್ತಿವೆ. ಆದರೆ ಇದು ನಿಜವಲ್ಲ, ಕ್ಯಾಮರಾದಲ್ಲಿ ಸೆರೆಯಾದ ಪ್ರಾಣಿ ಸಾಮಾನ್ಯ ಮನೆಯ ಬೆಕ್ಕು, ದಯವಿಟ್ಟು ಇಂತಹ ಕ್ಷುಲ್ಲಕ ವದಂತಿಗಳಿಗೆ ಕಿವಿಗೊಡಬೇಡಿ ಎಂದು ದೆಹಲಿ ಪೊಲೀಸರು 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದ್ದಾರೆ.

ನಕ್ಕರೆ ಅದೇ ಸ್ವರ್ಗ

ಗಂಡ : ಏನೇ ನಾನು ಎರಡು ನಿಮಿಷಕ್ಕೆ ರೆಡಿಯಾದೆ. ನೀನಿನ್ನು ರೆಡಿಯಾಗಿಲ್ವ?

ಹೆಂಡ್ತಿ : ಮ್ಯಾಗಿ ರೆಡಿಯಾಗೋದಿಕ್ಕೂ ಬಿರಿಯಾನಿ ರೆಡಿಯಾಗೋದಿಕ್ಕೂ ವ್ಯತ್ಯಾಸ ಇಲ್ವ?

ಮೈಸೂರು ಮಿತ್ರ

ಬುಧವಾರ, 12 ಜೂನ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ನೋವುಗಳ ನಡುವೆ ನೆಮ್ಮದಿ ಹುಡುಕುವುದೇ ಜೀವನ; ನಿರಾಸೆಗಳ ನಡುವೆ ಭರವಸೆಯೊಂದಿಗೆ ಸಾಗುವುದೇ ಪಯಣ...! – ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಕಾಗೆಗೆ ಯಜಮಾನನ ಸ್ಥಾನ ಕೊಟ್ಟರೆ ಮನೆ ತುಂಬಾ ಪಿಷ್ಟ.

ನಿಮ್ಮ ಪತ್ರಗಳು

ಗೃಹಲಕ್ಷ್ಮಿ ಹಣಕ್ಕಾಗಿ ಮಹಿಳೆಯರ ಅಲೆಸುತ್ತಿರುವ ಇಲಾಖೆ

ಮಾನ್ಯರೆ,

ರಾಜ್ಯ ಸರ್ಕಾರದ 5 ಗ್ಯಾರಂಟಿಗಳಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆಯ ಹಣ ಅನೇಕ ಮಹಿಳೆಯರಿಗೆ ಕೈ ಸೇರದೆ ಪರದಾಡುತ್ತಿದ್ದಾರೆ. ಅರ್ಜಿಯನ್ನು ಸಲ್ಲಿಸಿದ್ದರೂ ಒಂದು ಕಂತು ಕೂಡ ಬರದೆ ಸರ್ಕಾರದ ವಿರುದ್ಧ ಮಹಿಳೆಯರು ಹಿಡಿಶಾಪ ಹಾಕುತ್ತಿದ್ದಾರೆ. ಪ್ರತಿದಿನ ಒಂದಲ್ಲ ಒಂದು ಸಬೂಬು ಹೇಳಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಫಲಾನುಭವಿಗಳನ್ನು ಸಾಗ ಹಾಕುತ್ತಿದ್ದಾರೆ. ಒಮ್ಮೊಮ್ಮೆ ತಾಲೂಕು ಆಫೀಸ್‌ಗೆ ಹೋಗಿ ವಿಚಾರಿಸಿ ಎನ್ನುತ್ತಾರೆ. ನಂತರ ತಾಲೂಕು ಆಫೀಸ್‌ಗೆ ಹೋಗಿ ವಿಚಾರಿಸಿದರೆ ಮತ್ತೊಮ್ಮೆ ಬ್ಯಾಂಕಿಗೆ ಹೋಗಿ ವಿಚಾರಿಸಿ ಎನ್ನುತ್ತಾರೆ. ಅಧಿಕಾರಿಗಳು ಹೇಳಿದ ಕಡೆಯಲ್ಲ ತಿರುಗಿ, ತಿರುಗಿ ಮಹಿಳೆಯರು ಹೈರಾಣಾಗಿದ್ದಾರೆ. ಇಲ್ಲಸಲ್ಲದ ದಾಖಲೆಗಳನ್ನು ಕೇಳಿ ದಿನಂಪ್ರತಿ ಕಚೇರಿಗಳಿಗೆ ಅಲೆಸುತ್ತಿದ್ದಾರೆ. ಮಹಿಳೆಯರು ಮನೆ, ಕೂಲಿ, ಜಮೀನಿನ ಕೆಲಸವನ್ನು ಬಿಟ್ಟು ಕಚೇರಿಗೆ ಅಲೆಯುವುದೇ ಆಗಿದೆ. ರೈತ ಕುಟುಂಬದ, ಕಡು ಬಡತನದ ಹೆಣ್ಣು ಮಕ್ಕಳಾಗಿದ್ದರೂ ಗೃಹಲಕ್ಷ್ಮಿ ಯೋಜನೆಗೆ ಅರ್ಹತೆ ಇಲ್ಲ ಎಂದು ಹೇಳುತ್ತಿದ್ದಾರೆ. ಸರ್ಕಾರಗಳು ಯೋಜನೆಗಳನ್ನು ಜಾರಿಗೆ ತರುವುದು ಮುಖ್ಯವಲ್ಲ. ಎಷ್ಟರಮಟ್ಟಿಗೆ ಸಾಮಾನ್ಯ ಜನರಿಗೆ ಅವುಗಳು ತಲುಪುತ್ತಿವೆ ಎಂಬುದು ಬಹಳ ಮುಖ್ಯ. ಇದಕ್ಕೆ ಸಂಬಂಧಪಟ್ಟ ಇಲಾಖೆ ತುರ್ತಾಗಿ ಕ್ರಮ ಕೈಗೊಳ್ಳಲಿ. ಕೆಲವು ಸರ್ಕಾರಿ ಕಚೇರಿಗಳಲ್ಲಿ ಲಂಚ ಕೊಡದೆ ಯಾವುದೇ ಕೆಲಸಗಳು ನಡೆಯುವುದಿಲ್ಲ, 'ಸರ್ಕಾರಿ ಕೆಲಸ ದೇವರ ಕೆಲಸ' ಎಂದು ಬರಹ ರೂಪದಲ್ಲಿ ಇದೇ ವಿನಃ ಕೃತಿ ರೂಪದಲ್ಲಿ ಕಾರ್ಯಗತವಾಗುತ್ತಿಲ್ಲ. ಸಣ್ಣ ಸಣ್ಣ ಕೆಲಸಗಳಿಗೂ ಕೂಡ ಸರ್ಕಾರಿ ಕಚೇರಿಗಳಲ್ಲಿ ವೃದ್ಧರು, ಹಿರಿಯರು, ಬಡವರು, ರೈತರು, ಹೆಣ್ಣು ಮಕ್ಕಳೆನ್ನದೇ ಲಂಚಕ್ಕಾಗಿ ಹಪಾಹಪಿಸುತ್ತಾರೆ. ಲಂಚ ಕೊಡದೆ ಯಾವುದೇ ಕಚೇರಿಗಳಲ್ಲಿ ಸರ್ಕಾರಿ ಕೆಲಸಗಳು ಸುಲಭವಾಗಿ ಆಗುತ್ತಿಲ್ಲ. ಸರ್ಕಾರಿ ಕಚೇರಿಗಳು ಲಂಚಮಯವಾಗಿ ತುಂಬಿ ತುಳುಕುತ್ತಿದೆ. ಇದಕ್ಕೆ ಕಡಿವಾಣ ಹಾಕುವವರು ಯಾರು ಎಂಬುದು ಯಕ್ಷಪ್ರಶ್ನೆ? ಪ್ರಾಮಾಣಿಕತೆಯಿಂದ ಕರ್ತವ್ಯ ನಿರ್ವಹಿಸುವವರು ಇಂದಿನ ದಿನಗಳಲ್ಲಿ ಬಹಳ ವಿರಳವಾಗಿದ್ದಾರೆ. ಸರ್ಕಾರಿ ಅಧಿಕಾರಿಗಳು ದಯವಿಟ್ಟು ಸಾಮಾನ್ಯ ಜನರ ಕಷ್ಟಗಳಿಗೆ ಸ್ಪಂದಿಸಲಿ ಎಂದು ಮನವಿ.

–ಪರಶಿವಮೂರ್ತಿ ಎನ್.ಪಿ, ನಂಜೀಪುರ, ಸರಗೂರು ತಾ.

ಕುಡಿಯುವ ನೀರು ಕಲುಷಿತವಾಗುವುದನ್ನು ತಡೆಗಟ್ಟಿ

ಮಾನ್ಯರೆ,

ಬೇಸಿಗೆಯ ನಂತರ ಮಳೆಯ ಆಗಮನದಿಂದಾಗಿ ರಾಜ್ಯದಲ್ಲಿ ಕಲುಷಿತ ನೀರು ಕುಡಿದು ಆರೋಗ್ಯಕ್ಕೆ ಹಾನಿಯಾದ ಹಲವು ಪ್ರಕರಣಗಳು ದಾಖಲಾಗಿದ್ದು, ಮೈಸೂರಿನ ಕೆ.ಸಾಲುಂಡಿ ಗ್ರಾಮದ 22 ವರ್ಷದ ಯುವಕನೊಬ್ಬ ಕಲುಷಿತ ನೀರಿನಿಂದ ಮೃತಪಟ್ಟಿರುವುದು ಇಂತಹ ನೀರಿನ ಅಡ್ಡಪರಿಣಾಮಕ್ಕೆ ಸಾಕ್ಷಿಯಾಗಿದೆ.

ಮಳೆಗಾಲ ಪ್ರಾರಂಭವಾದಾಗ ಮಳೆ ನೀರು ಚರಂಡಿಗಳಲ್ಲಿ ಕಸ, ಪ್ಲಾಸ್ಟಿಕ್ ಜೊತೆಗೆ ಕುಡಿಯುವ ನೀರು ಸೇರಿದಾಗ ನೀರು ಕಲುಷಿತಗೊಳ್ಳುತ್ತದೆ. ಸರ್ಕಾರ ನದಿ, ಹಳ್ಳ, ಕೆರೆಗಳಲ್ಲಿ ನಾನಾ ರೀತಿಯ ತ್ಯಾಜ್ಯ ಕುಡಿಯುವ ನೀರಿನ ಮೂಲಗಳಿಗೆ ಸೇರದಂತೆ ಕ್ರಮಕೈಗೊಳ್ಳಬೇಕು.

ಬರಗಾಲ ಮತ್ತು ಮಳೆಗಾಲದ ಸಮಯದಲ್ಲಿ ನೀರು ಕಲುಷಿತವಾಗುವುದು ಸಾಮಾನ್ಯವಾಗಿದೆ. ಬರಗಾಲದಲ್ಲಿ ನೀರಿನ ಮಟ್ಟ ಕುಸಿದಾಗ ಅಪಾಯಕಾರಿ ರಾಸಾಯನಿಕಗಳು ನೀರಿಗೆ ಸೇರಿ ಅದು ವಿಷಕಾರಿಯಾಗಿ ಪರಿಣಮಿಸುತ್ತದೆ.

ಇಂತಹ ಪ್ರಕರಣಗಳು ಕಂಡು ಬಂದಾಗ ಮಾತ್ರ ಕ್ರಮಕೈಗೊಳ್ಳುವ ಬದಲು ಕಲುಷಿತ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರವನ್ನು ಕಂಡುಕೊಳ್ಳಬೇಕು. ಸದಾ ಶುದ್ಧ ಕುಡಿಯುವ ನೀರನ್ನು ಪೂರೈಕೆ ಮಾಡುವ ವ್ಯವಸ್ಥೆಯನ್ನು ಸರ್ಕಾರ ಮಾಡಬೇಕು. ನದಿ, ಹಳ್ಳ–ಕೊಳ್ಳಗಳಿಗೆ ಮಳೆ ನೀರು ಬಂದು ಸೇರುವ ಮುಖ್ಯ ಕಾಲುವೆಗೆ ತ್ಯಾಜ್ಯಗಳು ಸೇರುವುದನ್ನು ತಡೆಯುವ ಕಬ್ಬಿಣದ ಪರದೆಗಳನ್ನು ಅಳವಡಿಸುವ ಮೂಲಕ ಕುಡಿಯುವ ನೀರಿಗೆ ತ್ಯಾಜ್ಯಗಳ ಸೇರುವಿಕೆಯನ್ನು ತಡೆಯಬಹುದಾಗಿದೆ. **ಜೊತೆಗೆ ಅಭಿವೃದ್ಧಿ ಹೊಂದಿದ ದೇಶಗಳಿಗೆ ಇಲ್ಲಿಂದ ನಿಯೋಗ ಕಳುಹಿಸಿ ಅಲ್ಲಿ ಹೇಗೆ ಕುಡಿಯುವ ನೀರಿನ ಮೂಲಗಳ ಸ್ವಚ್ಛತೆಗೆ ಕ್ರಮಕೈಗೊಳ್ಳುತ್ತಾರೆ ಎನ್ನುವುದನ್ನು ಅಧ್ಯಯನ ಮಾಡಿದರೆ ಅದು ನಮಗೆ ಅನುಕೂಲವಾಗಿರುತ್ತದೆ.**

ರಸಗೊಬ್ಬರ–ಕ್ರಿಮಿನಾಶಕ ಬಳಕೆ, ಬಯಲು ಬಹಿರ್ದೆಸೆ ಮುಂತಾದವು ಮಳೆ ನೀರಿನ ಜೊತೆಗೆ ಕುಡಿಯುವ ನೀರಿನ ಮೂಲಗಳಿಗೆ ಸೇರುವುದರಿಂದ ನೀರು ಕಲುಷಿತಗೊಳ್ಳುತ್ತದೆ. ಸಾರ್ವಜನಿಕರು ಸಹ ತ್ಯಾಜ್ಯಗಳನ್ನು ನೀರಿಗೆ ಎಸೆಯುವುದನ್ನು ಕಡಿಮೆ ಮಾಡುವ ಮುಖಾಂತರ ಸರ್ಕಾರಕ್ಕೆ ಸಹಕರಿಸಿದರೆ ಕುಡಿಯುವ ನೀರು ಕಲುಷಿತವಾಗುವುದನ್ನು ತಡೆಯಬಹುದಾಗಿದೆ.

–ರಾಸುಮ ಭಟ್, ಸಂಶೋಧನಾ ವಿದ್ಯಾರ್ಥಿ, ಚಿಕ್ಕಮಗಳೂರು.

ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಬೈಸಿಕಲ್ ಯೋಜನೆ ಮತ್ತೆ ಜಾರಿಯಾಗಲಿ

ಮಾನ್ಯರೇ,

2006–07ರಲ್ಲಿ ರಾಜ್ಯದಲ್ಲಿ ಅಧಿಕಾರದಲ್ಲಿದ್ದ ಜೆಡಿಎಸ್–ಬಿಜೆಪಿ ಸಮ್ಮಿಶ್ರ ಸರಕಾರ ಸೈಕಲ್ ವಿತರಿಸುವ ಯೋಜನೆ ಪ್ರಾರಂಭಿಸಿತು. ಶಾಲೆ ಬಿಟ್ಟ ಹೆಣ್ಣು ಮಕ್ಕಳನ್ನು ಮತ್ತೆ ಶಾಲೆಗೆ ಕರೆತರುವ ಉದ್ದೇಶದಿಂದ 8ನೇ ತರಗತಿಯಲ್ಲಿ ಓದುತ್ತಿರುವ ವಿದ್ಯಾರ್ಥಿನಿಯರಿಗೆ ಸೈಕಲ್ ನೀಡಲು ಮುಂದಾಯಿತು. ಈ ಯೋಜನೆ ಹೆಚ್ಚು ಪ್ರಚಾರ ಪಡೆದ ಹಿನ್ನೆಲೆಯಲ್ಲಿ ಪಾಲಕರು ಬಾಲಕರಿಗೂ ವಿಸ್ತರಿಸುವಂತೆ ಬೇಡಿಕೆ ಮುಂದಿಟ್ಟರು. ಆನಂತರದಲ್ಲಿ ಸರಕಾರ ಪ್ರೌಢಶಾಲೆಗೆ ಸೇರುವ ಬಾಲಕ ಮತ್ತು ಬಾಲಕಿಯರಿಗೆ ಸೈಕಲ್ ವಿತರಿಸಲು ಮುಂದಾಯಿತು. ಆದ್ದರಿಂದ ವಿದ್ಯಾರ್ಥಿ ಸಮುದಾಯ ಉತ್ಸಾಹದಿಂದ ಶಾಲೆಯ ಕಡೆಗೆ ಬರಲು ಸಹಕಾರಿಯಾಗಿತ್ತು. ಆನಂತರದ ವರ್ಷಗಳಲ್ಲಿ ಈ ಯೋಜನೆ ನಿಂತು ಹೋದದ್ದು ಮಾತ್ರ ವಿಪರ್ಯಾಸ. ಇಂದಿನ ಕಾಂಗ್ರೆಸ್ ಸರ್ಕಾರ ಪಂಚ ಯೋಜನೆಗಳ ಮೂಲಕ ಮನೆಯಲ್ಲಿರುವ ಪ್ರತಿ ಹೆಂಗಸರನ್ನು ತಲುಪಿರುವುದು ಸ್ವಾಗತಾರ್ಹ. ಹಳ್ಳಿಯಿಂದ ದೂರವಿರುವ ಪ್ರೌಢಶಾಲೆಗಳಿಗೆ ಹೆಣ್ಣು ಮಕ್ಕಳು ತಲುಪಲು ಸಾಧ್ಯವಾಗದೆ ಅರ್ಧಕ್ಕೆ ಶಿಕ್ಷಣ ಮೊಟಕುಗೊಳಿಸುತ್ತಿರುವ ಸಂಖ್ಯೆ ಕಡಿಮೆ ಇಲ್ಲ. ಗ್ರಾಮೀಣ ಪ್ರದೇಶದಲ್ಲಿರುವ ವಿದ್ಯಾರ್ಥಿಗಳು ಸರಿಯಾದ ಸಮಯಕ್ಕೆ ಶಾಲೆಗೆ ಹೋಗಲು ಸಾಧ್ಯವಾಗುತ್ತಿಲ್ಲ. ಹಾಗೆಯೇ ಅವರ ವಿದ್ಯಾಭ್ಯಾಸದ ಮೇಲೆ ಭಾರಿ ಪರಿಣಾಮ ಬೀರುತ್ತಿದೆ. ಹೆಣ್ಣು ಮಕ್ಕಳ ಶೈಕ್ಷಣಿಕ ಸಬಲೀಕರಣಕ್ಕೆ ಬೈಸಿಕಲ್ ನೀಡುವ ಯೋಜನೆಯು ಅತ್ಯಂತ ಅವಶ್ಯಕ. ಆದ್ದರಿಂದ ಮತ್ತೆ ಬೈಸಿಕಲ್ ವಿತರಣೆ ಮಾಡಲು ಸರ್ಕಾರ ಚಿಂತಿಸಲಿ.

–ಮರುಡೇಶ್ ಎನ್ ಎಸ್, ಮಳವಳ್ಳಿ, ಮಂಡ್ಯ ಜಿಲ್ಲೆ.



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಮಂಕುತಿಮ್ಮನು ಕಂಡ ಭಕ್ತಿ

ಭಾರತೀಯ ಚಿಂತನೆಯ ಪರಂಪರೆಯಲ್ಲಿ ಭಕ್ತಿಗೆ ಪರಮೋಚ್ಚ ಸ್ಥಾನವಿದೆ. ಶ್ವೇತಾಶ್ವ–ತರೋಪನಿಷತ್ತು ದೇವಭಕ್ತಿ ಮತ್ತು ಗುರುಭಕ್ತಿ ಇದ್ದವನಿಗೆ ಮಾತ್ರ ಉಪನಿಷತ್ತಿನಲ್ಲಿ ಹೇಳಿದ ಅರ್ಥಗಳು ಗೋಚರಿಸುತ್ತವೆ ಎಂದು ಸ್ಪಷ್ಟವಾಗಿ ಹೇಳಿದೆ. ಭಗವದ್ಗೀತೆಯ ಹನ್ನೆರಡನೆಯ ಅಧ್ಯಾಯವು ಭಕ್ತಿ ಯೋಗವೆಂದೇ ಪ್ರಸಿದ್ಧವಾಗಿದೆ. ರಾಮಾನುಜಾಚಾರ್ಯರು ಮತ್ತು ಮಧ್ವಾಚಾರ್ಯರು ಹರಿಭಕ್ತಿಯೇ ಮೋಕ್ಷ ಮಾರ್ಗವೆಂದು ಸಾರಿದ್ದಾರೆ. ಭಕ್ತಿಯ ಸ್ವರೂಪವನ್ನು, ಮಹಿಮೆಯನ್ನೂ ವಿವರಿಸಲು ನಾರದ ಭಕ್ತಿ ಸೂತ್ರಗಳು ರಚಿತವಾಗಿವೆ. ನವರಸಗಳಿಗೆ ಭಕ್ತಿರಸವೇ ಮೂಲ ಎಂಬ ಸಿದ್ಧಾಂತವನ್ನು ಪ್ರತಿಷ್ಠಾಪಿಸುವುದಕ್ಕಾಗಿ ಭಕ್ತಿರಸಾಯನಂ, ಭಕ್ತಿ ರಸಾಮೃತ ಸಿಂಧು: ಎಂಬ ಗ್ರಂಥಗಳೂ ಬಂದಿವೆ. ಹೀಗೆ ಭಕ್ತಿಯ ಇತಿಹಾಸ ದೊಡ್ಡದು.

ಭಾರತೀಯ ಚಿಂತನೆಯ ಪರಿಪಾಕವನ್ನರಿತಿದ್ದ ದಾರ್ಶನಿಕ ಕವಿ ಡಿ.ವಿ.ಜಿ. **ಮಂಕುತಿಮ್ಮನ ಕಗ್ಗದಲ್ಲಿ** ಹಲವಾರು ಪದ್ಯಗಳಲ್ಲಿ ಭಕ್ತಿಯ ಬಗೆಗೆ ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದ್ದಾರೆ. ಭಕ್ತಿಯಲ್ಲೂ ಅನೇಕ ವಿಧಗಳಿವೆ. ಪ್ರಯೋಜನಾಪೇಕ್ಷೆಯಿಲ್ಲದೆ ಭಗವಂತನಲ್ಲಿ ಇರುವ ಸ್ನೇಹವು ನಿಜಭಕ್ತಿ. ಇದನ್ನು ಕಗ್ಗದಲ್ಲಿ ಡಿ.ವಿ.ಜಿ. ಹೀಗೆ ಹೇಳಿದ್ದಾರೆ–

ಹರಿಭಜಕರೊಳು ಭಯದಿನೊಗೆದುದನಿಬರ ಭಕುತಿ
ವರದ ಮೇಲಣ ಭಕ್ತಿಯನಿಬರದು ನೋಡೆ.
ಬರಿಯ ಸಂತೋಷದನುರಾಗರಸ ನಿಜಭಕ್ತಿ
ಪರಮದಾಕರ್ಷೆಯದು ಮಂಕುತಿಮ್ಮ॥

ಅನೇಕರಿಗೆ ಭಗವಂತನಲ್ಲಿ ಭಕ್ತಿ ಹುಟ್ಟುವುದು ಭಯದಿಂದ. ತಾವು ಮಾಡಿದ ಪಾಪಕ್ಕೆ ಭಗವಂತನು ಯಾವ ಶಿಕ್ಷೆಯನ್ನು ಕೊಡುವನೋ, ಯಾವ ನರಕದಲ್ಲಿಕ್ಕುವನೋ ಎಂಬ ಭೀತಿ ಅನೇಕರಿಗೆ. ಆ ಕಷ್ಟಗಳಿಂದ ತಪ್ಪಿಸಿಕೊಳ್ಳಲು ಭಕ್ತರಾಗುತ್ತಾರೆ. ನಾವು ಹೇಳುವ ಅನೇಕ ಸ್ತೋತ್ರಗಳಲ್ಲಿ ಮಾಂ ಪಾಹಿ, ಮಾಂ ರಕ್ಷ ಎಂಬ ಮಾತುಗಳು ಬರುವುದು ಈ ಉದ್ದೇಶದಿಂದಲೇ ಎನಿಸುತ್ತದೆ. ಇದು ಭಕ್ತರ ಒಂದು ಗುಂಪಿನವರ ಮಾತಾದರೆ ಇನ್ನು ಕೆಲವರು ವರಕ್ಕಾಗಿ ಬೇಡಲು ಭಕ್ತಿಯನ್ನು ತೋರಿಸುತ್ತಾರೆ. ನನಗೆ ಐಶ್ವರ್ಯವನ್ನು ಕೊಡು, ಮಕ್ಕಳನ್ನು ಕೊಡು, ರಾಜ್ಯವನ್ನು ಕೊಡು ಎಂದು ಕೇಳುವ ಇವರ ಭಕ್ತಿ ವ್ಯಾಪಾರಿ ದೃಷ್ಟಿಯದು. ನನಗೆ ರಾಜ್ಯವನ್ನು ಕೊಟ್ಟರೆ ನಿನಗೆ ಗುಡಿ ಗೋಪುರಗಳನ್ನು ಕಟ್ಟಿಸಿ ಕೊಡುತ್ತೇನೆ. ರಥೋತ್ಸವ ಮಾಡಿಸುತ್ತೇನೆ ಎಂಬ ಪ್ರಲೋಭನೆಯನ್ನೂ ಒಡ್ಡುತ್ತಾರೆ. ಇದೆಲ್ಲ ನಿಜ ಭಕ್ತಿಯಲ್ಲ. ಭಗವತ್ ಪ್ರೀತಿಯಿಂದ ಉಂಟಾಗುವ ಸಂತೋಷ ಯಾರಿಗೆ ಮುಖ್ಯ ಪ್ರಯೋಜನವೋ ಅಂತಹವರು ಮಾತ್ರ ನಿಜಭಕ್ತರು, ಪರಮಾತ್ಮನ ಆಕರ್ಷಣೆಯ ರೂಪದ ಭಕ್ತಿ ಅವರದು ಎಂದು ಡಿ.ವಿ.ಜಿ. ಇಲ್ಲಿ ತಿಳಿಸಿದ್ದಾರೆ.

ನಮ್ಮಲ್ಲಿ ಅನೇಕರ ಭಕ್ತಿ ಅಧಮ ರೀತಿಯದು. ಭಗವಂತನ ಅಸ್ತಿತ್ವದಲ್ಲಿ ಖಚಿತ ಜ್ಞಾನವಿಲ್ಲದೆ, ಅಕಸ್ಮಾತ್ ದೇವರಿದ್ದರೆ ಏನು ಮಾಡುವುದು–ಎಂಬ ಆಲೋಚನೆ. ಇಂತಹ ಎಡಬಿಡಂಗಿ ಭಕ್ತರನ್ನು ಕುರಿತು ಡಿ.ವಿ.ಜಿ. ಹೇಳುತ್ತಾರೆ–

ಕತ್ತಲೆಯೊಳೇನನೋ ಕಂಡು ಬೆದರಿದ ನಾಯಿ
ಎತ್ತಲೋ ಸಖನೋರ್ವನಿಹನೆಂದು ನಂಬಿ।
ಕತ್ತೆತ್ತಿ ಮೋಳಿಡುತ ಬೊಗಳಿ ಹಾರಾಡುವುದು
ಭಕ್ತಿಯಂತೆಯೇ ನಮದು ಮಂಕುತಿಮ್ಮ ॥

ನಾಯಿ ಕಾರ್ಗತ್ತಲೆಯಲ್ಲಿ ಒಂಟಿಯಾಗಿದ್ದು ಹೆದರಿರುತ್ತದೆ. ಎಲ್ಲೋ ತನಗೆ ಜೊತೆಯಾಗಿ ಭಯವನ್ನು ತಪ್ಪಿಸುವ ಇನ್ನೊಂದು ನಾಯಿಯಿದೆ ಎಂದು ನಂಬಿಕೊಂಡು ಬೊಗಳುತ್ತಾ ಹಾರಾಡುತ್ತದೆ. ಜೋರಾಗಿ ಕೂಗಿಕೊಳ್ಳುತ್ತದೆ. ನಮ್ಮ ಸ್ಥಿತಿಯೂ ಅದೇ. ಅಜ್ಞಾನದ ಕತ್ತಲೆಯಲ್ಲಿ ಮುಳುಗಿದ್ದೇವೆ. ಕಷ್ಟಗಳಲ್ಲಿ ಸಿಲುಕಿದ್ದೇವೆ. ನಮ್ಮನ್ನು ಕಾಪಾಡುವ ದೇವರು ಎಲ್ಲಿದ್ದಾನೋ ತಿಳಿಯದು. ಅವನು ಹೇಗಿದ್ದಾನೆ ಎಂಬುದೂ ಗೊತ್ತಿಲ್ಲ. ಆದರೂ ಆರ್ತರಾಗಿ ಕೂಗಿಕೊಳ್ಳುತ್ತಿದ್ದೇವೆ. ಇಂತಹ ಮುಗ್ಧ ಭಕ್ತಿ ನಮ್ಮದು. ಜ್ಞಾನಪೂರ್ವಕವಾದ ಭಕ್ತಿಯಲ್ಲ. ಆದ್ದರಿಂದ ಅದು ಚಂಚಲ. ಇಂದು ಈ ದೇವರು, ನಾಳೆ ಆ ದೇವರು. ಕಂಡ ಕಂಡ ದೇವರಿಗೆಲ್ಲ ಕೈ ಮುಗಿಯುವವರು ನಾವು.



ಡಿ.ವಿ.ಗುಂಡಪ್ಪ

ಕತ್ತಲೆಯ ಗವಿಯಲ್ಲಿ ಕಪ್ಪು ನಾಯಿಯನ್ನು ಕುರುಡನು ಹುಡುಕಿದಂತೆ ದೇವರನ್ನು ಕಾಣಲು ಚಡಪಡಿಸುತ್ತಿದ್ದೇವೆ. ಅನಂತನೂ ಅಪಾರನೂ ಅವೇದ್ಯನೂ ಆದ ಪರಮಾತ್ಮನನ್ನು ನಮ್ಮ ಮಿತಶಕ್ತಿಯ ಇಂದ್ರಿಯಗಳಿಂದ, ಮನಸ್ಸಿನಿಂದ, ಬುದ್ಧಿಯಿಂದ ಹೃದಯದಲ್ಲಿ ತುಂಬಿಕೊಳ್ಳಲು ಯತ್ನಿಸುತ್ತಿದ್ದೇವೆ. ಇದು ಹೇಗಿದೆ ಎಂಬುದನ್ನು ಡಿವಿಜಿ ಹೇಳುತ್ತಾರೆ–

ಅಂಬುಧಿಯ ಮಡಕೆಯಲಿ, ಹೊಂಬಿಸಿಲ ಕಿಟಕಿಯಲಿ
ತುಂಬಿಕೊಳ್ಳುವ ಬಡವನೈಶ್ವರ್ಯದಂತೆ।
ಬಿಂಬದೊಳಗಮಿತ ಸತ್ತ್ವವ ಪಿಡಿದಿಡುವ ಭಕ್ತಿ
ಇಂಬು ಕಿಂಚಿನ್ಮತಿಗೆ ಮಂಕುತಿಮ್ಮ ॥

ಬಡವನಿಗೇನೋ ಆಸೆ, ಸಮುದ್ರವೆಲ್ಲ ತನಗೆ ಬೇಕು, ಸೂರ್ಯನ ಬಿಸಿಲೆಲ್ಲ ಬೇಕು ಎಂದು. ಆದರೆ ಅದನ್ನು ಹಿಡಿದಿಡಲು ಅವನ ಬಳಿಯಲ್ಲಿರುವುದು ಒಂದು ಮಡಕೆ, ಒಂದು ಕಿಟಕಿಯ ಮನೆ. ಅಷ್ಟೇ ಅವನ ಐಶ್ವರ್ಯ. ಒಂದು ಮಡಕೆ ಎಷ್ಟು ನೀರನ್ನು ಹಿಡಿಸೀತು? ಒಂದು ಕಿಟಕಿ ಎಷ್ಟು ಬಿಸಿಲನ್ನು ತುಂಬಿಕೊಂಡೀತು? ಹಾಗೆಯೇ ನಮ್ಮ ಸೀಮಿತ ಭಕ್ತಿ ಒಂದು ಬಿಂಬದೊಳಗೆ ಎಂದರೆ ವಿಗ್ರಹದಲ್ಲಿ ಅಮಿತವಾದ ಸತ್ತ್ವವನ್ನು, ಅನಂತನಾದ ಪರಮಾತ್ಮನನ್ನು ಹಿಡಿದಿಡಲು ಯತ್ನಿಸುತ್ತದೆ. ಅದರ ಸಿದ್ಧಿ ಅತೀವ ಪರಿಮಿತ. ಆದರೂ ಅದು ನಮ್ಮ ಬುದ್ಧಿಗೆ ಒಂದು ಆಲಂಬನ. ಈ ವಿಗ್ರಹದಲ್ಲಿ, ಈ ಪ್ರತಿಮೆಯಲ್ಲಿ ದೇವರಿದ್ದಾನೆ ಎಂದರೆ ಮನಸ್ಸಿಗೆ ಸಮಾಧಾನ. ಅದೇ ಒಂದು ಇಂಬು. ಅಷ್ಟೇ ನಮ್ಮ ಭಕ್ತಿ ಎಂಬುದು ಡಿವಿಜಿ ಅವರ ಅಂಬೋಣ.

ಭಗವದ್ಗೀತೆಯಲ್ಲಿ ಒಂದು ಮಾತು ಬರುತ್ತದೆ–
ಅಂತಕಾಲೇ ಚ ಮಾಮೇವ ಸ್ಮರನ್ಮುಕ್ತ್ವಾ ಕಲೇಬರಮ್।
ಯಃ ಪ್ರಯಾತಿ ಸ ಮದ್ಭಾವಂ ಯಾತಿ ನಾಸ್ತ್ಯತ್ರ ಸಂಶಯಃ॥

ಪ್ರಾಣ ಹೋಗುವ ಸಂದರ್ಭದಲ್ಲಿ ಭಗವಂತನನ್ನೇ ಸ್ಮರಿಸುತ್ತಾ ಶರೀರವನ್ನು ಬಿಡುವವನು ನನ್ನ (ಕೃಷ್ಣನ) ಸ್ವರೂಪವನ್ನೇ ಪಡೆಯುವನು. ಇದರಲ್ಲಿ ಸಂಶಯವಿಲ್ಲ ಎಂಬುದು ಆ ಮಾತಿನ ಅರ್ಥ. ಜೀವನವನ್ನೆಲ್ಲ ಬೇರೆ ವಿಷಯಗಳಲ್ಲಿ ಕಳೆದು ಪ್ರಾಣೋತ್ಕ್ರಮಣದ ಕ್ಷಣದಲ್ಲಿ ಮಾತ್ರ ದೇವರನ್ನು ಸ್ಮರಿಸಿದರೆ ಫಲವೇನು? ಎಂಬುದು ಡಿವಿಜಿ ಅವರ ಪ್ರಶ್ನೆ. ಅದನ್ನು ಹೀಗೆಂದಿದ್ದಾರೆ –

ಯುಕ್ತಿಸಾಮ್ರಾಜ್ಯದಲಿ ಭಕ್ತಿ ಬಡ ಪರದೇಶಿ
ಶಕ್ತಿಚತುರತೆಯುಡುಗಿ ನೀನು ಸೋತಂದು।
ಉತ್ಕ್ರಮಣದರೆಮನದಿ ದೈವವನು ಪಿಡಿದೇನು?
ಭಕ್ತಿ ರಕ್ತದಿ ಪರಿಗೆ ಮಂಕುತಿಮ್ಮ ॥

ಯುಕ್ತಿಗಳನ್ನೇ ಹೇಳುವ ವಾದ ಸಾಮ್ರಾಜ್ಯದಲ್ಲಿ ಬಡಪಾಯಿ ಭಕ್ತಿ ಪರದೇಶಿಯಂತೆ ನಿರಾಶ್ರಯ. ಆದ್ದರಿಂದ ಬುದ್ಧಿ ಸಾಮರ್ಥ್ಯ ಬಲವತ್ತಾಗಿದ್ದಾಗ ಯಾರೂ ಭಕ್ತಿಯನ್ನು ಆಚರಿಸುವುದಿಲ್ಲ. ಸುಖದ ಹುಡುಕಾಟದಲ್ಲಿ ಆಯುಸ್ಸನ್ನು ಕಳೆಯುತ್ತಾರೆ. ಕ್ರಮೇಣ ಶರೀರದ ಶಕ್ತಿ ಉಡುಗುತ್ತದೆ. ಬುದ್ಧಿ ಚಾತುರ್ಯ ಕಡಿಮೆಯಾಗುತ್ತದೆ. ಮನುಷ್ಯನು ಸೋತು ಸುಣ್ಣವಾಗಿರುತ್ತಾನೆ. ಆಗ ಪ್ರಾಣಗಳ ಉತ್ಕ್ರಮಣಕಾಲ ಬರುತ್ತದೆ. ಮನಸ್ಸು ಅರ್ಧ ಮಾತ್ರ ಕೆಲಸ ಮಾಡುತ್ತಿರುತ್ತದೆ. ಈ ದುರವಸ್ಥೆಯಲ್ಲಿ ದೈವವನ್ನು ಹಿಡಿದರೆ ಏನು ಪ್ರಯೋಜನ? ಆ ದೈವ ಅರೆ ಭಕ್ತನ ಕೈಯನ್ನು ಹಿಡಿಯುವುದಿಲ್ಲ. ಶರೀರದಲ್ಲಿ, ಇಂದ್ರಿಯಗಳಲ್ಲಿ, ಮನಸ್ಸಿನಲ್ಲಿ, ಬುದ್ಧಿಯಲ್ಲಿ ಶಕ್ತಿ ಚೆನ್ನಾಗಿದ್ದಾಗಲೇ ಭಗವಂತನನ್ನು ಆಶ್ರಯಿಸಬೇಕು. ಭಕ್ತಿ ರಕ್ತದಿ ಪರಿಗೆ. ಭಕ್ತಿಯು ರಕ್ತದಲ್ಲಿಯೇ ಹರಿಯುತ್ತಿರಬೇಕು. ಆಗ ಅವನು ಭಕ್ತನನ್ನು ತನ್ನಲ್ಲಿ ಸೇರಿಸಿಕೊಳ್ಳುತ್ತಾನೆ.

ಪ್ರತಿಯೊಂದು ಜೀವಿಯ ಕಾರ್ಯಗಳ ಲೆಕ್ಕ ಪ್ರಕೃತಿಯ ಪುಸ್ತಕದಲ್ಲಿ ದಾಖಲಾಗಿರುತ್ತದೆ. ಎಲ್ಲಾ ಕೆಲಸಗಳ ಫಲವನ್ನು ಎಂದಾದರೊಂದು ದಿನ, ಯಾವುದಾದರೊಂದು ರೂಪದಲ್ಲಿ ಉಣಬೇಕಾಗುತ್ತದೆ. ದೈವ ತಕ್ಕಡಿಯನ್ನು ಇಟ್ಟುಕೊಂಡು ಲೆಕ್ಕ ಹಾಕುತ್ತದೆ. ಡಿವಿಜಿ ಹೇಳುತ್ತಾರೆ –

ತಕ್ಕಡಿಯ ದೈವ ಪಿಡಿದದರೊಂದು ತಟ್ಟೆಯಲಿ
ಒಕ್ಕುವುದು ಬಿಡದೆ ಜೀವಿಯ ಪಾಪಚಯವ।
ಇಕ್ಕುವುದು ಸುಕೃತಗಳ ನಿನ್ನೊಂದರೊಳಗಲ್ಲಿ
ಭಕ್ತಿ ಪಶ್ಚಾತ್ತಾಪ ಮಂಕುತಿಮ್ಮ ॥

ದೇವರು ಧರ್ಮದ ತಕ್ಕಡಿಯನ್ನು ಹಿಡಿದು ಅದರ ಒಂದು ಕಡೆಯ ತಟ್ಟೆಯಲ್ಲಿ ಪಾಪಗಳನ್ನೂ ಇನ್ನೊಂದು ಕಡೆಯ ತಟ್ಟೆಯಲ್ಲಿ ಪುಣ್ಯಗಳನ್ನೂ ಇಟ್ಟು ತೂಕ ನೋಡುತ್ತಾನೆ. ಲೆಕ್ಕಾಚಾರಕ್ಕನುಗುಣವಾಗಿ ಫಲವನ್ನು ಕೊಡುತ್ತಾನೆ. ತಪ್ಪು ಮಾಡಿದಾಗ ಅದನ್ನು ತೊಳೆದು ಹಾಕಲು ಇರುವ ಪಶ್ಚಾತ್ತಾಪವೇ ಭಕ್ತಿ ಎಂಬುದು ಡಿವಿಜಿ ಅವರ ಅಭಿಪ್ರಾಯ.

ಕೆಲವರ ಮಾತಿಗೂ ಕೃತಿಗೂ ಅಂತರವಿರುತ್ತದೆ. ಹರಿಃ ಕರ್ತಾ, ನಾಹಂ ಕರ್ತಾ (ಆ ಭಗವಂತನೇ ಎಲ್ಲವನ್ನೂ ಮಾಡುವವನು. ನಾನು ಯಾವುದರ ಕರ್ತನೂ ಅಲ್ಲ) ಎನ್ನುತ್ತಿರುತ್ತಾರೆ. ಆದರೆ ಯಾವುದನ್ನೂ ಭಗವಂತನ ನಿರ್ಣಯಕ್ಕೆ ಬಿಡರು. ತಾವೇ ನಿರ್ಣಯಿಸುವರು. ಅವರ ಬಗೆಗೆ ಡಿವಿಜಿ ಮಾತು–

ದೇವರದಿದೆಲ್ಲ ದೇವರಿಗೆಲ್ಲವೆಂದೊರಲು
ತಾವುದನುಮವನ ನಿರ್ಣಯಕೆ ಬಿಡದೆ ತಾಂ।
ಧಾವಂತಬಿಡುತ ತನ್ನಿಚ್ಛೆಯನೆ ಘೋಷಿಸುವ
ಭಾವವೆಂತಹ ಭಕುತಿ ಮಂಕುತಿಮ್ಮ ॥

ಇದೆಲ್ಲ ದೇವರದು, ದೇವರಿಗೇ ಎಲ್ಲವೂ ಸೇರಿದುದು ಎಂದು ಒರಲುತ್ತಾ ಯಾವುದನ್ನೂ ಅವನ ತೀರ್ಪಿಗೆ ಬಿಡದೆ ತಾನೇ ಧಾವಂತ ಪಡುತ್ತಾ ತನ್ನ ಇಚ್ಛೆಯನ್ನೇ ಹೇಳಿಕೊಳ್ಳುವವನ ಭಾವನೆ ಭಕ್ತಿ ಎನ್ನುವುದು ಹೇಗೆ? ಭಕ್ತನಾದವನು ಭಗವಂತನ ಇಚ್ಛೆಗೆ ಕಾರ್ಯಗಳನ್ನು ಬಿಡುತ್ತಾನೆ. ಏನಾದರೂ ಅದು ಹರಿಯ ಚಿತ್ತವೆಂದು ಸಮಾಧಾನಿಯಾಗಿ ತಳಮಳವಿಲ್ಲದೆ ಇರುತ್ತಾನೆ – ಎಂಬುದು ಇಲ್ಲಿ ತಾತ್ಪರ್ಯ.

ಹಿಂದಿನ ಕಾಲದಲ್ಲಿದ್ದ ಭಕ್ತಿ ಶ್ರದ್ಧೆಗಳು ಈಗ ಇಲ್ಲ ಎಂಬ ಕೊರಗು ಡಿವಿಜಿ ಅವರಿಗೂ ಇತ್ತೆಂಬುದು ಕಗ್ಗದ ಕೊನೆಯಲ್ಲಿ ಕಾಣ ಬರುತ್ತೆ. ಯಾವ ಮನೆಯಲ್ಲಿ ಕುಂಟರ, ಕುರುಡರ ಬದುಕು ನಡೆದಿತ್ತೋ ಆ ಮನೆ ಬಿದ್ದು ಹೋಗಿದೆ. ಹೊಸ ಮನೆ ಸಿಕ್ಕಿಲ್ಲ. ಅದರಿಂದ ಅವರು ತಳಮಳಗೊಳ್ಳುತ್ತಾರೆ. ಹಾಗೆ ಇಂದಿನ ಮನುಷ್ಯರ ಪರಿಸ್ಥಿತಿ ಎಂದು ಡಿವಿಜಿ ಹೇಳಿದ್ದಾರೆ–

ಹಳೆಯ ಭಕ್ತಿ ಶ್ರದ್ಧೆಯಳಿಸಿ ಹೋಗಿವೆ ಮಾಸಿ
ಸುಳಿದಿಲ್ಲವಾವ ಹೊಸ ದರ್ಶನದ ಹೊಳಪುಂ।
ಪಳಗಿದ್ದ ಮನೆ ಬಿದ್ದ ಕುಂಟ ಕುರುಡನ ತೆರದಿ
ತಳಮಳಿಸುತಿದೆ ಲೋಕ ಮಂಕುತಿಮ್ಮ॥

ಶ್ರದ್ಧಾಂಜಲಿ

ಅಪರೂಪದ ಅಪ್ಪಟ ಕಲಾವಿದ ಪಂಡಿತ್ ರಾಜೀವ್ ತಾರಾನಾಥ್

ಸಂಗೀತವನ್ನೇ ತಮ್ಮ ಉಸಿರಾಗಿಸಿಕೊಂಡು, ತಮ್ಮ ಬದುಕಿನ ಅರ್ಥವನ್ನು ಅದರಲ್ಲೇ ಕಂಡುಕೊಂಡ ಅಪರೂಪದ ಅಪ್ಪಟ ಕಲಾವಿದ ಪಂಡಿತ್ ರಾಜೀವ್ ತಾರಾನಾಥ್ ಅವರು (17–10–1932 – 11–6–2024) ಇಡೀ ಕಲಾಲೋಕಕ್ಕೆ ವಿದಾಯ ಹೇಳಿರುವುದು ನಂಬಲಾಗದ, ಆದರೆ ನಂಬಲೇಬೇಕಾದ ಸಂಗತಿ. ಕರ್ನಾಟಕದ ಮೊದಲ ಸರೋದ್ ವಾದಕ ಅವರೆಂಬ ಖ್ಯಾತಿಯೂ ಇದೆ. ಕಲೆಯೊಂದೇ ಅಲ್ಲದೆ ಮಹಾನ್ ತೀಕ್ಷ್ಣಮತಿ , ಅತ್ಯಂತ ಪ್ರಬುದ್ಧ ಚಿಂತಕ ಹಾಗೂ ಮಹಾನ್ ಓದುಗ ಅವರಾಗಿದ್ದರು. ಸಂಗೀತ ವಿಮರ್ಶೆ ಮತ್ತು ರಸಾಸ್ವಾದನೆಯನ್ನು ಕುರಿತ ಅವರ ಲೇಖನ ಮತ್ತು ಮಾತುಗಳು ಎಂದೆಂದಿಗೂ ಮೌಲ್ಯವುಳ್ಳವು.

ಪಂಡಿತ ತಾರಾನಾಥ್ ಅವರ ಪುತ್ರರಾಗಿದ್ದ ರಾಜೀವ್ ಅವರ ಮೇಲೆ ದಟ್ಟ ಪ್ರಭಾವ ಬೀರಿದ್ದ ವ್ಯಕ್ತಿಗಳಲ್ಲಿ ಅವರ ತಂದೆಯೂ ಒಬ್ಬರು. ತಾರಾನಾಥರ ಮಾನವೀಯ ದೃಷ್ಟಿ, ಜನಸೇವಾ ಮನೋಭಾವ ಮತ್ತು ವಿವಿಧ ವಿದ್ಯೆಗಳಲ್ಲಿ ಅವರಿಗೆ ಇದ್ದ ಪರಿಣತಿಯು ಸಹಜವಾಗಿಯೇ ರಾಜೀವರ ಮೇಲೆ ಪರಿಣಾಮ ಬೀರಿತ್ತು. ಅನೇಕ ವೇಳೆ ಅದು ಅವರ ಮಾತುಗಳಲ್ಲಿ ವ್ಯಕ್ತವಾಗುತ್ತಿತ್ತು. ತಂದೆಯವರೇ ರಾಜೀವರ ಪ್ರಥಮ ಸಂಗೀತ ಗುರು. ಮೊದಲಿಗೆ ಅವರು ಕಲಿತದ್ದು ಹಾಡುಗಾರಿಕೆಯನ್ನೇ. ತಮ್ಮ ಒಂಬತ್ತನೆಯ ವಯಸ್ಸಿನಲ್ಲಿ ಮೊದಲು ವೇದಿಕೆಯಲ್ಲಿ ಹಾಡಿ, ಇಪ್ಪತ್ತು ವರ್ಷ ಆಗುವಷ್ಟರಲ್ಲಿ ರೇಡಿಯೋದಲ್ಲೂ ಅವರು ಹಾಡುತ್ತಿದ್ದರು. ಇಂಗ್ಲಿಷ್ ಸಾಹಿತ್ಯವನ್ನು ಆಳವಾಗಿ ಅಧ್ಯಯನ ಮಾಡಿದ್ದ ಅವರು ಅದರಲ್ಲಿ ಎಂತಹ ಪರಿಣತಿಯನ್ನು ಗಳಿಸಿದ್ದರೆಂದರೆ, ಇಂಗ್ಲೆಂಡಿನ ವಿದ್ವಾಂಸರು 'ರಾಜೀವರಂತೆ ಶೇಕ್ಸ್‌ಪಿಯರನ ಸಾಹಿತ್ಯದ ಸೂಕ್ಷ್ಮತೆಗಳನ್ನು ಯಾರೂ ಅರ್ಥ ಮಾಡಿಕೊಂಡಿಲ್ಲ' ಎಂಬ ಪ್ರಶಂಸೆಗೆ ಪಾತ್ರರಾಗಿದ್ದರು ರಾಜೀವ್ ತಾರಾನಾಥರು. ಇಂಗ್ಲಿಷ್ ಸಾಹಿತ್ಯದಲ್ಲಿ ಪಿಎಚ್.ಡಿ ಪದವಿಯನ್ನು ಗಳಿಸಿದ್ದಲ್ಲದೆ ಅದರ ಪ್ರೊಫೆಸರ್ ಆಗಿದ್ದ ಅವರಿಗೆ ಉತ್ತಮ ಸ್ಥಾನದ ನೌಕರಿಯೂ ಸಿಕ್ಕಿತ್ತು.



ಅದ್ಯಾವ ಘಳಿಗೆಯಲ್ಲಿ ಪಂಡಿತ್ ಅಲಿ ಅಕ್ಬರ್ ಖಾನ್ ಸಾಹೇಬರ ಸರೋದ್ ವಾದನವನ್ನು ಅವರು ಕೇಳಿದರೋ, ಅವರ ಬದುಕಿನ ದಿಕ್ಕೇ ಬದಲಾಗಿ ಹೋಯಿತು. ಸರೋದ್‌ನ ವಾದನಕ್ಕೆ, ಅದರ ನಾದಕ್ಕೆ, ಖಾನ್ ಸಾಹೇಬರ ವಾದನ ಕೌಶಲಕ್ಕೆ ಮರುಳಾದ ಮನಕ್ಕೆ ಬೇರೇನೂ ರುಚಿಸಲಿಲ್ಲ. ಸಂಗೀತದ ಹುಚ್ಚು ತಲೆಗೇರಿದವರ ಪಾಡೇ ಅಷ್ಟು. ಗುರುಗಳ ಸಾನ್ನಿಧ್ಯದಲ್ಲಿ ಕಲಿಕೆಯ ಗುರಿ ಸಾಧನೆಯಲ್ಲಿ ಅವರಿಗೆ ಬೇರೇನೂ ಬೇಡವಾಯಿತು. ಆ ಗಮ್ಯವೇ ಅವರ ಲಕ್ಷ್ಯವಾಯಿತು. ವಿದ್ಯೆಯನ್ನು ಪಡೆವ ಹಂಬಲದಿಂದ ಪಡೆದ ಕಷ್ಟ ನಷ್ಟಗಳು ಅವರಿಗೆ ನಗಣ್ಯವಾಯಿತು. ಹಠ ಸಾಧನೆಯಿಂದ ಸರೋದ್ ವಾದನದ ತಿರುಳನ್ನು ತಮ್ಮದಾಗಿಸಿಕೊಂಡ ಛಲಗಾರನಾದರು.

ಮುಂದಿನದು ಇತಿಹಾಸ. 2009ರಲ್ಲಿ ಖಾನ್ ಸಾಹೇಬರು ನಿಧನರಾಗುವವರೆಗೂ ಅವರಲ್ಲಿ ತಮ್ಮ ಕಲಿಕೆಯನ್ನು ರಾಜೀವರು ಮುಂದುವರೆಸಿದ್ದರು. ಜೊತೆಗೆ ಪಂಡಿತ್ ರವಿಶಂಕರ್, ಅನ್ನಪೂರ್ಣಾದೇವಿ, ನಿಖಿಲ್ ಬ್ಯಾನರ್ಜಿ ಮತ್ತು ಆಶಿಷ್ ಖಾನರಿಂದಲೂ ಅವರಿಗೆ ಶಿಕ್ಷಣ ದೊರಕಿತ್ತು. ಅವರ ನರನಾಡಿಗಳಲ್ಲಿ ಗುರುಭಕ್ತಿ ತುಂಬಿತ್ತು. ಸಂಗೀತದ ರಸಾಸ್ವಾದನೆಯನ್ನು ಅವರಂತೆ ಮಾಡಿದವರು ಬಲು ವಿರಳ. ಸಂಗೀತದ ಸೂಕ್ಷ್ಮತೆಯ ಪದರ ಪದರಗಳನ್ನೂ ಅರಿತಿದ್ದ ಅವರು ಅದನ್ನು ಸಮರ್ಥವಾಗಿ ಅಭಿವ್ಯಕ್ತಿಸಬಲ್ಲವರೂ ಆಗಿದ್ದರು. ಇದನ್ನು ಅವರು ಸಂಗೀತ ನಿರ್ದೇಶನ ಮಾಡಿದ (ಕನ್ನಡದ ಸಂಸ್ಕಾರವನ್ನೂ ಒಳಗೊಂಡಂತೆ) ಹಲವು ಚಲನಚಿತ್ರಗಳಲ್ಲಿಯೂ ಕಾಣಬಹುದು. ರಾಗಗಳ ಬಗೆಗೆ ಅವರಿಗಿದ್ದ ಆಳವಾದ ಜ್ಞಾನ, ಅದನ್ನು ಕುರಿತಂತೆ ಸ್ಪಷ್ಟವಾದ ಮಾತುಗಳಲ್ಲಿ ಅದನ್ನು ಹೇಳುತ್ತಿದ್ದ ರೀತಿ ಬಹುಶಃ ರಾಜೀವ್ ಅವರಿಗೆ ಮಾತ್ರ ಅನ್ವಯ. ಸರೋದ್ ವಾದನದಲ್ಲಿ ತಾಂತ್ರಿಕತೆ ಪ್ರಾವೀಣ್ಯತೆ ಇವುಗಳಲ್ಲದೆ ಮೈಹರ್ ಘರಾನದ ಹೆಚ್ಚುಗಾರಿಕೆ ಇದ್ದೆಲ್ಲವನ್ನೂ ಒಳಗೊಂಡಿದ್ದ ಅವರ ಸಂಶೋಧನೆ ಅಪಾರ ಮೌಲ್ಯವುಳ್ಳದ್ದು.

ದೇಶ–ವಿದೇಶಗಳಲ್ಲಿ ಅವರ ಸಂಗೀತದ ಪ್ರಶಂಸಕರ ದಂಡೇ ಇದೆ. ವಿದೇಶದಲ್ಲಿ ಅವರ ಶಿಷ್ಯರೂ ಬಹಳಷ್ಟು ಮಂದಿ ಇದ್ದಾರೆ. ಅವರನ್ನು ಅರಸಿ ಬಂದ ಸನ್ಮಾನಗಳು ಅನೇಕ. ಭಾರತ ಸರ್ಕಾರವು ಪದ್ಮಶ್ರೀ ನೀಡಿ ಅವರನ್ನು ಗೌರವಿಸಿತು. ಕೇಂದ್ರ ಸಂಗೀತ ನಾಟಕ ಅಕಾಡೆಮಿಯೂ ಅವರನ್ನು ಸಮ್ಮಾನಿಸಿತು. ರಾಜ್ಯ ಸಂಗೀತ ವಿದ್ವಾನ್, ಚೌಡಯ್ಯ ಪ್ರಶಸ್ತಿ, ಕನ್ನಡ ರಾಜ್ಯೋತ್ಸವ ಪ್ರಶಸ್ತಿ, ಹಂಪಿ ವಿಶ್ವವಿದ್ಯಾಲಯದ ನಾಡೋಜ ಪ್ರಶಸ್ತಿ ಮುಂತಾದವು ಅವರಿಗೆ ಸಂದಿವೆ. ಅವರನ್ನು ಕುರಿತ ಸಾಕ್ಷ್ಯಚಿತ್ರಗಳೂ ಬಂದಿವೆ. ಹಲವು ವರುಷಗಳಿಂದ ಮೈಸೂರಿನಲ್ಲಿ ನೆಲೆಸಿದ್ದ ಅವರು ಇಲ್ಲಿನ ಕಲಾಲೋಕದ ಹೆಮ್ಮೆಯ, ಗೌರವದ, ಅವಿಭಾಜ್ಯ ಅಂಗವಾಗಿದ್ದರು. ತಮ್ಮ ನೇರ–ನಿಷ್ಠೂರ, ನಿರ್ಭಿಡೆಯ ನುಡಿಗಳಿಂದ ತಕ್ಷಣಕ್ಕೆ ಒರಟು ಎಂದೆನಿಸಿದರೂ ಅವರ ಒಡನಾಟದಲ್ಲಿದ್ದವರಿಗೆ ಅವರ ಮಾನವೀಯತೆಯ ಪರಿಚಯ ಇದ್ದೇ ಇತ್ತು. ಕಲಾವಿದರು ಯಾರಾದರೂ ಕಷ್ಟದಲ್ಲಿದ್ದರೆ, ಅವರ ನೆರವಿಗೆ ಒದಗುತ್ತಿದ್ದ ಮೊದಲ ಕೈ ರಾಜೀವ ತಾರಾನಾಥರದು. ತಮ್ಮ ಸುತ್ತಲಿನ ಆಗುಹೋಗುಗಳನ್ನು ಅವರ ಸೂಕ್ಷ್ಮ ದೃಷ್ಟಿಯು ಗಮನಿಸುತ್ತಿತ್ತು, ಪ್ರತಿಕ್ರಿಯಿಸುತ್ತಿತ್ತು. ಜಾತಿ, ಮತ, ಕುಲ, ದ್ವೇಷ, ಅಸೂಯೆ ಇವೆಲ್ಲವನ್ನೂ ಮೀರಿದುದು ಸಂಗೀತ ಎನ್ನುವಾಗ ಅವರ ಸ್ವಚ್ಛ ಮನಸ್ಸು ಗೋಚರವಾಗುತ್ತಿತ್ತು.

ಕೆಲವು ದಿನಗಳ ಹಿಂದೆ ಮನೆಯಲ್ಲಿ ಬಿದ್ದುದೇ ಕಾರಣವಾಗಿ ಅವರ ಸೊಂಟದ ಮೂಳೆ ಮುರಿದು ಆದ ಆಪರೇಷನ್ನಿನಿಂದ ಅವರು ಚೇತರಿಸಿಕೊಳ್ಳಲೇ ಇಲ್ಲ. ಆಸ್ಪತ್ರೆಯಲ್ಲಿದ್ದಾಗಲೂ ಆ ಅಪ್ಪಟ ಕಲಾವಿದನ ಕಣಕಣದಲ್ಲೂ ಸಂಗೀತವೇ ತುಂಬಿತ್ತು ಎನ್ನುವುದಕ್ಕೆ ಸಾಕ್ಷಿ– ನೋವಿನ ತೀವ್ರತೆಯನ್ನು ತಾಳಲಾರದೆ ಕೂಗುತ್ತಿದ್ದ ನೋವಿನ ಧ್ವನಿಯು ತಂತಾನೇ ಸಂಗೀತದ ರಾಗವಾಗಿ ಪರಿಣಮಿಸುತ್ತಿದ್ದುದು. ಈಗ ನಾಲ್ಕು ದಿನದ ಹಿಂದೆ ಅವರನ್ನು ಮತ್ತೆ ಐಸಿಯುನಲ್ಲಿ ಇಟ್ಟಾಗಲೂ ಬಾಯಿಯಿಂದ ಹಾಡು ಹೇಳಿದರು ಈಗ ಬರಿಯ ನೆನಪು ಮಾತ್ರ. ಸಂಗೀತವು ಅವರ ನೋವನ್ನು ಮರೆಸುವ ಮದ್ದಾಗಿತ್ತು. ಹಾಡುತ್ತಲೇ ಸಂಗೀತದ ನಾದದಲ್ಲಿ ಒಂದಾದ ಆ ಮಹಾನ್ 'ನಾದಮಯ ಚೇತನ'ಕ್ಕೆ ನಮ್ಮ ಗೌರವಪೂರ್ಣ ವಿದಾಯಗಳು.

– ಡಾ. ರಮಾ ವಿ ಬೆಣ್ಣೂರ್
ಸಂಗೀತ ವಿಮರ್ಶಕರು

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy News papers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com



ದರ್ಶನ್ ಕೈಯ್ಯಲ್ಲಿ ಈಗ ನಾಲ್ಕು ಚಿತ್ರಗಳಿದ್ದವು!

ಬೆಂಗಳೂರು,ಜೂ.11– ಕೊಲೆ ಪ್ರಕರಣದಲ್ಲಿ ಬಂಧಿತರಾಗಿರುವ ದರ್ಶನ್ ಕೈಯ್ಯಲ್ಲೀಗ ನಾಲ್ಕು ಚಿತ್ರಗಳಿದ್ದವು.

ಸತತ ಸೋಲುಗಳ ಬಳಿಕ ಕಳೆದ ವರ್ಷ ತೆರೆ ಕಂಡ 'ಕಾಟೇರ' ಹಿಟ್ ಆಗಿತ್ತು. ಹೀಗಾಗಿ ಮತ್ತೆ ಬೇಡಿಕೆ ಹೆಚ್ಚಾಗಿತ್ತು. ಮೂಲಗಳ ಪ್ರಕಾರ ಅವರ ಬಳಿ ಸದ್ಯ ನಾಲ್ಕು ಸಿನಿಮಾಗಳಿವೆ.

'ಡೆವಿಲ್' ಇವರ 57ನೇ ಚಿತ್ರ. ಮಿಲನ ಪ್ರಕಾಶ್ ಚಿತ್ರವನ್ನು ನಿರ್ಮಿಸಿ, ನಿರ್ದೇಶಿಸುತ್ತಿದ್ದಾರೆ. ಚಿತ್ರದ ಬಹುಭಾಗ ಚಿತ್ರೀಕರಣ ಪೂರ್ಣಗೊಂಡಿದೆ. ಈ ವರ್ಷದ ಅಂತ್ಯಕ್ಕೆ ತೆರೆಗೆ ತರುವ ಬಗ್ಗೆ ನಿರ್ಮಾಪಕರು ಉದ್ದೇಶಿಸಿದ್ದಾರೆ. ದರ್ಶನ್ ಜೊತೆಗೆ 'ಕರಿಯ' ಸಿನಿಮಾ ಮಾಡಿದ್ದ ನಿರ್ದೇಶಕ ಪ್ರೇಮ್ ಅವರೊಂದಿಗೆ 58ನೇ ಚಿತ್ರ ಅಧಿಕೃತವಾಗಿ ಘೋಷಣೆಯಾಗಿದೆ. ಕೆವಿಎನ್ ನಿರ್ಮಾಣ ಸಂಸ್ಥೆಯ ಪ್ಯಾನ್ ಇಂಡಿಯಾ ಚಿತ್ರವಾಗಿದ್ದು, ಮುಂದಿನ ವರ್ಷ ಸೆಟ್ಟೇರಲಿದೆ. ದರ್ಶನ್ ವೃತ್ತಿ ಬದುಕಿನಲ್ಲಿಯೇ ಬಹುದೊಡ್ಡ ಬಜೆಟ್‌ನ ಸಿನಿಮಾವಿದು ಎಂದು ಮೂಲಗಳು ಹೇಳಿವೆ.

'ಕಾಟೇರ' ಚಿತ್ರದ ನಿರ್ದೇಶಕ ತರುಣ್ ಸುಧೀರ್ ಅವರಿಗೆ ತಮ್ಮ 59ನೇ ಸಿನಿಮಾವನ್ನು ನಿರ್ದೇಶಿಸಲು ದರ್ಶನ್ ಕಾಲ್‌ಶೀಟ್ ನೀಡಿದ್ದಾರೆ. ಈ ಚಿತ್ರವನ್ನು ಬಿ.ಸುರೇಶ್, ವಿ.ಹರಿಕೃಷ್ಣ ಅವರ ನಿರ್ಮಾಣ ಸಂಸ್ಥೆ ನಿರ್ಮಿಸುತ್ತಿದೆ. ನಿರ್ಮಾಪಕ ಸೂರಪ್ಪ ಬಾಬು ಕೂಡ ಮುಂಗಡ ನೀಡಿದ್ದಾರೆ. ಇದು ದರ್ಶನ್ 60ನೇ ಸಿನಿಮಾ ಎಂಬ ಮಾಹಿತಿ ಇದೆ. ಇದಲ್ಲದೆ ಈ ಹಿಂದೆಯೇ ಮುಂಗಡ ನೀಡಿದ್ದ ಕೆಲವು ನಿರ್ಮಾಪಕರು ದರ್ಶನ್ ಕಾಲ್‌ಶೀಟ್‌ಗಾಗಿ ಕಾಯುತ್ತಿದ್ದಾರೆ ಎನ್ನುತ್ತಿದೆ ಅವರ ಆಪ್ತವಲಯ.

ಪವಿತ್ರಾಗೌಡ ಮೇಲೆ ದರ್ಶನ್ ಹಲ್ಲೆ?



ರೇಣುಕಾ ಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪವಿತ್ರಾಗೌಡ ಮೇಲೂ ದರ್ಶನ್ ಹಲ್ಲೆ ಮಾಡಿದ್ದಾರಂತೆ. ರೇಣುಕಾಸ್ವಾಮಿ ಹತ್ಯೆ ನಂತರ ದರ್ಶನ್ 'ಇಷ್ಟಕ್ಕೆಲ್ಲಾ ನೀನೇ ಕಾರಣ' ಎಂದು ಹೇಳಿ ಪವಿತ್ರಾ ಗೌಡಗೆ ಥಳಿಸಿದ್ದಾರಂತೆ. ಇದರಿಂದ ಗಾಯಗೊಂಡಿದ್ದ ಪವಿತ್ರಾ ಗೌಡ ಆರ್.ಆರ್.ನಗರದ ಆಸ್ಪತ್ರೆಗೆ ದಾಖಲಾಗಿ, ಸೋಮವಾರ (ಜೂನ್ 10)ವಷ್ಟೇ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆದರು ಎಂದು ಹೇಳಲಾಗುತ್ತಿದೆ. ಪವಿತ್ರಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಮಾಹಿತಿ ಕಲೆ ಹಾಕಿದ್ದ ಪೊಲೀಸರು ಆಕೆ ಡಿಸ್ಚಾರ್ಜ್ ಆದ ನಂತರವೂ ನಿಗಾ ವಹಿಸಿದ್ದು ಇಂದು ಬೆಳಗ್ಗೆ ಮೈಸೂರಿನಲ್ಲಿ ದರ್ಶನ್ ಬಂಧನವಾಗುತ್ತಿದ್ದಂತೆಯೇ ಪವಿತ್ರಾ ಅವರನ್ನು ವಶಕ್ಕೆ ಪಡೆದಿದ್ದಾರೆ ಎನ್ನಲಾಗಿದೆ.

ನನ್ನ ಮಗನಿಗೆ ಆದ ಸ್ಥಿತಿಯೇ ನಟ ದರ್ಶನ್‌ಗೂ ಆಗಲಿ: ರೇಣುಕಾಸ್ವಾಮಿ ತಾಯಿ ಆಕ್ರೋಶ



ಚಿತ್ರದುರ್ಗ, ಜೂ.11– ನನ್ನ ಮಗನ್ನ ಸಾಯಿಸಿದಂಗ ನಟ ದರ್ಶನನ್ನ ಸಾಯಿಸಿಬಿಡಿ. ಆ ಪಾಪಿ ದರ್ಶನ್ ಸಾಯಬೇಕು.. ಮಗನ ಅಂತ್ಯಸಂಸ್ಕಾರದ ಬಳಿಕ ತಾಯಿ ರತ್ನಪ್ರಭಾ, ತಂದೆ ಶಿವನಗೌಡ ಆಕ್ರೋಶ ವ್ಯಕ್ತಪಡಿಸಿದ್ದು ಹೀಗೆ.

ದರ್ಶನ್ ಅಂಡ್ ಗ್ಯಾಂಗ್‌ನಿಂದ ಬರ್ಬರವಾಗಿ ಹತ್ಯೆಗೀಡಾದ ರೇಣುಕಾಸ್ವಾಮಿ ಮೃತ ಶರೀರವನ್ನು ಆಂಬುಲೆನ್ಸ್ ಮೂಲಕ ಚಿತ್ರದುರ್ಗದ ಮನೆಗೆ ಶಿಫ್ಟ್ ಮಾಡಲಾಗಿತ್ತು. ವೀರಶೈವ ರುದ್ರಭೂಮಿಯಲ್ಲಿ ವಿಧಿವಿಧಾನದ ಮೂಲಕ ಅಂತ್ಯಸಂಸ್ಕಾರ ನಡೆಸಲಾಯಿತು. ಅಂತ್ಯಸಂಸ್ಕಾರದ ಬಳಿಕ ರೇಣುಕಾಸ್ವಾಮಿಯ ತಂದೆ ತಾಯಿ ಕಣ್ಣೀರಿಡುತ್ತಲೇ ಆಕ್ರೋಶ ವ್ಯಕ್ತಪಡಿಸಿದರು.

ನನ್ನ ಮಗನ ಸಾಯಿಸಿದಂತೆ ನಟ ದರ್ಶನ್ ಮತ್ತು ಪವಿತ್ರಾಗೆ ಅದೇ ಸ್ಥಿತಿ ಬರಬೇಕು. ನನ್ನ ಮಗನಿಗೆ ತಲೆ ಹೊಡೆದಿದ್ದಾರೆ, ಮರ್ಮಾಂಗಕ್ಕೆ ಹೊಡೆದಿದ್ದಾರೆ. ಪತಿ ಬರುತ್ತಾನೆ ಅಂತಾ ನನ್ನ ಸೊಸೆ ಕಾದಿದ್ದಳು. ಪಾಪ ನನ್ನ ಸೊಸೆಯ ಜೀವನವನ್ನೂ ಹಾಳುಮಾಡಿದರು ಪಾಪಿಗಳು. ಸೂಕ್ತ ತನಿಖೆ ನಡೆಸಿ ಆ ಪಾಪಿಗಳಿಗೆ ತಕ್ಕ ಶಿಕ್ಷೆ ಇಂತಹ ಕೊಲೆಗಡುಕರಿಗೆ ದೇಶದಲ್ಲಿ ಎಂತಹ ಮರ್ಯಾದೆ ಇದೆ? ಮನುಷ್ಯತ್ವ ಇಲ್ಲದವರು ದೊಡ್ಡಮನುಷ್ಯರು,, ಸ್ಟಾರ್‌ಗಳು ಥೂ., ಎಂದು ಆಕ್ರೋಶ ವ್ಯಕ್ತಪಡಿಸಿದರು.

ನಟ ದರ್ಶನ್‌ಗೆ ಕಠಿಣ ಶಿಕ್ಷೆಯಾಗಲಿ



ಚಿತ್ರದುರ್ಗ, ಜೂ.11– ಇದು ರೇಣುಕಾಸ್ವಾಮಿ ಕೊಲೆ ಅಲ್ಲ, ಮಾನವೀಯತೆಯ ಕೊಲೆ. ರೇಣುಕಾಸ್ವಾಮಿ ತಪ್ಪು ಮಾಡಿದ್ದರೆ ಕಾನೂನು ಕ್ರಮ ಕೈಗೊಳ್ಳಬೇಕಿತ್ತು. ಆದರೆ ಈ ರೀತಿ ಚಿತ್ರಹಿಂಸೆ ನೀಡಿ ಕೊಂದಿದ್ದಾರೆ. ನಟ ದರ್ಶನ್ ರೇಣುಕಾಸ್ವಾಮಿ ಕೊಲೆಗೆ ಹೊಣೆ. ಆತನಿಗೆ ಕಠಿಣ ಶಿಕ್ಷೆಯಾಗಬೇಕು ಎಂದು ಮಾಜಿ ಶಾಸಕ ಎಸ್‌ಕೆ ಬಸವರಾಜನ್ ಆಕ್ರೋಶ ವ್ಯಕ್ತಪಡಿಸಿದರು.

ನಟ ದರ್ಶನ್ ಮತ್ತವರ ತಂಡದಿಂದ ಹತ್ಯೆಯಾಗಿರುವ ಚಿತ್ರದುರ್ಗದ ರೇಣುಕಾಸ್ವಾಮಿ ಪ್ರಕರಣ ತಿಳಿದು ನಿವಾಸಕ್ಕೆ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ಹೇಳಿದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾನೂನು ಕೈಗೆತ್ತಿಕೊಂಡವರಿಗೆ ಕಠಿಣ ಶಿಕ್ಷೆಯಾಗಬೇಕು. ಇಂತಹ ಪ್ರಕರಣಗಳು ಮರುಕಳಿಸದಂತೆ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ಆಗಬೇಕು ಎಂದು ಆಗ್ರಹಿಸಿದರು.

ಈ ಪ್ರಕರಣದಲ್ಲಿ ತಕ್ಷಣ ಆರೋಪಿಗಳನ್ನು ಬಂಧಿಸಿದ್ದಕ್ಕೆ ಪೊಲೀಸರಿಗೆ ಧನ್ಯವಾದ. ಪ್ರಕರಣದಲ್ಲಿ ಭಾಗಿಯಾದ ಎಲ್ಲ ಆರೋಪಿಗಳಿಗೂ ಸೂಕ್ತ ಶಿಕ್ಷೆ ಆಗಬೇಕು. ನಟ ದರ್ಶನ್ ರೇಣುಕಾಸ್ವಾಮಿ ಕೊಲೆಗೆ ಹೊಣೆ. ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆಯಾಗಬೇಕು. ಸರ್ಕಾರ ವಿಶೇಷ ತಂಡ ರಚಿಸಿ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು. ರೇಣುಕಾ ಸ್ವಾಮಿ ಕೊಲೆ ಖಂಡಿಸಿ ನಾಳೆ ಚಿತ್ರದುರ್ಗದಲ್ಲಿ ನಡೆಯಲಿರುವ ಪ್ರತಿಭಟನೆಯಲ್ಲಿ ಭಾಗಿಯಾಗುತ್ತೇನೆ ಎಂದರು.

ದರ್ಶನ್ ಬಂಧನ ಬೆನ್ನಲ್ಲೇ ಒಡೆದ ಹೃದಯ ಸ್ಟೇಟಸ್ ಹಾಕಿ ಡಿಲೀಟ್ ಮಾಡಿದ ನಟಿ ರಕ್ಷಿತಾ, ರಮ್ಯಾ ರೀಟ್ವೀಟ್!



ಬೆಂಗಳೂರು, ಜೂ.11– ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣ ಆರೋಪದ ಹಿನ್ನೆಲೆಯಲ್ಲಿ ನಟ ದರ್ಶನ್, ನಟಿ ಪವಿತ್ರಾ ಗೌಡ ಮತ್ತು ನಟನ ಆಪ್ತರು ಸೇರಿ 13 ಮಂದಿ ಬಂಧನವಾದ ಬೆನ್ನಲ್ಲೇ ನಟಿ ರಕ್ಷಿತಾ ಪ್ರೇಮ್ ಸ್ಟೇಟಸ್ ಪೋಸ್ಟ್ ಮಾಡಿದ್ದಾರೆ.

ದರ್ಶನ್ ಜೊತೆ ನಟಿಸಿದ್ದ ಸ್ಯಾಂಡಲ್‌ವುಡ್ ಕ್ವೀನ್ ನಟಿ ರಮ್ಯಾ, ದರ್ಶನ್ ಅರೆಸ್ಟ್ ಆದ ಪೋಸ್ಟ್ ಅನ್ನು ರಿಪೋಸ್ಟ್ ಮಾಡಿದ್ದಾರೆ. ದರ್ಶನ್ ಕೊಲೆ ಕೇಸ್‌ನಲ್ಲಿ ಆರೋಪಿ ಎಂಬ ವಿಚಾರ ತಿಳಿಯುತ್ತಿದ್ದಂತೆಯೇ ನಟಿ ರಕ್ಷಿತಾ ಪ್ರೇಮ್, ಒಡೆದ ಹೃದಯ ಪೋಸ್ಟ್ ಹಾಕಿ, ನಾನು ತುಂಬಾ ಹೇಳಲು ಬಯಸುತ್ತೇನೆ....ಆದ್ರೆ ಹೇಳಲು ಆಗ್ತಿಲ್ಲವೆಂದು ಬರೆದುಕೊಂಡಿದ್ದಾರೆ. ಆದರೆ ಸ್ವಲ್ಪ ಹೊತ್ತಲ್ಲೇ ಆ ಪೋಸ್ಟ್ ಅನ್ನು ರಕ್ಷಿತಾ ಡಿಲೀಟ್ ಮಾಡಿದ್ದಾರೆ. ಯಾಕೆ ಡಿಲೀಟ್ ಮಾಡಿದ್ದಾರೆ ಎನ್ನುವುದು ಗೊತ್ತಿಲ್ಲ. ನಟಿ, ಮಾಜಿ ಸಂಸದೆ ರಮ್ಯಾ ಕೂಡ ದರ್ಶನ್ ಬಂಧನದ ಸುದ್ದಿಯನ್ನು ರೀಟ್ವೀಟ್ ಮಾಡಿದ್ದಾರೆ.

ಇದರ ಅರ್ಥವೇನು ಎಂಬುದು ಇನ್ನೂ ತಿಳಿದಿಲ್ಲ. ಆದರೆ ರಮ್ಯಾ ರೀಟ್ವೀಟ್‌ಗೆ, ಈ ವ್ಯಕ್ತಿ ಭ್ರಾಂತೀತವಾಗಿದ್ದಾನೆ. ಸಮಾಜಕ್ಕೆ ಇವನಿಂದ ಕಳವಳವಾಗಿದೆ. ನಿಮ್ಮ ಧ್ವನಿ ಗುರುತಿಸಲ್ಪಡುತ್ತದೆ. ನ್ಯಾಯವು ಮೇಲುಗೈ ಸಾಧಿಸುತ್ತದೆ ಎಂದು ಬರೆದುಕೊಂಡಿದ್ದಾರೆ. ಇನ್ನು ಕೆಲವರು ಯಾರೇ ಆಗಿರಲಿ ಕಾನೂನಿನ ಪ್ರಕಾರ ಶಿಕ್ಷೆ ಆಗಲೇಬೇಕು ಎಂದು ಬರೆದುಕೊಂಡಿದ್ದಾರೆ.

ಜಡ್ಜ್ ಮುಂದೆ ಕಣ್ಣೀರಿಟ್ಟ ದರ್ಶನ್, ಪವಿತ್ರಾಗೌಡ

ಬೆಂಗಳೂರು, ಜೂ.11– ನಟ ದರ್ಶನ್ ಇಂದು ಕೊಲೆ ಕೇಸ್‌ನಲ್ಲಿ ಪೊಲೀಸ್ ಕಸ್ಟಡಿಯಲ್ಲಿದ್ದಾರೆ. ಕೋರ್ಟ್‌ನಲ್ಲಿ ವಾದ –ಪ್ರತಿವಾದ ನಡೆದ ವೇಳೆ ದರ್ಶನ್ ಹಾಗೂ ಪವಿತ್ರಾ ಗೌಡ ಕಣ್ಣೀರಿಟ್ಟಿದ್ದಾರೆ. ದರ್ಶನ್ ಸೇರಿ ಪ್ರಕರಣದ ಎಲ್ಲಾ 13 ಆರೋಪಿಗಳನ್ನು ಕೋರ್ಟ್ ಮುಂದೆ ಪೊಲೀಸರು ಹಾಜರುಪಡಿಸಿದ್ದರು.

ಕೋರ್ಟ್‌ನ ಮುಂದೆ ಹಾಜರುಪಡಿಸಲಾಗಿದ್ದ ಎಲ್ಲಾ ಆರೋಪಿಗಳ ಹೆಸರನ್ನೂ ಕೇಳಲಾಯಿತು. ಈ ವೇಳೆ ಪೊಲೀಸರಿಂದ ಏನಾದರೂ ತೊಂದರೆ ಆಗಿದೆಯೇ ಎಂದು ಎಲ್ಲರಿಗೂ ಕೇಳಲಾಯಿತು. ಇದಕ್ಕೆ ಎಲ್ಲರೂ ಇಲ್ಲ ಎಂದು ಹೇಳಿದ್ದರು. ಆ ಬಳಿಕ ಜಡ್ಜ್ ರಿಮಾಂಡ್ ಅರ್ಜಿಯ ಪರಿಶೀಲನೆ ಮಾಡಿದರು. ನಿಮ್ಮೆಲ್ಲರನ್ನು ಎಲ್ಲಿ, ಯಾವಾಗ ಬಂಧನ ಮಾಡಲಾಯಿತು ಎಂದು ಜಡ್ಜ್ ಕೇಳಿದರು. ಈ ವೇಳೆ ದರ್ಶನ್ ತಮ್ಮನ್ನು ಮಧ್ಯಾಹ್ನ 2.30ಕ್ಕೆ ಹಾಗೂ ಪವಿತ್ರಾ ಗೌಡ ತನ್ನನ್ನು 3 ಗಂಟೆಗೆ ಬಂಧನ ಮಾಡಲಾಯಿತು ಎಂದು ಹೇಳಿದ್ದಾರೆ. ಪೊಲೀಸ್ ಠಾಣೆಯಲ್ಲಿಯೇ ತನ್ನನ್ನು ಬಂಧನ ಮಾಡಿದರು ಎಂದು ಪವಿತ್ರಾ ತಿಳಿಸಿದ್ದಾರೆ.

ವಕೀಲರನ್ನು ನೇಮಕ ಮಾಡಿಕೊಳ್ಳುತ್ತೀರಾ ಎನ್ನುವ ಪ್ರಶ್ನೆಗೆ ತಮ್ಮ ಕೇಸ್‌ಗೆ ವಕೀಲರನ್ನು ನೇಮಕ ಮಾಡಿಕೊಳ್ಳೋದಾಗಿ ಇಬ್ಬರೂ ತಿಳಿಸಿದ್ದಾರೆ. ಆ ಬಳಿಕ ಪೊಲೀಸರು ಹೆಚ್ಚಿನ ವಿಚಾರಣೆಗೆ ಎಲ್ಲರನ್ನೂ 14 ದಿನ ಪೊಲೀಸ್ ಕಸ್ಟಡಿಗೆ ನೀಡಬೇಕು'. ಎಲ್ಲಾ ಕಡೆ ಮಹಜರ್ ಮಾಡಬೇಕಿದೆ. ಕೂಡಿ ಹಾಕಿದ ಜಾಗ, ಕೊಲೆಯಾದ ಸ್ಥಳ, ಬಾಡಿಯನ್ನು ಎಸೆದ ಸ್ಥಳದ ಮಹಜರು ಮಾಡಬೇಕು ಎಂದು ತಿಳಿಸಿದ್ದಾರೆ. ಎಲ್ಲೆಲ್ಲಿ ಹಲ್ಲೆ ಮಾಡಿದ್ದಾರೆ ಎಂಬುದನ್ನು ತನಿಖೆ ಮಾಡಬೇಕಿದೆ. ಹಲ್ಲೆಗೆ ಬಳಕೆ ಮಾಡಿರುವ ವೆಪನ್ ಜಪ್ತಿ ಮಾಡಬೇಕಿದೆ ಎಂದು ತನಿಖಾಧಿಕಾರಿ ಕೂಡ ಕೋರ್ಟ್‌ಗೆ ಮನವಿ ಮಾಡಿದರು.

ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ದರ್ಶನ್ ಪರ ವಕೀಲ ಮೌನೇಶ್, ಕಸ್ಟಡಿಯ ಅಗತ್ಯವೇ ಇಲ್ಲ ಎಂದು ಹೇಳಿದರು. ಈಗಾಗಲೇ ಮೊಬೈಲ್ ಪಡೆದುಕೊಳ್ಳಲಾಗಿದೆ. ಬಾಡಿ ಕೂಡ ರಿಕವರಿ ಆಗಿದೆ. ಕಸ್ಟಡಿಗೆ ಕೊಡುವ ಅಗತ್ಯವೇ ಇಲ್ಲ ಎಂದು ಹೇಳಿದರು. ದರ್ಶನ್ ಪರ ಇನ್ನೊಬ್ಬ ವಕೀಲ ನಾರಾಯಣಸ್ವಾಮಿ ಕೂಡ ಇದೇ ಮಾತನ್ನು ಪುನರುಚ್ಚರಿಸಿದರು. ಅದಲ್ಲದೆ, ತನಿಖಾಧಿಕಾರಿ ಮಾತಿಗೆ ಆಕ್ಷೇಪ ವ್ಯಕ್ತಪಡಿಸಿದ ವಕೀಲರು, ಪಿಪಿ ಇದ್ದಾರೆ ಅವರು ವಾದ ಮಾಡುತ್ತಾರೆ. ತನಿಖಾಧಿಕಾರಿ ಮಾತನಾಡುವ ಅಗತ್ಯವಿಲ್ಲ ಎಂದರು. ದರ್ಶನ್ ತಪ್ಪಿಸಿಕೊಂಡಿಲ್ಲ , ತನಿಖೆಗೆ ಸಹಕರಿಸಿದ್ದಾರೆ. ದರ್ಶನ್ ವಿರುದ್ಧ ಯಾವುದೇ ಆರೋಪ ಇಲ್ಲ. ಪೊಲೀಸ್ ಕಸ್ಟಡಿಗೆ ನೀಡಬಾರದು. ಹೀಗಾಗಿ ನ್ಯಾಯಾಂಗ ಬಂಧನಕ್ಕೆ ನೀಡುವಂತೆ ದರ್ಶನ್ ಪರ ವಕೀಲರು ಮನವಿ ಮಾಡಿದರು. ಕೊನೆಗೆ ನ್ಯಾಯಾಧೀಶರು ದರ್ಶನ್ ಸೇರಿದಂತೆ ಎಲ್ಲಾ ಆರೋಪಿಗಳನ್ನೂ 6 ದಿನ ಪೊಲೀಸ್ ಕಸ್ಟಡಿಗೆ ನೀಡಿದರು.

ಒಂದನೇ ಪುಟದಿಂದ

ನಟ ದರ್ಶನ್ ಬಂಧನ

ಮೇಲೆ ಅಪಾರ ಅಭಿಮಾನ ಹೊಂದಿರುವ ಚಿತ್ರದುರ್ಗದ ಅಪೋಲೊ ಫಾರ್ಮಸಿಯ ಉದ್ಯೋಗಿ ರೇಣುಕಾಸ್ವಾಮಿ ಹತ್ಯೆಯಾಗಿತ್ತು. ಇತ್ತೀಚೆಗೆ ಪವಿತ್ರಾಗೌಡ ಸಾಮಾಜಿಕ ಜಾಲತಾಣದಲ್ಲಿ 'ಒಂದೇ ಮಳೆ ಬಿಲ್ಲು' ಎಂಬ ಹಾಡಿಗೆ ದರ್ಶನ್ ಜೊತೆ ತಾನಿರುವ ಫೋಟೋಗಳನ್ನು ಹಾಕಿ 'ದರ್ಶನ್ ಮತ್ತು ನನ್ನ ಸಂಬಂಧಕ್ಕೆ 10 ವರ್ಷ' ಎಂದು ಪೋಸ್ಟ್ ಮಾಡಿದ್ದಳು. ಈ ಸಂದರ್ಭದಲ್ಲಿ ದರ್ಶನ್ ಪತ್ನಿ ವಿಜಯಲಕ್ಷ್ಮಿ ಮತ್ತು ಪವಿತ್ರಾ ಗೌಡ ನಡುವೆ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ವಾರ್ ನಡೆದಿತ್ತು.

ಇದನ್ನು ಗಮನಿಸಿದ ರೇಣುಕಾಸ್ವಾಮಿ, ದರ್ಶನ್ ಸಂಸಾರದಲ್ಲಿ ಪವಿತ್ರಾ ಗೌಡ ಮಧ್ಯೆ ಪ್ರವೇಶಿಸಿದ್ದಾಳೆ ಎಂಬ ಸಿಟ್ಟಿನಿಂದ ಆಕೆಯ ಪೋಸ್ಟ್‌ಗಳಿಗೆ ಅಶ್ಲೀಲವಾಗಿ ಕಾಮೆಂಟ್ ಮಾಡುತ್ತಿದ್ದ. ಅಲ್ಲದೇ ಆಕೆಗೆ ಅಶ್ಲೀಲ ಸಂದೇಶಗಳನ್ನು ರವಾನಿಸಿ ದರ್ಶನ್ ಸಂಸಾರದಲ್ಲಿ ಮಧ್ಯೆ ಪ್ರವೇಶಿಸಬೇಡ ಎಂದು ತಾಕೀತು ಮಾಡುತ್ತಿದ್ದ.

ಪವಿತ್ರಾಗೌಡ ಈ ವಿಚಾರವನ್ನು ದರ್ಶನ್‌ಗೆ ತಿಳಿಸಲಾಗಿ, ರೇಣುಕಾಸ್ವಾಮಿ ಯಾರು ಎಂಬುದರ ಬಗ್ಗೆ ದರ್ಶನ್ ಆಪ್ತರು ತಲಾಶ್ ಮಾಡಲಾಗಿ, ಈತ ಚಿತ್ರದುರ್ಗದವನು ಎಂಬುದು ತಿಳಿದು ಬಂದಿದೆ. ಈ ಹಿನ್ನೆಲೆಯಲ್ಲಿ ದರ್ಶನ್ ಮತ್ತು ಪವಿತ್ರಾ ಆಪ್ತ ಪವನ್ ಸೂಚನೆ ಮೇರೆಗೆ ಚಿತ್ರದುರ್ಗ ಜಿಲ್ಲಾ ದರ್ಶನ್ ಅಭಿಮಾನಿಗಳ ಸಂಘದ ಅಧ್ಯಕ್ಷ ರಾಘವೇಂದ್ರ ಅಲಿಯಾಸ್ ರಾಘು ಎಂಬಾತ ರೇಣುಕಾಸ್ವಾಮಿಯನ್ನು ಪತ್ತೆ ಹಚ್ಚಿ ಶನಿವಾರ (ಜೂ.8) ಬೆಳಿಗ್ಗೆ ಆತನನ್ನು ಚಿತ್ರದುರ್ಗದಿಂದ ಬೆಂಗಳೂರಿಗೆ ಕರೆತಂದಿದ್ದಾನೆ.

ಮಧ್ಯಾಹ್ನದ ವೇಳೆಗೆ ರೇಣುಕಾಸ್ವಾಮಿಯನ್ನು ಬೆಂಗಳೂರಿಗೆ ಕರೆತಂದಿದ್ದು, ದರ್ಶನ್ ಸೂಚನೆ ಮೇರೆಗೆ ದರ್ಶನ್ ಆಪ್ತ ವಿನಯ್ ಎಂಬಾತನ ಮಾವ ಜಯಣ್ಣ ಎಂಬುವರಿಗೆ ಸೇರಿದ ರಾಜರಾಜೇಶ್ವರಿನಗರದ ಪಟ್ಟಣಗೆರೆಯಲ್ಲಿರುವ ಸೀಜ್ಡ್ ಕಾರುಗಳ ನಿಲ್ಲಿಸುವ ಶೆಡ್‌ನಲ್ಲಿ ರೇಣುಕಾಸ್ವಾಮಿಯನ್ನು ಕೂಡಿ ಹಾಕಲಾಗಿದ್ದು, ಅಂದು ಮಧ್ಯಾಹ್ನ 2.30ರ ಸುಮಾರಿನಲ್ಲಿ ದರ್ಶನ್ ಮತ್ತು ಪವಿತ್ರಾ ಗೌಡ ಈ ಶೆಡ್‌ಗೆ ಹೋಗಿದ್ದಾರೆ. ನಂತರ ದರ್ಶನ್ ಆಪ್ತರು ರೇಣುಕಾಸ್ವಾಮಿ ಮೇಲೆ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ ಹತ್ಯೆಗೈದಿದ್ದಾರೆ ಎಂದು ಆರೋಪಿಸಲಾಗಿದೆ.

ನಂತರ ಅಂದು ರಾತ್ರಿ ಸೀಜ್ ಆಗಿದ್ದ ಸ್ಕಾರ್ಪಿಯೋ ಕಾರಿನಲ್ಲಿ ರೇಣುಕಾಸ್ವಾಮಿ ಶವವನ್ನು ಕೊಂಡೊಯ್ದು ಸುಮನಹಳ್ಳಿಯ ಸತ್ವ ಅನುಗ್ರಹ ಅಪಾರ್ಟ್‌ಮೆಂಟ್ ಬಳಿಯ ರಾಜಕಾಲುವೆ ಬಳಿ ಶವವನ್ನು ಬಿಸಾಡಿದ್ದಾರೆ.

ಶವ ಪತ್ತೆಯಾಗಿದ್ದು ಹೇಗೆ?: ಜೂ.9ರಂದು ಬೆಳಗ್ಗೆ ಸತ್ವ ಅನುಗ್ರಹ ಅಪಾರ್ಟ್‌ಮೆಂಟ್ ಸೆಕ್ಯೂರಿಟಿ ಆಫೀಸರ್ ಕೇವಲ್ ರಾಂ ದೋರಜಿ ಎಂಬುವರು ಗಸ್ತು ತಿರುಗುತ್ತಿದ್ದ ವೇಳೆ ರಾಜಕಾಲುವೆ ಬಳಿ ಮೃತದೇಹವನ್ನು ನಾಯಿಗಳು ಎಳೆದಾಡುತ್ತಿದ್ದುದನ್ನು ಕಂಡು ಕಾಮಾಕ್ಷಿಪಾಳ್ಯ ಪೊಲೀಸರಿಗೆ ದೂರು ಸಲ್ಲಿಸಿದ್ದಾರೆ. ಅಂದು ಬೆಳಗ್ಗೆ 11.30ರ ಸುಮಾರಿಗೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ ಕಾಮಾಕ್ಷಿಪಾಳ್ಯ ಠಾಣೆಯ ಇನ್ಸ್‌ಪೆಕ್ಟರ್ ಗಿರೀಶ್ ನಾಯಕ್ ಅವರು ದೇಹದ ಮೇಲಿನ ಗಾಯದ ಗುರುತುಗಳನ್ನು ಕಂಡು ಅಪರಿಚಿತ ವ್ಯಕ್ತಿಯ ಕೊಲೆ ಪ್ರಕರಣ ದಾಖಲಿಸಿಕೊಂಡು ತನಿಖೆ ಆರಂಭಿಸಿದರು. ಆದರೆ ಸತ್ತಿರುವ ವ್ಯಕ್ತಿ ಯಾರು? ಈತನನ್ನು ಇಷ್ಟು ಬರ್ಬರವಾಗಿ ಕೊಲೆ ಮಾಡಿದವರು ಯಾರು ಎಂಬುದರ ಬಗ್ಗೆ ಯಾವುದೇ ಸುಳಿವು ದೊರೆತಿರಲಿಲ್ಲ.

ನಾಲ್ವರು ಶರಣು: ಯಾವುದೇ ಸುಳಿವಿಲ್ಲದೇ ಪೊಲೀಸರು ಪರದಾಡುತ್ತಿದ್ದಾಗಲೇ ಸಂಜೆ ವೇಳೆಗೆ ನಾಲ್ವರು ಯುವಕರು ಠಾಣೆಗೆ ಆಗಮಿಸಿ, ಸುಮನಹಳ್ಳಿ ರಾಜಕಾಲುವೆ ಬಳಿ ದೊರೆತ ವ್ಯಕ್ತಿಯನ್ನು ಹತ್ಯೆ ಮಾಡಿದ್ದು ನಾವೇ ಎಂದು ಹೇಳಿದ್ದಾರೆ. ಆತ ಚಿತ್ರದುರ್ಗದ ರೇಣುಕಾಸ್ವಾಮಿ ಎಂದು ತಿಳಿಸಿದ ಯುವಕರು, ಹಣಕಾಸು ವಿಚಾರವಾಗಿ ಉಂಟಾದ ದ್ವೇಷದಿಂದ ಆತನನ್ನು ಕೊಲೆ ಮಾಡಿದ್ದಾಗಿ ಹೇಳಿಕೆ ನೀಡಿದ್ದಾರೆ.

ಆದರೆ ಈ ನಾಲ್ವರನ್ನೂ ಗಿರೀಶ್ ನಾಯಕ್ ಪ್ರತ್ಯೇಕವಾಗಿ ವಿಚಾರಣೆಗೊಳಪಡಿಸಿದಾಗ ಹೇಳಿಕೆಗಳು ಹೊಂದಾಣಿಕೆಯಾಗುತ್ತಿರಲಿಲ್ಲ. ಇದರಿಂದ ಅನುಮಾನಗೊಂಡ ಅವರು, ಶರಣಾದ ಯುವಕರ ಮೊಬೈಲ್‌ನ ಕಾಲ್ ಲಿಸ್ಟ್ ಅನ್ನು ಗಮನಿಸಿದಾಗ ಈ ಯುವಕರು ಕೊನೆಯದಾಗಿ ದರ್ಶನ್ ಅವರ ಮ್ಯಾನೇಜರ್ ನಾಗರಾಜ್ ಅವರೊಂದಿಗೆ ಮಾತನಾಡಿರುವುದು ಪತ್ತೆಯಾಗಿದೆ. ಟವರ್ ಲೊಕೇಷನ್ ಅನ್ನು ಪರಿಶೀಲಿಸಿದಾಗ ಇವರು ದರ್ಶನ್ ಮನೆ ಬಳಿ ಇದ್ದುದ್ದೂ ಕೂಡ ಪತ್ತೆಯಾಗಿದೆ. ಈ ಹಿನ್ನೆಲೆಯಲ್ಲಿ ನಟರಾಜ್ ಅವರನ್ನು ಠಾಣೆಗೆ ಕರೆಸಿ ವಿಚಾರಣೆಗೊಳಪಡಿಸಿದ ವೇಳೆ ಅವರು ತಮಗೇನೂ ಗೊತ್ತಿಲ್ಲ. ಇವರನ್ನು ಶರಣಾಗಿಸುವಂತೆ ಹೇಳಿದರು. ನಾನು ಕಳುಹಿಸಿದೆ ಎಂದಷ್ಟೇ ಮೊದಲಿಗೆ ಹೇಳಿದ್ದಾರೆ.

ಎಲ್ಲರನ್ನೂ ತೀವ್ರವಾಗಿ ವಿಚಾರಣೆಗೊಳಪಡಿಸಿದಾಗ ಪವಿತ್ರಾಗೌಡ ಪೋಸ್ಟ್‌ಗಳಿಗೆ ರೇಣುಕಾಸ್ವಾಮಿ ಅಶ್ಲೀಲ ಕಾಮೆಂಟ್ಸ್ ಮಾಡಿದ ಕಾರಣಕ್ಕಾಗಿ ದರ್ಶನ್ ಮತ್ತು ಪವಿತ್ರಾ ಗೌಡ ಸೂಚನೆ ಮೇರೆಗೆ ಆತನನ್ನು ಚಿತ್ರದುರ್ಗದಿಂದ ಅಪಹರಿಸಿಕೊಂಡು ಬಂದು ಪಟ್ಟಣಗೆರೆ ಕಾರ್ ಶೆಡ್‌ನಲ್ಲಿ ಹತ್ಯೆ ಮಾಡಿ, ಶವವನ್ನು ಸುಮನಹಳ್ಳಿ ರಾಜ ಕಾಲುವೆ ಬಳಿ ಬಿಸಾಡಿದ್ದು ಬಯಲಾಗಿದೆ.

ತನಿಖೆ ಮುಂದುವರೆಸಿದ ಇನ್ಸ್‌ಪೆಕ್ಟರ್ ಗಿರೀಶ್ ನಾಯಕ್, ಪಟ್ಟಣಗೆರೆ ಶೆಡ್ ಬಳಿಯ ಸಿಸಿ ಕ್ಯಾಮರಾ ಪರಿಶೀಲಿಸಿದ್ದು, ಜೂ.8ರಂದು ಮಧ್ಯಾಹ್ನ ದರ್ಶನ್ ಅವರ ಕಾರು ಶೆಡ್‌ನೊಳಗೆ ಪ್ರವೇಶಿಸಿರುವ ದೃಶ್ಯ ಕಂಡು ಬಂದಿದೆ. ಗಿರೀಶ್ ನಾಯಕ್, ಸಿಸಿ ಕ್ಯಾಮರಾ ಫುಟೇಜ್ ಸಂಗ್ರಹಿಸಿದ್ದಾರೆ. ಜೊತೆಗೆ ದರ್ಶನ್ ಮೊಬೈಲ್‌ನ ಟವರ್ ಲೊಕೇಷನ್ ವಿವರಗಳನ್ನು ಕಲೆ ಹಾಕಿದ್ದಾರೆ. ಆ ವೇಳೆ ಕಾರ್ ಶೆಡ್ ವ್ಯಾಪ್ತಿಗೆ ಒಳಪಟ್ಟ ಟವರ್‌ನಿಂದಲೇ ಅವರ ಮೊಬೈಲ್ ಕಾರ್ಯ ನಿರ್ವಹಿಸುವುದು ಪತ್ತೆಯಾಗಿದೆ. ಅಂದರೆ ಕಾರಿನಲ್ಲಿ ಶೆಡ್‌ಗೆ ತೆರಳಿದ್ದು, ಸ್ವತಃ ದರ್ಶನ್ ಎಂಬುದಕ್ಕೆ ತಾಂತ್ರಿಕ ಸಾಕ್ಷಿ ದೊರೆತಂತಾಗಿದೆ. ನಂತರ ಈ ಪ್ರಕರಣದಲ್ಲಿ ಭಾಗಿಯಾಗಿದ್ದ 11 ಮಂದಿಯನ್ನು ವಶಕ್ಕೆ ಪಡೆದ ಗಿರೀಶ್ ನಾಯಕ್, ಕೊಲೆ ಪ್ರಕರಣದಲ್ಲಿ ದರ್ಶನ್ ಮತ್ತು ಪವಿತ್ರಾ ಗೌಡ ಭಾಗಿಯಾಗಿರುವ ಬಗ್ಗೆ ಮೇಲ್ನೋಟಕ್ಕೆ ಸಾಕ್ಷ್ಯಾಧಾರಗಳು ದೊರೆತಿರುವ ಬಗ್ಗೆ ತನ್ನ ಹಿರಿಯ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ನಂತರ ಹಿರಿಯ ಅಧಿಕಾರಿಗಳು ಕಾರ್ಯೋನ್ಮುಖರಾಗಿ ದರ್ಶನ್ ಮತ್ತು ಪವಿತ್ರಾ ಗೌಡ ಎಲ್ಲಿದ್ದಾರೆ ಎಂಬುದರ ಬಗ್ಗೆ ಮಾಹಿತಿ ಕಲೆ ಹಾಕಿದ ನಂತರ ಇಂದು (ಜೂ.11) ಬೆಳಗ್ಗೆ ಡಿಸಿಪಿ ಗಿರೀಶ್ ನೇತೃತ್ವದ 12 ಮಂದಿ ಪೊಲೀಸರ ತಂಡ ಮೈಸೂರಿಗೆ ಆಗಮಿಸಿದೆ. ನಜರ್‌ಬಾದ್ ಠಾಣೆ ಇನ್ಸ್‌ಪೆಕ್ಟರ್ ಮಹದೇವಸ್ವಾಮಿ ಹಾಗೂ ಇಲ್ಲಿನ ಸಿಬ್ಬಂದಿ ಸಹಕಾರವನ್ನು ಪಡೆದ ಬೆಂಗಳೂರು ಪೊಲೀಸರು ಮೈಸೂರಿನ ರ್‍ಯಾಡಿಸನ್ ಬ್ಲ್ಯೂ ಹೋಟೆಲ್‌ನ ಜಿಮ್‌ನಲ್ಲಿ ವರ್ಕ್‌ಔಟ್ ಮಾಡಿ ಬೆಳಗ್ಗೆ 8.30ರ ಸುಮಾರಿನಲ್ಲಿ ಕಾರಿನಲ್ಲಿ ಹೊರ ಬಂದ ದರ್ಶನ್ ಅವರನ್ನು ವಶಕ್ಕೆ ಪಡೆದು ಬೆಂಗಳೂರಿಗೆ ಕರೆದೊಯ್ದರೆ, ಅತ್ತ ಮತ್ತೊಂದು ತಂಡ ಪವಿತ್ರಾಗೌಡ ಅವರನ್ನು ವಶಕ್ಕೆ ಪಡೆದಿದೆ.

ಇವರಿಬ್ಬರನ್ನು ಅನ್ನಪೂರ್ಣೇಶ್ವರಿ ನಗರ ಠಾಣೆಗೆ ಕರೆದೊಯ್ದು, ಪ್ರಾಥಮಿಕ ವಿಚಾರಣೆ ನಂತರ ದರ್ಶನ್, ಪವಿತ್ರಾ ಗೌಡ ಸೇರಿದಂತೆ 13 ಮಂದಿಯನ್ನು ಬಂಧಿಸುವ ಪ್ರಕ್ರಿಯೆ ಪೂರೈಸಿದ ನಂತರ ಬೌರಿಂಗ್ ಆಸ್ಪತ್ರೆಯಲ್ಲಿ ವೈದ್ಯಕೀಯ ಪರೀಕ್ಷೆಗೊಳಪಡಿಸಿ, ನಂತರ 24ನೇ ಎಸಿಎಂಎಂ ನ್ಯಾಯಾಲಯಕ್ಕೆ ಸಂಜೆ ವೇಳೆಗೆ ಹಾಜರುಪಡಿಸಿದರು. ಎಲ್ಲಾ 13 ಮಂದಿಯನ್ನು 6 ದಿನಗಳ ಕಾಲ ಪೊಲೀಸ್ ಕಸ್ಟಡಿಗೆ ನೀಡಿ ನ್ಯಾಯಾಧೀಶರು ಆದೇಶ ಹೊರಡಿಸಿದ್ದಾರೆ. ಸೂರ್ಯಾಸ್ತಮದ ನಂತರ ಮಹಿಳೆಯರನ್ನು ಠಾಣೆಯಲ್ಲಿ ಇರಿಸಿಕೊಳ್ಳಬಾರದು ಎಂಬ ಕಾರಣದಿಂದಾಗಿ ಪವಿತ್ರಾಗೌಡರನ್ನು ಪೊಲೀಸರು ಮಹಿಳೆ ಸಾಂತ್ವಾನ ಕೇಂದ್ರಕ್ಕೆ ರವಾನಿಸಿದರು.

ಹತ್ಯೆಗೆ ಕಾರಣ

ಎಳೆದಾಡುತ್ತಿದ್ದ 30ರಿಂದ 35 ವರ್ಷದ ಯುವಕನ ಶವ ಎಂದು ಗೊತ್ತಾಗಿದೆ. ತಮ್ಮ ಮಗ ಕಳೆದ ಶನಿವಾರದಿಂದ ಕಾಣಿಸುತ್ತಿಲ್ಲ, ನಾಪತ್ತೆಯಾಗಿದ್ದಾನೆ ಎಂದು ತಾಯಿ ಪೊಲೀಸ್ ಠಾಣೆಗೆ ದೂರು ನೀಡಿದಾಗ ಪ್ರಕರಣದ ಜಾಡು ಹಿಡಿದು ತನಿಖೆ ಮಾಡುತ್ತಾ ಹೋದಾಗ ಪ್ರಕರಣ ಬೆಳಕಿಗೆ ಬಂತು ಎಂದಿದ್ದಾರೆ.

ಹಿನ್ನಲೆ: ಜೂನ್ 9 ರಂದು ಭಾನುವಾರದಂದು ಕಾಮಾಕ್ಷಿಪಾಳ್ಯದಲ್ಲಿ ಅಪರಿಚಿತ ಶವವೊಂದು ಸಿಕ್ಕಿತ್ತು. ಆತನ ದೇಹದ ಮೇಲೆ ಇದ್ದ ಗಾಯಗಳನ್ನು ಗಮನಿಸಿ ಕಾಮಾಕ್ಷಿಪಾಳ್ಯದ ಠಾಣೆಯಲ್ಲಿ ಕೊಲೆ ಪ್ರಕರಣ ದಾಖಲಿಸಿಕೊಂಡಿದ್ದೆವು. ಅದಾದ ಬಳಿಕ ಸಿಸಿಟಿವಿ ಹಾಗೂ ಇತರೆ ತಾಂತ್ರಿಕ ಆಧಾರದ ಮೇಲೆ ವ್ಯಕ್ತಿಯ ಗುರುತು ಪರಿಚಯ ಗೊತ್ತಾಗಿದ್ದು, ಆತ ಚಿತ್ರದುರ್ಗದ ವಾಸಿ ರೇಣುಕಾ ಸ್ವಾಮಿ ಎಂದು ತಿಳಿದುಬಂತು. ತನಿಖೆಯಲ್ಲಿ ಕನ್ನಡ ಚಿತ್ರರಂಗದ ಖ್ಯಾತ ನಟನ ಪಾತ್ರವಿದೆ ಎಂದು ಗೊತ್ತಾಗಿ ನಟ ಹಾಗೂ ಆತನ ಸಹಚರರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ. ರೇಣುಕಾಸ್ವಾಮಿ, ದರ್ಶನ್ ಪತ್ನಿಗೆ ಅವಾಚ್ಯ ಸಂದೇಶಗಳನ್ನು ಕಳಿಸಿದ್ದಾನೆ ಎಂಬ ಕಾರಣಕ್ಕೆ ಆತನ ಕೊಲೆ ಮಾಡಲಾಗಿದೆ ಎಂಬುದು ಪ್ರಾಥಮಿಕ ತನಿಖೆಯಲ್ಲಿ ತಿಳಿದು ಬಂದಿದೆ ಎಂದ ಆಯುಕ್ತ ದಯಾನಂದ್, ತನಿಖೆಯ ಆರಂಭಿಕ ಹಂತದಲ್ಲಿ ಇರುವ ಕಾರಣ ಪ್ರಕರಣದ ಬಗೆಗೆ ಈಗ ಹೆಚ್ಚಿನ ವಿವರಗಳನ್ನು ಹಂಚಿಕೊಳ್ಳಲು ಸಾಧ್ಯವಿಲ್ಲ ಎಂದರು.

ಪತ್ನಿ ಕಣ್ಣೀರು

ಹಾಗೂ ನನಗೆ ನ್ಯಾಯ ಕೊಡಿಸಿ ಎಂದು ಆಗ್ರಹಿಸಿದ್ದಾರೆ. ನನ್ನ ಗಂಡನನ್ನು ನಟ ದರ್ಶನ್ ಅವರು ಕೊಲೆ ಮಾಡಿದ್ದಾರೆ ಎಂದು ಆರೋಪ ಕೇಳಿ ಬಂದಿದೆ. ಅವರಿಗೆ ನ್ಯಾಯ ಕೊಡಿಸಲು ಸಾಕಷ್ಟು ಜನ ಮುಂದೆ ಬಂದಿದ್ದಾರೆ. ನನ್ನ ಮಗುವಿಗೆ ಯಾರು ಸಹಾಯ ಮಾಡುತ್ತಾರೆ. ನಮಗೆ ನ್ಯಾಯ ಕೊಡಿಸಿ ಎಂದು ಮೃತನ ಪತ್ನಿ ಸಹನಾ ಕಣ್ಣೀರು ಸುರಿಸಿದರು.

ರೇಣುಕಾಸ್ವಾಮಿ

ಪವಿತ್ರಗೌಡ ಅವರ ಫೋಟೋಗಳಿಗೆ ರೇಣುಕಾಸ್ವಾಮಿ ಸಾಮಾಜಿಕ ಜಾಲತಾಣದಲ್ಲಿ ಅಶ್ಲೀಲವಾಗಿ ಕಮೆಂಟ್ ಮಾಡುತ್ತಿದ್ದ. ಇದಲ್ಲದೆ ಕೆಟ್ಟದಾಗಿ ಮೆಸೇಜ್ ಮಾಡುತ್ತಿದ್ದ ಎನ್ನಲಾಗಿದೆ. ದರ್ಶನ್ ಮತ್ತು ವಿಜಯಲಕ್ಷ್ಮಿ ದಂಪತಿ ಜೀವನದಲ್ಲಿ ಪವಿತ್ರಾಗೌಡ ಮಧ್ಯೆ ಬಂದಿದ್ದಾಳೆಂದು ಆಕ್ರೋಶ ಗೊಂಡಿದ್ದ ಈತ ಆಕೆಯ ಪೋಸ್ಟ್‌ಗಳಿಗೆ ಕೆಟ್ಟದಾಗಿ ಕಾಮೆಂಟ್ ಮಾಡುತ್ತಿದ್ದುದ್ದಲ್ಲದೇ ದರ್ಶನ್ ಅವರಿಂದ ದೂರ ಹೋಗುವಂತೆ ತಾಕೀತು ಮಾಡುತ್ತಿದ್ದನೆನ್ನಲಾಗಿದೆ. ತನ್ನ ನೆಚ್ಚಿನ ನಾಯಕನ ಕುಟುಂಬದ ಬಗ್ಗೆ ಕಾಳಜಿ ಹೊಂದಿದ್ದ ಈತನ ಕೊಲೆಗೇ ಆ ನಟನೇ ಕಾರಣವಾಗಿದ್ದಂತೂ ವಿಪರ್ಯಾಸವೇ ಸರಿ.

ಮೈಸೂರಲ್ಲಿ ಅಪರಾಧಕ್ಕೆ ಬ್ರೇಕ್ ಹಾಕಲು ಆರಂಭವಾಗಿದೆ ವಿಶೇಷ ಕಾರ್ಯಾಚರಣೆ



ಮೈಸೂರು, ಜೂ.11(ಎಸ್‌ಬಿಡಿ)– ಮೈಸೂರು ನಗರ ಪೊಲೀಸರು ಅಪರಾಧ ತಡೆಗೆ ವಿಶೇಷ ಕಾರ್ಯಾಚರಣೆ ಆರಂಭಿಸಿದ್ದಾರೆ. ಸರಗಳವು, ಮನೆಕಳವು, ದ್ವಿಚಕ್ರ ವಾಹನಗಳ ಕಳವು, ಹತ್ಯೆ, ಹಲ್ಲೆ, ಮಾದಕ ವಸ್ತು ಸಾಗಾಟ–ಮಾರಾಟ ಇನ್ನಿತರ ಅಪರಾಧ ಕೃತ್ಯಗಳನ್ನು ಹತ್ತಿಕ್ಕುವ ಉದ್ದೇಶದಿಂದ ನಗರ ಪೊಲೀಸ್ ಆಯುಕ್ತ ಬಿ. ರಮೇಶ್ ನಿರ್ದೇಶನದಂತೆ ಎಲ್ಲಾ ಪೊಲೀಸ್ ಠಾಣೆ ವ್ಯಾಪ್ತಿಯಲ್ಲೂ ಕೆಲ ದಿನಗಳಿಂದ ಸಂಜೆ ವೇಳೆ ವಿಶೇಷ ಕಾರ್ಯಾಚರಣೆ (ಸ್ಪೆಷಲ್ ಡ್ರೈವ್) ನಡೆಸಲಾಗುತ್ತಿದೆ.

ಮಂಗಳವಾರವೂ ಕಾರುಗಳು, ದ್ವಿಚಕ್ರ ವಾಹನಗಳನ್ನು ಖಾಕಿ ಪೊಲೀಸರು ಜಾಲಾಡಿದರು. ವಾಹನಗಳ ಡಿಕ್ಕಿಗಳಲ್ಲಿ ಯಾವುದಾದರೂ ಮಾರಕಾಸ್ತ್ರಗಳು, ಮಾದಕ ವಸ್ತುಗಳಿವೆಯೇ ಎಂದು ಪರಿಶೀಲಿಸಿದರು. ಬ್ಯಾಗ್‌ಗಳು, ಕವರ್‌ಗಳಲ್ಲಿರುವ ವಸ್ತುಗಳನ್ನೂ ಹೊರತೆಗೆಸಿ ನೋಡಿದರು. ವಾಹನ ಚಾಲಕರ ಬಗ್ಗೆ ಮಾಹಿತಿ ಕೇಳಿ, ಅವರ ಬಳಿ ಡ್ರೈವಿಂಗ್ ಲೈಸೆನ್ಸ್ ಹಾಗೂ ವಾಹನದ ದಾಖಲಾತಿಗಳಿವೆಯೇ ಎಂದು ಪರಿಶೀಲಿಸಿದರು. ನಂಬರ್ ಪ್ಲೇಟ್ ಇಲ್ಲದ ಅಥವಾ ವಿರೂಪಗೊಂಡ ವಾಹನಗಳನ್ನು ವಶಕ್ಕೆ ಪಡೆದು, ಮುಂದಿನ ಕ್ರಮ ಕೈಗೊಂಡರು. ಹೆಲ್ಮೆಟ್ ಧರಿಸದವರು, ಮಕ್ಕಳೊಂದಿಗೆ ತ್ರಿಬಲ್ ರೈಡಿಂಗ್ ಹೋಗುವವರನ್ನು ನಿಲ್ಲಿಸಿ, ಸುರಕ್ಷತೆ ದೃಷ್ಟಿಯಿಂದ ಸಂಚಾರ ನಿಯಮ ಪಾಲಿಸಬೇಕು, ನಿರ್ಲಕ್ಷಿಸಿದರೆ ದಂಡ ತೆರಬೇಕಾಗುತ್ತದೆ ಎಂದು ಕೆಲವರಿಗೆ ತಿಳಿಹೇಳಿ ಕಳುಹಿಸಿದರು.

ಕುಸಿದ ಕಾಂಪೌಂಡ್ ಸರಿಪಡಿಸದೇ ನಿರ್ಲಕ್ಷ್ಯ; ಬೈಕ್ ಬಿದ್ದು ಸವಾರನಿಗೆ ಗಾಯ

ಮೈಸೂರು, ಜೂ.11– ಕುಸಿದಿರುವ ಕಾಂಪೌಂಡ್ ದುರಸ್ತಿ ಮಾಡದೆ ನಿರ್ಲಕ್ಷಿಸಿದ ಪರಿಣಾಮ ಬೈಕ್ ಚರಂಡಿಗೆ ಬಿದ್ದು, ಗಾಯಗೊಂಡಿರುವ ಘಟನೆ ಮೈಸೂರಿನ ಗೋಕುಲಂ ಬಡಾವಣೆಯಲ್ಲಿ ಸಂಭವಿಸಿದೆ.

ಗೋಕುಲಂ 3ನೇ ಹಂತ, 10ನೇ ಕ್ರಾಸ್‌ನ ಇಎಸ್‌ಐ ಆಸ್ಪತ್ರೆ ವಸತಿ ಗೃಹಗಳಿಗೆ ಹೊಂದಿಕೊಂಡಂತಿರುವ ಕಾಂಪೌಂಡ್ ಮಳೆಯಿಂದ ಕುಸಿದು ಹಲವು ದಿನಗಳಾಗಿದ್ದರೂ ದುರಸ್ತಿ ಇರಲಿ ರಸ್ತೆಗೆ ಬಿದ್ದಿರುವ ಅದರ ತ್ಯಾಜ್ಯವನ್ನೂ ತೆರವು ಮಾಡಿಲ್ಲ. ಪರಿಣಾಮ ಮಂಗಳವಾರ ಮುಖ್ಯ ರಸ್ತೆಯಿಂದ ಬಂದ ಬೈಕ್, ಕಾಂಪೌಂಡ್ ತ್ಯಾಜ್ಯದ ರಾಶಿಗೆ ಡಿಕ್ಕಿಯಾಗಿ, ಪಕ್ಕದ ಚರಂಡಿಗೆ ಬಿದ್ದಿದೆ. ಘಟನೆಯಲ್ಲಿ ಬೈಕ್ ಸವಾರ ಗಾಯಗೊಂಡಿದ್ದಾರೆ.

ಸಾರ್ವಜನಿಕರ ಸಹಕಾರದೊಂದಿಗೆ ವಿವಿ ಪುರಂ ಪೊಲೀಸರು ಗಾಯಗೊಂಡಿದ್ದ ವ್ಯಕ್ತಿಯನ್ನು ಆಂಬುಲೆನ್ಸ್‌ನಲ್ಲಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ಆದರೆ ಆ ವ್ಯಕ್ತಿಯ ಮಾಹಿತಿ ಲಭ್ಯವಾಗಿಲ್ಲ.



ಮೈಸೂರಿನ ಗೋಕುಲಂನಲ್ಲಿ ಬೈಕ್ ಚರಂಡಿಗೆ ಬಿದ್ದು ಗಾಯಗೊಂಡ ಸವಾರನನ್ನು ಆಸ್ಪತ್ರೆಗೆ ಕರೆದೊಯ್ಯಲಾಯಿತು.

ಸರಗಳ್ಳರ ಬಗ್ಗೆ ಎಚ್ಚರಿಸುವ ನೆಪದಲ್ಲಿ ವಿದ್ಯಾರ್ಥಿಯಿಂದ ಸರ ಕದ್ದ ಖದೀಮ!

ಹೊಸ ಹೊಸ ಕುತಂತ್ರದ ಮೂಲಕ ಅಮಾಯಕರ ಸುಲಿಗೆ

ಮೈಸೂರು, ಜೂ.11(ಎಸ್‌ಬಿಡಿ)– ಕಳ್ಳರಿದ್ದಾರೆ ಎಚ್ಚರ ಎಂದು ವಿದ್ಯಾರ್ಥಿಯನ್ನು ಯಾಮಾರಿಸಿ ಸುಮಾರು 30 ಸಾವಿರ ರೂ. ಮೌಲ್ಯದ ಚಿನ್ನದ ಸರವನ್ನು ಲಪಟಾಯಿಸಿರುವ ಘಟನೆ ಮೈಸೂರಿನಲ್ಲಿ ಸೋಮವಾರ ಬೆಳ್ಳಂಬೆಳಗ್ಗೆ ನಡೆದಿದೆ.

ಮೈಸೂರಿನ ಕಾಲೇಜೊಂದರಲ್ಲಿ ಪಿಯುಸಿ ವಿದ್ಯಾಭ್ಯಾಸ ಮಾಡುತ್ತಿರುವ ಬೆಂಗಳೂರು ಮೂಲದ ವೈಶರವಣಕುಮಾರ್ (19, ಖದೀಮನ ಮಾತಿಗೆ ಮರುಳಾಗಿ ಮೋಸ ಹೋಗಿರುವ ವಿದ್ಯಾರ್ಥಿ.

ಬೆಂಗಳೂರಿನಿಂದ ಸೋಮವಾರ ಬೆಳಗ್ಗೆ 8.45ರ ವೇಳೆಗೆ ರೈಲಿನಲ್ಲಿ ಮೈಸೂರಿಗೆ ಆಗಮಿಸಿದ ಶರವಣಕುಮಾರ್, ಹಾಸ್ಟೆಲ್‌ಗೆ ಹೋಗಲು ರೈಲು ನಿಲ್ದಾಣದಿಂದ ದಾಸಪ್ಪ ವೃತ್ತದ ಕಡೆಗೆ ನಡೆದುಕೊಂಡು ಬರುತ್ತಿದ್ದ. ಈ ವೇಳೆ ಆತನನ್ನು ಸುಮಾರು 35 ವರ್ಷದ ವ್ಯಕ್ತಿ ಮಾತನಾಡಿಸಿದ್ದಾನೆ. ಹೀಗೆ ಕತ್ತಿನಲ್ಲಿ ಚಿನ್ನದ ಸರ ಹಾಕಿಕೊಂಡು ಹೋಗುವುದು ಸುರಕ್ಷಿತವಲ್ಲ. ಸರ ಕಿತ್ತುಕೊಂಡು ಹೋಗುವವರು ಜಾಸ್ತಿ ಇದ್ದಾರೆ ಎಂದು ಬೆದರಿಸಿದ್ದಾನೆ.

ನಂತರ ಚಿನ್ನದ ಸರವನ್ನು ಪೇಪರ್‌ನಲ್ಲಿ ಸುತ್ತಿಕೊಂಡು ಬ್ಯಾಗ್‌ನಲ್ಲಿಟ್ಟುಕೊಳ್ಳುವಂತೆ ತಾನೇ ಖತರ್ನಾಕ್ ಪರಿಹಾರ ಸೂಚಿಸಿದ್ದಾನೆ. ತಾನೇ ಪೇಪರ್ ತೆಗೆದು ಇದರಲ್ಲಿ ಸರ ಹಾಕುವಂತೆ ತಿಳಿಸಿದ್ದಾನೆ. ಖದೀಮನ ನಾಟಕೀಯ ಕಾಳಜಿಗೆ ಮರುಳಾದ ವಿದ್ಯಾರ್ಥಿ, ತನ್ನ ಕತ್ತಿನಲ್ಲಿದ್ದ 6 ಗ್ರಾಂ ಚಿನ್ನದ ಸರವನ್ನು ತೆಗೆದು, ಖದೀಮನ ಕೈಯಲ್ಲಿದ್ದ ಪೇಪರ್ ಮೇಲೆ ಹಾಕಿದ್ದಾನೆ. ಮಾತನಾಡುತ್ತಲೇ ಸರವನ್ನು ಪೇಪರ್‌ನಲ್ಲಿ ಸುತ್ತಿದ ಖದೀಮ, ಅದನ್ನು ವಿದ್ಯಾರ್ಥಿಯ ಬ್ಯಾಗ್‌ನಲ್ಲಿಟ್ಟು, ಜೋಪಾನವಾಗಿರುವಂತೆ ಹೇಳಿ ಅಲ್ಲಿಂದ ಕಾಲ್ಕಿತ್ತಿದ್ದಾನೆ.

ಸ್ವಲ್ಪ ದೂರ ಹೋದ ವಿದ್ಯಾರ್ಥಿ ಬ್ಯಾಗ್‌ನಲ್ಲಿಟ್ಟಿದ್ದ ಪೇಪರ್ ತೆಗೆದು ನೋಡಿದಾಗ ಅದರೊಳಗೆ ಏನೂ ಇರಲಿಲ್ಲ. ಸಹಾಯ ಮಾಡುವ ನೆಪದಲ್ಲಿ ಖದೀಮ ಚಿನ್ನದ ಸರ ಎಗರಿಸಿರುವುದು ಮನವರಿಕೆಯಾಗಿದೆ. ಈ ಬಗ್ಗೆ ಪೋಷಕರಿಗೆ ಮಾಹಿತಿ ನೀಡಿದ ನಂತರ ಈ ಬಗ್ಗೆ ಪೊಲೀಸರಿಗೆ ದೂರು ನೀಡಿದ್ದಾನೆ. ಈ ಸಂಬಂಧ ದೇವರಾಜ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಖದೀಮನ ಪತ್ತೆಗೆ ಶೋಧ ನಡೆಸಿದ್ದಾರೆ.

ರೈತನ ದೋಚಿದ್ದವರ ಬಂಧನ: ಮಗಳನ್ನು ಆಸ್ಪತ್ರೆಗೆ ದಾಖಲಿಸಿದ್ದ ರೈತರೊಬ್ಬರ ಹಣ ಕಿತ್ತುಕೊಂಡು ಹೋಗಿದ್ದ ಇಬ್ಬರು ಖದೀಮರನ್ನು ಪೊಲೀಸರು ಬಂಧಿಸಿದ್ದಾರೆ. ನಂಜನಗೂಡು ತಾಲೂಕು ಅಹಲ್ಯಾ ಗ್ರಾಮದ ರೈತ ಕಾಳನಿಂಗಪ್ಪ ಜೂ.8ರಂದು ಬೆಳಗ್ಗೆ 8 ಗಂಟೆ ವೇಳೆಯಲ್ಲಿ ಆಸ್ಪತ್ರೆಯಲ್ಲಿದ್ದ ಪುತ್ರಿಗೆ ಉಪಾಹಾರ ತರಲು ಹೋಗುವಾಗ ಹಣ ಎಣಿಸುತ್ತಿದ್ದರು. ಆಗ ಹಿಂದಿನಿಂದ ಇಬ್ಬರು ಖದೀಮರು ಬಂದು 5 ಸಾವಿರ ರೂ. ಹಣ ಕಿತ್ತುಕೊಂಡು ಪರಾರಿಯಾಗಿದ್ದರು. ಈ ಸಂಬಂಧ ಇಬ್ಬರನ್ನು ಬಂಧಿಸಿ, ನ್ಯಾಯಾಧೀಶರ ಮುಂದೆ ಹಾಜರುಪಡಿಸಲಾಗಿ ಅವರನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಮೈಸೂರು ಮಿತ್ರ

ಬುಧವಾರ 12 ಜೂನ್ 2024

ಒಪ್ಪಂದದ ಮೇರೆಗೆ ವೈದ್ಯರ ನೇಮಕಾತಿಗೆ ಸರ್ಕಾರ ಸಿದ್ಧ

ಉನ್ನತ ಶಿಕ್ಷಣ ಸಚಿವ ಎಂ.ಸಿ.ಸುಧಾಕರ್ ಸ್ಪಷ್ಟನೆ



ಆದಿಚುಂಚನಗಿರಿ ವಿಶ್ವವಿದ್ಯಾಲಯದ 4ನೇ ಘಟಿಕೋತ್ಸವವನ್ನು ಡಾ.ನಿರ್ಮಲಾನಂದನಾಥ ಸ್ವಾಮೀಜಿ ಮತ್ತು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಉದ್ಘಾಟಿಸಿದರು.

"25 ವರ್ಷದ ಕಲಿಕೆ ಭವಿಷ್ಯದ 75 ವರ್ಷಗಳ ಸಾರ್ಥಕ ಜೀವನದ ಮೈಲಿಗಲ್ಲುಗಳಾಗುತ್ತವೆ ಎಂಬುದರಲ್ಲಿ ಸಂದೇಹವಿಲ್ಲ. ಭಾರತದಲ್ಲಿ ಜನಸಂಖ್ಯೆ ಜೊತೆಗೆ ವಿದ್ಯಾವಂತರ ಸಂಖ್ಯೆಯು ಗಣನೀಯ ಪ್ರಮಾಣದಲ್ಲಿ ಹೆಚ್ಚಾಗುತ್ತಿದೆ. ಹೀಗಾಗಿ ಉದ್ಯೋಗಾವಕಾಶಗಳ ಹುಡುಕಾಟ ಇಲ್ಲಿಂದಲೇ ಆರಂಭಿಸಬೇಕಿದೆ. 35 ಕೋಟಿ ಜನಸಂಖ್ಯೆ ಇರುವ ಅಮೆರಿಕದಲ್ಲಿ 6 ಲಕ್ಷ ಪೇಟೆಂಟ್‌ಗಳಿವೆ. ಜನಸಂಖ್ಯೆಯಲ್ಲಿ ಪ್ರಥಮ ಸ್ಥಾನದಲ್ಲಿರುವ ಚೀನಾದಲ್ಲಿ 16 ಲಕ್ಷ ಪೇಟೆಂಟ್‌ಗಳಿವೆ. ಆದರೆ 148 ಕೋಟಿ ಜನಸಂಖ್ಯೆ ಇರುವ ಭಾರತದಲ್ಲಿ 66 ಸಾವಿರ ಪೇಟೆಂಟ್‌ಗಳಿವೆ. ಬರೀ ವಿದ್ಯಾವಂತರು ಹೆಚ್ಚಾದರೆ ಸಾಲದು ಅವರ ಶೈಕ್ಷಣಿಕ ಸಾಧನೆ, ವೈಜ್ಞಾನಿಕ ಸಂಶೋಧನೆಗಳ ಮೂಲಕ ಪೇಟೆಂಟ್‌ಗಳ ಸಂಖ್ಯೆ ಹೆಚ್ಚಾಗಬೇಕಿದೆ ಯುವಕರು ಈ ನಿಟ್ಟಿನಲ್ಲಿ ಗಮನಹರಿಸಬೇಕಿದೆ.

- ಡಾ.ನಿರ್ಮಲಾನಂದನಾಥ ಸ್ವಾಮೀಜಿ, ಆದಿಚುಂಚನಗಿರಿ ಪೀಠಾಧ್ಯಕ್ಷರು

ಮಂಡ್ಯ, ಜೂ.11– ರಾಜ್ಯ ಸರ್ಕಾರ ವೈದ್ಯರನ್ನು ಒಪ್ಪಂದದ ಮೇರೆಗೆ ನೇಮಕ ಮಾಡಿಕೊಳ್ಳಲು ಸಿದ್ಧವಿದೆ. ಆದರೆ ನೇಮಕಗೊಂಡ ವೈದ್ಯರು ದೂರದ ಊರುಗಳಲ್ಲಿ ಕರ್ತವ್ಯ ನಿರ್ವಹಿಸಲು ಸನ್ನದ್ಧರಾಗಬೇಕು ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದರು.

ನಾಗಮಂಗಲ ತಾಲೂಕಿನ ಬಿ.ಜಿ.ನಗರದಲ್ಲಿ ನಡೆದ ಆದಿಚುಂಚನಗಿರಿ ವಿಶ್ವವಿದ್ಯಾಲಯದ 4ನೇ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೃತಕ ಬುದ್ಧಿಮತ್ತೆಯಿಂದ ಸೃಷ್ಟಿಯಾಗುವ ನಿರುದ್ಯೋಗ ಸಮಸ್ಯೆ ನಿವಾರಿಸುವುದೇ ಮುಂದಿನ ಸವಾಲಾಗಿದೆ. ಇದಕ್ಕೆ ವಿದ್ಯಾವಂತ ಯುವಕರ ಸಹಕಾರ ಬೇಕಿದ್ದು, ಅಧಿಕಾರಿಗಳು ಮತ್ತು ಶಿಕ್ಷಣ ತಜ್ಞರ ಜೊತೆಗೆ ಯುವಶಕ್ತಿ ಬೆಂಬಲವಿದ್ದರೆ ಉತ್ತಮವಾದುದನ್ನು ಸಾಧಿಸಬಹುದು ಎಂದರು. ಪ್ರತಿಯೊಬ್ಬ ವಿದ್ಯಾರ್ಥಿಯ ಪ್ರಮುಖ ಘಟ್ಟ ಈ ಘಟಿಕೋತ್ಸವ. ಇದು ಭವಿಷ್ಯದ ಬುನಾದಿ. ನಾನು ಮೂಲತಃ ಪ್ರಾಧ್ಯಾಪಕನಾಗಿ ಶಿಕ್ಷಣ ಕ್ಷೇತ್ರದ ಏರಿಳಿತಗಳನ್ನು ಕಂಡವನು. ಕಠಿಣ ಪರಿಶ್ರಮದಿಂದ ಕಲಿತವನು ಮಾತ್ರ ಇಂದು ಚಿನ್ನದ ಪದಕ, ರ್‍ಯಾಂಕ್ ಇತ್ಯಾದಿ ಸನ್ಮಾನಕ್ಕೆ ಭಾಜನನಾಗುತ್ತಾನೆಯೇ ಹೊರತು ಸೋಮಾರಿಗಲ್ಲ ಎಂಬುದನ್ನು ಹತ್ತಿರದಿಂದ ಬಲ್ಲವನು. ಜೀವನ ಎಂದರೇನು ಎಂದು ತಿಳಿಯುವ ಪ್ರಮುಖ ಕ್ಷಣ ಇದಾಗಿದೆ ಎಂದು ಅಭಿಪ್ರಾಯಪಟ್ಟರು.

ಕೌಶಲ್ಯವರ್ಧಿತ ಶಿಕ್ಷಣ ಮಾತ್ರ ಮನುಷ್ಯನನ್ನು ಬಹು ಎತ್ತರಕ್ಕೆ ಕೊಂಡಯ್ಯಬಲ್ಲದು ಎಂದ ಅವರು, ವಿದೇಶದಲ್ಲಿ ತಮ್ಮ ಮಗನ ಘಟಿಕೋತ್ಸವ ಸಮಾರಂಭದಲ್ಲಿ ಪೋಷಕನಾಗಿ ಭಾಗವಹಿಸಿದ ಸುಂದರ ಅನುಭವವನ್ನು ಸ್ಮರಿಸಿಕೊಂಡರು. ತಂದೆ ತಾಯಿಯರ ಎದುರು ವಿದ್ವಜ್ಜನರ ಅಮೃತ ಹಸ್ತದಿಂದ ಪಡೆಯುವ ಈ ಪದವಿ ಪಾರಿತೋಷಕ ಅಮೃತಕ್ಕೆ ಸಮಾನ ಎಂದರು.

ಆದಿಚುಂಚನಗಿರಿ ಪೀಠಾಧ್ಯಕ್ಷರೂ ಆದ ಆದಿಚುಂಚನಗಿರಿ ವಿವಿ ಕುಲಪತಿ ಡಾ.ನಿರ್ಮಲಾನಂದನಾಥ ಸ್ವಾಮೀಜಿ ಮಾತನಾಡಿ, ಕೃತಕ ಬುದ್ಧಿಮತ್ತೆಯೇ ಪ್ರಚಲಿತವಿರುವ ಪ್ರಸ್ತುತ ಯುಗದಲ್ಲಿ ಔಪಚಾರಿಕ ಶಿಕ್ಷಣದ ಜೊತೆಗೆ ನೂತನ ತಂತ್ರಜ್ಞಾನ ಆಧಾರಿತ ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡುವುದು ಮುಖ್ಯವಾಗಿದೆ. ಡಾ.ಬಾಲಗಂಗಾಧರನಾಥ ಸ್ವಾಮೀಜಿ ನೀಡಿದ 'ಸಾ ವಿದ್ಯಾಯಾ ವಿಮುಕ್ತಯೇ' ಎಂಬ ಧ್ಯೇಯ ವಾಕ್ಯದೊಂದಿಗೆ ನಡೆಯುತ್ತಿರುವ ಈ ವಿಶ್ವವಿದ್ಯಾಲಯವು ಲಕ್ಷಾಂತರ ವಿದ್ಯಾರ್ಥಿಗಳ ಜ್ಞಾನ, ಕಲಿಕೆಯ ಕೇಂದ್ರವಾಗಿದೆ. ಆಧ್ಯಾತ್ಮಿಕ ಸಂಸ್ಕಾರದೊಂದಿಗೆ ಕಲಿತ ಜ್ಞಾನ ಚಿಗುರುಗಳು ದೇಶಾದ್ಯಂತ ಕಲಿಕಾ ಸೌರಭವನ್ನು ಹಂಚುತ್ತಿರುವುದು ಸಂತೋಷದ ವಿಷಯ ಎಂದರು.

ಗುರುಕುಲ ಪದ್ಧತಿ ದೂರವಾಗಿ ರೋಬೋಟ್ ಯುಗ ನಮ್ಮ ಮುಂದಿದೆ. ಅಧ್ಯಾಪಕರ ಮಾರ್ಗದರ್ಶನದ ಜೊತೆಗೆ ಮಾತಾ–ಪಿತೃಗಳ ಆಶೀರ್ವಾದದಿಂದ ಪಡೆದ ಶಿಕ್ಷಣ–ಜ್ಞಾನದಿಂದ ಹೊಸ ಸಮಾಜ ಕಟ್ಟಿ, ದೇಶದ ಉತ್ತಮ ಪ್ರಜೆಗಳಾಗಿ ಎಂದು ಆಶೀರ್ವದಿಸಿದರು.

ವೇದಿಕೆಯಲ್ಲಿ ಬಾಹ್ಯಾಕಾಶ ಆಯೋಗದ ಸದಸ್ಯ ಹಾಗೂ ಇಸ್ರೋ ಮಾಜಿ ಅಧ್ಯಕ್ಷ ಪದ್ಮಶ್ರೀ ಡಾ.ಕಿರಣ್ ಕುಮಾರ್, ನಿವೃತ್ತ ಐಎಎಸ್ ಅಧಿಕಾರಿಗಳಾದ ಡಾ.ರಾಜಕುಮಾರ್ ಖತ್ರಿ, ಡಾ.ಸತೀಶ್ ಕುಮಾರ್ ಭಂಡಾರಿ, ಶ್ರೀಮಠದ ಟ್ರಸ್ಟಿ ದೇವರಾಜ್, ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಡಾ.ಎನ್.ಎಸ್.ರಾಮೇಗೌಡ, ಉಪಕುಲಪತಿ ಡಾ.ಎಂ.ಎಂ.ಶೇಖರ್, ಸ್ಥಾಪಕ ಕುಲಪತಿ ಡಾ.ಚಂದ್ರಶೇಖರ ಶೆಟ್ಟಿ, ಕುಲಸಚಿವರು, ವಿಶ್ವವಿದ್ಯಾಲಯದ ವಿವಿಧ ವಿಭಾಗದ ಮುಖ್ಯಸ್ಥರು, ಪ್ರಾಂಶುಪಾಲರು ಹಾಗೂ ಇತರರಿದ್ದರು.

ನಾಲೆಗಳಲ್ಲಿ ಹೂಳು ತೆಗೆಸುವಂತೆ ರೈತರ ಪ್ರತಿಭಟನೆ



ಹೂಳು ತೆಗೆಸುವಂತೆ ಒತ್ತಾಯಿಸಿ ರೈತರು ಪ್ರತಿಭಟಿಸಿದರು.

ಭಾರತೀನಗರ, ಜೂ.11– ವಿಸಿ ನಾಲೆಗಳಲ್ಲಿ ಹೂಳು ತೆಗೆಸಿ, ರೈತರಿಗೆ ಸಮರ್ಪಕ ನೀರು ಪೂರೈಸುವಂತೆ ಆಗ್ರಹಿಸಿ ವಿವಿಧ ಗ್ರಾಮಗಳ ಮುಖಂಡರು ಭಾರತೀನಗರದಲ್ಲಿ ಪ್ರತಿಭಟನೆ ನಡೆಸಿದರು.

ಇಲ್ಲಿನ ಕಾವೇರಿ ನೀರಾವರಿ ನಿಗಮದ ಕಚೇರಿ ಎದುರು ಜಮಾಯಿಸಿದ ಕ್ಯಾತಘಟ್ಟ, ಅಣ್ಣೂರು, ಚಿಕ್ಕರಸಿನಕೆರೆ ಗ್ರಾಪಂ ವ್ಯಾಪ್ತಿಯ ರೈತರು, ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಸೂಳೆಕೆರೆಯ ಉತ್ತರ ಮತ್ತು ದಕ್ಷಿಣ ನಾಲೆಗಳಲ್ಲಿ ಹೂಳು ತುಂಬಿಕೊಂಡು ಸರಾಗವಾಗಿ ನೀರು ಹರಿಯುತ್ತಿಲ್ಲ. ಹೀಗಾಗಿ ಹೂಳು ತೆಗೆಸುವಂತೆ ಹಲವು ಬಾರಿ ಅಧಿಕಾರಿಗಳ ಗಮನಕ್ಕೆ ತಂದರೂ ನಿರ್ಲಕ್ಷಿಸಿದ್ದಾರೆ ಎಂದು ರೈತರು ಆರೋಪಿಸಿದರು.

ಸೂಳೆಕೆರೆ ನಾಲೆಗೆ ನೀರು ಬಿಡದೆ ಕೆರೆಗೆ ಬರುವ ನೀರನ್ನು ಹೆಬ್ಬಳ್ಳ ಚೆನ್ನಯ್ಯ ನಾಲೆಗೆ ಹರಿಯಬಿಟ್ಟಿದ್ದಾರೆ. ನಾಲೆಯಲ್ಲಿ ಹೂಳು ತೆಗೆಸಿದರೆ ನೀರು ಬಿಡಬೇಕಾಗುತ್ತದೆ ಎನ್ನುವ ಕಾರಣಕ್ಕೆ ಹೂಳು ತೆಗೆಸುತ್ತಿಲ್ಲ. ಇದರಿಂದ ಜನ ಜಾನುವಾರುಗಳಿಗೆ ಕುಡಿಯುವ ನೀರಿಗೆ ತೊಂದರೆಯಾಗಿದೆ. ರೈತರು ಸೂಳೆಕೆರೆ ಅಚ್ಚುಕಟ್ಟು ಪ್ರದೇಶದಲ್ಲಿ ಬೆಳೆದಿರುವ ಬೆಳೆಗಳು ನೀರಿಲ್ಲದೆ ಒಣಗುತ್ತಿವೆ ಎಂದರು.

ಈ ಕೂಡಲೇ ಸೂಳೆಕೆರೆಯ ಎರಡೂ ನಾಲೆಗಳಲ್ಲಿ ಹೂಳು ತೆಗೆಸಿ ನಾಲೆಗಳಿಗೆ ನೀರು ಹರಿಸಬೇಕು. ಇಲ್ಲದಿದ್ದಲ್ಲಿ ಮುಂದಿನ ದಿನಗಳಲ್ಲಿ ಉಗ್ರ ಪ್ರತಿಭಟನೆ ನಡೆಸಲಾಗುತ್ತದೆ ಎಂದು ಎಚ್ಚರಿಕೆ ನೀಡಿ ಕಾವೇರಿ ನೀರಾವರಿ ನಿಗಮದ ಸಹಾಯಕ ಅಭಿಯಂತರ ಅವಿನಾಶ್ ಅವರಿಗೆ ಮನವಿ ಸಲ್ಲಿಸಿದರು. ಪ್ರತಿಭಟನೆಯಲ್ಲಿ ಮುಖಂಡರಾದ ಗಿರೀಶ್, ರವಿಕುಮಾರ್, ವಿಜಿಕುಮಾರ್, ಅಕ್ಕಿಸ್ವಾಮಿ, ತ್ರಿಶೂಲ್, ಜಯಸ್ವಾಮಿ, ಪ್ರಸನ್ನ, ಎ.ಪಿ.ಚಂದ್ರ ಸಿದ್ದರಾಜು, ಅಪ್ಪಾಜಿ, ಮಹೇಶ್, ಗ್ರಾಪಂ ಅಧ್ಯಕ್ಷ ಸಿದ್ದರಾಜು, ಸದಸ್ಯ ರಾಜೇಶ್, ಶಿವನಂಜಪ್ಪ ಸೇರಿದಂತೆ ಮತ್ತಿತರರಿದ್ದರು.

ಕೆ.ಆರ್.ಪೇಟೆ ಆಸ್ಪತ್ರೆಗೆ ಡಿಹೆಚ್‌ಓ ದಿಢೀರ್ ಭೇಟಿ, ಪರಿಶೀಲನೆ



ಕೆ.ಆರ್.ಪೇಟೆ ಆಸ್ಪತ್ರೆಗೆ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿ ಡಾ.ಮೋಹನ್ ದಿಢೀರ್ ಭೇಟಿ ನೀಡಿ ಪರಿಶೀಲಿಸಿದರು.

ಕೆ.ಆರ್.ಪೇಟೆ, ಜೂ.11– ಪಟ್ಟಣದ ದುಂಡಶೆಟ್ಟಿ ಲಕ್ಷ್ಮಮ್ಮ ಸ್ಮಾರಕ ಸಾರ್ವಜನಿಕ ಆಸ್ಪತ್ರೆಗೆ ಮಂಡ್ಯ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿ ಡಾ.ಮೋಹನ್ ಮಂಗಳವಾರ ದಿಢೀರ್ ಭೇಟಿ ನೀಡಿ, ರೋಗಿಗಳ ಆರೋಗ್ಯ ವಿಚಾರಿಸಿ, ವಿವಿಧ ವಾರ್ಡ್‌ಗಳಲ್ಲಿ ಸಂಚರಿಸಿ ಪರಿಶೀಲಿಸಿದರು.

"ವೈದ್ಯೋ ನಾರಾಯಣೋ ಹರಿ" ಎಂಬ ನಾಣ್ಣುಡಿಯಂತೆ ಸರ್ಕಾರಿ ಆಸ್ಪತ್ರೆಗೆ ಬರುವ ರೋಗಿಗಳು ಬಡವರೇ ಆಗಿರುವುದರಿಂದ ವೈದ್ಯರು ರೋಗಿಗಳಿಗೆ ನಗುಮೊಗದಿಂದ ಗುಣಮಟ್ಟದ ಚಿಕಿತ್ಸೆ ನೀಡಬೇಕು. ಸರ್ಕಾರವೇ ಉಚಿತವಾಗಿ ನೀಡುವ ಔಷಧಗಳು ಹಾಗೂ ಮಾತ್ರೆಗಳನ್ನು ನೀಡಿ ಶೀಘ್ರ ಗುಣಮುಖರಾಗುವಂತೆ ಹಾರೈಸಿ ಕಳುಹಿಸಬೇಕು ಎಂದ ಡಾ.ಮೋಹನ್ ಆಸ್ಪತ್ರೆಯ ವಾತಾವರಣ ಹಾಗೂ ವಾರ್ಡ್‌ಗಳನ್ನು ಸ್ವಚ್ಛತೆಯಿಂದ ಇಟ್ಟುಕೊಂಡಿರುವುದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಆಸ್ಪತ್ರೆ ಆಡಳಿತ ವೈದ್ಯಾಧಿಕಾರಿ ಡಾ.ಶಶಿಕುಮಾರ್, ತಾಲೂಕು ಆರೋಗ್ಯಾಧಿಕಾರಿ ಡಾ.ಅಜಿತ್ ಸೇರಿದಂತೆ ಆಸ್ಪತ್ರೆ ತಜ್ಞ ವೈದ್ಯರು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು. ಇದೇ ವೇಳೆ ಆಸ್ಪತ್ರೆಗೆ ದಾಖಲಾಗಿದ್ದ ರೋಗಿಗಳು ವೈದ್ಯರು ಹಾಗೂ ಶುಶ್ರೂಶಕರ ಸೇವೆ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ತಾಯಿ ಮಗು ಆಸ್ಪತ್ರೆ ಕಟ್ಟಡ ಕಾಮಗಾರಿ ಪರಿಶೀಲನೆ: ಪಟ್ಟಣದ ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ 28 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ತಾಯಿ–ಮಗು ಹೈಟೆಕ್ ಆಸ್ಪತ್ರೆ ಕಟ್ಟಡ ಕಾಮಗಾರಿ ವೀಕ್ಷಿಸಿದ ಡಿಹೆಚ್‌ಓ ಡಾ.ಕೆ.ಮೋಹನ್ ಕಾಮಗಾರಿಯಲ್ಲಿ ಗುಣಮಟ್ಟ ಕಾಪಾಡಿಕೊಳ್ಳುವ ಜೊತೆಗೆ ಆದಷ್ಟು ಶೀಘ್ರ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ಗುತ್ತಿಗೆದಾರರಿಗೆ ನಿರ್ದೇಶನ ನೀಡಿದರು. ಆಸ್ಪತ್ರೆ ಆವರಣ ಹಾಗೂ ವಾರ್ಡ್‌ಗಳಲ್ಲಿ ಸ್ವಚ್ಛತೆ ಕಾಪಾಡಿರುವ ಬಗ್ಗೆ ಆಸ್ಪತ್ರೆ ಆಡಳಿತ ವೈದ್ಯಾಧಿಕಾರಿ ಡಾ.ಶಶಿಕುಮಾರ್ ಅವರನ್ನು ಡಿಹೆಚ್‌ಓ ಅಭಿನಂದಿಸಿದರು.

ಸ್ಕ್ಯಾನಿಂಗ್ ಸೆಂಟರ್‌ಗಳ ಮೇಲೆ ಹದ್ದಿನ ಕಣ್ಣಿಡಿ: ಹೆಣ್ಣು ಭ್ರೂಣ ಹತ್ಯೆ ಪ್ರಕರಣ ಜಿಲ್ಲೆಯಲ್ಲಿ ಮರುಕಳಿಸುತ್ತಿರುವ ಹಿನ್ನೆಲೆಯಲ್ಲಿ ತಾಲೂಕು ಆರೋಗ್ಯಾಧಿಕಾರಿಗಳು ಹಾಗೂ ಆರೋಗ್ಯ ಪರಿವೀಕ್ಷಕರು ಪಟ್ಟಣ ಸೇರಿದಂತೆ ತಾಲೂಕಿನಲ್ಲಿರುವ ಸ್ಕ್ಯಾನಿಂಗ್ ಕೇಂದ್ರಗಳ ಮೇಲೆ ದಿಢೀರ್ ದಾಳಿ ನಡೆಸಿ ಪರಿಶೀಲಿಸುವ ಜೊತೆಗೆ ಹದ್ದಿನ ಕಣ್ಣಿಟ್ಟು ಕಾನೂನು ಬಾಹಿರ ಕೃತ್ಯಗಳು ನಡೆಯದಂತೆ ಎಚ್ಚರ ವಹಿಸಬೇಕು ಎಂದರು.

ನಿಯಂತ್ರಣ ತಪ್ಪಿ ಬಿದ್ದ ಬೈಕ್: ಸವಾರ ಸಾವು

ಶ್ರೀರಂಗಪಟ್ಟಣ, ಜೂ.11– ನಿಯಂತ್ರಣ ತಪ್ಪಿ ಬೈಕ್ ಹಳ್ಳಕ್ಕೆ ಬಿದ್ದ ಪರಿಣಾಮ ಸವಾರ ಸಾವನ್ನಪ್ಪಿರುವ ಘಟನೆ ತಾಲೂಕಿನ ಮರಳಾಗಾಲ ಗ್ರಾಮದ ಬಳಿ ಸೋಮವಾರ ರಾತ್ರಿ ನಡೆದಿದೆ. ತಾಲೂಕಿನ ಅರಕೆರೆ ಗ್ರಾಮದ ಮಧು (32) ಸಾವನ್ನಪ್ಪಿದವರು. ಈತ ಬೈಕ್‌ನಲ್ಲಿ ಸ್ವಗ್ರಾಮಕ್ಕೆ ತೆರಳುತ್ತಿದ್ದ ವೇಳೆ ಶ್ರೀರಂಗಪಟ್ಟಣ ಹಾಗೂ ಬನ್ನೂರು ರಸ್ತೆಯ ಮರಳಾಗಾಲ ಗ್ರಾಮದ ಶ್ರೀಆಂಜನೇಯಸ್ವಾಮಿ ದೇವಸ್ಥಾನದ ಬಳಿಯ ತಿರುವಿನಲ್ಲಿ ಬೈಕ್ ನಿಯಂತ್ರಣ ತಪ್ಪಿ ಹಳ್ಳಕ್ಕೆ ಉರುಳಿದ ಪರಿಣಾಮ ತೀವ್ರ ಗಾಯಗೊಂಡ ಮಧು ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ. ಈ ಸಂಬಂಧ ಶ್ರೀರಂಗಪಟ್ಟಣ ಗ್ರಾಮಾಂತರ ಪೊಲೀಸರು ಸ್ಥಳಕ್ಕಾಗಮಿಸಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಮನ್‌ಮುಲ್ ನಿರ್ದೇಶಕರ ವಿರುದ್ಧ 'ಕೈ' ಷಡ್ಯಂತ್ರ: ಪ್ರತಿಭಟನೆ

ಮಂಡ್ಯ, ಜೂ.11– ಮಂಡ್ಯ ಜಿಲ್ಲಾ ಸಹಕಾರ ಯೂನಿಯನ್ ಸಹಾಯಕ ಉಪ ನಿಬಂಧಕರ ಜೊತೆಗೂಡಿ ಕಾಂಗ್ರೆಸ್ ನಾಯಕರು ಷಡ್ಯಂತ್ರ ರೂಪಿಸಿ ಮನ್‌ಮುಲ್ ನಿರ್ದೇಶಕಿ ರೂಪ ಅವರನ್ನು ನಿರ್ದೇಶಕ ಸ್ಥಾನದಿಂದ ವಜಾಗೊಳಿಸಲು ಮುಂದಾಗಿದ್ದಾರೆ ಎಂದು ಆರೋಪಿಸಿ ನಗರದಲ್ಲಿ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.


ನಗರದ ಜಿಲ್ಲಾ ಸಹಕಾರ ಒಕ್ಕೂಟದ ಕಚೇರಿ ಎದುರು ಪಕ್ಷದ ಕಾರ್ಯಕರ್ತರು ಪ್ರತಿಭಟಿಸಿ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಹಾಗೂ ಒಕ್ಕೂಟದ ಸಹಾಯಕ ಉಪ ನಿಬಂಧಕಿ ಎ.ಆರ್.ಅನಿತಾ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಮನ್‌ಮುಲ್ ನಿರ್ದೇಶಕರ ಸ್ಥಾನಕ್ಕೆ ಮದ್ದೂರು ತಾಲೂಕಿನಿಂದ ಬಿಜೆಪಿ ಪಕ್ಷದಿಂದ ರೂಪಾ ಆಯ್ಕೆಯಾಗಿದ್ದು, ಆದರೆ ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಪಕ್ಷ ಅವರಿಗೆ ರಾಜಕೀಯವಾಗಿ ಕಿರುಕುಳ ನೀಡುತ್ತಿದೆ. ಸ್ಥಳೀಯ ಶಾಸಕರು ಹಾಗೂ ಸಚಿವರು ಷಡ್ಯಂತ್ರ ರೂಪಿಸಿ ನಿರ್ದೇಶಕ ಸ್ಥಾನದಿಂದ ವಜಾಗೊಳಿಸಲು ಮುಂದಾಗಿದ್ದಾರೆ ಎಂದು ಆರೋಪಿಸಿದರು.

ಕಾಂಗ್ರೆಸ್ ನಾಯಕರ ಜೊತೆಗೂಡಿರುವ ಸಹಕಾರ ಒಕ್ಕೂಟದ ಸಹಾಯಕ ಉಪನಿಬಂಧಕಿ ಅನಿತಾ ಏಕಪಕ್ಷೀಯವಾಗಿ ವರ್ತಿಸುತ್ತಿದ್ದಾರೆ. ನಿರ್ದೇಶಕಿ ರೂಪಾ ಅವರ ವಕಾಲತ್ತು ಸ್ವೀಕಾರ ಮಾಡಿಲ್ಲ. ಬದಲಾಗಿ ರಾಜಕೀಯ ಪ್ರಭಾವಕ್ಕೆ ಒಳಗಾಗಿದ್ದಾರೆ. ಈಗಾಗಲೇ ಸುಪ್ರೀಂಕೋರ್ಟ್‌ನಲ್ಲಿ ವಕಾಲತ್ತು ಇದ್ದರೂ ನಿರ್ದೇಶಕ ಸ್ಥಾನದಿಂದ ವಜಾಗೊಳಿಸಲು ಪಿತೂರಿ ನಡೆಸಲಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಮನ್‌ಮುಲ್ ನಿರ್ದೇಶಕರ ಸ್ಥಾನದಿಂದ ರೂಪಾ ಅವರನ್ನು ವಜಾ ಮಾಡಬಾರದು. ರಾಜಕೀಯ ಪ್ರಭಾವಕ್ಕೆ ಒಳಗಾಗಿ ಏಕ ಪಕ್ಷೀಯವಾಗಿ ವರ್ತಿಸುತ್ತಿರುವ ಜಿಲ್ಲಾ ಸಹಕಾರ ಒಕ್ಕೂಟದ ಸಹಾಯಕ ಉಪ ನಿಬಂಧಕಿ ಅನಿತಾ ಅವರನ್ನು ಸೇವೆಯಿಂದ ವಜಾಗೊಳಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಬಿಜೆಪಿ ಮುಖಂಡರಾದ ಅಶೋಕ್ ಜಯರಾಮ್, ರಮೇಶ್, ಶಿವಕುಮಾರ್ ಆರಾಧ್ಯ, ಸಿ.ಟಿ.ಮಂಜುನಾಥ್, ಶಿವು ಸೇರಿದಂತೆ ಹಲವರಿದ್ದರು.

ಕೇಂದ್ರ ಸಚಿವ ಹೆಚ್‌ಡಿಕೆಗೆ ಅಭಿನಂದನೆ



ನೂತನ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ನವದೆಹಲಿಯ ಕಚೇರಿಯಲ್ಲಿ ಜೆಡಿಎಸ್ ಮುಖಂಡರು ಅಭಿನಂದಿಸಿದರು. ಈ ವೇಳೆ ಮಾಜಿ ಸಚಿವ ಸಾ.ರಾ.ಮಹೇಶ್, ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಮುಡಾ ನಿವೃತ್ತ ಇಂಜಿನಿಯರ್ ರವಿ, ಉದ್ಯಮಿ ಸುಧಾಕರ್ ಶೆಟ್ಟಿ ಇದ್ದರು.

ಕೇಂದ್ರ 19 ಸಚಿವರ ವಿರುದ್ಧ ಗಂಭೀರ ಅಪರಾಧ ಪ್ರಕರಣ

ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರದ 28 ಸಚಿವರ ವಿರುದ್ಧ ಅಪರಾಧ ಪ್ರಕರಣಗಳಿವೆ. ಇವರಲ್ಲಿ 19 ಸಚಿವರು ಕೊಲೆಯತ್ನ, ಮಹಿಳೆಯರ ವಿರುದ್ಧ ಅಪರಾಧ ಹಾಗೂ ದ್ವೇಷ ಭಾಷಣ ದಂತಹ ಗಂಭೀರ ಆರೋಪಗಳನ್ನು ಎದುರಿಸುತ್ತಿದ್ದಾರೆ ಎಂದು ಅಸೋಸಿಯೇಷನ್ ಫಾರ್ ಡೆಮಾಕ್ರಟಿಕ್ ರಿಫಾರ್ಮ್ಸ್ (ಎಡಿಆರ್) ತಿಳಿಸಿದೆ.

ನೂತನ ಸಚಿವರ ಅಪರಾಧ ಹಿನ್ನೆಲೆ, ಹಣಕಾಸು, ಶಿಕ್ಷಣ, ಲಿಂಗ ಹಾಗೂ ಇತರ ವಿಷಯಗಳ ಬಗ್ಗೆ ವಿಶ್ಲೇಷಣೆ ನಡೆಸಿ ಎಡಿಆರ್ ಮಂಗಳವಾರ ವರದಿ ಪ್ರಕಟಿಸಿದೆ. ಬಂದರು, ಒಳನಾಡು ಹಾಗೂ ಜಲಸಾರಿಗೆ ರಾಜ್ಯ ಸಚಿವ ಶಂತನು ಠಾಕೂರ್, ಶಿಕ್ಷಣ ಹಾಗೂ ಈಶಾನ್ಯ ಪ್ರದೇಶ ಅಭಿವೃದ್ಧಿ ರಾಜ್ಯ ಸಚಿವ ಸುಕಂತ ಮಜುಂದಾರ್ ವಿರುದ್ಧ ಕೊಲೆ ಯತ್ನಕ್ಕೆ ಸಂಬಂಧಿಸಿದ ಪ್ರಕರಣಗಳಿವೆ.

ಗೃಹ ಖಾತೆ ರಾಜ್ಯ ಸಚಿವ ಬಂಡಿ ಸಂಜಯ ಕುಮಾರ್, ಠಾಕೂರ್, ಮಜುಂದಾರ್, ಪ್ರವಾಸೋದ್ಯಮ ಖಾತೆ ರಾಜ್ಯ ಸಚಿವ ಸುರೇಶ್ ಗೋಪಿ ಹಾಗೂ ಬುಡಕಟ್ಟು ವ್ಯವಹಾರಗಳ ಸಚಿವ ಜುಯಲ್ ಓರಮ್ ಮೇಲೆ ಮಹಿಳೆಯರ ವಿರುದ್ಧದ ಅಪರಾಧಗಳಿಗೆ ಸಂಬಂಧಿಸಿದ ಪ್ರಕರಣಗಳು ದಾಖಲಾಗಿವೆ ಕೇಂದ್ರ ಸಂಪುಟದಲ್ಲಿರುವ ಶೇ.66ರಷ್ಟು ಸಚಿವರು (46 ಮಂದಿ) 51ರಿಂದ 70 ವರ್ಷಗಳ ನಡುವಿನವರು. 71ರಿಂದ 80 ವರ್ಷ ನಡುವಿನ ಎಂಟು ಮಂತ್ರಿಗಳಿದ್ದಾರೆ ಶೇ.24ರಷ್ಟು ಸಚಿವರು 31ರಿಂದ 50 ವರ್ಷ ನಡುವಿನವರು ಎಂದು ಎಡಿಆರ್ ತಿಳಿಸಿದೆ.

ಸರಾಸರಿ ಆಸ್ತಿ 107 ಕೋಟಿ: ಹೊಸ ಮಂತ್ರಿ ಪರಿಷತ್ತಿನಲ್ಲಿ 70 ಸಚಿವರು (ಶೇ 99) ಕೋಟ್ಯಾಧಿಪತಿಗಳು. ಅವರ ಸರಾಸರಿ ಆಸ್ತಿ 107 ಕೋಟಿ. ಗ್ರಾಮೀಣಾಭಿವೃದ್ಧಿ ಖಾತೆಯ ರಾಜ್ಯ ಸಚಿವ ಚಂದ್ರಶೇಖರ್ ಪೆಮ್ಮಸಾನಿ 5,705 ಕೋಟಿ ಆಸ್ತಿ ಹೊಂದಿದ್ದಾರೆ. ನಂತರದ ಸ್ಥಾನಗಳಲ್ಲಿ ಸಂಪರ್ಕ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ (424 ಕೋಟಿ) ಹಾಗೂ ಬೃಹತ್ ಕೈಗಾರಿಕೆ ಸಚಿವ ಎಚ್.ಡಿ. ಕುಮಾರಸ್ವಾಮಿ (217 ಕೋಟಿ) ಇದ್ದಾರೆ ಎಂದು ಎಡಿಆರ್ ವರದಿ ತಿಳಿಸಿದೆ.

ಜಲಶಕ್ತಿ, ರೈಲ್ವೆ ಖಾತೆ ಸಚಿವರಾಗಿ ಅಧಿಕಾರ ಸ್ವೀಕರಿಸಿದ ವಿ.ಸೋಮಣ್ಣ





ಮಂಗಳವಾರ ಅಧಿಕಾರ ಸ್ವೀಕರಿಸಿದ ಜಲಶಕ್ತಿ ಹಾಗೂ ರೇಲ್ವೇ ಸಚಿವ ವಿ. ಸೋಮಣ್ಣ ಅವರನ್ನು ಮಾಜಿ ಸಂಸದ ಪ್ರತಾಪ್‌ಸಿಂಹ, ಶಾಸಕ ಶ್ರೀವತ್ಸ, ಮುಖಂಡರಾದ ಸಿದ್ದರಾಜು, ಮೈ.ವಿ. ರವಿಶಂಕರ್, ಮೋಹನ್ ಇತರರು ಅಭಿನಂದಿಸಿದರು.

ಬೆಂಗಳೂರು: ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರದಲ್ಲಿ ಕ್ಯಾಬಿನೆಟ್ ದರ್ಜೆ ರಾಜ್ಯ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಿದ ಕೇಂದ್ರ ಸಚಿವ ವಿ.ಸೋಮಣ್ಣ, ಮಂಗಳ ವಾರ ಅಧಿಕಾರ ವಹಿಸಿಕೊಂಡರು.

ಜಲಶಕ್ತಿ ಮತ್ತು ರೈಲ್ವೆ ಖಾತೆ (ರಾಜ್ಯ ದರ್ಜೆ) ಹೊಣೆ ಹೊತ್ತಿರುವ ಸೋಮಣ್ಣ, ಜಗದ್ಗುರು ಬಸವಣ್ಣನವರ 'ಕಾಯಕವೇ ಕೈಲಾಸ' ನುಡಿಮುತ್ತಿನಂತೆ, ನನ್ನ ಪೂಜ್ಯರಾದ ಶ್ರೀ ಶಿವಕುಮಾರ ಮಹಾಸ್ವಾಮೀಜಿಗಳವರು, ಶ್ರೀ ಬಾಲಗಂಗಾಧರನಾಥ ಮಹಾಸ್ವಾಮೀಜಿಗಳವರ ಆಶೀರ್ವಾದದೊಂದಿಗೆ, ದೆಹಲಿಯ ರೈಲ್ವೆ ಇಲಾಖೆಯ ಕೇಂದ್ರ ಕಚೇರಿಯಲ್ಲಿ ಅಧಿಕಾರದ ಜವಾಬ್ದಾರಿ ವಹಿಸಿಕೊಳ್ಳಲಾಯಿತು ಎಂದು ತಮ್ಮ ಎಕ್ಸ್ ಖಾತೆಯಲ್ಲಿ ಟ್ವೀಟ್ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಮಾಜಿ ಸಂಸದರಾದ ಜಿ.ಎಸ್ ಬಸವರಾಜು, ಮಾಜಿ ಸಂಸದ ಉಮೇಶ್ ಜಾದವ್, ಬಾಗಲಕೋಟೆಯ ಸಂಸದ ಪಿ.ಸಿ ಗದ್ದಿಗೌಡ ಹಾಗೂ ಕಚೇರಿಯ ಸಿಬ್ಬಂದಿ ಉಪಸ್ಥಿತರಿದ್ದರು. ನರೇಂದ್ರ ಮೋದಿ ಪ್ರಧಾನಿಯಾಗಿ ಮೂರನೇ ಬಾರಿ ಅಧಿಕಾರ ಸ್ವೀಕಾರ ಮಾಡಿದರು.

'ಶಕ್ತಿ' ಯೋಜನೆಗೆ ಒಂದು ವರ್ಷ

ಸಂತಸ ಹಂಚಿಕೊಂಡ ಸಿಎಂ ಸಿದ್ದರಾಮಯ್ಯ



ಬೆಂಗಳೂರು: ನಾಡಿನ ಸ್ವಾಭಿಮಾನಿ ಮಹಿಳೆಯರನ್ನು ಸ್ವಾವಲಂಬಿಗಳನ್ನಾಗಿಸುವ ಉದ್ದೇಶದೊಂದಿಗೆ ಜಾರಿಗೆ ತಂದ 'ಶಕ್ತಿ ಯೋಜನೆ'ಯು ಇಂದಿಗೆ ಒಂದು ವರ್ಷ ಪೂರೈಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಂತಸ ಹಂಚಿಕೊಂಡಿದ್ದಾರೆ. 'ಎಕ್ಸ್'ನಲ್ಲಿ ಪೋಸ್ಟ್ ಹಂಚಿಕೊಂಡಿರುವ ಅವರು, ಕಳೆದೊಂದು ವರ್ಷದಲ್ಲಿ ಔದ್ಯೋಗಿಕ ಕ್ಷೇತ್ರದಲ್ಲಿ ಮಹಿಳೆಯರ ಪಾಲುದಾರಿಕೆ ಏರಿಕೆಯಾಗಿದೆ. ದೂರ ಪ್ರಯಾಣ ಮಾಡಿ ಹೆಣ್ಣು ಮಕ್ಕಳು ಶಿಕ್ಷಣ ಪಡೆಯುತ್ತಿದ್ದಾರೆ. ಇದನ್ನು ಹಲವು ಸಮೀಕ್ಷೆಗಳು ವರದಿ ಮಾಡಿವೆ. 'ಶಕ್ತಿ' ಯೋಜನೆಯನ್ನು ಜಾರಿಗೊಳಿಸಿರುವುದನ್ನಲ್ಲಿ ಸಾರ್ಥಕಭಾವ ಮೂಡಿಸಿದೆ ಎಂದು ಪೋಸ್ಟ್‌ನಲ್ಲಿ ಬರೆದುಕೊಂಡಿದ್ದಾರೆ. ಶಕ್ತಿ ಯೋಜನೆ ಜಾರಿಗೊಂಡ ನಂತರದಿಂದ 226 ಕೋಟಿ ಉಚಿತ ಟಿಕೆಟ್ ಪಡೆದು ಮಹಿಳೆಯರು ಪ್ರಯಾಣಿಸುವ ಮೂಲಕ ಸ್ವಾವಲಂಬಿ ಬದುಕಿನೆಡೆಗೆ ಮುಂದಡಿಯಿಟ್ಟಿದ್ದಾರೆ. ಈವರೆಗಿನ ಒಟ್ಟು ಟಿಕೆಟ್ ಮೌಲ್ಯ 5,500 ಕೋಟಿ ಆಗಿದ್ದು, ಮಹಿಳಾ ಸಬಲೀಕರಣದ ನಿಟ್ಟಿನಲ್ಲಿ 'ಶಕ್ತಿ' ಯೋಜನೆ ಹೊಸ ಇತಿಹಾಸ ಸೃಷ್ಟಿಸಿದೆ ಎಂದು ಸಿದ್ದರಾಮಯ್ಯ ತಿಳಿಸಿದ್ದಾರೆ. ಧಾರವಾಡ ಹೊಸ ಬಸ್ ನಿಲ್ದಾಣದಲ್ಲಿ ಶಕ್ತಿ ಯೋಜನೆ ಚಾಲನೆ ಸಂದರ್ಭದಲ್ಲಿ ಮಹಿಳೆಯೊಬ್ಬರು ಖುಷಿಯಿಂದ ಬಸ್‌ಗೆ ನಮಸ್ಕರಿಸಿದರು.

ವೀರಶೈವ ಮಹಾಸಭಾ ಚುನಾವಣೆ: ವೇಳಾಪಟ್ಟಿ ಪ್ರಕಟ

ಬೆಂಗಳೂರು: ಅಖಿಲ ಭಾರತ ವೀರಶೈವ ಮಹಾಸಭಾದ ಅಧ್ಯಕ್ಷ ಸ್ಥಾನಕ್ಕೆ ಆ.29ಕ್ಕೆ ಚುನಾವಣೆ ನಡೆಯಲಿದ್ದು, ವೇಳಾಪಟ್ಟಿ ಪ್ರಕಟಿಸಲಾಗಿದೆ. ಜು.21ರಂದು ತಾಲೂಕು, ಮಹಾನಗರ, ಜಿಲ್ಲಾ ಘಟಕಗಳ ಅಧ್ಯಕ್ಷರು ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರ ಚುನಾವಣೆ, ಆ.25ರಂದು ರಾಜ್ಯ ಘಟಕಗಳ ಅಧ್ಯಕ್ಷರು, ಕಾರ್ಯಕಾರಿ ಸಮಿತಿ ಸದಸ್ಯರು ಹಾಗೂ ಮಹಾಸಭಾದ ಕಾರ್ಯಕಾರಿ ಸಮಿತಿ ಸದಸ್ಯರ ಆಯ್ಕೆಗೆ ಚುನಾವಣೆ ನಡೆಯಲಿದೆ. ಮತದಾರರ ಪಟ್ಟಿಯನ್ನು ಜೂ.20ರಂದು ಪ್ರಕಟಿಸಲಾಗುತ್ತದೆ. ಮೂರು ಹಂತಗಳಲ್ಲಿ ನಡೆಯುವ ಚುನಾವಣೆಗೆ ಮೊದಲ ಹಂತದ ನಾಮಪತ್ರ ಸಲ್ಲಿಸುವ ಪ್ರಕ್ರಿಯೆ ಜೂನ್ 27ರಿಂದ ಆರಂಭವಾಗಲಿದೆ. ಸೆ. 29ರಂದು ಎಲ್ಲ ಪ್ರಕ್ರಿಯೆಗಳು ಪೂರ್ಣಗೊಳ್ಳಲಿವೆ. ಆಯ್ಕೆಯಾಗುವ ಹೊಸ ಸಮಿತಿಗಳು 2024–2025ನೇ ಸಾಲಿನಿಂದ 2028–29ರ ಅವಧಿಗೆ ಕಾರ್ಯನಿರ್ವಹಿಸಲಿವೆ ಎಂದು ಚುನಾವಣಾಧಿಕಾರಿ ಯಾಗಿ ನೇಮಕಗೊಂಡಿರುವ ನಿವೃತ್ತ ಐಎಎಸ್ ಅಧಿಕಾರಿ ಎಂ.ಬಿ. ದ್ಯಾಬೇರಿ ತಿಳಿಸಿದ್ದಾರೆ.

ಇಂದು ಕಾನೂನು ಪುಸ್ತಕ ಬಿಡುಗಡೆ

ಮೈಸೂರು,ಜೂ.11(ಪಿಎಂ)– ಮೈಸೂರು ಬಾರ್ ಅಸೋಸಿಯೇಷನ್ ಮತ್ತು ಲಾಯರ್ಸ್ ಲಾ ಬುಕ್ ಬೆಂಗಳೂರು ಜಂಟಿ ಆಶ್ರಯದಲ್ಲಿ ಜೂ.12ರಂದು ಕಾನೂನು ಸಂಬಂಧಿತ ಪುಸ್ತಕ ಬಿಡುಗಡೆ ಸಮಾರಂಭ ಹಮ್ಮಿಕೊಳ್ಳಲಾಗಿದೆ.

ಮೈಸೂರಿನ ಕೃಷ್ಣರಾಜ ಬುಲೇವಾರ್ಡ್ ರಸ್ತೆಯಲ್ಲಿರುವ ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣದ ಆವರಣದಲ್ಲಿರುವ ಮೈಸೂರು ಬಾರ್ ಅಸೋಸಿಯೇಷನ್‌ನಲ್ಲಿ ಅಂದು ಮಧ್ಯಾಹ್ನ 1.45ಕ್ಕೆ ಸಮಾರಂಭ ನಡೆಯಲಿದೆ. ಮೈಸೂರು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ರವೀಂದ್ರ ಹೆಗಡೆ ಅವರು 'ಭಾರತೀಯ ನಾಗರಿಕ ಸುರಕ್ಷಾ ಸಂಹಿತ 2023, ಭಾರತೀಯ ನ್ಯಾಯ ಸಂಹಿತೆ 2023 ಮತ್ತು ಭಾರತೀಯ ಸಾಕ್ಷ್ಯ ಅಧಿನಿಯಮ 2023ರ ಪುಸ್ತಕವನ್ನು ಬಿಡುಗಡೆ ಮಾಡಲಿದ್ದಾರೆ. ಗೌರವ ಅತಿಥಿಗಳಾಗಿ ಲಾಗೈಡ್ ಕಾನೂನು ಮಾಸ ಪತ್ರಿಕೆ ಗೌರವ ಸಂಪಾದಕ ಹೆಚ್.ಎನ್.ವೆಂಕಟೇಶ್, ಮೈಸೂರು ಬಾರ್ ಅಸೋಸಿಯೇಷನ್ ಅಧ್ಯಕ್ಷ ಎಸ್. ಲೋಕೇಶ್ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ನೆಲಕ್ಕುರುಳುವ ಹಂತದಲ್ಲಿ ಟ್ರಾಫಿಕ್ ಸಿಗ್ನಲ್ ಕಂಬ



ಮೈಸೂರು,ಜೂ.11(ಪಿಎಂ)– ಮೈಸೂರಿನ ಕೆಆರ್‌ಎಸ್ ರಸ್ತೆಯಲ್ಲಿ ಗೋಕುಲಂ ಬಳಿಯಿರುವ ಟ್ರಾಫಿಕ್ ಸಿಗ್ನಲ್ ಕಂಬವು ನೆಲಕ್ಕುರುಳುವ ಹಂತ ತಲುಪಿದೆ.

ಇದರ ಪರಿಣಾಮ ವಾಹನ ಸವಾರರು ಹಾಗೂ ಪಾದಚಾರಿಗಳಿಗೆ ಇದರಿಂದ ಯಾವುದೇ ಪ್ರಯೋಜನ ಇಲ್ಲವಾಗಿದೆ. ಇದರ ಸಿಗ್ನಲ್ ಲೈಟ್‌ಗಳ ಕೇಬಲಗಳು ಕಿತ್ತು ಯಾವುದೋ ಗಿಡಗಳ ಬಳ್ಳಿಯಂತೆ ಗೋಚರಿಸುತ್ತಿದೆ. ಇದರ ಈ ಪರಿಸ್ಥಿತಿಗೆ ಏನು ಕಾರಣವೋ ಗೊತ್ತಿಲ್ಲ. ಆದರೆ ಕೂಡಲೇ ಸರಿಪಡಿಸದಿದ್ದರೆ, ಇದನ್ನು ಕಳ್ಳರು ಹೊತ್ತೊಯ್ಯುವುದು ಗ್ಯಾರಂಟಿ ಎಂಬುದನ್ನು ನೋಡಿದ ಯಾರೂ ಬೇಕಾದರೂ ಊಹಿಸಬಹುದು.

ವಿಮಾನ ದುರಂತದಲ್ಲಿ ಮಲಾವಿ ಉಪಾಧ್ಯಕ್ಷ ಸೌಲೋಸ್ ಚಿಲಿಮಾ ಸೇರಿ 10 ಮಂದಿ ಸಾವು





ಬ್ಲಾಂಟೈರ್ (ಮಲಾವಿ): ಮಲಾವಿಯ ಉಪಾಧ್ಯಕ್ಷ ಸೌಲೋಸ್ ಚಿಲಿಮಾ ಮತ್ತು ಇತರ ಒಂಬತ್ತು ಜನರು ವಿಮಾನ ಅಪಘಾತದಲ್ಲಿ ಮೃತಪಟ್ಟಿರುವುದಾಗಿ ವರದಿಯಾಗಿದೆ. ಉಪಾಧ್ಯಕ್ಷ ಸೌಲೋಸ್ ಚಿಲಿಮಾ ಅವರು ಪ್ರಯಾಣಿಸುತ್ತಿದ್ದ ಸೇನಾ ವಿಮಾನದ ಅವಶೇಷಗಳು, ಒಂದು ದಿನಕ್ಕೂ ಹೆಚ್ಚು ಕಾಲ ನಡೆದ ಶೋಧದ ನಂತರ ದೇಶದ ಉತ್ತರದ ಪರ್ವತ ಪ್ರದೇಶದಲ್ಲಿ ಪತ್ತೆಯಾಗಿವೆ. ಅಪಘಾತದಲ್ಲಿ ಯಾರೂ ಬದುಕುಳಿದಿಲ್ಲ ಎಂದು ಮಲಾವಿ ಅಧ್ಯಕ್ಷ ಲಾಜರಸ್ ಚಕ್ವೆರಾ ತಿಳಿಸಿದ್ದಾರೆ.

ಆಫ್ರಿಕಾದ ಆಗ್ನೇಯ ಭಾಗದ ರಾಷ್ಟ್ರ ಮಲಾವಿ ರಾಜಧಾನಿ ಲಿಲೋಂಗ್ವೆಯಿಂದ ಮುಜುನಗರಕ್ಕೆ ವಿಮಾನವು ಸೋಮವಾರ ಬೆಳಿಗ್ಗೆ ಹೊರಟಿತ್ತು. 45 ನಿಮಿಷಗಳಲ್ಲಿ ನಿಗದಿತ ಸ್ಥಳ ತಲುಪಬೇಕಿದ್ದ ಈ ವಿಮಾನ ಪ್ರಯಾಣ ಆರಂಭಿಸಿದ ಕೆಲವೇ ಕ್ಷಣಗಳಲ್ಲಿ ಕಣ್ಮರೆಯಾಗಿತ್ತು. ಚಿಲಿಮಾ ಅವರು ಈ ವಿಮಾನದಲ್ಲಿದ್ದರು. ಕಣ್ಮರೆಯಾದ ವಿಮಾನದ ಪತ್ತೆಗೆ ನೂರಾರು ಸೈನಿಕರು, ಪೊಲೀಸ್ ಅಧಿಕಾರಿಗಳು ಮತ್ತು ವಲಯ ಅರಣ್ಯಾಧಿಕಾರಿಗಳು ಶೋಧ ನಡೆಸಿದ್ದರು.

ಪ್ರತಿಕೂಲ ಹವಾಮಾನದಿಂದಾಗಿ ಮುಜು ವಿಮಾನ ನಿಲ್ದಾಣದಲ್ಲಿ ವಿಮಾನವನ್ನು ಇಳಿಸದಂತೆ ಪೈಲಟ್‌ಗಳಿಗೆ ಏರ್ ಟ್ರಾಫಿಕ್ ಕಂಟ್ರೋಲರ್‌ಗಳು ಮಾಹಿತಿ ನೀಡಿದರು. ಲಿಲೋಂಗ್ವೆಗೆ ಹಿಂತಿರುಗುವಂತೆ ಸೂಚಿಸಿದರು. ನಂತರ ಏರ್ ಟ್ರಾಫಿಕ್ ಕಂಟ್ರೋಲ್ ವಿಮಾನದ ಸಂಪರ್ಕ ಕಳೆದುಕೊಂಡಿತು. ಅದು ರೇಡಾರ್ ಸಂಪರ್ಕಕ್ಕೆ ಸಿಗದೆ ಕಣ್ಮರೆಯಾಯಿತು ಎಂದು ಚಕ್ವೆರಾ ಹೇಳಿದ್ದಾರೆ.

ವಿಮಾನದಲ್ಲಿ ಏಳು ಪ್ರಯಾಣಿಕರು ಮತ್ತು ಮೂವರು ಸೇನಾ ಸಿಬ್ಬಂದಿಯೂ ಇದ್ದರು. ದೇಶದ ಸಶಸ್ತ್ರ ಪಡೆಗಳಿಂದ ನಿರ್ವಹಿಸುವ ಸಣ್ಣ, ಪ್ರೊಪೆಲ್ಲರ್ ಚಾಲಿತ ವಿಮಾನ ಇದಾಗಿತ್ತು ಎಂದು ಚಕ್ವೆರಾ ಹೇಳಿದ್ದಾರೆ.

ವಿಮಾನದ ಮಾಹಿತಿ ಟ್ರ್ಯಾಕ್ ಮಾಡುವ ಸಿಎಚ್ ಏವಿಯೇಷನ್ ವೆಬ್‌ಸೈಟ್ ಪ್ರಕಾರ, ವಿಮಾನದ ಟೈಲ್ ಸಂಖ್ಯೆಯು ಇದು ಡಾರ್ನಿಯರ್ 228–ಮಾದರಿಯ ಅವಳಿ ಪ್ರೊಪೆಲ್ಲರ್ ವಿಮಾನ. ಇದನ್ನು 1988ರಲ್ಲಿ ಮಲಾವಿಯ ಸೇನೆಗೆ ನೀಡಲಾಗಿತ್ತು.

ಎರಡನೇ ಅವಧಿಗೆ ಉಪಾಧ್ಯಕ್ಷರಾಗಿದ್ದ ಚಿಲಿಮಾ: ಚಿಲಿಮಾ ಅವರು ಎರಡನೇ ಅವಧಿಗೆ ಮಲಾವಿಯ ಉಪಾಧ್ಯಕ್ಷರಾಗಿ ಕರ್ತವ್ಯ ನಿರ್ವಹಿಸುತ್ತಿದ್ದರು. 2014–2019 ರವರೆಗೆ ಪೀಟರ್ ಮುತಾರಿಕಾ ಅವರು ಅಧ್ಯಕ್ಷರಾಗಿದ್ದಾಗಲೂ ಚಿಲಿಮಾ ಉಪಾಧ್ಯಕ್ಷರಾಗಿದ್ದರು. 2019ರಲ್ಲಿ ಅಧ್ಯಕ್ಷೀಯ ಚುನಾವಣೆಗೆ ಅಭ್ಯರ್ಥಿಯಾಗಿ ಕಣಕ್ಕಿಳಿದು ಮೂರನೇ ಸ್ಥಾನ ಪಡೆದಿದ್ದರು. ಈ ಚುನಾವಣೆಯಲ್ಲಿ ಮುತಾರಿಕ ಮೊದಲ ಸ್ಥಾನ ಮತ್ತು ಚಕ್ವೆರಾ ಎರಡನೇ ಸ್ಥಾನ ಪಡೆದಿದ್ದರು. ಅಕ್ರಮಗಳ ಕಾರಣದಿಂದಾಗಿ ಮಲಾವಿಯ ನ್ಯಾಯಾಲಯವು ಈ ಚುನಾವಣಾ ಫಲಿತಾಂಶವನ್ನು ರದ್ದುಗೊಳಿಸಿತು. ಆಗ ಚಿಲಿಮಾ ಅವರು ಚಕ್ವೇರಾ ಅವರ ಜತೆ ಗುರುತಿಸಿಕೊಂಡರು. ಚಕ್ವೇರಾ 2020ರ ಚುನಾವಣೆಯಲ್ಲಿ ಮರು ಆಯ್ಕೆಯಾದರು.

ಮೈಸೂರು ಮಿತ್ರ

ಮೂವರು ಡಿಸಿಎಂ ಬೇಕು: ಸಚಿವ ರಾಜಣ್ಣ ಮತ್ತೆ ವಾದ



ತುಮಕೂರು: ಈವರೆಗೆ ತಣ್ಣಗಾಗಿದ್ದ ಮೂವರು ಉಪಮುಖ್ಯಮಂತ್ರಿಗಳ ನೇಮಕ ವಿಚಾರ, ಲೋಕಸಭೆ ಚುನಾವಣೆ ನಂತರ ಮತ್ತೆ ಮುನ್ನೆಲೆಗೆ ಬಂದಿದೆ. ಮೂವರು ಡಿಸಿಎಂ ನೇಮಕ ಮಾಡಬೇಕು ಎಂದು ಸಹಕಾರ ಸಚಿವ ಕೆ.ಎನ್.ರಾಜಣ್ಣ ಮತ್ತೊಮ್ಮೆ ಒತ್ತಾಯಿಸಿದ್ದಾರೆ.

ತುಮಕೂರು ನಗರದಲ್ಲಿ ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿ, ಮುಂದಿನ ದಿನಗಳಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆ ಬರಲಿದೆ. ಮೂವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಿದರೆ ಪಕ್ಷಕ್ಕೆ ಅನುಕೂಲವಾಗಲಿದೆ ಎಂದು ಹೇಳಿದರು.

ಲೋಕಸಭೆ ಚುನಾವಣೆ ಮುಗಿಯುವವರೆಗೂ ಉಪಮುಖ್ಯಮಂತ್ರಿ ವಿಚಾರ ಮಾತನಾಡದಂತೆ ಸುಮ್ಮನಿರುವಂತೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದರು. ಹಾಗಾಗಿ ಸುಮ್ಮನಿದ್ದೆ. ಖರ್ಗೆ ಅವರನ್ನು ಖುದ್ದಾಗಿ ಭೇಟಿ ಮಾಡಿ ಈ ವಿಚಾರ ಚರ್ಚಿಸಲಾಗುವುದು ಎಂದರು.

'ಮಲ್ಲಿಕಾರ್ಜುನ ಖರ್ಗೆ ರಾಜ್ಯ ರಾಜಕಾರಣಕ್ಕೆ ಬರಲಿದ್ದು, ಮುಂದಿನ ದಿನಗಳಲ್ಲಿ ಮುಖ್ಯಮಂತ್ರಿ ಆಗಲಿದ್ದಾರೆ ಎಂಬ ವಿಚಾರಕ್ಕೆ ಪ್ರತಿಕ್ರಿಯಿಸಿ, ಮುಖ್ಯಮಂತ್ರಿ ಆಗುವುದಿದ್ದರೆ ಬಹಳ ಹಿಂದೆಯೇ ಆಗಬೇಕಿತ್ತು. ಈಗ ಅಂತಹ ಸಾಧ್ಯತೆಗಳಿಲ್ಲ. ಡಿ.ಕೆ.ಶಿವಕುಮಾರ್ ಸಹ ಮುಖ್ಯಮಂತ್ರಿಯಾಗಲು ಕುರ್ಚಿ ಖಾಲಿ ಇಲ್ಲ. ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿಯಾಗಿ ಮುಂದುವರಿಯಲಿದ್ದಾರೆ ಎಂದರು.

ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಸ್ಥಾನದಿಂದ ಬದಲಾವಣೆ ಮಾಡಿದರೆ ಅಭ್ಯಂತರವಿಲ್ಲ. ಉಸ್ತುವಾರಿ ಮಾಡುವಂತೆ ನಾನು ಕೇಳಿರಲಿಲ್ಲ. ಬೇಕಿದ್ದರೆ ಬದಲಾವಣೆ ಮಾಡಿಕೊಳ್ಳಲಿ ಎಂದರು.

ಮಹಿಳೆ ಸರ ಕಿತ್ತುಕೊಂಡು ಪರಾರಿ

ಮೈಸೂರು, ಜೂ.11(ಆರ್‌ಕೆ)–ನಡೆದುಕೊಂಡು ಹೋಗುತ್ತಿದ್ದ ಮಹಿಳೆ ಸರ ಕಿತ್ತುಕೊಂಡು ಪರಾರಿಯಾಗಿರುವ ಘಟನೆ ಮೈಸೂರಿನ ಜಯನಗರದಲ್ಲಿ ಇಂದು



ಮಧ್ಯಾಹ್ನ ನಡೆದಿದೆ. ಜಯನಗರ ನಿವಾಸಿ ದಾಕ್ಷಾಯಿಣಿ(29) ಸರ ಕಳೆದುಕೊಂಡವರು. ಅಂಗಡಿಯಿಂದ ಮನೆಗೆ ನಡೆದುಕೊಂಡು ಹೋಗುತ್ತಿದ್ದಾಗ ಬೈಕ್‌ನಲ್ಲಿ ಬಂದ ಯುವಕರಿಬ್ಬರು, ಮಧ್ಯಾಹ್ನ 3 ಗಂಟೆ ವೇಳೆಗೆ ಜಯನಗರ 10ನೇ ಕ್ರಾಸ್ ಬಳಿ ದಾಕ್ಷಾಯಿಣಿ ಅವರ ಕೊರಳಿಂದ 16 ಗ್ರಾಂನ ಚಿನ್ನದ ಸರ ಕಿತ್ತುಕೊಂಡು ಪರಾರಿಯಾಗಿದ್ದಾರೆ. ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ಅಶೋಕಪುರಂ ಪೊಲೀಸರು ಮಹಜರು ನಡೆಸಿ ಸಿಸಿ ಕ್ಯಾಮರಾ ಫುಟೇಜ್‌ಗಳನ್ನು ಕಲೆ ಹಾಕಿ ಆರೋಪಿಗಳ ಪತ್ತೆಗೆ ಶೋಧ ನಡೆಸುತ್ತಿದ್ದಾರೆ.

ಪ್ರಜ್ವಲ್ ರೇವಣ್ಣ ಈಗ ವಿಚಾರಣಾಧೀನ ಕೈದಿ–5664



ಬೆಂಗಳೂರು: ಅತ್ಯಾಚಾರ ಹಾಗೂ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಬಂಧಿತರಾಗಿರುವ ಮಾಜಿ ಸಂಸದ ಪ್ರಜ್ವಲ್ ರೇವಣ್ಣ, ಪರಪ್ಪನ ಅಗ್ರಹಾರದ ಜೈಲು ಸೇರಿದ್ದಾರೆ.

ಸದ್ಯ ಪ್ರಜ್ವಲ್ ರೇವಣ್ಣ, ಈಗ ವಿಚಾರಣಾಧೀನ ಕೈದಿ ನಂಬರ್–5664. ಸೋಮವಾರ ರಾತ್ರಿಯಿಂದ ಜೈಲಾಧಿಕಾರಿಗಳು ಅವರಿಗೆ ಜೈಲು ನೀಡಿದ್ದು, ಜೈಲಿನ ಮೆನುವಿನಂತೆ ಮುದ್ದೆ, ಅನ್ನ, ಸಾಂಬರು, ಪಲ್ಯ ನೀಡಲಾಗಿದೆ. ಆದರೆ, ಪ್ರಜ್ವಲ್ ಜೈಲಿನ ಕ್ವಾರಂಟೈನ್ ಬ್ಯಾರಕ್‌ನಲ್ಲಿ ಮೌನಕ್ಕೆ ಶರಣಾಗಿದ್ದಾರೆಂದು ತಿಳಿದುಬಂದಿದೆ.

ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಹಾಸನದ ಮಾಜಿ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ ಅವರಿಗ ನಿನ್ನೆ ನ್ಯಾಯಾಂಗ ಬಂಧನ ವಿಧಿಸಿ ಕೋರ್ಟ್ ಆದೇಶ ಹೊರಡಿಸಿದೆ.

ಸೋಮವಾರ ಪ್ರಜ್ವಲ್ ಅವರನ್ನು ನ್ಯಾಯಾಲಯಕ್ಕೆ ಹಾಜರುಪಡಿಸುವುದಕ್ಕೂ ಮುನ್ನ ಎಸ್‌ಐಟಿ ಅಧಿಕಾರಿಗಳು ಪ್ರಜ್ವಲ್ ಅವರನ್ನು ಬಸವನಗುಡಿಯಲ್ಲಿರುವ ಅವರ ತಾಯಿ ಭವಾನಿ ರೇವಣ್ಣ ಅವರ ಮನೆಗೆ ಸ್ಥಳ ಮಹಜರಿಗಾಗಿ ಕರೆದೊಯ್ದಿದ್ದರು. ಮಧ್ಯಾಹ್ನ 3 ಗಂಟೆ ಸುಮಾರಿಗೆ ಮಾಜಿ ಸಂಸದರನ್ನು ನ್ಯಾಯಾಲಯಕ್ಕೆ ಕರೆತರಲಾಯಿತು.

ಪೊಲೀಸರು ಚಿತ್ರಹಿಂಸೆ ನೀಡಿದ್ದಾರೆಯೇ ಎಂದು ಪ್ರಜ್ವಲ್‌ಗೆ ನ್ಯಾಯಾಧೀಶರು ಪ್ರಶ್ನಿಸಿದಾಗ ಅವರು ನಕಾರಾತ್ಮಕವಾಗಿ ಉತ್ತರಿಸಿದರು. ಬಳಿಕ ಎಸ್‌ಐಟಿ ಸಲ್ಲಿಸಿದ್ದ ದಾಖಲೆಗಳನ್ನು ಓದಿದ ನ್ಯಾಯಾಧೀಶರು ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದರು.

ಮಧ್ಯಾಹ್ನ 3.45ರ ವೇಳೆಗೆ ಅವರನ್ನು ನ್ಯಾಯಾಲಯದ ಕೊಠಡಿಯಿಂದ ಹೊರಗೆ ಕರೆದುಕೊಂಡು ಹೋಗಿ ವ್ಯಾಪಕ ಭದ್ರತೆಯ ನಡುವೆ ಕೇಂದ್ರ ಕಾರಾಗೃಹಕ್ಕೆ ಸ್ಥಳಾಂತರಿಸಲಾಯಿತು.

ಪ್ರಜ್ವಲ್ ರೇವಣ್ಣ ವಿರುದ್ಧ ಮೂರು ಅತ್ಯಾಚಾರ ಪ್ರಕರಣ ದಾಖಲಾಗಿದ್ದು, ಹೊಳೆನರಸೀಪುರ ಠಾಣೆಯಲ್ಲಿ ದಾಖಲಾಗಿದ್ದ ಮನೆ ಕೆಲಸದ ಮಹಿಳೆ ಮೇಲಿನ ಪ್ರಕರಣದಲ್ಲಿ ಅವರನ್ನು ಎಸ್‌ಐಟಿ ಬಂಧಿಸಿದೆ. ಉಳಿದ ಎರಡು ಪ್ರಕರಣಗಳಲ್ಲಿ ಅವರನ್ನು ಮತ್ತೆ ವಶಕ್ಕೆ ಪಡೆದು ವಿಚಾರಣೆ ನಡೆಸಲಿದೆ ಎಂದು ಹೇಳಲಾಗಿದೆ.

ಹಸಿರು ಮೈಸೂರು ಗುರಿಯತ್ತ ...



ಟೀಂ ಮೈಸೂರು ತಂಡದಿಂದ ಮುಂದುವರೆದ ಹಸಿರು ಮೈಸೂರಿನ ಗುರಿಯತ್ತ 4ನೇ ವಾರದ ಕಾರ್ಯಕ್ರಮದಡಿ ಮಹಾರಾಣಿ ಕಾಲೇಜು ಪಕ್ಕದಲ್ಲಿ 48 ವಿವಿಧ ಬಗೆಯ ಗಿಡ ನೆಡಲಾಯಿತು. ಪಾಲಿಕೆ ಮಾಜಿ ಸದಸ್ಯ ಚಿಕ್ಕವೆಂಕಟು, ತಂಡದ ಗೋಕುಲ್ ಗೋವರ್ಧನ್, ಯಶ್ವಂತ್, ಕಿರಣ್ ಜೈರಾಮ್‌ಗೌಡ, ಮನೋಹರ್, ಮುರಳಿ, ಆನಂದ್, ಬಸವರಾಜ್, ಯತೀಶ್, ಪ್ರಸನ್ನ ರಾಜ್ ಗುರು, ಬಸವರಾಜು, ಮಕ್ಕಳಾದ ಕಲ್ಯಾಣಿ, ಮಿನುಗು, ಯಶಸ್ ಶೆಟ್ಟಿ, ವಿಸ್ಮಯ, ನಯನ ಇದ್ದರು.

ಕಬ್ಬಿನ ದರ ನಿಗದಿ ಸೇರಿ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ

ರೈತರಿಂದ ಡಿಸಿಗೆ ಮನವಿ

ಮೈಸೂರು, ಜೂ.11(ಎಂಟಿವೈ)–ಪ್ರಸಕ್ತ ಸಾಲಿನಲ್ಲಿ ಬರಗಾಲದ ಹಿನ್ನೆಲೆಯಲ್ಲಿ ಕಬ್ಬು ಬೆಳೆ ಕಡಿಮೆ ಇದ್ದು, ಉತ್ಪಾದನೆ ವೆಚ್ಚ ಅಧಿಕವಾಗಿರುವ ಕಾರಣ ಟನ್ ಕಬ್ಬಿಗೆ 4 ಸಾವಿರ ರೂ. ನಿಗದಿಪಡಿಸಬೇಕು. ಎಲ್ಲಾ ಬ್ಯಾಂಕ್‌ಗಳಲ್ಲಿ ಸಹಕಾರ ಬ್ಯಾಂಕ್‌ಗಳಂತೆ ಬಡ್ಡಿರಹಿತ ಸಾಲ ನೀಡಲು ಕ್ರಮ ಕೈಗೊಳ್ಳಬೇಕು ಎಂದು ರಾಜ್ಯ ಕಬ್ಬು ಬೆಳೆಗಾರರ ಸಂಘದ ಜಿಲ್ಲಾ ಘಟಕ ಒತ್ತಾಯಿಸಿದೆ.

ಕಬ್ಬು ಬೆಳೆಗಾರರಿಗೆ ನ್ಯಾಯಯುತ ಬೆಲೆ ನಿಗದಿಪಡಿಸುವಂತೆ ಒತ್ತಾಯಿಸಿ ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಅವರಿಗೆ ಮನವಿ ಸಲ್ಲಿಸಿದರು. ತೂಕದಲ್ಲಿ ಮೋಸ ಮಾಡುವ ಬಣ್ಣಾರಿ ಸಕ್ಕರೆ ಕಾರ್ಖಾನೆ ಈ ವ್ಯಾಪ್ತಿಯ ಕಬ್ಬನ್ನು ಬೇರೆ ಜಿಲ್ಲೆಗಳ ಕಾರ್ಖಾನೆಗಳಿಗೆ ಸಾಗಾಣಿಕೆ ಮಾಡಲು ನಿರ್ಬಂಧ ಹೇರಬಾರದು ಎಂದು ಆಗ್ರಹಿಸಿದರು.

ರೈತರು ಬರಗಾಲದ ಸಂಕಷ್ಟದಲ್ಲಿದ್ದು ಕೃಷಿ ಚಟುವಟಿಕೆ ನಡೆಸಲು ಆರ್ಥಿಕ ಮುಗ್ಗಟ್ಟು ಎದುರಿಸುತ್ತಿದ್ದು ಎಲ್ಲಾ ರೈತರಿಗೂ ಬರ ಪರಿಹಾರ ದೊರಕಿದರೆ ಕೃಷಿ ಚಟುವಟಿಕೆ ನಡೆಸಲು ಹೆಚ್ಚಿನ ಅನುಕೂಲವಾಗುತ್ತದೆ. ಈ ಬಗ್ಗೆ ತುರ್ತು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ರೈತರು ಮನವಿ ಮಾಡಿದರು.

ರಾಜ್ಯ ಸರ್ಕಾರ ಹಿಂದಿನ ವರ್ಷ ಘೋಷಣೆ ಮಾಡಿದ ಕಬ್ಬಿನ ಹೆಚ್ಚುವರಿ ದರ ಟನ್ ಕಬ್ಬಿಗೆ 150 ರೂ. ನಿಗದಿ ಮಾಡಿರುವುದನ್ನು ಬಣ್ಣಾರಿ ಸಕ್ಕರೆ ಕಾರ್ಖಾನೆ ರೈತರಿಗೆ ಪಾವತಿ ಮಾಡಿಲ್ಲ. ಕಾರ್ಖಾನೆ ಆರಂಭಕ್ಕೆ ಮೊದಲು ಬಾಕಿ ಹಣ ಕೊಡಿಸಲು ಕ್ರಮ ಕೈಗೊಳ್ಳಬೇಕು ಎಂದರು.

ಮಳೆಗಾಲ ಆರಂಭವಾಗಿರುವ ಕಾರಣ ಕೃಷಿ ಚಟುವಟಿಕೆ ಮಾಡಲು ಹಾಗೂ ಬಾವಿಗಳ ಅಂತರ್ಜಲ ವೃದ್ಧಿಗೆ ಜಿಲ್ಲೆಯ ಎಲ್ಲಾ ಕೆರೆ, ಕಟ್ಟೆಗಳ ಹಾಗೂ ಕಾಲುವೆಗಳ ಹೂಳೆತ್ತಬೇಕು. ಬ್ಯಾಂಕುಗಳ ಮುಂದೆ ರೈತರಿಗೆ ದೊರಕುವ ಸಾಲ ಮತ್ತು ಸೌಲಭ್ಯಗಳ ನಾಮಫಲಕ ಹಾಕುವಂತೆ ಕ್ರಮ ಕೈಗೊಳ್ಳಬೇಕು. ಮಳೆ–ಗಾಳಿಗೆ ಮೈಸೂರು ಜಿಲ್ಲಾದ್ಯಂತ ಸಾವಿರಾರು ಎಕರೆ ಬಾಳೆ ನಷ್ಟವಾಗಿದ್ದು ಇದಕ್ಕೆ ತಕ್ಷಣವೇ ಪರಿಹಾರ ನೀಡಬೇಕು. ನರೇಗಾದಲ್ಲಿ ಕೆಲಸ ಮಾಡಿರುವ ಹಣವನ್ನು ನೀಡದೆ ಬಾಕಿ ಉಳಿಸಿಕೊಂಡಿದ್ದು, ಕಳೆದ ವರ್ಷದ ಸಾಮಗ್ರಿ ಮೊತ್ತವನ್ನು ನೀಡಿರುವುದಿಲ್ಲ. ಕೂಡಲೇ ಈ ಬಗ್ಗೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಖಾಸಗಿ ಶಾಲಾ–ಕಾಲೇಜುಗಳಲ್ಲಿ ಗ್ರಾಮೀಣ ಭಾಗದ ರೈತರ ಮಕ್ಕಳು, ಕೂಲಿ ಕಾರ್ಮಿಕರ ಮಕ್ಕಳ, ಹಿಂದುಳಿದ ವರ್ಗಗಳ ಮಕ್ಕಳ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಪಡೆದುಕೊಳ್ಳಲು ದೇಣಿಗೆ ಮತ್ತು ಶುಲ್ಕ ಸುಲಿಗೆ ಮಾಡುತ್ತಿದ್ದು ಪಾವತಿಸಲು ಕಷ್ಟಕರವಾದ ಕಾರಣ ಶಿಕ್ಷಣದಿಂದ ವಂಚಿತರಾಗುತ್ತಾರೆ. ಆದ್ದರಿಂದ ಇದಕ್ಕೆ ಕಡಿವಾಣ ಹಾಕಲು ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ರೈತರು ಆಗ್ರಹಿಸಿದ್ದಾರೆ.

ಜಿಲ್ಲಾ ಕಾರ್ಯಾಧ್ಯಕ್ಷ ಕಿರಗಸೂರು ಶಂಕರ್, ಜಿಲ್ಲಾ ಉಪಾಧ್ಯಕ್ಷ ಮಾರ್ಬಳ್ಳಿ ನೀಲಕಂಠಪ್ಪ, ತಿ.ನರಸೀಪುರ ತಾಲೂಕು ಅಧ್ಯಕ್ಷ ಕುರುಬೂರು ಸಿದ್ದೇಶ್, ನಂಜನಗೂಡು ತಾಲೂಕು ಅಧ್ಯಕ್ಷ ದೇವನೂರು ವಿಜೇಂದ್ರ ಪ್ರದೀಪ್ ಕುರುಬೂರು, ಅಂಬಳೆ ಮಂಜುನಾಥ್, ಸಾತಗಳ್ಳಿ ಬಸವರಾಜು, ವರಕೋಡು ನಾಗೇಶ್, ರಾಜೇಶ್, ಕೂಡನಹಳ್ಳಿ ಸೋಮಣ್ಣ, ವಿಜಯೇಂದ್ರ, ಷಡಕ್ಷರಿ ಸ್ವಾಮಿ, ಕಿರಣ್ ನಂಜುಂಡಸ್ವಾಮಿ, ನಾಗೇಶ್ ದೊಡ್ಡ ಕಾಟೂರು, ಮಲ್ಲಶೆಟ್ಟಿ, ಪ್ರಕಾಶ್, ವಾಜಮಂಗಲ ಮಹದೇವು, ಮಾಲಿಂಗ ನಾಯಕ, ಸಿದ್ದರಾಮು, ಗಿರೀಶ್, ಚಂದ್ರು, ಪ್ರಕಾಶ್, ಸೋಮಶೇಖರ್, ಷಡಕ್ಷರಿ ಭಾಗವಹಿಸಿದ್ದರು.

ಮೈಸೂರಿನ ಜೆಡಿಎಸ್ ಕಚೇರಿಯಲ್ಲಿ ವಿಜಯೋತ್ಸವ



ಕೇಂದ್ರ ಸಚಿವರಾಗಿ ಹೆಚ್.ಡಿ.ಕುಮಾರಸ್ವಾಮಿ ಅವರು ಪ್ರಮಾಣವಚನ ಸ್ವೀಕರಿಸಿದ ಹಿನ್ನೆಲೆಯಲ್ಲಿ ಮೈಸೂರಿನ ಶೇಷಾದ್ರಿ ಐಯ್ಯರ್ ರಸ್ತೆಯಲ್ಲಿರುವ ಜೆಡಿಎಸ್ ಕಚೇರಿಯಲ್ಲಿ ವಿಜಯೋತ್ಸವವನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ಕೆ.ಟಿ.ಚಲುವೇಗೌಡ, ಮಾಜಿ ಮೇಯರ್ ಆರ್.ಲಿಂಗಪ್ಪ, ಮೈಲ್ಯಾಕ್ ಮಾಜಿ ಅಧ್ಯಕ್ಷ ಕೃಷ್ಣ, ಮಾಜಿ ಕಾರ್ಪೊರೇಟರ್‌ಗಳಾದ ಪ್ರೇಮಶಂಕರೇಗೌಡ, ಲಕ್ಷ್ಮಿ ಶಿವಣ್ಣ, ಕೆ.ವಿ.ಶ್ರೀಧರ್, ರಮಣಿ, ಕೆಜಿ ಕೊಪ್ಪಲ್ ಬಾಲು, ರಾಜ್ಯ ಪ್ರಧಾನ ಕಾರ್ಯದರ್ಶಿ ಹೇಮಾವತಿ, ರಾಜ್ಯ ವಕ್ತಾರ ರವಿಚಂದ್ರೇಗೌಡ, ಉಪಾಧ್ಯಕ್ಷ ಬೋರೇಗೌಡ, ಗ್ಲಾಸ್ ಅಂಗಡಿ ಶೇಖರ್, ಪ್ರಧಾನ ಕಾರ್ಯದರ್ಶಿ ಒಂಟಿಕೊಪ್ಪಲ್ ಸತೀಶ್, ಆರ್.ಮುದ್ದುರಾಜ್, ಹಿಂದುಳಿದ ವರ್ಗಗಳ ಅಧ್ಯಕ್ಷ ಕುಮಾರ್, ಲಕ್ಷ್ಮಿ, ಶಿವರಾಜ್, ಕೋದಂಡ ಸೇರಿದಂತೆ ಕಾರ್ಯಕರ್ತರು ಉಪಸ್ಥಿತರಿದ್ದರು.

ಸಂಶೋಧನಾ ವಿದ್ಯಾರ್ಥಿಗಳಿಂದ ಶಿಷ್ಯವೇತನಕ್ಕೆ ಅರ್ಜಿ ಆಹ್ವಾನ

ಮೈಸೂರು, ಜೂ.11–ಮೈಸೂರು ವಿಶ್ವವಿದ್ಯಾನಿಲಯದ ಹಿಂದುಳಿದ ವರ್ಗಗಳ ಘಟಕದ ವತಿಯಿಂದ ಸಂಶೋಧನಾ ಕಾರ್ಯವನ್ನು ನಿರ್ವಹಿಸುವ ಸಂಶೋಧನಾ ವಿದ್ಯಾರ್ಥಿಗಳಿಗೆ ಶಿಷ್ಯವೇತನ ನೀಡುವ ಸಲುವಾಗಿ ಮೈಸೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಪದವಿಯಲ್ಲಿ ಶೇ.55ಕ್ಕಿಂತ ಹೆಚ್ಚು ಅಂಕ ಪಡೆದಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ 2023–24ನೇ ಸಾಲಿನ 20 ಸಂಶೋಧನಾ ವಿದ್ಯಾರ್ಥಿಗಳಿಗೆ ರೂ. 12,000 ಗಳಂತೆ 3 ವರ್ಷದ ಅವಧಿಗೆ ಆಯ್ಕೆ ಮಾಡಲು ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಜೂ.10ರಂದು ಕಚೇರಿ ವೇಳೆಯಲ್ಲಿ ಪಡೆದು, ಭರ್ತಿ ಮಾಡಿದ ಅರ್ಜಿಗಳನ್ನು ಜುಲೈ 01 ಸಂಜೆ 5.30 ಗಂಟೆಯೊಳಗೆ ನಿಗದಿಪಡಿಸಿದ ದಾಖಲೆಗಳೊಂದಿಗೆ ಮಾರ್ಗದರ್ಶಕರು ಹಾಗೂ ವಿಭಾಗದ ಅಧ್ಯಕ್ಷರು, ನಿರ್ದೇಶಕರು, ಪ್ರಾಂಶುಪಾಲರ ಮುಖಾಂತರ ಹಿಂದುಳಿದ ವರ್ಗಗಳ ಘಟಕದ ಸಂಯೋಜನಾಧಿಕಾರಿಗಳಿಗೆ ಸಲ್ಲಿಸಬೇಕು.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕರ್ನಾಟಕ ರಾಜ್ಯದವರಾಗಿದ್ದು, ಮೈಸೂರು ವಿಶ್ವವಿದ್ಯಾನಿಲಯದಿಂದ (ಸ್ವಾಯತ್ತ ಸಂಸ್ಥೆಗಳನ್ನು ಹೊರತುಪಡಿಸಿ) ಸ್ನಾತಕೋತ್ತರ ಪದವಿಯನ್ನು ಹೊಂದಿರಬೇಕು. ಅಭ್ಯರ್ಥಿಯು 23ರಿಂದ 35 ವಯಸ್ಸಿನವರಾಗಿರಬೇಕು. Category-1 ಅಭ್ಯರ್ಥಿಗಳ ವಾರ್ಷಿಕ ಆದಾಯ ರೂ. 4.50 ಲಕ್ಷ Category-II(A), II(B), III(A) ಮತ್ತು III(B) ಅಭ್ಯರ್ಥಿಗಳ ವಾರ್ಷಿಕ ಆದಾಯ ರೂ. 3.50 ಲಕ್ಷ ವಾರ್ಷಿಕ ಆದಾಯವನ್ನು ಮೀರಿರಬಾರದು. ಆದಾಯ ಮತ್ತು ಜಾತಿ ಪ್ರಮಾಣ ಪತ್ರವು ಅಧಿಸೂಚನೆ ಹೊರಡಿಸಿದ ದಿನಾಂಕದಲ್ಲಿ ಚಾಲ್ತಿಯಲ್ಲಿರಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 0821–2419906 ಹಾಗೂ ಇ–ಮೇಲ್: obccell@unimysore.ac.in ಅನ್ನು ಸಂಪರ್ಕಿಸಬಹುದು ಎಂದು ಮೈಸೂರು ವಿಶ್ವವಿದ್ಯಾನಿಲಯದ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಿ.ಎನ್.ಮಂಜುನಾಥ್ ವಿರುದ್ಧ ಡಿ.ಕೆ.ಸುರೇಶ್ ಪರ 50 ಲಕ್ಷ ಬೆಟ್ಟಿಂಗ್ ಕಟ್ಟಿದ್ದ ವ್ಯಕ್ತಿ ನೇಣಿಗೆ ಶರಣು!

ರಾಮನಗರ, ಜೂ.11– ತೀವ್ರ ಜಿದ್ದಾಜಿದ್ದಿಗೆ ಕಾರಣವಾಗಿದ್ದ ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಸಿ.ಎನ್.ಮಂಜುನಾಥ್ ವಿರುದ್ಧ ಕಾಂಗ್ರೆಸ್‌ನ ಡಿ.ಕೆ.ಸುರೇಶ್ ಗೆದ್ದೇ ಗೆಲ್ಲುತ್ತಾರೆ ಎಂದು 50 ಲಕ್ಷ ರೂ. ಬೆಟ್ಟಿಂಗ್ ಕಟ್ಟಿದ್ದ ವ್ಯಕ್ತಿಯೊಬ್ಬ ಆತ್ಮಹತ್ಯೆಗೆ ಶರಣಾಗಿದ್ದಾನೆ. ಬೆಟ್ಟಿಂಗ್ ಕಟ್ಟಿ 50 ಲಕ್ಷ ರೂಪಾಯಿ ಕಟ್ಟಿ ಸೋತು ಸಾಲದ ಸುಳಿಗೆ ಸಿಲುಕಿದ್ದ ರಾಮನಗರ ಜಿಲ್ಲೆಯ ಕೆಂಚನಕುಪ್ಪೆ ನಿವಾಸಿ 44 ವರ್ಷದ ಶಿವರಾಜು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಘಟನಾ ಸ್ಥಳಕ್ಕೆ ಬಿಡದಿ ಠಾಣಾ ಪೊಲೀಸರು ಭೇಟಿ ನೀಡಿ, ಪರಿಶೀಲಿಸಿ, ಪ್ರಕರಣ ದಾಖಲಿಸಿಕೊಂಡಿದ್ದಾರೆ.

'ಶಕ್ತಿ'ಗೆ ಒಂದು ವರ್ಷ; 227 ಕೋಟಿ ಮಹಿಳೆಯರು ಉಚಿತ ಪ್ರಯಾಣ

ಬೆಂಗಳೂರು, ಜೂ.11– ಕಳೆದ ಒಂದು ವರ್ಷದಲ್ಲಿ 'ಶಕ್ತಿ' ಯೋಜನೆಯಡಿ ರಾಜ್ಯದ 227 ಕೋಟಿ ಮಹಿಳೆಯರು ಐಷಾರಾಮಿಯಲ್ಲದ ಸರ್ಕಾರಿ ಬಸ್‌ಗಳಲ್ಲಿ ಉಚಿತ ಪ್ರಯಾಣದ ಲಾಭವನ್ನು ಪಡೆದುಕೊಂಡಿದ್ದು, ಇದರಿಂದಾಗಿ ರಾಜ್ಯದ ಬೊಕ್ಕಸಕ್ಕೆ 5,526.64 ಕೋಟಿ ರೂಪಾಯಿ ವೆಚ್ಚವಾಗಿದೆ ಎಂದು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ತಿಳಿಸಿದ್ದಾರೆ.



ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರವು ಕಳೆದ ವರ್ಷ ಜೂ.11ರಂದು ಪಕ್ಷವು ವಿಧಾನಸಭೆ ಚುನಾವಣೆಗೆ ಮೊದಲು ಭರವಸೆ ನೀಡಿದ್ದ ಐದು ಖಾತರಿಗಳಲ್ಲಿ ಒಂದಾದ 'ಶಕ್ತಿ' ಯೋಜನೆಯನ್ನು ಪ್ರಾರಂಭಿಸಿತು. ರಾಜ್ಯ ಸರ್ಕಾರವು 'ಶಕ್ತಿ' ಯೋಜನೆ ಅನುಷ್ಠಾನ ಮಾಡಿ ಒಂದು ವರ್ಷ ಪೂರೈಸಿರುವ ಹಿನ್ನೆಲೆಯಲ್ಲಿ 226.95 ಕೋಟಿ ಮಹಿಳೆಯರು ಸರ್ಕಾರಿ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸಿದ್ದಾರೆ ಎಂದು ರೆಡ್ಡಿ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಈ ಪೈಕಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ (ಬಿಎಂಟಿಸಿ–71.45 ಕೋಟಿ) ಮಹಿಳೆಯರು ಹೆಚ್ಚಿನ ಪ್ರಯಾಣ ಮಾಡಿದ್ದಾರೆ. ನಂತರದ ಸ್ಥಾನದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ (ಕೆಎಸ್‌ಆರ್‌ಟಿಸಿ–69.5 ಕೋಟಿ), ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (ಎನ್‌ಡಬ್ಲ್ಯುಕೆಆರ್‌ಟಿಸಿ) ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (ಕೆಕೆಆರ್‌ಟಿಸಿ) ಕ್ರಮವಾಗಿ 52.12 ಕೋಟಿ ಮತ್ತು 33.47 ಕೋಟಿ ಮಹಿಳೆಯರು ಉಚಿತ ಪ್ರಯಾಣ ಮಾಡಿದ್ದಾರೆ. ಶಕ್ತಿ ಯೋಜನೆಯಡಿ ಮಹಿಳೆಯರ ಉಚಿತ ಪ್ರಯಾಣಕ್ಕಾಗಿ ಕೆಎಸ್‌ಆರ್‌ಟಿಸಿ 2,111.14 ಕೋಟಿ ರೂ., ಎನ್‌ಡಬ್ಲ್ಯುಕೆಆರ್‌ಟಿಸಿ 1,352.68 ಕೋಟಿ ರೂ., ಕೆಕೆಆರ್‌ಟಿಸಿ 1,125.81 ಕೋಟಿ ರೂ. ಮತ್ತು ಬಿಎಂಟಿಸಿ 937.01 ಕೋಟಿ ರೂ. ವೆಚ್ಚ ಮಾಡಿದೆ ಎಂದು ಪ್ರಕಟಣೆ ತಿಳಿಸಿದೆ.

5,800 ಹೊಸ ಬಸ್‌ಗಳ ಸೇರ್ಪಡೆಗೆ ಅನುಮೋದನೆ ನೀಡಲಾಗಿದ್ದು, ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಸುಧಾರಿಸಲು ಹಲವಾರು ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ಇದಲ್ಲದೆ, ಇತ್ತೀಚಿನ ದಿನಗಳಲ್ಲಿ ನಾಲ್ಕು ಸಾರಿಗೆ ನಿಗಮಗಳಾದ್ಯಂತ 2,438 ಹೊಸ ಬಸ್‌ಗಳನ್ನು ಸೇರ್ಪಡೆಗೊಳಿಸಲಾಗಿದೆ. ರಾಜ್ಯವು 'ಪಲ್ಲಕ್ಕಿ', 'ಅಶ್ವಮೇಧ ಕ್ಲಾಸಿಕ್', 'ಕಲ್ಯಾಣ ರಥ' ಮತ್ತು 'ಅಮೋಘ ವರ್ಷ' ಬ್ರಾಂಡ್‌ನೊಂದಿಗೆ ಹೊಸ ಬಸ್‌ಗಳನ್ನು ಪರಿಚಯಿಸಿದೆ ಎಂದು ಸಚಿವರು ತಿಳಿಸಿದ್ದಾರೆ.

ಪಾಕಿಸ್ತಾನ ಜಿಂದಾಬಾದ್ ಎಂದರೆ ರಾಜ್ಯಸಭಾ ಸೀಟು! ಭಾರತ್ ಮಾತಾ ಕೀ ಜೈ ಎಂದರೆ ಕಲ್ಲೇಟು!!

ರಾಜ್ಯದಲ್ಲಿ ತುಘಲಕ್ ಯುಗ ಮತ್ತೆ ಆರಂಭವಾದಂತಿದೆ: ಬಿಜೆಪಿ ಕಿಡಿ

ಬೆಂಗಳೂರು: ಪಾಕಿಸ್ತಾನ ಜಿಂದಾಬಾದ್ ಎಂದರೆ ರಾಜ್ಯಸಭಾ ಸೀಟು, ಭಾರತ್ ಮಾತಾ ಕೀ ಜೈ ಎಂದರೆ ಕಲ್ಲೇಟು. ಕರ್ನಾಟಕದಲ್ಲಿ ಭಾರತ್ ಮಾತಾ ಕೀ ಜೈ ಎಂದು ಕೂಗುವುದು ಸುರಕ್ಷಿತವಲ್ಲ. ತುಘಲಕ್ ಯುಗ ಮತ್ತೆ ಬಂದಂತೆ ಭಾಸವಾಗುತ್ತಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಕಿಡಿಕಾರಿದೆ.

ಮೋದಿ ಅವರು 3ನೇ ಬಾರಿಗೆ ಪ್ರಧಾನಿಯಾಗಿ ಪ್ರಮಾಣವಚನ ಸ್ವೀಕರಿಸಿದ ಸಂದರ್ಭದಲ್ಲಿ, 'ಭಾರತ್ ಮಾತಾ ಕೀ ಜೈ' ಎಂದು ಘೋಷಣೆ ಕೂಗಿದ ಬಿಜೆಪಿ ಕಾರ್ಯಕರ್ತರನ್ನು ಗುಂಪೊಂದು ಅಟ್ಟಾಡಿಸಿಕೊಂಡು ಹೋಗಿ ಹಲ್ಲೆ ಮಾಡಿ, ಚೂರಿಯಿಂದ ಇರಿದ ಘಟನೆ ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲೂಕಿನ ಬೋಳಿಯಾರ್‌ನಲ್ಲಿ ನಡೆದಿತ್ತು. ಈ ವಿಚಾರವನ್ನು ಮುಂದಿಟ್ಟುಕೊಂಡು ಕಾಂಗ್ರೆಸ್ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿರುವ ಬಿಜೆಪಿ, ರಾಜ್ಯದಲ್ಲಿ ತುಘಲಕ್ ಆಡಳಿತ ಮರಳಿದೆ ಎಂದು ಟೀಕಿಸಿದೆ.


ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಬಿಜೆಪಿ, ಇನ್ನು ಕರ್ನಾಟಕದಲ್ಲಿ ಭಾರತ್ ಮಾತಾ ಕೀ ಜೈ ಎಂದು ಕೂಗುವುದು ಸುರಕ್ಷಿತವಲ್ಲ. ತುಘಲಕ್ ಯುಗ ಮತ್ತೆ ಬಂದಂತೆ ಭಾಸವಾಗುತ್ತಿದೆ. ಸಿದ್ದರಾಮಯ್ಯ ನೇತೃತ್ವದ ಆಡಳಿತದಲ್ಲಿ ಭಾರತದ ವಿರುದ್ಧ ಬೆಳೆಯುತ್ತಿರುವ ದ್ವೇಷವು ಆತಂಕಕಾರಿಯಾಗಿದೆ. ಮಂಗಳೂರಿನಲ್ಲಿ ಭಾರತ್ ಮಾತಾ ಕಿ ಜೈ ಎಂದು ಘೋಷಣೆ ಕೂಗುತ್ತಾ ಪ್ರಧಾನಿ ಮೋದಿಯವರ ಚುನಾವಣಾ ಗೆಲುವಿನ ಸಂಭ್ರಮದಲ್ಲಿದ್ದ ಬಿಜೆಪಿ ಕಾರ್ಯಕರ್ತರಾದ ಹರೀಶ್ ಅಂಚನ್ ಮತ್ತು ನಂದಕುಮಾರ್ ಅವರ ಮೇಲೆ ಅಬೂಬಕ್ಕರ್, ಬಶೀರ್, ಸಿದ್ದಿಕ್, ಮೋನು ಮತ್ತು ಇತರ 20 ಮಂದಿ ಬರ್ಬರವಾಗಿ ಇರಿದಿದ್ದಾರೆ.

ಈ ಹೇಯ ಕೃತ್ಯವು ಕಾಂಗ್ರೆಸ್ ಸರ್ಕಾರದ ಅಡಿಯಲ್ಲಿ ಕರ್ನಾಟಕದಲ್ಲಿ ಹದಗೆಟ್ಟ ಕಾನೂನು–ಸುವ್ಯವಸ್ಥೆಯನ್ನು ಎತ್ತಿ ತೋರಿಸುತ್ತದೆ. ಹಿಂಸಾತ್ಮಕ ಘಟನೆಗಳು ಮತ್ತು ಅನಿಯಂತ್ರಿತ ಆಕ್ರಮಣಶೀಲತೆಯ ಹೆಚ್ಚಳವು ಭಯ ಮತ್ತು ಅಸ್ಥಿರತೆಯ ವಾತಾವರಣವನ್ನು ಸೃಷ್ಟಿಸುತ್ತಿದೆ. ಇದು ನಾಗರಿಕರನ್ನು ರಕ್ಷಿಸಲು ಮತ್ತು ಶಾಂತಿಯನ್ನು ಕಾಪಾಡಿಕೊಳ್ಳಲು ಬಲವಾದ ಆಡಳಿತ ಮತ್ತು ಭದ್ರತಾ ಕ್ರಮಗಳ ತುರ್ತು ಅಗತ್ಯವನ್ನು ಒತ್ತಿಹೇಳುತ್ತದೆ ಎಂದು ಹೇಳಿದೆ.

ರಾಜ್ಯ ಬಿಜೆಪಿ ಅಧ್ಯಕ್ಷ ಬಿವೈ ವಿಜಯೇಂದ್ರ ಕೂಡ ಘಟನೆಯನ್ನು ಖಂಡಿಸಿದ್ದು, ಕರ್ನಾಟಕದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಕಾಂಗ್ರೆಸ್ ಸರ್ಕಾರವು ಮೂಲಭೂತವಾದಿಗಳನ್ನು ಓಲೈಸುತ್ತಿರುವ ಕಾರಣ ಮತ್ತು ಅವರು ಕಾನೂನಿಗೆ ಹೆದರುವುದಿಲ್ಲ ಎಂಬ ಕಾರಣದಿಂದಾಗಿ ಇಂಥ ಘಟನೆಗಳು ನಡೆಯುತ್ತಿವೆ ಎಂದು ಟೀಕಿಸಿದ್ದಾರೆ. ತಪ್ಪಿತಸ್ಥರ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಹೋರಾಟದ ಮೂಲಕ ಉತ್ತರ ನೀಡಬೇಕಾಗುತ್ತದೆ ಎಂದೂ ಎಚ್ಚರಿಕೆ ನೀಡಿದ್ದಾರೆ. ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು ಪೋಸ್ಟ್ ಮಾಡಿ, ಇದೇನು ಕಾಶ್ಮೀರವೋ ಅಥವಾ ಪಿಓಕೆ ಆಗಿದೆಯೋ ಗೊತ್ತಾಗುತ್ತಿಲ್ಲ. ಕಾಂಗ್ರೆಸ್ ಸರ್ಕಾರದ ತಾಲಿಬಾನ್ ಆಡಳಿತದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದರೆ ರಾಜ್ಯಸಭಾ ಸೀಟು, ಭಾರತ್ ಮಾತಾ ಕೀ ಜೈ ಎಂದರೆ ಕಲ್ಲೇಟು. ರಾಮನ ಹೆಸರು ಹೇಳುವುದೂ ತಪ್ಪು, ಭಾರತ್ ಮಾತಾ ಕೀ ಜೈ ಎಂದರೂ ತಪ್ಪು. ವಿಧಾನಸೌಧದಲ್ಲಿ ಪಾಕಿಸ್ತಾನ್ ಜಿಂದಾಬಾದ್ ಎಂದು ಕೂಗಿದವರ ಮೇಲೆ ಕಠಿಣ ಕ್ರಮ ಕೈಗೊಂಡು ಜೈಲಿಗಟ್ಟಿದ್ದರೆ ಇವತ್ತು ಭಾರತ್ ಮಾತಾ ಕಿ ಜೈ ಎನ್ನುವವರ ಮೇಲೆ ಕಲ್ಲು ತೂರುವ ಧೈರ್ಯ ಮಾಡುತ್ತಿರಲಿಲ್ಲ. ಸಿಎಂ ಸಿದ್ದರಾಮಯ್ಯ ಅವರೇ, ತಮ್ಮ ಸರ್ಕಾರ ಬಂದಾಗಿನಿಂದ ಮತಾಂಧರಿಗೆ, ತೀವ್ರವಾದಿ ಸಂಘಟನೆಗಳಿಗೆ ಕೊಂಬು ಬಂದಂತಾಗಿದ್ದು, ದೇಶವಿದ್ರೋಹಿ ಘಟನೆಗಳು ಪದೇ ಪದೇ ನಡೆಯುತ್ತಲೇ ಇವೆ. ನಿಮ್ಮ ಸರ್ವ ಜನಾಂಗದ ಶಾಂತಿಯ ತೋಟದಲ್ಲಿ ಮುಸ್ಲಿಂ ಮತಾಂಧ ಮುಳ್ಳುಗಳೇ ಹೆಚ್ಚಾಗಿದ್ದು, ಹಿಂದೂಗಳಿಗೆ, ದೇಶಪ್ರೇಮಿಗಳಿಗೆ ನೆಮ್ಮದಿ ಇಲ್ಲದಂತಾಗಿದೆ ಎಂದು ಅಶೋಕ್ ತಿಳಿಸಿದ್ದಾರೆ.

ದಾಖಲೆಗಳು ಇತಿಹಾಸದ ಮೂಲಾಧಾರಗಳಾಗಿವೆ

ವಿಭಾಗೀಯ ಪತ್ರಾಗಾರ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಹೆಚ್.ಎಲ್.ಮಂಜುನಾಥ್ ಅಭಿಮತ



ಮೈಸೂರು, ಜೂ.11– ದಾಖಲೆಗಳು ಇತಿಹಾಸದ ಮೂಲಾಧಾರಗಳಾಗಿವೆ. ದಾಖಲೆಗಳು ನಾಡಿನ ಅಭಿವೃದ್ಧಿಗೆ ಪೂರಕ, ದಾಖಲೆಗಳು ಸಾಂಸ್ಕೃತಿಕ ಪ್ರತಿಬಿಂಬ, ದಾಖಲೆಗಳು ನಾಡಿನ ಸಂಪತ್ತು, ದಾಖಲೆಗಳ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿರುತ್ತದೆ ಎಂದು ವಿಭಾಗೀಯ ಪತ್ರಾಗಾರ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಮಂಜುನಾಥ ಹೆಚ್.ಎಲ್. ತಿಳಿಸಿದರು.

ಅಂತರರಾಷ್ಟ್ರೀಯ ಪತ್ರಾಗಾರ ಸಪ್ತಾಹ ಕಾರ್ಯಕ್ರಮದ ಅಂಗವಾಗಿ ಅರಿವು ವಿದ್ಯಾಸಂಸ್ಥೆಯ ಸಹಯೋಗದೊಂದಿಗೆ ಮೈಸೂರಿನ ವಿಭಾಗೀಯ ಪತ್ರಾಗಾರ ಕಚೇರಿಯಲ್ಲಿ 'ದಾಖಲೆಗಳ ಮಹತ್ವದ ಕುರಿತು ಹಮ್ಮಿಕೊಂಡಿದ್ದ ಉಪನ್ಯಾಸ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪತ್ರಾಗಾರ ಇಲಾಖೆಯು 200 ವರ್ಷಗಳಿಗೂ ಹಳೆಯ ಐತಿಹಾಸಿಕ ನಾಡಿನ ದಾಖಲೆಗಳನ್ನು ಸಂರಕ್ಷಿಸಿ ದಾಖಲೆಗಳ ಸೇವಾ ಕಾರ್ಯವನ್ನು ಒದಗಿಸುತ್ತಿದೆ ಎಂದರು.

ಮೈಸೂರು ವಿಭಾಗೀಯ ಪತ್ರಾಗಾರ ಕಚೇರಿಯಲ್ಲಿ ಸುಮಾರು 1860ರಿಂದ 2019ರವರೆಗೆ ವಿವಿಧ ದಾಖಲೆಗಳನ್ನು ಸಂರಕ್ಷಿಸಲಾಗಿದೆ. ಪ್ರಸ್ತುತ ಸುಮಾರು 1.30 ಕೋಟಿ ದಾಖಲೆಗಳನ್ನು ಡಿಜಿಟಲೀಕರಣ ಮಾಡಿ www.kannada siri.kar.nic.inನಲ್ಲಿ ಅಳವಡಿಸಲಾಗಿದ್ದು, ದಾಖಲೆಗಳನ್ನು ವೀಕ್ಷಿಸಬಹುದಾಗಿದೆ ಎಂದು ಮಾಹಿತಿ ನೀಡಿದರು. ದಾಖಲೆಗಳ ಸಂರಕ್ಷಣೆ ಮತ್ತು ನಿರ್ವಹಣೆ ಬಹಳ ಅತ್ಯಮೂಲ್ಯವಾಗಿರುವುದರಿಂದ ಸಾರ್ವಜನಿಕ ದಾಖಲೆಗಳ ಅಧಿನಿಯಮ ಕಾಯ್ದೆ 2013 ಅನ್ನು ಸರ್ಕಾರ ಜಾರಿಗೆ ತಂದಿದೆ. ದಾಖಲೆಗಳ ಮೌಲ್ಯಗಳನ್ನು ನಿರ್ಧರಿಸಿ ದಾಖಲೆಗಳನ್ನು ಎ.ಬಿ.ಸಿ.ಡಿ ಎಂಬ 4 ವರ್ಗಗಳಾಗಿ ವಿಂಗಡಿಸಲಾಗಿದೆ. ಕಡ್ಡಾಯವಾಗಿ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿಯೂ ಈ ಕಾಯ್ದೆಯನ್ವಯ ದಾಖಲೆಗಳ ನಿರ್ವಹಿಸಲು ಉಲ್ಲೇಖಿಸಲಾಗಿರುತ್ತದೆ ಎಂದರು.

ಅರಿವು ವಿದ್ಯಾ ಸಂಸ್ಥೆ ಕಾರ್ಯದರ್ಶಿ ಜನಾರ್ಧನ ಸಿ.ಎಸ್. ಮಾತನಾಡಿ, ಶಾಲಾ ಮಕ್ಕಳಿಗೆ ಇತಿಹಾಸವನ್ನು ಅರಿಯಲು ಪತ್ರಾಗಾರದ ದಾಖಲೆಗಳನ್ನು ನೋಡಬೇಕು. ಇಲಾಖೆಯಲ್ಲಿರುವ ದಾಖಲೆಗಳು ಐತಿಹಾಸಿಕ ಮಹತ್ವದ ದಾಖಲೆಗಳಾಗಿರುತ್ತವೆ. ಶಾಲಾ ಹಂತದಿಂದಲೇ ದಾಖಲೆಗಳನ್ನು ನೋಡಲು ಸಂರಕ್ಷಿಸಲು ಮುಂದಾಗಬೇಕು ಎಂದರು.

ಮಹಾರಾಜ ಕಾಲೇಜಿನ ಪ್ರಾಧ್ಯಾಪಕ ಡಾ. ಪವಮಾನ ಮಾತನಾಡಿ, ಪತ್ರಾಗಾರ ಇಲಾಖೆಯಲ್ಲಿರುವ ದಾಖಲೆಗಳು ಐತಿಹಾಸಿಕ ಮಹತ್ವದ್ದಾಗಿರುತ್ತದೆ. ಪ್ರಾಥಮಿಕ ಆಕರಗಳಾಗಿ ಸಂಶೋಧಕರು ಇವುಗಳನ್ನು ಬಳಸಬಹುದಾಗಿರುತ್ತದೆ. ಇತಿಹಾಸದ ನೈಜತೆ ಪರಿಶೀಲನೆಗೆ ಈ ದಾಖಲೆಗಳು ಸಹಕಾರಿಯಾಗಿವೆ. ಗಾಂಧೀಜಿಯವರು ಕರ್ನಾಟಕಕ್ಕೆ ಭೇಟಿ ನೀಡಿದ ದಾಖಲೆಗಳು ಪತ್ರಾಗಾರದಲ್ಲಿವೆ. ಖಾಸಗಿ ಪತ್ರಿಕೆಗಳಿಂದ ಹಿಂದಿನ ಕಾಲದ ಐತಿಹಾಸಿಕ ಘಟನೆಗಳನ್ನು ಪತ್ರಾಗಾರದಲ್ಲಿರುವ ಪತ್ರಿಕೆಗಳಲ್ಲಿ ಓದಿ ತಿಳಿಯಬಹುದಾಗಿರುತ್ತದೆ. ಗಣಕೀಕರಣ ಮತ್ತು ಮೈಕ್ರೋ ಫಿಲ್ಮ್ ಮಾಡಿರುವ ದಾಖಲೆಗಳನ್ನು ಸುಲಭವಾಗಿ ವೀಕ್ಷಿಸಬಹುದಾಗಿರುತ್ತದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಪತ್ರಾಗಾರ ಇಲಾಖೆಯ ಪ್ರಥಮ ದರ್ಜೆ ಸಹಾಯಕ ಪರೀಕ್ಷಿತ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ನಿವೃತ್ತರಿಗೆ ಪಿಂಚಣಿ ವಿಳಂಬ; ಇಪಿಎಫ್ ಕಚೇರಿ ಮುಂದೆ ಪ್ರತಿಭಟನೆ



ಮೈಸೂರಿನ ಗಾಯತ್ರಿಪುರಂನಲ್ಲಿರುವ ಇಪಿಎಫ್ ಕಚೇರಿ ಮುಂಭಾಗ ನಿವೃತ್ತರಿಗೆ ಇಪಿಎಫ್ ಪಿಂಚಣಿ ನೀಡಲು ವಿಳಂಬ ಮಾಡುತ್ತಿರುವುದನ್ನು ಖಂಡಿಸಿ ಮಂಡ್ಯ ಜಿಲ್ಲಾ ಹಾಲು ಒಕ್ಕೂಟದ ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಸಂಘದಿಂದ ಪ್ರತಿಭಟಿಸಲಾಯಿತು.

ಮೈಸೂರು, ಜೂ.11(ಜಿಎ)–ನಿವೃತ್ತರಿಗೆ ಇಪಿಎಫ್ ಪಿಂಚಣಿ ನೀಡಲು ವಿಳಂಬ ಮಾಡುತ್ತಿರುವುದನ್ನು ಖಂಡಿಸಿ ಮಂಡ್ಯ ಜಿಲ್ಲಾ ಹಾಲು ಒಕ್ಕೂಟದ ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಸಂಘದಿಂದ ಗಾಯತ್ರಿಪುರಂನಲ್ಲಿರುವ ಇಪಿಎಫ್ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.

ಮಂಡ್ಯ ಹಾಲು ಒಕ್ಕೂಟದಲ್ಲಿ 1995ರಿಂದ ನಿವೃತ್ತರಾದ 280 ಮಂದಿ ನಿವೃತ್ತ ನೌಕರರು ಮತ್ತು ಸೇವಾನಿರತ ನೌಕರರು ಅರ್ಜಿ ಸಲ್ಲಿಸಿದ್ದು, ಇದನ್ನು ಪರಿಶೀಲಿಸಿದ ಮಂಡ್ಯ ಹಾಲು ಒಕ್ಕೂಟ ಅನುಮೋದನೆ ನೀಡಿತ್ತು. ಆದರೆ, ಇಪಿಎಫ್‌ಗೆ ಎಲ್ಲಾ ದಾಖಲೆಗಳನ್ನು ನೀಡಿ ಏಳೆಂಟು ತಿಂಗಳಾದರೂ ಸೇವೆಯಲ್ಲಿರುವ ಸುಮಾರು 15 ನೌಕರರಿಗೆ ವ್ಯತ್ಯಾಸ ಮೊತ್ತ ಪಾವತಿಗೆ ಬೇಡಿಕೆ ಪತ್ರ ನೀಡಿ ಅವರಲ್ಲಿ ಕೆಲವರಿಂದ ವ್ಯತ್ಯಾಸ ಮೊತ್ತ ಪಡೆದುಕೊಂಡಿರುವುದನ್ನು ಬಿಟ್ಟರೆ ಇದುವರೆಗೆ ಒಬ್ಬ ನಿವೃತ್ತನಿಗೂ ಬೇಡಿಕೆ ಪತ್ರ ನೀಡಿಲ್ಲ. ಈ ಕುರಿತು ಹಲವು ಬಾರಿ ವಿಚಾರಿಸಿದರೂ ಸರಿಯಾಗಿ ಸ್ಪಂದಿಸುತ್ತಿಲ್ಲ. ಇದರಿಂದಾಗಿ ಇಪಿಎಫ್ ಸಿಗದೆ ನಿವೃತ್ತರು ಪರದಾಡುವಂತಾಗಿದೆ ಎಂದು ಕಿಡಿಕಾರಿದರು.

ನಿವೃತ್ತರಾದ ನಮ್ಮ ಕುಟುಂಬ ನಿರ್ವಹಣೆಗೆ ಇಪಿಎಫ್ ಆಧಾರ. 2022ರ ಸುಪ್ರೀಂಕೋರ್ಟ್ ಆದೇಶದ ಅನುದಾನ ಎರಡು ವಾರಗಳ ಒಳಗೆ ವಾಸ್ತವ ವೇತನದ ಮೇಲೆ ಇಪಿಎಫ್ ಪಿಂಚಣಿ ಮಾಡಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಅಧ್ಯಕ್ಷ ಬಿ.ಜಿ.ಪೂವಯ್ಯ, ಕಾರ್ಯದರ್ಶಿ ವಿ.ನಾಗರಾಜ್ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ಎನ್‌ಡಿಎ ಸರ್ಕಾರದಲ್ಲಿ ಸಾಮಾಜಿಕ ನ್ಯಾಯ ಕಡೆಗಣನೆ

- ಸಂಪುಟದಲ್ಲಿ ದಲಿತ, ಅಲ್ಪಸಂಖ್ಯಾತರಿಗೆ ಸೂಕ್ತ ಸ್ಥಾನಮಾನವಿಲ್ಲ
- ಪರಾಜಿತ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ ಆರೋಪ



ಮಡಿಕೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಎಂ.ಲಕ್ಷ್ಮಣ ಮಾತನಾಡಿದರು. ಧರ್ಮಜ ಉತ್ತಪ್ಪ, ಟಾಟು ಮೊಣ್ಣಪ್ಪ, ಹೆಚ್.ಎ.ಹಂಸ, ಮುಕ್ಕಾಟಿರ ಸಂದೀಪ್, ವಿಶು ರಂಜಿತ್ ಇದ್ದರು.

ಮಡಿಕೇರಿ, ಜೂ.11– ಕೇಂದ್ರದಲ್ಲಿ ಸತತ 3ನೇ ಬಾರಿಗೆ ಅಧಿಕಾರಕ್ಕೆ ಬಂದಿರುವ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರದ ಸಚಿವ ಸಂಪುಟದಲ್ಲಿ ದಲಿತ, ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರಿಗೆ ಸೂಕ್ತ ಸ್ಥಾನಮಾನ ನೀಡದೆ ಸಾಮಾಜಿಕ ನ್ಯಾಯ ಕಡೆಗಣಿಸಲಾಗಿದೆ ಎಂದು ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಪರಾಜಿತ ಅಭ್ಯರ್ಥಿ ಎಂ.ಲಕ್ಷ್ಮಣ ಆರೋಪಿಸಿದರು.

ಮಡಿಕೇರಿಯಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 72 ಸಚಿವರ ಪೈಕಿ ಒಂದೇ ಸಮುದಾಯದ 25 ಮಂದಿಗೆ ಸ್ಥಾನ ನೀಡಲಾಗಿದೆ. ಶೇ.2ರಷ್ಟು ಇರುವ ಬ್ರಾಹ್ಮಣರು ಸಂಪುಟದಲ್ಲಿ ಶೇ.35ರಷ್ಟು ಸ್ಥಾನ ಪಡೆದುಕೊಂಡಿದ್ದಾರೆ. ಬೇರೆ ಸಮುದಾಯದವರು ಬಿಜೆಪಿಗೆ ಮತ ಹಾಕಿಲ್ಲವೇ. ಕರ್ನಾಟಕದಲ್ಲಿ 17 ಬಿಜೆಪಿ ಸಂಸದರಿದ್ದು, ಐವರಿಗೆ ಸಚಿವ ಸ್ಥಾನ ನೀಡಲಾಗಿದೆ. ದಲಿತ, ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರನ್ನು ಕಡೆಗಣಿಸಲಾಗಿದೆ. ಲಿಂಗಾಯತ ಸಮುದಾಯದ ವಿ. ಸೋಮಣ್ಣಗೆ ರಾಜ್ಯ ಖಾತೆ ನೀಡಲಾಗಿದೆ. ನಿಜವಾಗಿಯೂ ಬಿಜೆಪಿ ಬಳಿ ಸಾಮಾಜಿಕ ನ್ಯಾಯ ಇದೆಯೇ? ಎಂದು ಪ್ರಶ್ನಿಸಿದರು.

'ಹೆಚ್‌ಡಿಕೆ' ಸಮಸ್ಯೆ ಬಗೆಹರಿಸಲಿ: ಕೇಂದ್ರದಲ್ಲಿ ಸಚಿವರಾಗಿರುವ ಜೆಡಿಎಸ್‌ನ ಹೆಚ್.ಡಿ.ಕುಮಾರಸ್ವಾಮಿ ಅವರು ಕೇವಲ ಕಾಂಗ್ರೆಸ್ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಟೀಕಿಸುವುದರಲ್ಲೇ ಕಾಲಹರಣ ಮಾಡದೆ, ರಾಜ್ಯದ ವಿವಿಧ ಸಮಸ್ಯೆಗಳನ್ನು ಬಗೆಹರಿಸಲು ಬದ್ಧರಾಗಿರಬೇಕು. ಕಾವೇರಿ ವಿವಾದ, ಮೇಕೆದಾಟು, ಕಳಸಾ ಬಂಡೂರಿ ಯೋಜನೆ, ಕಸ್ತೂರಿ ರಂಗನ್ ವರದಿ ವಿವಾದ, ರಾಜ್ಯಕ್ಕೆ ಕೇಂದ್ರದಿಂದ ಬರಬೇಕಾದ ಜಿಎಸ್‌ಟಿ ಮತ್ತು ಬರ ಪರಿಹಾರ ಬಾಕಿ ಸೇರಿದಂತೆ ವಿವಿಧ ಬೇಡಿಕೆಗಳ ಬಗ್ಗೆ ಸ್ಪಂದಿಸಿದರೆ ನಾವು ಸಂಪೂರ್ಣ ಸಹಕಾರ ನೀಡುತ್ತೇವೆ ಎಂದು ತಿಳಿಸಿದರು.

ಹಳೇ ಮೈಸೂರು ಭಾಗ ಸೇರಿದಂತೆ ರಾಜ್ಯದ ವಿವಿಧೆಡೆ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಚೆನ್ನಾಗಿ ಕೆಲಸ ಮಾಡಿದೆ. ಇದರ ಪರಿಣಾಮ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದಲ್ಲಿ ನನಗೆ ಸೋಲಾಗಿದೆ. ನಾನು ಕೇವಲ ಸೋತಿದ್ದೇನೆ ಅಷ್ಟೇ ಸತ್ತಿಲ್ಲ ಎಂದರು.

ಸೋಲಿನಿಂದ ನಿರಾಸೆಯಾಗಿದೆ: ಚುನಾವಣೆಯಲ್ಲಿ ಸ್ಪರ್ಧಿಸಲು ನನಗೆ ಅವಕಾಶ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರಿಗೆ ಕೃತಜ್ಞತೆ ಸಲ್ಲಿಸುತ್ತೇವೆ. ನನ್ನ ಪರವಾಗಿ ಸಾಕಷ್ಟು ಶ್ರಮಿಸಿದ ಪಕ್ಷದ ಜಿಲ್ಲಾಧ್ಯಕ್ಷರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರಿಗೆ ನಾನು ಸೋತು ನಿರಾಸೆ ಉಂಟು ಮಾಡಿದ್ದೇನೆ. ಅವರ ಬಳಿಯೂ ಕ್ಷಮೆ ಕೋರುತ್ತೇನೆ. ನನ್ನ ಸೋಲಿಗೆ ದುರಾದೃಷ್ಟ ಕಾರಣವೇ ಹೊರತು, ಬೇರೆ ಯಾರೂ ಅಲ್ಲ. ನಾನು ನಿರಂತರವಾಗಿ ಸೋಲುತ್ತಲೇ ಬಂದಿದ್ದೇನೆ. ಸೋಲಿನ ಬಗ್ಗೆ ಪಕ್ಷದ ಸಭೆಯಲ್ಲಿ ಆತ್ಮಾವಲೋಕನ ನಡೆಸುತ್ತೇವೆ ಎಂದು ಲಕ್ಷ್ಮಣ ಬೇಸರ ವ್ಯಕ್ತಪಡಿಸಿದರು.

ಮರು ಪರಿಶೀಲನೆ ಅಗತ್ಯ: ಉಚಿತ ವಿದ್ಯುತ್ ಮತ್ತು ಉಚಿತ ಪ್ರಯಾಣದ ಶಕ್ತಿ ಯೋಜನೆಯಲ್ಲಿ ನ್ಯೂನತೆ ಇದ್ದು, ಇದನ್ನು ಸರಿಪಡಿಸುವ ಅಗತ್ಯವಿದೆ. ಕೆಲವರು ವಂಚನೆಯ ಮೂಲಕ ಉಚಿತ ವಿದ್ಯುತ್ ಭಾಗ್ಯದ ಲಾಭ ಪಡೆಯುತ್ತಿದ್ದಾರೆ. ಲಕ್ಷ ಲಕ್ಷ ಸಂಬಳ ಪಡೆಯುವವರು ಕೂಡ ಬಸ್‌ನಲ್ಲಿ ಉಚಿತವಾಗಿ ಪ್ರಯಾಣಿಸುತ್ತಿದ್ದಾರೆ. ಆದ್ದರಿಂದ ಗ್ಯಾರಂಟಿ ಯೋಜನೆಗಳ ಮರು ಪರಿಶೀಲನೆಯ ಅಗತ್ಯವಿದೆ ಎಂದು ಹೇಳಿದೇನೆಯೇ ಹೊರತು, ಯೋಜನೆಗಳನ್ನು ನಿಲ್ಲಿಸುವಂತೆ ನಾನು ಎಲ್ಲೂ ಹೇಳಿಲ್ಲ ಎಂದು ಲಕ್ಷ್ಮಣ ಸ್ಪಷ್ಟಪಡಿಸಿದರು. ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಧರ್ಮಜ ಉತ್ತಪ್ಪ, ಜಿಲ್ಲಾ ವಕ್ತಾರ ಟಾಟು ಮೊಣ್ಣಪ್ಪ, ಮಡಿಕೇರಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹೆಚ್.ಎ.ಹಂಸ, ಡಿಸಿಸಿ ಸದಸ್ಯರಾದ ಮುಕ್ಕಾಟಿರ ಸಂದೀಪ್, ವಿಶು ರಂಜಿತ್ ಉಪಸ್ಥಿತರಿದ್ದರು.

ಕೊಡವರು ಜಾಗೃತರಾಗದಿದ್ದರೆ ಅಪಾಯ ಗ್ಯಾರಂಟಿ



ಕೊಡಗು ಜಿಲ್ಲೆಯ ಭೂಪರಿವರ್ತನೆಗಳ ವಿರುದ್ಧ ಸಿಎನ್‌ಸಿ ಸಂಘಟನೆ ಕಾರ್ಯಕರ್ತರು ಬಾಳೆಲೆಯಲ್ಲಿ ಮಾನವ ಸರಪಳಿ ನಡೆಸಿದರು.

ಮಡಿಕೇರಿ, ಜೂ.11– ಸಿದ್ದಾಪುರದ 2400 ಎಕರೆ ಕಾಫಿ ತೋಟ ಸೇರಿದಂತೆ ಕೊಡಗು ಜಿಲ್ಲಾದ್ಯಂತ ನಡೆಯುತ್ತಿರುವ ಬೃಹತ್ ಭೂಪರಿವರ್ತನೆ ವಿರುದ್ಧ ಕೊಡವರು ಜಾಗೃತರಾಗದಿದ್ದರೆ ಅಪಾಯ ಕಾದಿದೆ ಎಂದು ಕೊಡವ ನ್ಯಾಷನಲ್ ಕೌನ್ಸಿಲ್ ಸಂಘಟನೆ ಅಧ್ಯಕ್ಷ ಎನ್.ಯು. ನಾಚಪ್ಪ ಎಚ್ಚರಿಸಿದರು.

ಬಾಳೆಲೆಯಲ್ಲಿ ಮಂಗಳವಾರ ಕೊಡಗು ಜಿಲ್ಲೆಯ ಭೂಪರಿವರ್ತನೆಗಳ ವಿರುದ್ಧ ಸಿಎನ್‌ಸಿ ಸಂಘಟನೆ ವತಿಯಿಂದ ಆಯೋಜಿಸಿದ್ದ ಮಾನವ ಸರಪಳಿ ಜನಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಿದ್ದಾಪುರದ ಕಾಫಿ ತೋಟದಲ್ಲಿ ಮರಗಳನ್ನು ಕಡಿಯಲು ಅನುಮತಿ ಪಡೆದು ಕೋಟ್ಯಾಂತರ ರೂ. ಬೆಲೆಬಾಳುವ ಸುಮಾರು 3 ರಿಂದ 4 ಸಾವಿರ ಮರಗಳನ್ನು ಹನನ ಮಾಡಲಾಗಿದೆ. ಈ ಪ್ರಕರಣದ ಬಗ್ಗೆ ಸಿಬಿಐ ತನಿಖೆ ನಡೆಯಬೇಕು ಎಂದು ಒತ್ತಾಯಿಸಿದರು.

ಕಾಫಿ ತೋಟಗಳ ಭೂಪರಿವರ್ತನೆಯಿಂದ ಕೊಡಗಿನ ಎಲ್ಲಾ ಗ್ರಾಮಗಳು ನಾಶವಾಗುತ್ತಿವೆ. ಮಣ್ಣು ಅಗೆಯುವ ಕೆಲಸದಿಂದ ಜಲಮೂಲಗಳು ಈಗಾಗಲೇ ಮುಚ್ಚಿವೆ. ಇದರಿಂದ ಕೊಡಗಿನಲ್ಲಿ ಆಗುವ ಅಪಾಯದ ಬಗ್ಗೆ ಜನರಲ್ಲಿ ಜಾಗೃತಿ ಮೂಡಬೇಕು. ಕೊಡವ ಭೂ ರಾಜಕೀಯ ಸ್ವಾಯತ್ತತೆ, ಎಸ್‌ಟಿ ಟ್ಯಾಗ್, ಕೊಡವರ ಆಂತರಿಕ ರಾಜಕೀಯ ಸ್ವಯಂ ನಿರ್ಣಯದ ಹಕ್ಕುಗಳನ್ನು ಮಾನ್ಯ ಮಾಡಿದಾಗ ಮಾತ್ರ ಪವಿತ್ರ ಕೊಡವ ಭೂಮಿಯನ್ನು ಉಳಿಸಿಕೊಳ್ಳಲು ಸಾಧ್ಯ ಎಂದರು.

ಜೂ.17ರಂದು ಸಿದ್ದಾಪುರದಲ್ಲಿ ಮಾನವ ಸರಪಳಿ: ಭೂಪರಿವರ್ತನೆ ವಿರುದ್ಧ ಜೂ.17ರಂದು ಸಿದ್ದಾಪುರದಲ್ಲಿ ಜನಜಾಗೃತಿ ಮಾನವ ಸರಪಳಿ ಕಾರ್ಯಕ್ರಮ ನಡೆಯಲಿದೆ. ಮುಂದಿನ ದಿನಗಳಲ್ಲಿ ಮಡಿಕೇರಿ, ಸುಂಟಿಕೊಪ್ಪ, ಮಾದಾಪುರ, ಚೆಟ್ಟಳ್ಳಿ, ಚೇರಂಬಾಣೆ, ಮೂರ್ನಾಡು, ಕಕ್ಕಬೆ, ನಾಪೋಕ್ಲು, ವಿರಾಜಪೇಟೆ, ಗೋಣಿಕೊಪ್ಪ, ತಿತಿಮತಿ, ಪೊನ್ನಂಪೇಟೆ, ಹುದಿಕೇರಿ, ಕುಟ್ಟ, ಶ್ರೀಮಂಗಲ, ಟಿ.ಶೆಟ್ಟಿಗೇರಿ ಮತ್ತಿತರೆಡೆ ಜಾಗೃತಿ ಕಾರ್ಯಕ್ರಮ ನಡೆಸಲಾಗುವುದು ಎಂದರು.

ಪೋಡಮಾಡ ಜಾನಕಿ, ಮಾಪಂಗಡ ಯಮುನಾ, ಗಾಂಡಂಗಡ ಪ್ರತಿಮಾ, ಅಡ್ಡೇಂಗಡ ಪೊನ್ನಮ್ಮ, ಅಡ್ಡೇಂಗಡ ಗ್ರೀಷ್ಮಾ, ಮಲ್ಚಿರ ಕವಿತಾ ಬೋಜಪ್ಪ, ಮುಕ್ಕಾಟಿರ ಜಾನಕಿ ವಾಸು, ಅರ್ಮಣಮಾಡ ಮಮತಾ, ಕೊಕ್ಕಂಗಡ ಸ್ಮಿತಾ, ಅಡ್ಡೇಂಗಡ ಕಾವೇರಮ್ಮ, ಮಾಪಂಗಡ ಅಶೋಕ್, ಪೋಡಮಾಡ ಗಿರೀಶ್, ಕಾಂಡೇರ ಸುರೇಶ್, ಅಲ್ಮೇಂಗಡ ಬೋಸ್ ಮಂದಣ್ಣ, ಅಲ್ಮೇಂಗಡ ಪೊನ್ನಪ್ಪ, ಮಚ್ಚಮಾಡ ದೊರೆ ಉತ್ತಯ್ಯ, ಚಿಂಡಮಾಡ ಜಗ ಮತ್ತಿತರರು ಹಾಜರಿದ್ದರು.

ಗ್ರಾಪಂ ಕಚೇರಿ ಎದುರು ಸಿಪಿಐಎಂ ಪ್ರತಿಭಟನೆ



ನೆಲ್ಲಿಹುದಿಕೇರಿ ಗ್ರಾಪಂ ಕಚೇರಿ ಎದುರು ಸಿಪಿಐಎಂ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಮಡಿಕೇರಿ, ಜೂ.11–ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಭಾರತ (ಮಾರ್ಕ್ಸ್‌ವಾದಿ) ಕಮ್ಯೂನಿಸ್ಟ್ ಪಕ್ಷದ ಕಾರ್ಯಕರ್ತರು ಮಂಗಳವಾರ ನೆಲ್ಲಿಹುದಿಕೇರಿಯಲ್ಲಿ ಪ್ರತಿಭಟನೆ ನಡೆಸಿದರು.

ನೆಲ್ಲಿಹುದಿಕೇರಿ ಗ್ರಾಪಂ ಕಚೇರಿ ಎದುರು ಜಮಾಯಿಸಿದ ಪ್ರತಿಭಟನಾಕಾರರು, ಕೊಡಗು ಜಿಲ್ಲೆಯಲ್ಲಿ ಒತ್ತುವರಿ ಸರ್ಕಾರಿ ಜಾಗವನ್ನು ಕಡಿಮೆ ದರಕ್ಕೆ ಗುತ್ತಿಗೆ ಆಧಾರದಲ್ಲಿ ನೀಡಲಾಗುತ್ತಿದೆ. ಈ ಆದೇಶವನ್ನು ಹಿಂಪಡೆಯಬೇಕು. ಅಪಾಯಕಾರಿ ಜಾಗದಲ್ಲಿರುವ ಬಡ ಕುಟುಂಬ ಹಾಗೂ ಕೂಲಿ ಕಾರ್ಮಿಕರಿಗೆ ನಿವೇಶನ ನೀಡಬೇಕು ಎಂದು ಆಗ್ರಹಿದರು.

ಸಿಪಿಐಎಂ ಕಾರ್ಯದರ್ಶಿ ಪಿ.ಆರ್.ಭರತ್ ಮಾತನಾಡಿ, ಉಳ್ಳವರ ಪರವಾದ ನಿಯಮಗಳನ್ನು ತಕ್ಷಣ ರೂಪಿಸುವ ಸರ್ಕಾರಗಳು ಬಡವರು ಹಾಗೂ ಕೂಲಿ ಕಾರ್ಮಿಕರನ್ನು ನಿರ್ಲಕ್ಷಿಸುತ್ತಲೇ ಬರುತ್ತಿವೆ. ಬಡವರಿಗೆ ನಿವೇಶನ ಅಥವಾ ವಸತಿ ನೀಡುವಂತೆ ಹಲವು ವರ್ಷಗಳಿಂದ ಸಿಪಿಐಎಂ ಹೋರಾಟಗಳನ್ನು ನಡೆಸುತ್ತಿದ್ದರೂ, ಯಾವುದೇ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಸ್ಪಂದಿಸುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ನೆಲ್ಲಿಹುದಿಕೇರಿ ವ್ಯಾಪ್ತಿಯ ಕೂಲಿ, ಕೃಷಿ ಕಾರ್ಮಿಕರು, ದಲಿತರು, ಆದಿವಾಸಿಗಳು, ಅಲ್ಪಸಂಖ್ಯಾತರು ಸೇರಿದಂತೆ ಬಡ ಕುಟುಂಬಗಳು ಹುಟ್ಟಿನಿಂದಲೂ ಬಾಡಿಗೆ ಮನೆಯಲ್ಲೇ ವಾಸಿಸುತ್ತಿವೆ. ನದಿದಡ, ಬೆಟ್ಟ ಗುಡ್ಡಗಳ ಮೇಲಿನ ಅಪಾಯಕಾರಿ ಲೈನ್ ಮನೆಗಳಲ್ಲಿ ಆಶ್ರಯ ಪಡೆದಿವೆ. ಸರ್ಕಾರ ನಿಗದಿಪಡಿಸಿರುವ ಕನಿಷ್ಠ ವೇತನ ಮತ್ತು ಮೂಲ ಸೌಲಭ್ಯಗಳನ್ನು ನೀಡದೆ ವಂಚಿಸಲಾಗುತ್ತಿದೆ ಎಂದು ಆರೋಪಿಸಿದರು.

ನಂತರ ತಹಸೀಲ್ದಾರ್ ಕಿರಣ್ ಗೌರಯ್ಯ ಅವರಿಗೆ ಮನವಿ ಸಲ್ಲಿಸಲಾಯಿತು. ಪ್ರತಿಭಟನೆಯಲ್ಲಿ ಸಿಪಿಐಎಂ ಜಿಲ್ಲಾ ಕಾರ್ಯದರ್ಶಿ ಹೆಚ್.ಬಿ.ರಮೇಶ್, ಸದಸ್ಯರಾದ ಎ.ಕೆ.ಚಂದ್ರನ್, ಕೆ.ಶಿವರಾಮನ್, ವೈರವಿ, ಬೋಜಿ, ಡಿ.ಟಿ.ಉದಯನ್, ಲಲಿತಮ್ಮ, ಯೂಸೂಫ್, ಅಬಿಬ್, ಕಾವೇರಿ, ಶೌಕತ್ ಪಾಲ್ಗೊಂಡಿದ್ದರು.

ಹರಳು ಕಲ್ಲು, ನಾಟಾ ಸಾಗಣೆ: ಮೂವರ ಬಂಧನ

ಕುಶಾಲನಗರ, ಜೂ.11– ಕುಶಾಲನಗರ ವಲಯ ಅರಣ್ಯ ವ್ಯಾಪ್ತಿಯಲ್ಲಿ ಮಂಗಳವಾರ ಅಕ್ರಮವಾಗಿ ಹರಳು ಕಲ್ಲು ಹಾಗೂ ಬೀಟೆ ನಾಟಾ ಸಾಗಿಸುತ್ತಿದ್ದ ಮೂವರನ್ನು ಮಾಲು ಸಮೇತ ಅರಣ್ಯಾಧಿಕಾರಿಗಳು ಬಂಧಿಸಿದ್ದಾರೆ. ಕುಶಾಲನಗರ ಕಡೆಯಿಂದ ಹುಣಸೂರು ಕಡೆಗೆ ಅಕ್ರಮವಾಗಿ ಹರಳು ಕಲ್ಲು ಸಾಗಿಸುತ್ತಿದ್ದ ಮೂವರನ್ನು ವಲಯ ಅರಣ್ಯಾಧಿಕಾರಿ ರತನ್ ಕುಮಾರ್ ನೇತೃತ್ವದಲ್ಲಿ ಅರಣ್ಯ ಸಿಬ್ಬಂದಿ ಬಂಧಿಸಿ, 2495 ಕೆಜಿ ಹರಳು ಕಲ್ಲು ವಶ ಪಡಿಸಿಕೊಂಡಿದ್ದಾರೆ.

ಓಡಿ ಹೋದ ಆರೋಪಿಗಳು: ಮತ್ತೊಂದು ಪ್ರಕರಣದಲ್ಲಿ ಕುಶಾಲನಗರದಿಂದ ಮೈಸೂರು ಕಡೆಗೆ ಪಿಕ್‌ಅಪ್ ವಾಹನದಲ್ಲಿ ಬೀಟೆ ನಾಟಾಗಳನ್ನು ಸಾಗಿಸುತ್ತಿತ್ತು. ಈ ವೇಳೆ ಟೋಲ್ ಗೇಟ್ ಬಳಿಯ ತಪಾಸಣಾ ಕೇಂದ್ರದಲ್ಲಿ ಅರಣ್ಯ ಸಿಬ್ಬಂದಿ ಪರಿಶೀಲಿಸಿದಾಗ ಅಕ್ರಮವಾಗಿ ನಾಟಾ ಸಾಗಿಸುತ್ತಿರುವುದು ಪತ್ತೆಯಾಗಿದೆ. ಇದೇ ವೇಳೆ ವಾಹನ ಚಾಲಕ ಸೇರಿ ಇಬ್ಬರು ಆರೋಪಿಗಳು ಓಡಿ ಹೋಗಿದ್ದಾರೆ.

ಈ ಸಂಬಂಧ ಕುಶಾಲನಗರ ವಲಯ ಅರಣ್ಯಾಧಿಕಾರಿಗಳು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಯಾವುದೇ ಕಾರಣಕ್ಕೂ 'ಗ್ಯಾರಂಟಿ' ನಿಲ್ಲಿಸುವುದಿಲ್ಲ



ಸುದ್ದಿಗೋಷ್ಠಿಯಲ್ಲಿ ಶಾಸಕ ಎ.ಎಸ್.ಪೊನ್ನಣ್ಣ ಮಾತನಾಡಿದರು.

ವಿರಾಜಪೇಟೆ, ಜೂ.11– ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಯಾವುದೇ ಕಾರಣಕ್ಕೂ ನಿಲ್ಲಿಸಬಾರದು. ಕಳೆದ ಲೋಕಸಭೆ ಚುನಾವಣೆಗಿಂತ ಈ ಬಾರಿ ಕಾಂಗ್ರೆಸ್ ಮತ ಗಳಿಕೆಯಲ್ಲಿ ಏರಿಕೆಯಾಗಿದೆ ಎಂದು ಶಾಸಕ ಎ.ಎಸ್. ಪೊನ್ನಣ್ಣ ಹೇಳಿದರು.

ವಿರಾಜಪೇಟೆ ಪಂಜರುಪೇಟೆಯ ತಮ್ಮ ಗೃಹ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ಜನತೆಗೆ ಅನುಕೂಲವಾಗುತ್ತಿರುವ ಗ್ಯಾರಂಟಿ ಯೋಜನೆಗಳಲ್ಲಿ ಲೋಪವಿದ್ದರೆ ಮಾತ್ರ ಸರಿಪಡಿಸುತ್ತೇವೆ. ಎಂದಿಗೂ ನಿಲ್ಲಿಸುವುದಿಲ್ಲ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ವಿರೋಧ ಪಕ್ಷ ಇಲ್ಲದೆ ಇದ್ದಾಗ ಆಡಳಿತ ಪಕ್ಷದ ಸರ್ವಾಧಿಕಾರಿ ಧೋರಣೆಗೆ ಕಾರಣವಾಗುತ್ತದೆ. ಆದ್ದರಿಂದ ಈ ಬಾರಿ ದೇಶದಲ್ಲಿ ಜನರು ಸಮನ ತೀರ್ಪು ನೀಡಿದ್ದಾರೆ ಎಂದರು.

ರಾಜ್ಯದಲ್ಲಿ ನಡೆದ ಮೊದಲ ಹಂತದ ಲೋಕಸಭೆ ಚುನಾವಣೆಯಲ್ಲಿ ಮೈಸೂರು–ಕೊಡಗು ಸೇರಿ 14 ಕ್ಷೇತ್ರಗಳ ಪೈಕಿ 2 ಕ್ಷೇತ್ರಗಳಲ್ಲಿ ಮಾತ್ರ ಕಾಂಗ್ರೆಸ್ ಜಯಗಳಿಸಲು ಸಾಧ್ಯವಾಗಿದೆ. ಎರಡನೇ ಹಂತದ ಚುನಾವಣೆಯಲ್ಲಿ 14 ಕ್ಷೇತ್ರಗಳಲ್ಲಿ ಕಾಂಗ್ರೆಸ್‌ಗೆ 7 ಸ್ಥಾನ ಲಭಿಸಿವೆ. ಒಟ್ಟಾರೆ ಸರ್ಕಾರದ ಜನಪರ ಕೆಲಸಕ್ಕೆ ಜನರು ಮತದಾನದಲ್ಲಿ ಶೇಕಡವಾರು ಏರಿಕೆಯೇ ನಿದರ್ಶನವಾಗಿದೆ. ರಾಜ್ಯದ ದಕ್ಷಿಣ ಭಾಗದಲ್ಲಿ ಕಾಂಗ್ರೆಸ್‌ಗೆ ಬಿಜೆಪಿ–ಜೆಡಿಎಸ್ ಹೊಂದಾಣಿಕೆಯಿಂದ ಹಿನ್ನಡೆಯಾಗಿದೆ. ವಿರಾಜಪೇಟೆಯಲ್ಲಿ ಕಾಂಗ್ರೆಸ್‌ಗೆ ನಿರೀಕ್ಷಿತ ಮತ ಲಭಿಸಿಲ್ಲ, ಬಿಜೆಪಿಗೆ ಹೆಚ್ಚು ಮತ ಬಂದಿವೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ವಿರಾಜಪೇಟೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪಟ್ಟಡ ರಂಜಿ ಪೂಣಚ್ಚ, ನಗರಾಧ್ಯಕ್ಷ ಮಾದಂಡ ತಿಮ್ಮಯ್ಯ, ಪುರಸಭಾ ಸದಸ್ಯರಾದ ಮನೆಯಪಂಡ ದೇಚಮ್ಮ, ಎಸ್.ಹೆಚ್.ಮತ್ತೀನ್, ಡಿ.ಪಿ.ರಾಜೇಶ್ ಉಪಸ್ಥಿತರಿದ್ದರು.

ನೀಟ್ ಪರೀಕ್ಷೆ ರದ್ದುಪಡಿಸುವಂತೆ ಮನವಿ ಸಲ್ಲಿಕೆ



ನೀಟ್ ಪರೀಕ್ಷೆ ರದ್ದುಗೊಳಿಸಬೇಕು ಎಂದು ಒತ್ತಾಯಿಸಿ ಕರ್ನಾಟಕ ಸೇನಾಪಡೆ ಕಾರ್ಯಕರ್ತರು ಜಿಪಂ ಉಪಕಾರ್ಯದರ್ಶಿ ಲಕ್ಷ್ಮೀ ಅವರಿಗೆ ಮನವಿ ಸಲ್ಲಿಸಿದರು.

ಚಾಮರಾಜನಗರ, ಜೂ.11–ನೀಟ್ ಪರೀಕ್ಷೆ ರದ್ದುಗೊಳಿಸಿ, ಆಯಾ ರಾಜ್ಯಗಳಿಗೆ ಪರೀಕ್ಷೆ ನಡೆಸಲು ಅವಕಾಶ ನೀಡಬೇಕು ಎಂದು ಒತ್ತಾಯಿಸಿ ಕರ್ನಾಟಕ ಸೇನಾಪಡೆ ಕಾರ್ಯಕರ್ತರು ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಲಕ್ಷ್ಮೀ ಅವರಿಗೆ ಮನವಿ ಸಲ್ಲಿಸಿದರು.

ಹಿಂದೆ ವೈದ್ಯಕೀಯ ಶಿಕ್ಷಣ ಪ್ರವೇಶಕ್ಕೆ ನಡೆಸುತ್ತಿದ್ದ ಪರೀಕ್ಷೆಗಳು ಆಯಾ ರಾಜ್ಯಗಳಿಗೆ ಸಂಬಂಧಿಸಿದ್ದವು. ಆದರೆ, ಕಳೆದ ದಶಕಗಳಿಂದ ಕೇಂದ್ರ ಸರ್ಕಾರ ನೀಟ್ ಎಂಬ ಹೆಸರಿನಲ್ಲಿ ವೈದ್ಯಕೀಯ ಶಿಕ್ಷಣ ಪರೀಕ್ಷೆಗಳನ್ನು ದೇಶಾದ್ಯಂತ ನಡೆಸುತ್ತಿದೆ. ಈ ಬಾರಿ ನೀಟ್ ಪರೀಕ್ಷೆಯಲ್ಲಿ ಬಾರಿ ತಾಂತ್ರಿಕ ದೋಷವಾಗಿ ಲಕ್ಷಾಂತರ ಅರ್ಹ ವಿದ್ಯಾರ್ಥಿಗಳು ವೈದ್ಯಕೀಯ ಶಿಕ್ಷಣದಿಂದ ವಂಚಿತರಾಗಿದ್ದಾರೆ ಎಂದು ಆರೋಪಿಸಿದ್ದಾರೆ.

ಈಗಾಗಲೇ ಈ ಸಂಬಂಧ ನೀಟ್ ಪರೀಕ್ಷೆ ಬರೆದಿರುವ ರಾಜ್ಯದ ಎಷ್ಟೋ ವಿದ್ಯಾರ್ಥಿಗಳಿಗೆ ಅನ್ಯಾಯವಾಗಿದೆ. ಜೊತೆಗೆ ಭಾರಿ ಭ್ರಷ್ಟಾಚಾರ ನಡೆದಿರುವ ಶಂಕೆ ಇದೆ. ಇದೇ ರೀತಿ ಮುಂದುವರೆದರೆ ರಾಜ್ಯದ ವಿದ್ಯಾರ್ಥಿಗಳಿಗೆ ಮತ್ತಷ್ಟು ತೊಂದರೆಯಾಗಲಿದೆ. ಇದರಿಂದ ಶಾಶ್ವತವಾಗಿ ವೈದ್ಯಕೀಯ ಶಿಕ್ಷಣ ಪ್ರವೇಶದಿಂದ ಹೊರಗುಳಿಯಲಿದ್ದಾರೆ. ಈಗಾಗಲೇ ನೀಟ್ ಪರೀಕ್ಷೆಗೆ ಕರ್ನಾಟಕ, ತಮಿಳುನಾಡು ಸೇರಿದಂತೆ ಹಲವಾರು ರಾಜ್ಯಗಳು ವಿರೋಧ ವ್ಯಕ್ತಪಡಿಸಿವೆ. ಆದ್ದರಿಂದ ರಾಷ್ಟ್ರಪತಿಗಳು ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯದ ದೃಷ್ಟಿಯಿಂದ ನೀಟ್ ಪರೀಕ್ಷೆಯನ್ನು ರದ್ದುಗೊಳಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಿದ್ದಾರೆ.

ಇದೇ ವೇಳೆ ನಿಜಧ್ವನಿ ಗೋವಿಂದರಾಜು, ಪಣ್ಯದಹುಂಡಿ ರಾಜು, ಮಹೇಶ್‌ಗೌಡ, ಗು.ಪುರುಷೋತ್ತಮ, ಚಾ.ರಾ.ಕುಮಾರ್, ನಂಜುಂಡಶೆಟ್ಟಿ, ರಾಜಪ್ಪ, ಲಿಂಗರಾಜು, ಚಾ.ಸಿ.ಸಿದ್ದರಾಜು ಇತರರು ಹಾಜರಿದ್ದರು.

ಗ್ಯಾರಂಟಿಯಿಂದ ಕಾಂಗ್ರೆಸ್‌ಗೆ ಹೆಚ್ಚಿನ ಮತ

- ಜಿಲ್ಲೆ ಕಾಂಗ್ರೆಸ್ ಭದ್ರಕೋಟೆ ಎಂಬುದು ಸಾಬೀತು
- ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ ಸಂತಸ



ಚಾಮರಾಜನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ ಮಾತನಾಡಿದರು.

ಚಾಮರಾಜನಗರ, ಜೂ.11– ಈ ಬಾರಿ ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್‌ಗೆ ಹೆಚ್ಚಿನ ಮತ ಬಂದಿದ್ದು, ಸುನೀಲ್ ಬೋಸ್ ದಾಖಲೆ ಗೆಲುವು ಸಾಧಿಸುವ ಮೂಲಕ ಜಿಲ್ಲೆ ಕಾಂಗ್ರೆಸ್ ಭದ್ರಕೋಟೆ ಎಂಬುದನ್ನು ಸಾಬೀತು ಪಡಿಸಿದೆ ಎಂದು ಜಿಲ್ಲಾ ಕಾಂಗ್ರೆಸ್ ಹಾಗೂ ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ ಹೇಳಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಜಾರಿಯಿಂದ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ 1,83,327 ಮತಗಳ ಅಂತರದಲ್ಲಿ ಬಿಜೆಪಿ ಅಭ್ಯರ್ಥಿ ವಿರುದ್ಧ ಅಭೂತಪೂರ್ವ ಗೆಲುವು ಸಾಧಿಸಿದ್ದಾರೆ ಎಂದರು. ಸರ್ಕಾರದ ಉಚಿತ ಐದು ಯೋಜನೆಗಳು, ಪಕ್ಷದ ನಾಯಕತ್ವ, ಮುಖ್ಯಮಂತ್ರಿ ಸಿದ್ದರಾಮಯ್ಯನವರ ದಕ್ಷ ಆಡಳಿತದಿಂದ ಕ್ಷೇತ್ರದಲ್ಲಿ ಕಾಂಗ್ರೆಸ್‌ಗೆ ಹೆಚ್ಚಿನ ಮತ ಬರಲು ಸಾಧ್ಯವಾಯಿತು. ಜನರು ಅಧಿಕ ಮತ ನೀಡುವ ಮೂಲಕ ಕಾಂಗ್ರೆಸ್ ಮತ್ತೊಮ್ಮೆ ಬೆಂಬಲಿಸಿದ್ದಾರೆ. 5 ಗ್ಯಾರಂಟಿಗಳು ಜನತೆಗೆ ಪ್ರಾಮಾಣಿಕವಾಗಿ ತಲುಪುತ್ತಿವೆ. ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್, ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಹಾಗೂ ಚಾಮರಾಜನಗರ ಲೋಕಸಭಾ ಕ್ಷೇತ್ರದ ಎಲ್ಲಾ ಹಾಲಿ, ಮಾಜಿ ಶಾಸಕರು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರ ಶ್ರಮ, ಜೊತೆಗೆ ದಿವಂಗತ ಮಾಜಿ ಸಚಿವ ಹೆಚ್.ಎಸ್. ಮಹದೇವ್‌ಪ್ರಸಾದ್ ಹಾಗೂ ದಿ.ಮಾಜಿ ಸಂಸದ ಆರ್.ಧ್ರುವನಾರಾಯಣ್ ಅವರ ಅಭಿವೃದ್ಧಿ ಕೆಲಸಗಳು ಕೂಡ ಪಕ್ಷದ ಗೆಲುವಿಗೆ ಕಾರಣವಾಗಿದೆ ಎಂದು ತಿಳಿಸಿದರು.

ಕಾಂಗ್ರೆಸ್ ದಾಖಲೆ ಗೆಲುವಿಗೆ ಶ್ರಮಿಸಿದ ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು, ಮಾಜಿ ಶಾಸಕರು, ಪಕ್ಷದ ಮುಖಂಡರು, ಕಾರ್ಯಕರ್ತರಿಗೆ ಅಭಿನಂದನೆ ಸಲ್ಲಿಸುವುದಾಗಿ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ರವಿ ಕುಮಾರ್, ಪ್ರಧಾನ ಕಾರ್ಯದರ್ಶಿ ಆರ್.ಮಹದೇವು, ಎಸ್‌ಟಿ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಪು.ಶ್ರೀನಿವಾಸನಾಯಕ, ಕನಿಷ್ಠ ವೇತನ ಸಲಹಾ ಸಮಿತಿ ಮಾಜಿ ಅಧ್ಯಕ್ಷ ಉಮೇಶ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹಮ್ಮದ್ ಅಸ್ಗರ್, ತಾಪಂ ಮಾಜಿ ಸದಸ್ಯ ಪುಟ್ಟಸ್ವಾಮಿ ಹಾಜರಿದ್ದರು.

ಇಂದು ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ

ಚಾಮರಾಜನಗರ, ಜೂ.11– ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕಾರ್ಮಿಕ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಸಂಯುಕ್ತಾಶ್ರಯದಲ್ಲಿ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯನ್ನು ಜೂ.12ರಂದು ನಗರದಲ್ಲಿ ಹಮ್ಮಿಕೊಳ್ಳಲಾಗಿದೆ.

ಬೆಳಗ್ಗೆ 9.30ಕ್ಕೆ ನಗರದ ಚಾಮರಾಜೇಶ್ವರ ಸ್ವಾಮಿ ದೇವಸ್ಥಾನದ ಮುಂಭಾಗ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಈಶ್ವರ್ ಜಾಥಾಗೆ ಚಾಲನೆ ನೀಡಲಿದ್ದಾರೆ. ಬೆಳಗ್ಗೆ 10.30ಕ್ಕೆ ನಗರದ ವರನಟ ಡಾ.ರಾಜ್‌ಕುಮಾರ್ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಎಸ್.ಭಾರತಿ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಅಧ್ಯಕ್ಷೆ ಶಿಲ್ಪನಾಗ್ ಅಧ್ಯಕ್ಷತೆ ವಹಿಸಲಿದ್ದು, ಜಿಪಂ ಸಿಇಓ ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪದ್ಮಿನಿ ಸಾಹು, ನಗರಸಭೆ ಆಯುಕ್ತ ಎಸ್.ವಿ. ರಾಮದಾಸ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಮಂಜುನಾಥ್, ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥಪ್ರಸನ್ನ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ರಾಮಚಂದ್ರರಾಜ ಅರಸ್ ಮತ್ತಿತರರು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಹನೂರಿನಲ್ಲಿ ಬಿಜೆಪಿ ಕಾರ್ಯಕರ್ತರ ವಿಜಯೋತ್ಸವ



ಹನೂರಿನಲ್ಲಿ ಬಿಜೆಪಿ ಕಾರ್ಯಕರ್ತರು ವಿಜಯೋತ್ಸವ ಆಚರಿಸಿದರು.

ಹನೂರು, ಜೂ.11–ನರೇಂದ್ರ ಮೋದಿ ಮೂರನೇ ಬಾರಿಗೆ ಪ್ರಧಾನಿಯಾಗಿ ಅಧಿಕಾರ ಸ್ವೀಕರಿಸಿದ ಹಿನ್ನೆಲೆಯಲ್ಲಿ ಬಿಜೆಪಿ ಕಾರ್ಯಕರ್ತರು ಪಟ್ಟಣದಲ್ಲಿ ಓಬಿಸಿ ಜಿಲ್ಲಾಧ್ಯಕ್ಷ ಜನಧ್ವನಿ ಬಿ.ವೆಂಕಟೇಶ್ ನೇತೃತ್ವದಲ್ಲಿ ವಿಜಯೋತ್ಸವ ಆಚರಿಸಿದರು.

ಪಟ್ಟಣದ ಖಾಸಗಿ ಬಸ್ ನಿಲ್ದಾಣದಲ್ಲಿ ಜಮಾವಣೆಗೊಂಡ ಪಕ್ಷದ ಕಾರ್ಯಕರ್ತರು, ನರೇಂದ್ರ ಮೋದಿ ಹಾಗೂ ಬಿಜೆಪಿ ಪರ ಘೋಷಣೆ ಕೂಗಿ, ಪಟಾಕಿ ಸಿಡಿಸಿ ಸಿಹಿ ವಿತರಿಸಿ ಸಂತಸ ವ್ಯಕ್ತಪಡಿಸಿದರು. ಈ ವೇಳೆ ಜನಧ್ವನಿ ಬಿ.ವೆಂಕಟೇಶ್ ಮಾತನಾಡಿ, 10 ವರ್ಷ ಪ್ರಧಾನಿ ನರೇಂದ್ರ ಮೋದಿ ಭ್ರಷ್ಟಾಚಾರ ರಹಿತ ಆಡಳಿತ ಹಾಗೂ ದುಡಿಯುವ ಎಲ್ಲಾ ವರ್ಗದವರಿಗೂ ಉತ್ತಮ ಜನಪರ ಕಾರ್ಯಕ್ರಮಗಳನ್ನು ಜಾರಿಗೊಳಿಸಿದ್ದಾರೆ. ಜೊತೆಗೆ ಅರ್ಹ ಎಲ್ಲಾ ಫಲಾನುಭವಿಗೆ ನೇರವಾಗಿ ಖಾತೆಗೆ ಹಣ ಜಮಾ ಮಾಡಿಸಿದ್ದಾರೆ. ಕೇಂದ್ರದಲ್ಲಿ ಯುಪಿಎ ಸರ್ಕಾರವಿದ್ದಾಗ ನೂರು ರೂಪಾಯಿನಲ್ಲಿ ಫಲಾನುಭವಿಗೆ ಹತ್ತು ರೂಪಾಯಿ ಮಾತ್ರ ತಲುಪುತ್ತಿತ್ತು. ಇದನ್ನು ಕಾಂಗ್ರೆಸ್ ನಾಯಕರೇ ಹೇಳಿದ್ದಾರೆ. ಮೋದಿ ಅಧಿಕಾರಕ್ಕೆ ಬಂದ ನಂತರ ಇದಕ್ಕೆಲ್ಲ ಕಡಿವಾಣ ಹಾಕಲಾಗಿದೆ ಎಂದರು. ಈ ಬಾರಿ ಎನ್‌ಡಿಎ ಮೈತ್ರಿ ಕೂಟದ ನಾಯಕರು ಮತ್ತೊಮ್ಮೆ ನರೇಂದ್ರ ಮೋದಿ ಅವರೇ ಪ್ರಧಾನಿ ಆಗಬೇಕು ಎಂಬ ಬಯಸಿ ಒಮ್ಮತದಿಂದ ಆಯ್ಕೆ ಮಾಡಿದ್ದಾರೆ. ಮೋದಿ ಮೂರನೇ ಬಾರಿಗೆ ಪ್ರಧಾನಿಯಾಗುತ್ತಿದ್ದಂತೆ ಕೆಲ ದೇಶಗಳಿಗೆ ನಡುಕ ಆರಂಭವಾಗಿದೆ ನರೇಂದ್ರ ಮೋದಿ ಇಡೀ ವಿಶ್ವಕಂಡ ಶ್ರೇಷ್ಠ ನಾಯಕ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ವೇಳೆ ಬಿಜೆಪಿ ಮಂಡಲಾಧ್ಯಕ್ಷರಾದ ಚಂಗವಾಡಿ ರಾಜು, ವೃಷಭೇಂದ್ರ, ರಾಷ್ಟ್ರೀಯ ಪರಿಷತ್ ಸದಸ್ಯ ಬೂದಬಾಳು ವೆಂಕಟಸ್ವಾಮಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲೋಕೇಶ್ ಜತ್ತಿ, ಮುಖಂಡರಾದ ವೆಂಕಟರಾಜು, ರಾಜುಗೌಡ, ಆನಂತ ಪದ್ಮನಾಭ ಗುಪ್ತ, ಗೋವಿಂದಪ್ಪ, ಮಂಗಲ ಪ್ರಕಾಶ್, ಬಸವರಾಜು, ನಂಜಪ್ಪ , ಪುಟ್ಟರಾಜು, ರಾಮ್ ಚರಣ್ ಹಾಜರಿದ್ದರು.

ಕೋಡಿಮೋಳೆ ಗ್ರಾಮದಲ್ಲಿ ಭಗೀರಥ ಜಯಂತಿ



ಕೋಡಿಮೋಳೆ ಗ್ರಾಮದಲ್ಲಿ ನಡೆದ ಭಗೀರಥ ಮಹರ್ಷಿ ಜಯಂತಿ ಕಾರ್ಯಕ್ರಮವನ್ನು ಶಾಸಕ ಸಿ.ಪುಟ್ಟರಂಗಶೆಟ್ಟಿ ಉದ್ಘಾಟಿಸಿದರು.

ಚಾಮರಾಜನಗರ, ಜೂ.11–ಭಗೀರಥ ಮಹರ್ಷಿಗಳು ಸತತ ಪ್ರಯತ್ನದಿಂದ ಶಿವನನ್ನು ಪ್ರಾರ್ಥಿಸಿ ಧರೆಗೆ ಗಂಗೆಯನ್ನು ತಂದು ಇಡೀ ಭೂ ಮಂಡಲಕ್ಕೆ ಒಳಿತು ಬಯಸಿದ ಮಹಾನ್ ಪುರುಷ ಎಂದು ಶಾಸಕ ಸಿ.ಪುಟ್ಟರಂಗಶೆಟ್ಟಿ ಸ್ಮರಿಸಿದರು.

ತಾಲೂಕಿನ ಕೋಡಿಮೋಳೆ ಗ್ರಾಮದಲ್ಲಿ ಆಯೋಜಿಸಿದ್ದ ಭಗೀರಥ ಮಹರ್ಷಿ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿಯೊಬ್ಬರು ಅವರ ಆದರ್ಶ, ತತ್ವ, ಚಿಂತನೆಗಳನ್ನು ಮೈಗೂಡಿಸಿಕೊಂಡು ಸಮಾಜದ ಒಳಿತನ್ನು ಬಯಸಬೇಕು. ಆಗ ಮಾತ್ರ ಮಹಾನ್ ಪುರುಷರ ಜಯಂತಿಗಳಿಗೆ ಅರ್ಥ ಬರುತ್ತದೆ ಎಂದರು. ಕಾರ್ಯಕ್ರಮದಲ್ಲಿ ಗ್ರಾಪಂ ಅಧ್ಯಕ್ಷ ನಟರಾಜು, ಮುಖಂಡರಾದ ಕೋಡಿಮೋಳೆ ಗೋವಿಂದಶೆಟ್ಟಿ, ಕೋಡಿಮೋಳೆ ಪ್ರಕಾಶ್, ಯು.ರಂಗಸ್ವಾಮಿ, ನಂಜುಂಡಶೆಟ್ಟಿ, ವಿಷಕಂಠ, ಜಯಶಂಕರ್, ಮಹೇಶ್, ರಾಜು ಹಾಜರಿದ್ದರು.

ವಿಜೇತ ತಂಡಗಳಿಗೆ ಬಹುಮಾನ ವಿತರಣೆ



ಚಾಮರಾಜನಗರ ತಾಲೂಕಿನ ಕೋಡಿಮೋಳೆ ಗ್ರಾಮದಲ್ಲಿ ಭಗೀರಥ ಮಹರ್ಷಿ ಜಯಂತಿ ಅಂಗವಾಗಿ ಭಗತ್ ಸಿಂಗ್ ಯುವ ಸೇನೆ ವತಿಯಿಂದ ಆಯೋಜಿಸಿದ್ದ ಕಿರಿಯರ ಕ್ರಿಕೆಟ್ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ ಪಡೆದ ಹೊಸಕೇರಿ ಬಾಯ್ಸ್ ತಂಡ ಹಾಗೂ ದ್ವಿತೀಯ ಸ್ಥಾನ ಪಡೆದ ರಾಯಲ್ ಬಾಯ್ಸ್ ತಂಡಕ್ಕೆ ಬಹುಮಾನ ವಿತರಿಸಲಾಯಿತು. ಭಗತ್ ಯುವಸೇನೆ ಅಧ್ಯಕ್ಷ ಕಾಂತರಾಜು, ಪದಾಧಿಕಾರಿಗಳಾದ ನಾಗೇಶ್, ಅಪ್ಪು , ಕೀರ್ತಿ, ಶಿವು, ಕೃಷ್ಣ, ಸುನೀಲ್ ಇದ್ದರು.

ನಿಮ್ಮ ವರ್ಗಾವಣೆಗೆ ತೆರಿಗೆ ಸಂಗ್ರಹ ಸಾಧನೆ ಪರಿಗಣನೆ...!

ವಾಣಿಜ್ಯ ತೆರಿಗೆ ಅಧಿಕಾರಿಗಳಿಗೆ ಸಿಎಂ ಸಿದ್ದರಾಮಯ್ಯ ಖಡಕ್ ಎಚ್ಚರಿಕೆ

ಬೆಂಗಳೂರು, ಜೂ.11(ಕೆಎಂಶಿ)– ವರ್ಗಾವಣೆ ವೇಳೆ ತೆರಿಗೆ ಸಂಗ್ರಹದಲ್ಲಿನ ಕಾರ್ಯಕ್ಷಮತೆಯನ್ನು ಮಾನದಂಡವಾಗಿ ಪರಿಗಣಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ವಾಣಿಜ್ಯ ತೆರಿಗೆ ಇಲಾಖೆ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದ್ದಾರೆ.



ವಾಣಿಜ್ಯ ತೆರಿಗೆ ಮತ್ತು ಆರ್ಥಿಕ ಇಲಾಖೆಯ ಹಿರಿಯ ಅಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಗುರಿ ಸಾಧಿಸದಿದ್ದರೆ ಶಿಸ್ತು ಕ್ರಮ ತೆಗೆದುಕೊಳ್ಳುವುದು ಅನಿವಾರ್ಯವಾಗುತ್ತದೆ, ವರ್ಗಾವಣೆಗೆ ಸಂಬಂಧಿಸಿದಂತೆ ಬೇರೆ ಯಾವ ಪ್ರಭಾವಕ್ಕೂ ಮಣೆ ಹಾಕುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ವರ್ಗಾವಣೆಗೆ ನಿಮ್ಮ ಕಾರ್ಯಕ್ಷಮತೆಯೇ ಮಾನದಂಡವಾಗಿರುತ್ತದೆ. ಅಂದಾಜು, ಜಾರಿ, ಮೇಲ್ಮನವಿ ಸಮನ್ವಯ ಸಭೆ ತಿಂಗಳಿಗೆ 2 ಬಾರಿ ಕಡ್ಡಾಯವಾಗಿ ನಡೆಸಬೇಕು, ಕಾರ್ಯಯೋಜನೆ ಸಿದ್ಧಪಡಿಸಬೇಕು. ಮೇಲ್ಮನವಿ ಪ್ರಕರಣಗಳನ್ನು 3 ತಿಂಗಳೊಳಗೆ ವಿಲೇವಾರಿ ಮಾಡಬೇಕು, ವಿಳಂಬ ಮಾಡಿದಲ್ಲಿ ಶಿಸ್ತು ಕ್ರಮ ಕೈಗೊಳ್ಳಲಾಗುವುದು, ಐಜಿಎಸ್‌ಟಿ ನಕಾರಾತ್ಮಕ ಸೆಟಲ್‌ಮೆಂಟ್ ಆಗುವ ಕಡೆ ಇತರೆ ಸರಕುಗಳ ಮೇಲಿನ ತೆರಿಗೆ ಸಂಗ್ರಹ ಚುರುಕುಗೊಳಿಸಬೇಕು. ಬೆಂಗಳೂರಿನಲ್ಲಿ ಹೆಚ್ಚು ಮೇಲ್ಮನವಿಗಳು ದಾಖಲಾಗುತ್ತಿದ್ದು, ಇವುಗಳ ವಿಲೇವಾರಿಗೆ ಹೆಚ್ಚುವರಿ ಜಂಟಿ ಆಯುಕ್ತರ ಹುದ್ದೆ ಮಂಜೂರಾಗಿದ್ದು ಜುಲೈ 1 ರಿಂದ ಜಾರಿಗೆ ಬರಲಿದೆ, ವೃತ್ತಿ ತೆರಿಗೆ ಸಂಗ್ರಹವನ್ನೂ ಚುರುಕುಗೊಳಿಸಲು ಗುರಿ ನಿಗದಿಪಡಿಸಬೇಕು.

ಸೆಪ್ಟೆಂಬರ್ ಮೊದಲ ವಾರದಲ್ಲಿ ಮತ್ತೊಮ್ಮೆ ಪ್ರಗತಿ ಪರಿಶೀಲನಾ ಸಭೆ ನಡೆಸಲಾಗುವುದು, ಆ ವೇಳೆಗೆ ಗುರಿ ತಲುಪಿರಬೇಕು ಎಂದು ಎಚ್ಚರಿಸಿದರು. ಪ್ರತ್ಯೇಕವಾಗಿ ನಡೆದ ಅಬಕಾರಿ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ನೆರೆ ರಾಜ್ಯಗಳಿಂದ ಕರ್ನಾಟಕಕ್ಕೆ ಕಳ್ಳಸಾಗಾಣಿಕೆ ಮದ್ಯವನ್ನು ಕಟ್ಟುನಿಟ್ಟಿನ ಕ್ರಮಗಳಿಂದ ತಡೆಗಟ್ಟಬೇಕು ಎಂದು ಖಡಕ್ ಸೂಚನೆ ನೀಡಿದರು.

ಅಬಕಾರಿ ಪರವಾನಗಿಗಳ ನವೀಕರಣಕ್ಕೆ ಸನ್ನದುದಾರರಿಗೆ ಕಿರುಕುಳ ನೀಡಬಾರದು, ತೆರಿಗೆ ಸಂಗ್ರಹ ಸಾಮರ್ಥ್ಯ ಆಧರಿಸಿ ನಿಗದಿಪಡಿಸುವ ಗುರಿ ತಲುಪಲು ಅಧಿಕಾರಿಗಳು ಗರಿಷ್ಠ ಪ್ರಯತ್ನ ಮಾಡಬೇಕು.

ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದ್ದರಿಂದ ತೆರಿಗೆ ಸಂಗ್ರಹ ಬೆಳವಣಿಗೆ ದರ ನಿರೀಕ್ಷಿತ ಮಟ್ಟ ತಲುಪಿಲ್ಲ ಎಂಬ ಅಧಿಕಾರಿಗಳ ಮಾಹಿತಿಗೆ ಪ್ರತಿಕ್ರಿಯಿಸಿ, ಮುಂದಿನ ದಿನಗಳಲ್ಲಿ ಗುರಿ ಭರ್ತಿ ಮಾಡುವಂತೆ ತಿಳಿಸಿದರು.

ಇಲಾಖೆಯಲ್ಲಿ ಕಾನ್‌ಸ್ಟೇಬಲ್, ಸಬ್ ಇನ್‌ಸ್ಪೆಕ್ಟರ್‌ಗಳ ನೇಮಕಾತಿ ಹಾಗೂ ವಾಹನಗಳ ಅಗತ್ಯವಿದೆ. ಕರ ಸಮಾಧಾನ ಯೋಜನೆಯಡಿ 5.10 ಕೋಟಿ ರೂ. ವಸೂಲಾಗಿದ್ದು, ಇನ್ನಷ್ಟು ಕಾಲ ಯೋಜನೆ ವಿಸ್ತರಿಸುವಂತೆ ಅಧಿಕಾರಿಗಳು ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಅಬಕಾರಿ ಇಲಾಖೆಯ ವ್ಯವಹಾರಗಳನ್ನು ಸರಳಗೊಳಿಸುವ ನೂತನ ತಂತ್ರಾಂಶವನ್ನು ಮುಖ್ಯಮಂತ್ರಿ ಲೋಕಾರ್ಪಣೆ ಮಾಡಿದರು.

ಆನ್‌ಲೈನ್ ಮೂಲಕವೇ ಇಲಾಖೆ ಸೇವೆಗಳನ್ನು ಒದಗಿಸುವ, ಅಬಕಾರಿಗೆ ಸಂಬಂಧಿಸಿದ ನಿಯಮ ಉಲ್ಲಂಘನೆ, ಅಕ್ರಮ ಪ್ರಕರಣಗಳು ಹಾಗೂ ಅಧಿಕಾರಿಗಳ ತಪಾಸಣೆಯನ್ನೂ ದಾಖಲಿಸಲು ಮತ್ತು ಅನುಸರಿಸಲು ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲಾಗಿದೆ ಎಂದು ಸಭೆಗೆ ತಿಳಿಸಲಾಯಿತು.

ಒಂದನೇ ಪುಟದಿಂದ

ರಾಜೀವ್ ತಾರಾನಾಥ್ ಇನ್ನಿಲ್ಲ

ಅವರ ಪುತ್ರರಾಗಿ 1932ರ ಅಕ್ಟೋಬರ್ 17ರಂದು ಜನಿಸಿದ ರಾಜೀವ್ ತಾರಾನಾಥ ಅವರು, ಬೆಂಗಳೂರು ಸೆಂಟ್ರಲ್ ಕಾಲೇಜಿನಲ್ಲಿ ಬಿ.ಎ ಆನರ್ಸ್‌ನಲ್ಲಿ ಪ್ರಥಮ ರ‍್ಯಾಂಕ್ ಪಡೆದ ನಂತರ ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಚಿನ್ನದ ಪದಕದೊಂದಿಗೆ ಎಂ.ಎ ಇಂಗ್ಲಿಷ್ ಪೂರ್ಯೆಸಿದರು. ಬಳಿಕ ಪ್ರೊ.ಸಿ.ಡಿ. ನರಸಿಂಹಯ್ಯ ಅವರ ಮಾರ್ಗದರ್ಶನದಲ್ಲಿ ಪಿಹೆಚ್.ಡಿ ಪಡೆದರು.

ರಾಯಚೂರಿನಲ್ಲಿ ಅವರ ತಂದೆ ಕಟ್ಟಿದ್ದ ಹಮ್‌ದರ್ದ್ ಕಾಲೇಜಿನಲ್ಲಿ ಉಪನ್ಯಾಸಕರಾಗಿ ವೃತ್ತಿ ಜೀವನ ಆರಂಭಿಸಿದ ರಾಜೀವ್ ತಾರಾನಾಥ ಅವರು, ಧಾರವಾಡದ ಕರ್ನಾಟಕ ಕಾಲೇಜು, ಮೈಸೂರಿನ ರೀಜನಲ್ ಕಾಲೇಜ್ ಆಫ್ ಎಜುಕೇಷನ್, ತಿರುಚ್ಚಿಯ ರೀಜನಲ್ ಕಾಲೇಜ್ ಆಫ್ ಎಂಜಿನಿಯರಿಂಗ್ ಮತ್ತು ಜಮಾಲ್ ಮಹಮ್ಮದ್ ಕಾಲೇಜಿನಲ್ಲಿ ಉಪನ್ಯಾಸಕ, ಹೈದರಾಬಾದ್‌ನ ಸೆಂಟ್ರಲ್ ಇನ್‌ಸ್ಟಿಟ್ಯೂಟ್ ಆಫ್ ಇಂಗ್ಲಿಷ್ ಅಂಡ್ ಫಾರಿನ್ ಲಾಂಗ್ವೇಂಜ್‌ಸ್ ವಿವಿಯ ಇಂಗ್ಲಿಷ್ ವಿಭಾಗದ ಮುಖ್ಯಸ್ಥ, ಯೆಮನ್ ದೇಶದ ಏಡನ್‌ನಲ್ಲಿ ಇಂಗ್ಲಿಷ್ ಅಧ್ಯಾಪಕ, ಪುಣೆಯ ಫಿಲ್ಮ್ ಇನ್‌ಸ್ಟಿಟ್ಯೂಟ್‌ನಲ್ಲಿ ಸಿನಿಮಾ ಸಂಗೀತ ವಿಭಾಗದ ಪ್ರಾಧ್ಯಾಪಕರಾಗಿ, ಕ್ಯಾಲಿಫೋರ್ನಿಯಾ ಇನ್‌ಸ್ಟಿಟ್ಯೂಟ್ ಆಫ್ ದಿ ಆರ್ಟ್ಸ್‌ನ ಪ್ರಾಧ್ಯಾಪಕರಾಗಿ ಕಾರ್ಯ ನಿರ್ವಹಿಸಿದ್ದರು.

ಮಹಾನ್ ಸಂಗೀತ ಸಾಧಕ: ರಾಜೀವ್ ತಾರಾನಾಥರು ತಮ್ಮ ಪ್ರಾರಂಭಿಕ ಸಂಗೀತ ಪಾಠಗಳನ್ನು ತಮ್ಮ ತಂದೆ ಪಂಡಿತ ತಾರಾನಾಥ್‌ರಿಂದ ಪಡೆದರು. ಕೇವಲ ಒಂಬತ್ತು ವರ್ಷದವರಿದ್ದಾಗ ಅವರು ಪ್ರಥಮ ಸಂಗೀತ ಕಚೇರಿ ನೀಡಿ, ನಿಬ್ಬೆರಗಾಗಿಸಿದ್ದರು. 20 ವರ್ಷದ ಯುವಕನಿದ್ದಾಗ ಆಕಾಶವಾಣಿಯಲ್ಲಿ ಸಂಗೀತಗಾರರಾಗಿ ಹಾಡುತ್ತಿದ್ದರು. ಶಿಕ್ಷಣ ಕ್ಷೇತ್ರದಲ್ಲಿ ವೃತ್ತಿ ಆರಂಭಿಸಿದ್ದರಾದರೂ ಸಂಗೀತದ ಸೆಳೆತದಿಂದ ಇಂಗ್ಲಿಷ್ ಪ್ರಾಧ್ಯಾಪಕ ಹುದ್ದೆ ತ್ಯಜಿಸಿ, ಕಲ್ಕತ್ತಾಗೆ ತೆರಳಿ ಉಸ್ತಾದ್ ಆಲಿ ಅಕ್ಬರ್ ಖಾನ್ ಅವರ ಶಿಷ್ಯರಾದರು. ಅಲಿ ಅಕ್ಬರ್ ಖಾನರು ನಿಧನರಾಗುವವರೆಗೂ(2009) ರಾಜೀವ್ ತಾರಾನಾಥರು ಅವರ ಶಿಷ್ಯರಾಗಿ ಮುಂದುವರೆದಿದ್ದರು. 2005ರ ನಂತರ ಮೈಸೂರಿನಲ್ಲಿ ನೆಲೆಸಿ, ಹಲವು ಶಿಷ್ಯರಿಗೆ ಸಂಗೀತ ಧಾರೆ ಎರೆದಿದ್ದಾರೆ. ಕನ್ನಡದ 'ಸಂಸ್ಕಾರ', 'ಪಲ್ಲವಿ', 'ಅನುರೂಪ', 'ಶೃಂಗಾರ ಮಾಸ', 'ಆಗಂತುಕ', 'ಪೇಪರ್ ಬೋಟ್', ಮಲಯಾಳಂನ 'ಕಾಂಚನಸೀತಾ' ಮತ್ತು 'ಕಟವ್' ಮತ್ತಿತರ ಚಲನಚಿತ್ರಗಳಿಗೆ ಸಂಗೀತ ನಿರ್ದೇಶನ ನೀಡಿದ್ದರು.

ಪ್ರಶಸ್ತಿ–ಪುರಸ್ಕಾರ: ಪಂಡಿತ್ ರಾಜೀವ್ ತಾರಾನಾಥ ಅವರು ಸಿಡ್ನಿಯ ಪ್ರಸಿದ್ಧವಾದ ಅಪೆರಾ ಹೌಸ್‌ನಲ್ಲಿ ಸರೋದ್ ನುಡಿಸಿದ ಮೊದಲ ಭಾರತೀಯ ಕಲಾವಿದ. ಯೆಮನ್ ದೇಶದಲ್ಲಿನ ಏಡನ್ ನಗರದ ದೂರದರ್ಶನ ಕೇಂದ್ರವು ರಾಜೀವ್ ತಾರಾನಾಥರ ಕುರಿತು 'ಭಾರತದ ಕಲಾಕಾರ' ಸಾಕ್ಷ್ಯಚಿತ್ರ ನಿರ್ಮಿಸಿ ಗೌರವಿಸಿದೆ. ಕರ್ನಾಟಕ ಸಂಗೀತ ಮತ್ತು ನೃತ್ಯ ಅಕಾಡೆಮಿಯ ಕರ್ನಾಟಕ ಕಲಾಶ್ರೀ ಪ್ರಶಸ್ತಿ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಕರ್ನಾಟಕ ಸರ್ಕಾರದ ಟಿ.ಚೌಡಯ್ಯ ರಾಷ್ಟ್ರೀಯ ಪ್ರಶಸ್ತಿ, ಗಾಯನ ಸಮಾಜದ ಸಂಗೀತ ಕಲಾರತ್ನ ಜ್ಯೋತಿ ಸುಬ್ರಹ್ಮಣ್ಯ ಪ್ರಶಸ್ತಿ, ಕೇಂದ್ರ ಸಂಗೀತ ನಾಟಕ ಅಕಾಡೆಮಿ ಪ್ರಶಸ್ತಿ, ಹಂಪಿ ಕನ್ನಡ ವಿಶ್ವವಿದ್ಯಾಲಯದಿಂದ ನಾಡೋಜ, ಮೈಸೂರು ದಸರಾ ಮಹೋತ್ಸವದಲ್ಲಿ ರಾಜ್ಯ ಸರ್ಕಾರದಿಂದ ಕೊಡಮಾಡುವ ರಾಜ್ಯ ಸಂಗೀತ ವಿದ್ವಾನ್ (2028), ಪದ್ಮಶ್ರೀ, ಚಿತ್ರದುರ್ಗದ ಮುರುಘಾ ಮಠದ ಬಸವಶ್ರೀ ಪ್ರಶಸ್ತಿ, ಬೆಂಗಳೂರಿನ ಶ್ರೀರಾಮ ಸೇವಾ ಮಂಡಳಿ ಟ್ರಸ್ಟ್‌ನಿಂದ ಎಸ್.ವಿ.ನಾರಾಯಣ ಸ್ವಾಮಿ ರಾವ್ ಸ್ಮಾರಕ ರಾಷ್ಟ್ರೀಯ ಪುರಸ್ಕಾರ ಸೇರಿದಂತೆ ಹಲವು ಪ್ರಶಸ್ತಿ–ಪುರಸ್ಕಾರಗಳು ಇವರಿಗೆ ಸಂದಿವೆ. ಸಂಗೀತ ಸಾಧನೆಯೊಂದಿಗೆ ನೇರ ನಡೆ–ನುಡಿಯಿಂದ ಅಪಾರ ಅಭಿಮಾನಿಗಳನ್ನು ಸಂಪಾದಿಸಿದ್ದರು.

ಸ್ತಬ್ಧವಾದ ಸರೋದ್ ಸಾಧಕನಿಗೆ ಗಣ್ಯರ ಕಂಬನಿ

ಅವರ ಆರೋಗ್ಯ ವಿಚಾರಿಸಿ, ಸರ್ಕಾರದ ವತಿಯಿಂದ ಚಿಕಿತ್ಸಾ ವೆಚ್ಚ ಭರಿಸುವುದಾಗಿ ತಿಳಿಸಿದ್ದೆ. ಇವರ ಅಗಲಿಕೆಯ ನೋವು ಭರಿಸುವ ಶಕ್ತಿ ಅವರ ಕುಟುಂಬ ವರ್ಗದವರಿಗೆ ದೊರೆಯಲಿ ಎಂದು ಪ್ರಾರ್ಥಿಸುತ್ತೇನೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ ಸ್ಮರಿಸಿಕೊಂಡಿದ್ದಾರೆ.

ದಿಗ್ಗಜ ಕಲಾವಿದ: ಪಂಡಿತ್ ರಾಜೀವ್ ತಾರಾನಾಥ್ ಕರ್ನಾಟಕದ ಹೆಮ್ಮೆಯ ದಿಗ್ಗಜ ಕಲಾವಿದರಲ್ಲಿ ಒಬ್ಬರು, ಕನ್ನಡ ಸಾಂಸ್ಕೃತಿಕ ಲೋಕದಲ್ಲಿ ಅವರ ಹೆಸರು ಅಜರಾಮರವಾಗಿ ಉಳಿಯುವಂತಹದ್ದು. ಅಂತಹ ಅದ್ಭುತ ಕಲಾವಿದ ವಿಧಿವಶರಾಗಿದ್ದು ನಮ್ಮ ದುರ್ದೈವ. ಅವರ ನಿಧನದಿಂದ ಕರ್ನಾಟಕದ ಸಾಂಸ್ಕೃತಿಕ ಲೋಕ ಬಹಳ ದೊಡ್ಡ ನಷ್ಟ ಅನುಭವಿಸಿದೆ. ದೇಶ ವಿದೇಶಗಳಲ್ಲಿ ಅವರು ತಮ್ಮ ಸಂಗೀತದ ಮೂಲಕ ಕರ್ನಾಟಕದ ಕೀರ್ತಿಯನ್ನು ಪಸರಿಸಿದ್ದರು. ರಾಜೀವ್ ತಾರಾನಾಥ್ ಅವರ ಕುಟುಂಬ ಹಾಗೂ ಅವರ ಅಸಂಖ್ಯಾತ ಅಭಿಮಾನಿಗಳು ಹಾಗೂ ಶಿಷ್ಯ ವೃಂದದ ದುಃಖದಲ್ಲಿ ನಾನು ಭಾಗಿಯಾಗಿದ್ದೇನೆ. ಈ ದುಃಖವನ್ನು ಭರಿಸುವ ಶಕ್ತಿ ಭಗವಂತ ಅವರಿಗೆ ನೀಡಲಿ ಎಂದು ಕನ್ನಡ ಮತ್ತು ಸಾಂಸ್ಕೃತಿಕ ಸಚಿವ ಶಿವರಾಜ ತಂಗಡಗಿ ತಿಳಿಸಿದ್ದಾರೆ.

ಸಹಚರರ ಹೇಳಿಕೆ ಆಧರಿಸಿ ನಟ ದರ್ಶನ್ ಬಂಧನ

ಬೆಂಗಳೂರಿನಿಂದ ಮೈಸೂರಿಗೆ ಹೋದ ಪೊಲೀಸರು ಅಲ್ಲಿನ ರ‍್ಯಾಡಿಸನ್ ಬ್ಲೂ ಹೋಟೇಲ್‌ನಲ್ಲಿ ಬೆಳಗಿನ ಜಾವ ಜಿಮ್ ಮಾಡುತ್ತಿದ್ದ ನಟ ದರ್ಶನ್ ಅವರನ್ನು ಅಲ್ಲಿಂದಲೇ ವಶಕ್ಕೆ ಪಡೆದು ಬೆಂಗಳೂರಿಗೆ ಕರೆತಂದಿದ್ದಾರೆ. ಅವರ ಜೊತೆ ಅವರ 9 ಮಂದಿ ಸಹಚರರನ್ನು ವಶಕ್ಕೆ ಪಡೆದು ಅನ್ನಪೂರ್ಣೇಶ್ವರಿ ನಗರ ಪೊಲೀಸರು ತೀವ್ರ ವಿಚಾರಣೆ ನಡೆಸಿ, ಬಂಧಿಸಿದ್ದಾರೆ. ಹತ್ಯೆ ಮಾಡಿರುವ ಆರೋಪಿಗಳು ನೀಡಿರುವ ಹೇಳಿಕೆ ಮೇಲೆ ನಟ ದರ್ಶನ್ ಬಂಧನವಾಗಿದೆ ಎಂದು ಗೃಹ ಸಚಿವರು ಹೇಳಿದರು.

ಮಾಹಿತಿ ಪಡೆದ ಸಿಎಂ ಸಿದ್ದರಾಮಯ್ಯ: ಪ್ರಕರಣದಲ್ಲಿ ಖ್ಯಾತ ನಟ ದರ್ಶನ್ ಬಂಧನವಾಗಿರುವುದರಿಂದ ಸಿಎಂ ಸಿದ್ದರಾಮಯ್ಯ ಪೊಲೀಸ್ ಮಹಾ ನಿರ್ದೇಶಕ ಅಲೋಕ್ ಮೋಹನ್ ಅವರಿಂದ ಮಾಹಿತಿ ಪಡೆದುಕೊಂಡಿದ್ದಾರೆ.

ಎನ್‌ಇಪಿಯಲ್ಲಿ ಕನ್ನಡ ಸೇರಿದಂತೆ ಶಾಸ್ತ್ರೀಯ ಸ್ಥಾನಮಾನ ಹೊಂದಿದ ಭಾಷೆಗಳ ಸೇರ್ಪಡೆಯಾಗಲಿ

ಬೆಂಗಳೂರು ವಿವಿ ನಿವೃತ್ತ ಪ್ರಾಧ್ಯಾಪಕ ಪ್ರೊ.ಹಂಪಾ ನಾಗರಾಜಯ್ಯ

ಮೈಸೂರು, ಜೂ.11(ಎಸ್‌ಪಿಎನ್)– ರಾಷ್ಟ್ರೀಯ ಶಿಕ್ಷಣ ನೀತಿ 2020(ಎನ್‌ಇಪಿ)ರಲ್ಲಿ ಕನ್ನಡ ಸೇರಿದಂತೆ ಇತರೆ ಶಾಸ್ತ್ರೀಯ ಸ್ಥಾನಮಾನ ಪಡೆದಿರುವ ಭಾಷೆಗಳನ್ನು ಕೇಂದ್ರ ಮತ್ತು ರಾಜ್ಯ ಪಠ್ಯದಲ್ಲಿ ಅಳವಡಿಸಿ, ಉಳಿಸಬೇಕು ಎಂದು ಹಿರಿಯ ಸಾಹಿತಿ, ಬೆಂಗಳೂರು ವಿವಿ ನಿವೃತ್ತ ಪ್ರಾಧ್ಯಾಪಕ ಪ್ರೊ. ಹಂಪಾ ನಾಗರಾಜಯ್ಯ ಒತ್ತಾಯಿಸಿದರು.



ಮೈಸೂರು ಭಾರತೀಯ ಭಾಷಾ ಸಂಸ್ಥಾನದ ಅತ್ಯುನ್ನತ ಶಾಸ್ತ್ರೀಯ ಸಮ್ಮೇಳನದ ವಿಚಾರಗೋಷ್ಠಿಯಲ್ಲಿ ಹಿರಿಯ ಸಾಹಿತಿ ಪ್ರೊ.ಹಂಪಾ ನಾಗರಾಜಯ್ಯ ಮಾತನಾಡಿದರು

ಮೈಸೂರು ಭಾರತೀಯ ಭಾಷಾ ಸಂಸ್ಥಾನದ ಅತ್ಯುನ್ನತ ಶಾಸ್ತ್ರೀಯ ಸಮ್ಮೇಳನದ ವಿಚಾರಗೋಷ್ಠಿಯಲ್ಲಿ ಅವರು ಭಾಗವಹಿಸಿ ಮಾತನಾಡಿದರು.

ಕನ್ನಡ, ತಮಿಳು, ತೆಲುಗು, ಸಂಸ್ಕೃತ, ಮಲೆಯಾಳಂ, ಒಡಿಯಾ, ಪ್ರಾಕೃತ ಸೇರಿದಂತೆ ಒಟ್ಟು 12 ಭಾಷೆಗಳು ಶಾಸ್ತ್ರೀಯ ಸ್ಥಾನಮಾನ ಪಡೆದಿವೆ. ಈ ಭಾಷೆಗಳ ಉಳಿವಿಗೆ ಜನಸಾಮಾನ್ಯರ ಸಹಕಾರ ಅತೀ ಮುಖ್ಯ. ಅಂತೆಯೇ ದೀರ್ಘಕಾಲ ಬಳಸದಿದ್ದರೆ, ಅಂತಹ ಭಾಷೆ ನಶಿಸುತ್ತವೆ. ಈ ಭಾಷೆಗಳ ಉಳಿವಿಗೆ ಸರ್ವ ಪ್ರಯತ್ನವಾಗಬೇಕು ಎಂದರು.

ಶಾಸ್ತ್ರೀಯ ಕನ್ನಡ ಸೇರಿದಂತೆ ಇತರೆ ಶಾಸ್ತ್ರೀಯ ಭಾಷೆಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸಲು ಭಾರತೀಯ ಭಾಷಾ ಸಂಸ್ಥಾನ ಸಾಕಷ್ಟು ಕೆಲಸ ಮಾಡುತ್ತಿದೆ. ಶಾಸ್ತ್ರೀಯ ಸ್ಥಾನಮಾನ ಪಡೆದಿರುವ ಕನ್ನಡ, ತಮಿಳು, ತೆಲುಗು, ಒಡಿಯಾ, ಮಲೆಯಾಲಂ ಭಾಷೆಗಳು ಜನರ ನಾಡಿಮಿಡಿತವಾಗಿವೆ. ಆದರೆ, ಸಂಸ್ಕೃತ, ಪ್ರಾಕೃತ ಸೇರಿದಂತೆ ಅಳಿವಿನಂಚಿನಲ್ಲಿರುವ ಭಾಷೆಗಳ ಸಾಲಿನಲ್ಲಿವೆ ಎಂದು ತಿಳಿಸಿದರು.

ಶಾಸ್ತ್ರೀಯ ಭಾಷೆಗಳು ನಶಿಸಿದರೆ, ಇದರೊಂದಿಗೆ ಹೊಂದಿಕೊಂಡಿರುವ ಸಂಗೀತ, ಹಳೆಗನ್ನಡ, ನೃತ್ಯ, ನಾಟಕ ಸೇರಿದಂತೆ ಹಲವು ಸಾಂಸ್ಕೃತಿಕ ಚಟುವಟಿಕೆಗಳು ನಶಿಸುತ್ತವೆ. ಹಾಗಾಗಿ ನಮ್ಮ ಪುರಾತನ ಪರಂಪರೆ ಉಳಿಸಿಕೊಳ್ಳಬೇಕಾದರೆ, ಶಾಸ್ತ್ರೀಯ ಭಾಷೆಗಳ ಉಳಿವು ಅತ್ಯಗತ್ಯ ಎಂದರು.


ಉತ್ಕಲ್ ವಿವಿ ಒಡಿಯಾ ವಿಭಾಗದ ಪ್ರಾಧ್ಯಾಪಕ ಡಾ.ರುದ್ರನಾರಾಯಣ ಮಹಾಪಾತ್ರ ಮಾತನಾಡಿ, ಭಾರತೀಯ ಶಾಸ್ತ್ರೀಯ ಭಾಷೆಗಳಲ್ಲಿ ರಾಮಾಯಣ, ಮಹಾಭಾರತ ಸೇರಿದಂತೆ ಇತರೆ ಹಳೆಗನ್ನಡ ಕಾವ್ಯಗಳು ರಚಿತವಾಗಿವೆ. ಈ ಕಾವ್ಯಗಳನ್ನು ರಕ್ಷಣೆ ಮಾಡಬೇಕಾದರೆ, ನೂತನ ರಾಷ್ಟ್ರೀಯ ಶಿಕ್ಷಣ ನೀತಿಯೊಳಗೆ ಬರಬೇಕು. ಇದರ ಬಗ್ಗೆ ವಿವಿಧ ಭಾಷೆ ತಜ್ಞರು ಕೇಂದ್ರ ಸರ್ಕಾರದ ಮೇಲೆ ಒತ್ತಡ ತರಬೇಕು ಎಂದು ಮನವಿ ಮಾಡಿದರು.

ಸಿಇಎಸ್‌ಸಿಓ ಯೋಜನಾ ನಿರ್ದೇಶಕ ಪ್ರೊ.ಬಸಂತ ಕುಮಾರ್ ಪಾಂಡಾ ಮಾತನಾಡಿ, ನೂತನ ಶಿಕ್ಷಣ ನೀತಿ ರಚನೆಯ ಹಿಂದೆ ವಿವಿಧ ಕ್ಷೇತ್ರದ ತಜ್ಞರನ್ನೊಳಗೊಂಡ ಸಮಿತಿ ಭಾರತಾದ್ಯಂತ ಸಂಚರಿಸಿ, ಎನ್‌ಇಪಿ ವರದಿಯನ್ನು ತಯಾರಿಸಿವೆ. ಈ ನೀತಿಯಲ್ಲಿ ದೇಶಿ ಭಾಷೆ, ಸಂಸ್ಕೃತಿ, ಪರಂಪರೆ ಉಳಿಸಿಕೊಳ್ಳುವ ನಿಟ್ಟಿನಲ್ಲಿ ಪ್ರಯತ್ನವಾಗಿರುವುದು ಸಂತೋಷ ಸಂಗತಿ ಎಂದರು.

ವೇದಿಕೆಯಲ್ಲಿ ಡಾ.ಎಂಜಿಆರ್ ಮೆಡಿಕಲ್ ವಿವಿ ವಿಶ್ರಾಂತ ಕುಲಪತಿ ಪ್ರೊ.ಪಿ.ಸುಧಾ, ಬನಾರಸ್ ಹಿಂದೂ ವಿವಿ ಪ್ರಾಧ್ಯಾಪಕ ಪ್ರೊ.ಬಿ. ವೆಂಕಟೇಶ್ವರಲು, ಜೆಎನ್‌ಯು ಪ್ರೊ.ರಾಮನಾಥ್ ಜಾ ಸೇರಿದಂತೆ ಅನೇಕರಿದ್ದರು.

ಡಾ. ರಾಜೀವ್ ತಾರಾನಾಥ್ ಭಾರತೀಯ ಸಂಗೀತದ ಧ್ರುವತಾರೆ : ಸುತ್ತೂರು ಶ್ರೀ ಸಂತಾಪ

ಮೈಸೂರು, ಜೂ.11(ಎಸ್‌ಪಿಎನ್)– ಖ್ಯಾತ ಸರೋದ್ ವಾದಕ ಡಾ. ರಾಜೀವ್ ತಾರಾನಾಥ್ ವಿಧಿವಶ ವಿಷಾದದ ಸಂಗತಿ ಎಂದು ಸುತ್ತೂರು ಮಠದ ಶ್ರೀ ಶಿವರಾತ್ರಿದೇಶಿಕೇಂದ್ರ ಸ್ವಾಮೀಜಿ ಸಂತಾಪ ಸೂಚಿಸಿದ್ದಾರೆ.



ಅವರು ಹಿಂದಿನ ತಲೆಮಾರಿನ ಸಂಗೀತ ದಿಗ್ಗಜರಾದ ಉಸ್ತಾದ್ ಅಕ್ಬರ್ ಅಲಿಖಾನ್ ಬಳಿ ಸರೋದ್ ವಾದನ ಗುರುಕುಲ ಮಾದರಿಯಲ್ಲಿ ಅಧ್ಯಯನ ಮಾಡಿದ್ದರು. ಪಂ.ರವಿಶಂಕರ್ ಮತ್ತು ಅನ್ನಪೂರ್ಣಾದೇವಿ ಅವರು ಪಂ.ತಾರಾನಾಥ್‌ರವರ ಹಿರಿಯ ಗುರುಗಳಾಗಿದ್ದರು.

ಪಂ.ರಾಜೀವ್ ತಾರಾನಾಥ್ ಅವರು, ಮೈಸೂರು ವಿವಿಯಲ್ಲಿ ಇಂಗ್ಲಿಷ್ ಎಂಎ ಮತ್ತು ಪಿಎಚ್.ಡಿ ಪದವೀಧರರಾಗಿದ್ದರು. ಆಗಿನ ಕಾಲಕ್ಕೆ ಕೈ ತುಂಬಾ ಸಂಬಳ ಬರುತ್ತಿದ್ದರೂ ಉದ್ಯೋಗವನ್ನು ತೊರೆದು ಸಂಗೀತಕ್ಕೆ ಅವರ ಇಡೀ ಜೀವನವನ್ನು ಸಮರ್ಪಿಸಿಕೊಂಡಿದ್ದರು. ಸಂಗೀತ ಕಛೇರಿ ಮತ್ತು ಪ್ರಾತ್ಯಕ್ಷಿಕೆಗಳ ಮೂಲಕ ಜಗತ್ತಿನಾದ್ಯಂತ ಪರಿಚಿತರಾಗಿದ್ದರು. ಹಾಗೂ ಸರ್ವಧರ್ಮ ಸಮಭಾವದ ಪ್ರತಿನಿಧಿಯಂತಿದ್ದರು. ಶ್ರೇಷ್ಠ ಕಲಾವಿದರಾಗಿದ್ದಂತೆಯೇ ಶ್ರೇಷ್ಠ ಮಾನವತಾವಾದಿಯೂ ಆಗಿದ್ದರು. ಬಡವರು ಹಾಗೂ ದೀನದಲಿತರಿಗೆ ಅವರ ಸಹಾಯಹಸ್ತ ಸದಾ ಮುಕ್ತವಾಗಿರುತ್ತಿತ್ತು.

ಪಂ.ತಾರಾನಾಥರ ಪುತ್ರರಾಗಿ ತಂದೆಯ ಸಾಂಸ್ಕೃತಿಕ ವಾರಸುದಾರರಾಗಿದ್ದರು. ಸರಳತೆಯ ಮೂರ್ತಿಯಂತಿದ್ದರು. ಸಾಹಿತ್ಯ ಮತ್ತು ಸಂಗೀತ ಅವರ ಆಸಕ್ತಿಯ ಕ್ಷೇತ್ರಗಳಾದರೂ ಸಂಗೀತ ಅವರ ಪಾಲಿನ ಉಸಿರಾಗಿತ್ತು. ಲಾಸ್‌ಏಂಜಲೀಸ್‌ನಲ್ಲಿರುವ ಕ್ಯಾಲಿಫೋರ್ನಿಯ ಇನ್‌ಸ್ಟಿಟ್ಯೂಟ್ ಆಫ್ ಆರ್ಟ್ಸ್‌ನ ಸಂಗೀತ ವಿಭಾಗದಲ್ಲಿ ಅಧ್ಯಾಪಕರಾಗಿ, ಕನ್ನಡದ 'ಸಂಸ್ಕಾರ'ವೂ ಸೇರಿದಂತೆ ಹಲವಾರು ಚಲನಚಿತ್ರಗಳಿಗೆ ಸಂಗೀತ ಸಂಯೋಜನೆ ಮಾಡಿ, ಜನರಿಂದ ಭೇಷ್ ಅನ್ನಿಸಿಕೊಂಡಿದ್ದರು.

ಪಂ. ರಾಜೀವ್ ತಾರಾನಾಥ್ ಅವರ ಸಾಧನೆಯನ್ನು ಗುರುತಿಸಿದ ಕೇಂದ್ರ ಮತ್ತು ರಾಜ್ಯ ಸರ್ಕಾರ, ಪದ್ಮಶ್ರೀ, ಸಂಗೀತ ನಾಟಕ ಅಕಾಡೆಮಿ ಪ್ರಶಸ್ತಿಗಳಲ್ಲದೆ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ದೊರೆತಿತ್ತು ಅವರು ಶ್ರೀಮಠದ ಅಭಿಮಾನಿಗಳೂ ಆಗಿದ್ದರೆಂಬುದು ಸ್ಮರಣೀಯ. ಅವರ ಅಗಲುವಿಕೆಯಿಂದಾಗಿ ಮೈಸೂರಿನ ಸಾಂಸ್ಕೃತಿಕ ವಲಯಕ್ಕೆ ಅಪಾರ ನಷ್ಟವಾಗಿದೆ. ದಿವಂಗತರ ಆತ್ಮಕ್ಕೆ ಶಾಂತಿ ಕೋರುತ್ತ ಅವರ ಅಭಿಮಾನಿಗಳಿಗೆ, ಕುಟುಂಬಸ್ಥರಿಗೆ ಅಗಲಿಕೆಯ ದುಃಖ ಭರಿಸುವ ಶಕ್ತಿ ನೀಡಲಿ ಎಂದು ಸುತ್ತೂರು ಮಠದ ಶ್ರೀ ಶಿವರಾತ್ರಿದೇಶಿಕೇಂದ್ರ ಸ್ವಾಮೀಜಿ ಸಂತಾಪ ಸೂಚಿಸಿದ್ದಾರೆ.

ಒಡಿಶಾ ನೂತನ ಮುಖ್ಯಮಂತ್ರಿಯಾಗಿ ಬಿಜೆಪಿಯ ಮೋಹನ್ ಮಾಝಿ ಇಂದು ಪ್ರಮಾಣ ವಚನ

ಭುವನೇಶ್ವರ: ಬಿಜೆಪಿ ನಾಯಕ ಮೋಹನ್ ಚರಣ್ ಮಾಝಿ ಅವರು ಒಡಿಶಾದ ನೂತನ ಮುಖ್ಯಮಂತ್ರಿಯಾಗಿ ಆಯ್ಕೆಯಾಗಿದ್ದಾರೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮಂಗಳವಾರ ಘೋಷಿಸಿದ್ದಾರೆ.



ಇಂದು ಭುವನೇಶ್ವರದಲ್ಲಿ ನಡೆದ ಬಿಜೆಪಿ ಶಾಸಕಾಂಗ ಪಕ್ಷದ ಸಭೆಯಲ್ಲಿ 52 ವರ್ಷದ ಮಾಝಿ ಅವರನ್ನು ಬಿಜೆಪಿ ಶಾಸಕಾಂಗ ಪಕ್ಷದ ನಾಯಕರಾಗಿ ಆಯ್ಕೆ ಮಾಡಲಾಯಿತು. ಈ ವೇಳೆ ರಾಜನಾಥ್ ಸಿಂಗ್, ಕೇಂದ್ರ ಸಚಿವರಾದ ಭೂಪೇಂದರ್ ಯಾದವ್ ಮತ್ತು ಧರ್ಮೇಂದ್ರ ಪ್ರಧಾನ್ ವೀಕ್ಷಕರಾಗಿ ಸಭೆಯಲ್ಲಿ ಭಾಗವಹಿಸಿದ್ದರು.

ಮೋಹನ್ ಮಾಝಿ ಅವರು ನಾಳೆ ಸಂಜೆ 5 ಗಂಟೆಗೆ ಒಡಿಶಾ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದು, ಅವರೊಂದಿಗೆ ಬಿಜೆಪಿ ನಾಯಕರಾದ ಕೆವಿ ಸಿಂಘ್‌ದೇವ್ ಮತ್ತು ಪ್ರವತಿ ಪರಿದಾ ಅವರು ಉಪ ಮುಖ್ಯಮಂತ್ರಿಗಳಾಗಿ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ.

ಭುವನೇಶ್ವರದ ಜನತಾ ಮೈದಾನದಲ್ಲಿ ನಡೆಯಲಿರುವ ಪ್ರಮಾಣವಚನ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಹಲವು ಗಣ್ಯರು ಪಾಲ್ಗೊಳ್ಳಲಿದ್ದಾರೆ.

ಮಾಝಿ ಅವರು 2000, 2004, 2019 ಮತ್ತು 2024 ರಲ್ಲಿ ಕಿಯೋಂಜಾರ್ ವಿಧಾನಸಭಾ ಕ್ಷೇತ್ರದಿಂದ ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಅವರು ಈ ಹಿಂದೆ ಬಿಜೆಪಿಯ ಮುಖ್ಯ ಸಚೇತಕರಾಗಿ ಮತ್ತು ಸಾರ್ವಜನಿಕ ಲೆಕ್ಕಪತ್ರ ಸಮಿತಿ (ಪಿಎಸಿ) ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ.

ಮಾಜಿ ಪ್ರಧಾನಿ ದೇವೇಗೌಡರಿಗೆ ಪ್ರಧಾನಿ ಮೋದಿ ಕರೆ: ಹಲವು ವಿಚಾರ ವಿನಿಮಯ

ಬೆಂಗಳೂರು: ಪ್ರಧಾನಿ ನರೇಂದ್ರ ಮೋದಿ ತಮಗೆ ಕರೆ ಮಾಡಿ ಹೊಸ ಸರ್ಕಾರದ ಬಗ್ಗೆ ತಮ್ಮ ಆಲೋಚನೆಗಳನ್ನು ಹಂಚಿಕೊಂಡಿದ್ದಾರೆ ಎಂದು ಜೆಡಿಎಸ್ ಮುಖಂಡ ಮತ್ತು ಮಾಜಿ ಪ್ರಧಾನಿ ಎಚ್‌ಡಿ ದೇವೇಗೌಡ ಹೇಳಿದ್ದಾರೆ.



ಈ ಸಂಬಂಧ ಟ್ವೀಟ್ ಮಾಡಿರುವ ಎಚ್.ಡಿ.ದೇವೇಗೌಡ, ಪ್ರಧಾನಿ ನರೇಂದ್ರ ಮೋದಿ ಅವರು ಹೊಸ ಸರ್ಕಾರದ ಬಗ್ಗೆ ಆಲೋಚನೆಗಳನ್ನು ಹಂಚಿಕೊಳ್ಳಲು ನನಗೆ ಕರೆ ಮಾಡಿದ್ದರು.

ನನ್ನ ಆರೋಗ್ಯವನ್ನೂ ವಿಚಾರಿಸಿದರು. ಅವರ ಕಾಳಜಿಗೆ ನಾನು ಆಭಾರಿಯಾಗಿದ್ದೇನೆ. ಅವರ ವಿಶ್ವಾಸ ನನ್ನನ್ನು ಭಾವುಕರನ್ನಾಗಿಸಿತು. ಪರಮಾತ್ಮನ ಆಶೀರ್ವಾದ ಸದಾ ಅವರ ಮೇಲಿರಲಿ. ಅವರು ಭಾರತವನ್ನು ಹೆಚ್ಚಿನ ಕೀರ್ತಿಗೆ ಕೊಂಡೊಯ್ಯಲಿ ಎಂದು ಗೌಡರು ಟ್ವೀಟ್ ಮಾಡಿದ್ದಾರೆ.

ಅಂದುಕೊಂಡಿದ್ದನ್ನು ಸಾಧಿಸುವುದು ವಿದ್ಯಾರ್ಥಿಗಳ ಧ್ಯೇಯವಾಗಿರಬೇಕು

ಮೈಸೂರು ವಿವಿ ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯದ ಸಹಾಯಕ ನಿರ್ದೇಶಕಿ ಡಾ.ಸುಷ್ಮಾ ಕಿವಿಮಾತು



ಮೈಸೂರು ವಿವಿ ಸ್ನಾತಕೋತ್ತರ ಮಹಿಳಾ ವಿದ್ಯಾರ್ಥಿ ನಿಲಯ ಬ್ಲಾಕ್–2ನಲ್ಲಿ ವಿದ್ಯಾರ್ಥಿ ನಿಲಯ ವಾರ್ಷಿಕೋತ್ಸವ ಸಮಾರಂಭವನ್ನು ಉದ್ಘಾಟಿಸಲಾಯಿತು

ಮೈಸೂರು, ಜೂ.11(ಎಸ್‌ಪಿಎನ್)– ಇರುವ ಸೌಕರ್ಯಗಳನ್ನು ಬಳಸಿಕೊಂಡು ಜೀವನದಲ್ಲಿ ತಾವು ಅಂದುಕೊಂಡ ಗುರಿ ಸಾಧಿಸುವುದು ವಿದ್ಯಾರ್ಥಿಗಳ ಧ್ಯೇಯವಾಗಿರಬೇಕು ಎಂದು ಮೈಸೂರು ವಿವಿ ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯದ ಸಹಾಯಕ ನಿರ್ದೇಶಕಿ ಡಾ.ಎಸ್. ಎಸ್.ಸುಷ್ಮಾ ವಿದ್ಯಾರ್ಥಿನಿಯರಿಗೆ ಕಿವಿಮಾತು ಹೇಳಿದರು.

ಮೈಸೂರು ವಿವಿ ಮಾನಸ ಗಂಗೋತ್ರಿ ವಿದ್ಯಾರ್ಥಿ ವಸತಿ ನಿಲಯ ಆವರಣದ ಸ್ನಾತಕೋತ್ತರ ಮಹಿಳಾ ವಿದ್ಯಾರ್ಥಿ ನಿಲಯ ಬ್ಲಾಕ್–2ನಲ್ಲಿ ವಿದ್ಯಾರ್ಥಿ ನಿಲಯ ವಾರ್ಷಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ವಿವಿ ವಸತಿ ನಿಲಯಗಳಲ್ಲಿ ಕೆಲವೊಂದು ಅನಾನುಕೂಲಗಳಿವೆ. ನಾನು ಇಲ್ಲವೆಂದು ಹೇಳುತ್ತಿಲ್ಲ. ಆದರೆ, ಆ ಸಮಸ್ಯೆಗಳು ತಾತ್ಕಾಲಿಕ. ಊಟ ಸರಿಯಿಲ್ಲ, ಫ್ಯಾನ್ ಸರಿಯಿಲ್ಲ, ನೀರು ಬರುತ್ತಿಲ್ಲ, ವೈಫೈ ಬರುತ್ತಿಲ್ಲ ಎಂಬುದು ತಾತ್ಕಾಲಿಕ ಸಮಸ್ಯೆಗಳು. ಸ್ವಲ್ಪ ತಡವಾದರೂ ಈ ಸಮಸ್ಯೆ ಬಗೆಹರಿಸಲು ವಿಶ್ವವಿದ್ಯಾಲಯ ಸಾಕಷ್ಟು ಶ್ರಮಿಸುತ್ತಿದೆ ಎಂದು ತಿಳಿಸಿದರು.

ಸಣ್ಣ–ಪುಟ್ಟ ಸಮಸ್ಯೆಗಳಿಂದಾಗಿ ನಿಮ್ಮ ಓದಿಗೆ ಹಿನ್ನಡೆಯಾಗಬಾರದು. ಈಗಿನಿಂದಲೇ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಾಗಿ ಅಂತಿಮ ಪದವಿ ಮುಗಿದ ತಕ್ಷಣ ಇಲ್ಲಿನ ವಿದ್ಯಾರ್ಥಿಗಳು ಉದ್ಯೋಗ ಪಡೆಯುವಂತಾಗಬೇಕು. ಸರ್ಕಾರ ಮಹಿಳೆಯರ ಸಬಲೀಕರಣಕ್ಕೆ ಸಾಕಷ್ಟು ಯೋಜನೆಗಳನ್ನು ಪ್ರಕಟಿಸುತ್ತಿದೆ. ಈ ಯೋಜನೆಯ ಲಾಭ ಪಡೆಯಬೇಕಾದರೆ, ಆ ಕ್ಷೇತ್ರದ ಕೌಶಲ್ಯಗಳನ್ನು ಮಹಿಳೆಯರು ಕಲಿತುಕೊಳ್ಳಬೇಕು ಎಂದರು.

ದಲಿತ ವಿದ್ಯಾರ್ಥಿ ಒಕ್ಕೂಟದ ಅಧ್ಯಕ್ಷ ಬಿ.ಸಚಿನ್, ವಿವಿಯಲ್ಲಿನ ಯಾವುದೇ ಸಮಸ್ಯೆಗಳಿಗೆ ಪರಿಹಾರ ಹುಡುಕಲು ವಿವಿಯೊಂದಿಗೆ ಕೈಜೋಡಿಸಿದ್ದಾರೆ. ಅದರಲ್ಲೂ ಮಹಿಳಾ ವಸತಿ ನಿಲಯಕ್ಕೆ ಬಿಸಿನೀರಿನ ವ್ಯವಸ್ಥೆ ಮಾಡಬೇಕು ಎಂದು ಆಗ್ರಹಿಸಿದ್ದು, ಈ ಸಮಸ್ಯೆ ಬಗೆಹರಿಸಲು ವಿವಿ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದಿರುವ ಬಗ್ಗೆ ಮಾಹಿತಿ ನೀಡಿದರು.

ವೇದಿಕೆಯಲ್ಲಿ ಮೈಸೂರು ವಿವಿ ಕುವೆಂಪು ಕನ್ನಡ ಅಧ್ಯಯನ ವಿಭಾಗದ ಮುಖ್ಯಸ್ಥೆ ಡಾ.ಎಸ್.ಕೆ.ಲೋಲಾಕ್ಷಿ, ಶಿಕ್ಷಣ ಸಲಹೆಗಾರರಾದ ಡಾ.ಕೆ.ಸೌಭಾಗ್ಯವತಿ, ದಲಿತ ವಿದ್ಯಾರ್ಥಿ ಒಕ್ಕೂಟದ ಉಪಾಧ್ಯಕ್ಷ ನವೀನ್ ಉಪಸ್ಥಿತರಿದ್ದರು. ಅಯನ ಪ್ರಾರ್ಥಿಸಿದರು. ರೂಪ ಸ್ವಾಗತಿಸಿದರು. ರಂಜಿತ ನಿರೂಪಿಸಿದರು. ವೇದಿಕೆ ಕಾರ್ಯಕ್ರಮದ ನಂತರ ವಿದ್ಯಾರ್ಥಿನಿಯರಿಂದ ಸಾಂಸ್ಕೃತಿಕ ಚಟುವಟಿಕೆಗಳು ಜರುಗಿದವು.

ಹೆಚ್.ಸಿ.ದಾಸಪ್ಪ ವೃತ್ತದಲ್ಲಿ ವಾಹನ ಚಾಲಕರಿಗೆ ಸಂಚಕಾರ ತಂದಿರುವ ಜಲ್ಲಿಕಲ್ಲು



ಮೈಸೂರು,ಜೂ.11(ಪಿಎಂ)– ಮೈಸೂರಿನ ಹೆಚ್.ಸಿ.ದಾಸಪ್ಪ ವೃತ್ತದಲ್ಲಿ ಹರಡಿರುವ ಜಲ್ಲಿಕಲ್ಲುಗಳು ವಾಹನ ಸವಾರರ ಸುಗಮ ಸಂಚಾರಕ್ಕೆ ಸಂಚಕಾರವಾಗಿ ಪರಿಣಮಿಸಿವೆ. ಕಾಮಗಾರಿಗಾಗಿ ಇಲ್ಲಿ ನೆಲ ಅಗೆದು ಮುಚ್ಚಿದ್ದು, ಹೀಗೆ ಮುಚ್ಚಲು ಬಳಸಿರುವ ಜಲ್ಲಿಕಲ್ಲುಗಳು ಇಡೀ ವೃತ್ತದಲ್ಲಿ ಹರಡಿಕೊಂಡು ವಾಹನಗಳು ಸ್ಕಿಡ್ (ಜಾರು) ಆಗಲು ಕಾರಣವಾಗುತ್ತಿವೆ. ಯಾವುದೇ ಅಪಘಾತಕ್ಕೆ ಆಸ್ಪದ ಆಗದಂತೆ ಕೂಡಲೇ ಇದನ್ನು ಡಾಂಬರು ಬಳಸಿ ದುರಸ್ತಿಪಡಿಸಬೇಕೆಂದು ಇಲ್ಲಿ ನಿತ್ಯ ಸಂಚರಿಸುವ ವಾಹನ ಸವಾರರು 'ಮೈಸೂರು ಮಿತ್ರ'ನ ಮೂಲಕ ಮೈಸೂರು ಮಹಾನಗರ ಪಾಲಿಕೆಯನ್ನು ಆಗ್ರಹಿಸಿದ್ದಾರೆ.

ನೀಟ್ ಫಲಿತಾಂಶ ವಿವಾದ ಪರೀಕ್ಷೆಯ ಪಾವಿತ್ರ್ಯತೆ ಮೇಲೆ ಪರಿಣಾಮ ಬೀರಿದೆ

ಎಂಬಿಬಿಎಸ್ ಕೌನ್ಸೆಲಿಂಗ್ ತಡೆ ನೀಡಲು ಸುಪ್ರೀಂಕೋರ್ಟ್ ನಕಾರ

ನವದೆಹಲಿ: ನೀಟ್ ಫಲಿತಾಂಶ ವಿವಾದ ಪರೀಕ್ಷೆಯ ಪಾವಿತ್ರ್ಯತೆ ಮೇಲೆ ಪರಿಣಾಮ ಬೀರಿದ್ದು, ಉತ್ತರ ನೀಡಲೇಬೇಕಿದೆ ಎಂದು ಸುಪ್ರೀಂಕೋರ್ಟ್ ಹೇಳಿದೆ.

ನೀಟ್ ಪರೀಕ್ಷಾ ಫಲಿತಾಂಶದ ಕುರಿತ ವಿವಾದವನ್ನು ಗಂಭೀರವಾಗಿ ಪರಿಗಣಿಸಿರುವ ಸುಪ್ರೀಂಕೋರ್ಟ್, ಈ ವಿವಾದ ಪರೀಕ್ಷೆಯ ಪಾವಿತ್ರ್ಯತೆ ಮೇಲೆ ಪರಿಣಾಮ ಬೀರಿದೆ. ಇದಕ್ಕೆ NTA ಉತ್ತರ ನೀಡಲೇಬೇಕಿದೆ ಎಂದು ಹೇಳಿದೆ.

ಪ್ರಶ್ನೆ ಪತ್ರಿಕೆ ಸೋರಿಕೆಗೆ ಸಂಬಂಧಿಸಿದಂತೆ ರಾಷ್ಟ್ರೀಯ ಪ್ರವೇಶ ಮತ್ತು ಅರ್ಹತಾ ಪರೀಕ್ಷೆ–2024 ಪದವಿಪೂರ್ವ (ನೀಟ್–ಯುಜಿ) (NEET-UG) 2024 ಅನ್ನು ರದ್ದುಗೊಳಿಸುವಂತೆ ಕೋರಿ ಸಲ್ಲಿಸಲಾದ ಅರ್ಜಿ ಕುರಿತು ಮಂಗಳವಾರ ಸುಪ್ರೀಂ ಕೋರ್ಟ್ ವಿಚಾರಣೆ ನಡೆಸಿತು.

ಈ ವೇಳೆ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ(ಎನ್‌ಡಿಎ)ಗೆ ನೋಟಿಸ್ ಜಾರಿ ಮಾಡಿದ ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್ ಮತ್ತು ಅಹ್ಸಾನುದಿನ್ ಅಮಾನುಲ್ಲಾ ಅವರ ರಜಾಕಾಲದ ಪೀಠವು ಈ ವಿವಾದ ಪರೀಕ್ಷೆಯ ಪಾವಿತ್ರ್ಯತೆ ಮೇಲೆ ಪರಿಣಾಮ ಬೀರಿದೆ. ಇದಕ್ಕೆ NTA ಉತ್ತರ ನೀಡಲೇಬೇಕಿದೆ ಎಂದು ಹೇಳಿದೆ.

ನೀಟ್ ಪರೀಕ್ಷಾ ಫಲಿತಾಂಶದ ಕುರಿತ ವಿವಾದ ಪರೀಕ್ಷೆಯ ಪಾವಿತ್ರ್ಯತೆ ಮೇಲೆ ಪರಿಣಾಮ ಬೀರಿದೆ. ವಿವಾದ ಅಷ್ಟು ಸರಳವಾಗಿಲ್ಲ. ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯದ ಮೇಲೆ ಇದು ಪರಿಣಾಮ ಬೀರಿದ್ದು, ಆದ್ದರಿಂದ ನಮಗೆ ಉತ್ತರಗಳು ಬೇಕಾಗುತ್ತವೆ ಎಂದು ನ್ಯಾಯಮೂರ್ತಿ ಅಮಾನುಲ್ಲಾ ಅವರು ರಾಷ್ಟ್ರೀಯ ಪರೀಕ್ಷಾ ಏಜೆನ್ಸಿಯನ್ನು ಪ್ರತಿನಿಧಿಸುವ ವಕೀಲರಿಗೆ



ಹೇಳಿದರು. ಅಂತೆಯೇ ಉತ್ತರಿಸಲು ನಿಮಗೆ ಎಷ್ಟು ಸಮಯ ಬೇಕು ಎಂದು ಕೇಳಿದ ಪೀಠ ತಡವಾದರೆ ಕೌನ್ಸೆಲಿಂಗ್ ಪ್ರಾರಂಭವಾಗುತ್ತದೆ ಎಂದೂ ವಿಷಯದ ಗಂಭೀರತೆಯ ತೆರೆದಿಟ್ಟರು.

ಎನ್‌ಟಿಎಗೆ ಸುಪ್ರೀಂಕೋರ್ಟ್‌ನ ನೋಟಿಸ್‌ನ ಕುರಿತು ವಕೀಲ ಜೆ. ಸಾಯಿ ದೀಪಕ್ ಪ್ರತಿಕ್ರಿಯಿಸಿದ್ದು, ಕೋರ್ಟ್‌ನಲ್ಲಿ ಬಹು ಅರ್ಜಿಗಳನ್ನು ಪಟ್ಟಿ ಮಾಡಲಾಗಿದೆ. ಕೆಲವು ಅರ್ಜಿಗಳನ್ನು ಫಲಿತಾಂಶ ಘೋಷಣೆಗೂ ಮುನ್ನವೇ ಪತ್ರಿಕೆ ಸೋರಿಕೆಯಾಗಿದೆ ಎಂಬ ಆಧಾರದ ಮೇಲೆ ಸಲ್ಲಿಸಲಾಗಿದೆ. ಆ ಅರ್ಜಿಗಳಿಗೆ ಸಂಬಂಧಿಸಿದಂತೆ ನೋಟಿಸ್‌ಗಳನ್ನು ನೀಡಲಾಗಿದೆ ಎಂದು ಸುದ್ದಿ ಸಂಸ್ಥೆಗೆ ನೀಡಿರುವ ಪ್ರತಿಕ್ರಿಯೆಯಲ್ಲಿ ಹೇಳಿದ್ದಾರೆ. ವಕೀಲ ಜೆ ಸಾಯಿ ದೀಪಕ್ ಅವರು ಶೈಕ್ಷಣಿಕ ವೇದಿಕೆಯ ಭೌತಶಾಸ್ತ್ರ ವಲ್ಲಾಹ್‌ನ ಸಿಇಒ ಅಲಖ್ ಪಾಂಡೆ ಅವರು ತುಂಬಿದ ಇತರ ಅರ್ಜಿಯನ್ನು ಪ್ರತಿನಿಧಿಸುತ್ತಿದ್ದಾರೆ.

ನಮ್ಮ ಅರ್ಜಿಯು ಸ್ವಲ್ಪ ವಿಭಿನ್ನವಾಗಿದೆ. ನಾವು ಸುಮಾರು 20,000 ವಿದ್ಯಾರ್ಥಿಗಳಿಂದ ಸಹಿಗಳನ್ನು ಸಂಗ್ರಹಿಸಿರುವ ಅಲಖ್ ಪಾಂಡೆ ಅವರನ್ನು ಪ್ರತಿನಿಧಿಸುತ್ತೇವೆ. ಇದು ಕನಿಷ್ಠ 1,500 ವಿದ್ಯಾರ್ಥಿಗಳಿಗೆ 70 ರಿಂದ 80 ಅಂಕಗಳನ್ನು ಯಾದೃಚ್ಛಿಕವಾಗಿ ನೀಡಲಾಗಿದೆ ಎಂದು ಸ್ಪಷ್ಟವಾಗಿ ತೋರಿಸುತ್ತದೆ. ಗ್ರೇಸ್ ಮಾರ್ಕ್‌ನ ಇತರ ವಿಷಯಗಳೊಂದಿಗೆ ನಮ್ಮ ವಿಷಯವನ್ನು ತೆಗೆದುಕೊಳ್ಳಲಾಗುವುದು ಎಂದು ನ್ಯಾಯಾಲಯವು ಸೂಚಿಸಿದೆ, ಆದರೆ ಈ ಹಂತದಲ್ಲಿ ಅದು ಕೌನ್ಸೆಲಿಂಗ್ ಪ್ರಕ್ರಿಯೆಯಲ್ಲಿ ಉಳಿಯುವುದಿಲ್ಲ ಎಂದು ನ್ಯಾಯಾಲಯವು ಸ್ಪಷ್ಟಪಡಿಸಿದೆ ಎಂದರು.

MBBS ಕೌನ್ಸೆಲಿಂಗ್‌ಗೆ ತಡೆ ನೀಡಲು ನಕಾರ: ಇದೇ ವೇಳೆ ಎಂಬಿಬಿಎಸ್, ಬಿಡಿಎಸ್ ಮತ್ತು ಇತರ ಕೋರ್ಸ್‌ಗಳಿಗೆ ಪ್ರವೇಶಕ್ಕಾಗಿ ಯಶಸ್ವಿ ಅಭ್ಯರ್ಥಿಗಳ ಕೌನ್ಸೆಲಿಂಗ್‌ಗೆ ತಡೆ ನೀಡಲು ಸುಪ್ರೀಂ ಕೋರ್ಟ್ ನಿರಾಕರಿಸಿದೆ. ಸುಪ್ರೀಂ ಕೋರ್ಟ್ ಶಿವಂಗಿ ಮಿಶ್ರಾ ಮತ್ತು ಇತರರು ಸಲ್ಲಿಸಿದ ಅರ್ಜಿಯನ್ನು ಬಾಕಿ ಉಳಿದಿರುವ ಅರ್ಜಿಯೊಂದಿಗೆ ಸೇರಿಸಿದ್ದು, ಈ ಸಂಬಂಧ ಪ್ರತಿಕ್ರಿಯೆಯನ್ನು ಸಲ್ಲಿಸಲು ಎನ್‌ಟಿಎಗೆ ಸೂಚಿಸಿದೆ.

ಮೈಸೂರು ಮಿತ್ರ

ಬುಧವಾರ 12 ಜೂನ್ 2024

ಚೆಸ್ಕಾಂ ಕುಂದು-ಕೊರತೆ ಸಭೆಗೆ ನೀರಸ ಪ್ರತಿಕ್ರಿಯೆ; ಸಲ್ಲಿಕೆಯಾಗಿದ್ದು ಬರೀ ಮೂರೇ ದೂರು!



ಮೈಸೂರು,ಜೂ.11(ಎಂಟಿವೈ)– ಮೈಸೂರಿನ ಕುವೆಂಪುನಗರದ ಚೆಸ್ಕಾಂ ಕಚೇರಿಯಲ್ಲಿ ಮಂಗಳವಾರ ಸಾರ್ವಜನಿಕರ ಕುಂದು-ಕೊರತೆ ಸಭೆ ನಡೆಯಿತು. ಹೆಸರು ಬದಲಾವಣೆ, ಹೊಸ ಸಂಪರ್ಕಕ್ಕೆ ಗೃಹಜ್ಯೋತಿ ಸೌಲಭ್ಯದ ಯುನಿಟ್ ಹೆಚ್ಚಳಕ್ಕೆ ಸಂಬಂಧಿಸಿದಂತೆ ಮಾತ್ರ ದೂರು ಸಲ್ಲಿಕೆಯಾದವು.

ವಿದ್ಯುತ್ ವ್ಯತ್ಯಯವೂ ಸೇರಿದಂತೆ ಗ್ರಾಹಕರ ನಾನಾ ಸಮಸ್ಯೆಗಳ ನಿವಾರಣೆಗಾಗಿ ಕರೆಯಲಾಗಿದ್ದ ಕುಂದು-ಕೊರತೆ ಸಭೆಗೆ ಕೇವಲ ನಾಲ್ವರು ಗ್ರಾಹಕರು ಆಗಮಿಸಿದ್ದು, ಮೂರೇ ಮೂರು ದೂರು ಸಲ್ಲಿಕೆಯಾದವು. ಅಧಿಕಾರಿಗಳು ಶೀಘ್ರದಲ್ಲಿಯೇ ಈ ಸಮಸ್ಯೆ ಬಗೆಹರಿಸುವುದಾಗಿ ಭರವಸೆ ನೀಡಿದರು.

ಸಲ್ಲಿಕೆಯಾದ ದೂರುಗಳು: ಸಭೆಯಲ್ಲಿ ಅಶ್ವಥ್ ನಾರಾಯಣ, ಶಿವರಾಜ್, ನಾಗರಾಜು ಹಾಗೂ ಮಹೇಂದ್ರ, ದೂರು ಸಲ್ಲಿಸಿದರು. ಅವರು ಮೀಟರ್‌ಗೆ ಹೆಸರು ಬದಲಾವಣೆ, ಗೃಹಜ್ಯೋತಿ ಯೋಜನೆಯಡಿ ಹೊಸ ಸಂಪರ್ಕಕ್ಕೆ ಯುನಿಟ್ ಪ್ರಮಾಣ ಹೆಚ್ಚಿಸುವಂತೆ ಕೋರಿದರು. ಮತ್ತೊಬ್ಬರು ಒಂದು ವರ್ಷದ ಹಿಂದೆ ಪಡೆದ ಸಂಪರ್ಕಕ್ಕೆ ಉಚಿತ ವಿದ್ಯುತ್ ಕೋರಿದರು.

ವಿದ್ಯುತ್ ಸಮಸ್ಯೆ ಕುರಿತು ಚರ್ಚೆ: ಕುವೆಂಪುನಗರ ಉಪ ವಿಭಾಗ ವ್ಯಾಪ್ತಿಗೆ ಬರುವ ಕುವೆಂಪುನಗರ, ಸರಸ್ವತಿಪುರಂ, ವಿವೇಕಾನಂದನಗರ, ಶಾರದಾದೇವಿನಗರ, ಅರವಿಂದನಗರ, ಬೆಮೆಲ್ ಬಡಾವಣೆ, ಶ್ರೀರಾಂಪುರ ಸೇರಿದಂತೆ ವಿವಿಧ ಬಡಾವಣೆಗಳಲ್ಲಿ ವಿದ್ಯುತ್ ಪೂರೈಕೆಯಲ್ಲಿನ ಸಮಸ್ಯೆ ಕುರಿತು ಚರ್ಚಿಸಿದರು.

ಸಭೆಯಲ್ಲಿ ವಿವಿ ಮೊಹಲ್ಲಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಎಸ್.ಬಿ.ಅನಿತಾ, ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಎಂ.ಪಿ. ಪ್ರಶಾಂತ್, ವಿವಿಧ ಶಾಖೆಯ ಸಹಾಯಕ ಇಂಜಿನಿಯರ್‌ಗಳಾದ ಆರ್.ಮದನ್, ಕೆ.ವಿ.ಮುರಳಿ, ಎಸ್.ಜಿ.ವೆಂಕಟೇಶ್, ಮಧುಸೂದನ್, ಡಿ.ಜಯರಾಮ್, ಜೆ.ಜಗದೀಶ್ ಇನ್ನಿತರರು ಪಾಲ್ಗೊಂಡಿದ್ದರು.

ಇಂದಿನಿಂದ ಶ್ರೀ ಸುವಿದ್ಯೇಂದ್ರತೀರ್ಥ ಶ್ರೀಪಾದಂಗಳ ವಿಶೇಷ ಉಪನ್ಯಾಸ

ಮೈಸೂರು, ಜೂ.11–ಮೈಸೂರು ಅಗ್ರಹಾರ, ಖಿಲ್ಲೆ ಮೊಹಲ್ಲಾದಲ್ಲಿರುವ ಶ್ರೀ ಉತ್ತರಾದಿ ಮಠ ರೋಗಮೋಚಕ ಶ್ರೀ ಧನ್ವಂತರಿ ಸನ್ನಿಧಾನದಲ್ಲಿ ಶ್ರೀ 1008 ಶ್ರೀ ಸತ್ಯಾತ್ಮತೀರ್ಥ ಶ್ರೀಪಾದಂಗಳವರ ಆಜ್ಞೆ ಹಾಗೂ ಅನುಗ್ರಹದಿಂದ ಶ್ರೀ ಧನ್ವಂತರಿ ಪ್ರತಿಷ್ಠಾಪನಾ ತೃತೀಯ ವಾರ್ಷಿಕೋತ್ಸವದ ನಿಮಿತ್ತ ಜೂನ್ 12ರಿಂದ 14ರವರೆಗೆ ಸಂಜೆ 6ರಿಂದ 6.30ರವರೆಗೆ ವಿದ್ವಾಂಸರಿಂದ ಪ್ರವಚನ ಹಾಗೂ ಸಂಜೆ 6.30ರಿಂದ 7.30ರವರೆಗೆ ಮಂತ್ರಾಲಯ ಮಠ (ಭುವನಗಿರಿ ಆಶ್ರಮ) ಶ್ರೀ ಶ್ರೀ ಸುವಿದ್ಯೇಂದ್ರ ತೀರ್ಥ ಶ್ರೀಪಾದಂಗಳವರಿಂದ ಧನ್ವಂತರಿ ಪ್ರಾದುರ್ಭಾವ ವಿಷಯದ ಕುರಿತು ವಿಶೇಷ ಪ್ರವಚನವನ್ನು ಆಯೋಜಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಮೊಬೈಲ್ 9448147459 ಸಂಪರ್ಕಿಸಬಹುದು ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

ಕರ್ನಾಟಕ ವೈದ್ಯಕೀಯ ಪರಿಷತ್‌ಗೆ ಡಾ.ಭರತ್‌ಕುಮಾರ್ ನಾಮನಿರ್ದೇಶನ



ಮೈಸೂರು, ಜೂ. 11–ಮುಂದಿನ ಐದು ವರ್ಷ ಅವಧಿಗೆ ಶ್ರೀರಾಂಪುರ ನಿವಾಸಿ, ಸರ್ಕಾರಿ ವೈದ್ಯ ಡಾ.ಭರತ್‌ಕುಮಾರ್ ಅವರನ್ನು ಕರ್ನಾಟಕ ವೈದ್ಯಕೀಯ ಪರಿಷತ್ ಸದಸ್ಯರಾಗಿ ನೇಮಕ ಮಾಡಲಾಗಿದೆ. ಈ ಹಿನ್ನೆಲೆಯಲ್ಲಿ ಕೃಷ್ಣರಾಜ ಯುವ ಬಳಗದ ವತಿಯಿಂದ ಲಕ್ಷ್ಮಿಪುರಂನ ಅವರ ಕಚೇರಿಯಲ್ಲಿ ಅಭಿನಂದನೆ ಸಲ್ಲಿಸಲಾಯಿತು. ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ಕೆಆರ್ ಬ್ಯಾಂಕ್ ಉಪಾಧ್ಯಕ್ಷ ಬಸವರಾಜ ಬಸಪ್ಪ, ಮಲ್ಲೇಶ್, ಲೋಕೇಶ್‌ಕುಮಾರ್ ಮಾದಾಪುರ, ಶ್ರೇಯಸ್, ಚೇತನ್, ತೇಜಸ್, ಎಸ್.ಎನ್.ರಾಜೇಶ್, ಜಿ.ರಾಘವೇಂದ್ರ, ರಾಕೇಶ್ ಇನ್ನಿತರರು ಉಪಸ್ಥಿತರಿದ್ದರು.

ಅರ್ಜಿ ಆಹ್ವಾನ

ಮೈಸೂರು: 2024-25ನೇ ಸಾಲಿಗೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಸಮಗ್ರ ಶಿಕ್ಷಣ ಕರ್ನಾಟಕ ಕಾರ್ಯಕ್ರಮದಲ್ಲಿ ಸಮನ್ವಯ ಶಿಕ್ಷಣ ಚಟುವಟಿಕೆಯ ಜಿಲ್ಲಾ ವ್ಯಾಪ್ತಿಯಲ್ಲಿ ಬ್ಲಾಕ್ ಹಂತದಲ್ಲಿ ಖಾಲಿ ಇರುವ ಬಿ.ಐ.ಇ.ಆರ್.ಟಿ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ವಿಭಾಗ ಹುದ್ದೆಗಳಿಗೆ "ನೇರಗುತ್ತಿಗೆ ಮೂಲಕ ತಾತ್ಕಾಲಿಕವಾಗಿ ಆಯ್ಕೆ" ಮಾಡಿಕೊಳ್ಳಲು ಅರ್ಹ ವಿದ್ಯಾರ್ಹತೆಯುಳ್ಳ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ವಿಶೇಷ ಶಿಕ್ಷಣದಲ್ಲಿ ವಿಶೇಷ ಡಿ.ಇಡಿ ಹಾಗೂ ವಿಶೇಷ ಬಿ.ಇಡಿ ವಿದ್ಯಾರ್ಹತೆ ಹೊಂದಿ ಆರ್.ಸಿ.ಐ ನೋಂದಣಿಯಾಗಿರುವ ಅಭ್ಯರ್ಥಿಗಳು ವಿದ್ಯಾರ್ಹತೆಯ ಎಲ್ಲಾ ಅಂಕಪಟ್ಟಿಗಳು ಮತ್ತು ಪ್ರಮಾಣ ಪತ್ರ ಗಳು ಮತ್ತು ಆರ್.ಸಿ.ಐ ನೊಂದಣಿ ಪ್ರಮಾಣ ಪತ್ರದೊಂದಿಗೆ ಸ್ವ-ವಿವರವುಳ್ಳ ಮಾಹಿತಿಯನ್ನು ಜೂ.14ರ ಸಂಜೆ 5 ಗಂಟೆಯೊಳಗೆ ಜಂಟಿ ನಿರ್ದೇಶಕರ ಕಚೇರಿ ಆವರಣದ ಸಮಗ್ರ ಶಿಕ್ಷಣ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು (ಆಡಳಿತ) ಹಾಗೂ ಜಿಲ್ಲಾ ಯೋಜನಾ ಸಮನ್ವಯಾಧಿಕಾರಿಗಳ ಕಾರ್ಯಾಲಯಕ್ಕೆ ತಲುಪಿಸಬೇಕು. ಮಾಹಿತಿಗಾಗಿ ದೂ.ಸಂ.-0821-2496686, 9481066723, 9448999404.

ತರಬೇತಿ ಸಂಸ್ಥೆಯಲ್ಲಿ ಸೈನಿಕರಿಗೆ ಅಭಿನಂದನೆ



ಮೈಸೂರು, ಜೂ. 11– ಮೈಸೂರು ಬೆಳವಾಡಿ ಗ್ರಾಮದ ಸಿಲಿಕಾನ್ ವ್ಯಾಲಿ ಬಡಾವಣೆಯಲ್ಲಿನ ಸೈನಿಕ ತರಬೇತಿ ಕೇಂದ್ರದಲ್ಲಿ ಸೇನೆ, ಅರೆಸೇನೆ, ಪೊಲೀಸ್ ಹುದ್ದೆಗೆ 3 ವರ್ಷಗಳಿಂದ 234 ಅಭ್ಯರ್ಥಿಗಳು ತರಬೇತಿ ಪಡೆದಿದ್ದಾರೆ.

ಮಾಜಿ ಕಮಾಂಡೋ ಸಿ.ಎಂ.ಶ್ರೀಧರ್ ಮಾರ್ಗದರ್ಶನದಲ್ಲಿ ನಡೆಯುತ್ತಿರುವ ಈ ಸೈನಿಕ ಅಕಾಡೆಮಿಯಲ್ಲಿ ತರಬೇತಿ ಮುಗಿಸಿದವರು ಈಗ ಸೇನೆಗೆ ಸೇರಿದ್ದು, ಅವರಲ್ಲಿ ಈ ಕೆಲವರನ್ನು ಅಕಾಡೆಮಿಯಲ್ಲಿ ಅಭಿನಂದಿಸಲಾಯಿತು.

ಈ ವೇಳೆ ಶ್ರೀಧರ್ ಮಾತನಾಡಿ, ಸೈನಿಕರು ತಮ್ಮ ಜೀವವನ್ನು ಪಣವಾಗಿಟ್ಟು ದೇಶವನ್ನು ಕಾಯುತ್ತಿದ್ದಾರೆ. ಇಂತಹ ಪವಿತ್ರ ಕರ್ತವ್ಯಕ್ಕೆ ನಮ್ಮ ಸಂಸ್ಥೆ ಸಾಹಸಿ ಯುವಕರ ಪ್ರೋತ್ಸಾಹಿಸಿ, ತರಬೇತಿ ನೀಡುತ್ತಿದೆ ಎಂದರು. ಅಗ್ನಿವೀರರಾದ ವರುಣ, ರೇವಂತ್, ಅರ್ಜುನ್, ಆಂತೋನಿ ಪ್ರತಾಪ್, ಸೊಗನ್ ಸಂಸ್ಥೆ ಸಹ ಸಂಸ್ಥಾಪಕರಾದ ಅನಿತಾ ಶ್ರೀಧರ, ಅಧ್ಯಾಪಕರಾದ ರಘು, ಸಂತೋಷ, ಸಿಬ್ಬಂದಿ ಗಳಾದ ದಿಲೀಪ್, ಚೇತನ್, ಪವನ್, ಕಾರ್ತಿಕ್ ಇತರರು ಈ ವೇಳೆ ಉಪಸ್ಥಿತರಿದ್ದರು.

ಜೆಎಸ್‌ಎಸ್ ಮಹಿಳಾ ಪಾಲಿಟೆಕ್ನಿಕ್ ಡಿಪ್ಲೊಮಾ ಪ್ರವೇಶಕ್ಕೆ ಅವಧಿ ವಿಸ್ತರಣೆ

ಮೈಸೂರು, ಜೂ. 11– ಜೆಎಸ್‌ಎಸ್ ಮಹಿಳಾ ಪಾಲಿಟೆಕ್ನಿಕ್‌ನಲ್ಲಿ 2024-25ನೇ ಸಾಲಿನಲ್ಲಿ ಸರ್ಕಾರಿ ಕೋಟಾದಡಿ ಖಾಲಿ ಉಳಿದಿರುವ ಪ್ರಥಮ ಸೆಮಿಸ್ಟರ್ ಡಿಪ್ಲೊಮಾ ಕೋರ್ಸುಗಳಿಗೆ ಪ್ರವೇಶ ಪ್ರಕ್ರಿಯೆಯನ್ನು 15.06.2024 ರವರೆಗೆ ವಿಸ್ತರಿಸಲಾಗಿದೆ. ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಶೇ.35 ಅಂಕಗಳೊಂದಿಗೆ ಪಾಸಾದ ಅರ್ಹ ವಿದ್ಯಾರ್ಥಿನಿಯರು ಮೊದಲನೇ ವರ್ಷಕ್ಕೆ ಪ್ರವೇಶ ಪಡೆಯಬಹುದು. ಐ.ಟಿ.ಐ/ಪಿ.ಯು.ಸಿ(ಸೈನ್ಸ್)ನಲ್ಲಿ ಪಾಸಾದ ವಿದ್ಯಾರ್ಥಿನಿಯರು ಡಿಪ್ಲೊಮಾ ಮೂರನೇ ಸೆಮಿಸ್ಟರ್ ಕೋರ್ಸುಗಳಿಗೆ ನೇರವಾಗಿ ಪ್ರವೇಶವನ್ನು ಪಡೆಯಲು ಅರ್ಜಿ ಆಹ್ವಾನಿಸಲಾಗಿದ್ದು ಆಸಕ್ತ ವಿದ್ಯಾರ್ಥಿನಿಯರು ಕಾಲೇಜಿನ ಕಚೇರಿಯಲ್ಲಿ ಅರ್ಜಿ ಪಡೆದು ಭರ್ತಿ ಮಾಡಿ ಅರ್ಜಿಯನ್ನು 25.06.2024 ರೊಳಗೆ ಮೂಲ ದಾಖಲಾತಿಗಳೊಂದಿಗೆ ಸಲ್ಲಿಸಬಹುದು. ಹೆಚ್ಚಿನ ವಿವರಗಳಿಗೆ ಶ್ರೀಮತಿ ಸವಿತ ಎಂ. (ಮೊ.9591650765) ಅಥವಾ ವಿ.ಬಿ.ಲೋಕೇಶ, ಪ್ರಾಂಶುಪಾಲರು (ಮೊ.8050216873) ಇವರುಗಳನ್ನು ಸಂಪರ್ಕಿಸಬಹುದು.

ವಿಧಾನಪರಿಷತ್ ನೂತನ ಸದಸ್ಯ ಡಾ.ಯತೀಂದ್ರರಿಗೆ ಅದ್ದೂರಿ ಸ್ವಾಗತ



ಮೈಸೂರು,ಜೂ.11(ಜಿಎ)–ವಿಧಾನ ಪರಿಷತ್ ಸದಸ್ಯರಾದ ನಂತರ ಮೊದಲ ಬಾರಿಗೆ ಮೈಸೂರಿಗೆ ಆಗಮಿಸಿದ ಡಾ.ಯತೀಂದ್ರ ಅವರನ್ನು ಕಾಂಗ್ರೆಸ್ ಕಾರ್ಯಕರ್ತರು ಅದ್ದೂರಿಯಾಗಿ ಸ್ವಾಗತಿಸಿದರು.

ಮೈಸೂರಿಗೆ ಆಗಮಿಸಿದ ಡಾ.ಯತೀಂದ್ರ ಅವರನ್ನು ಮೈಸೂರು-ಬೆಂಗಳೂರು ಹೆದ್ದಾರಿಯ ಕೆಂಪೇಗೌಡ ಸರ್ಕಲ್ (ಮಣಿಪಾಲ್ ಆಸ್ಪತ್ರೆ ಜಂಕ್ಷನ್) ಬಳಿ ಅಪಾರ ಸಂಖ್ಯೆಯ ಕಾಂಗ್ರೆಸ್ ಕಾರ್ಯಕರ್ತರು, ಅಭಿಮಾನಿಗಳು ಘೋಷಣೆಗಳನ್ನು ಕೂಗಿ, ಭಾರಿ ಹಾರ ಹಾಕಿ ಸ್ವಾಗತಿಸಿದರು. ತಾವು ಸಂಪುಟ ಸೇರ್ಪಡೆಯಾಗಿ ಮೈಸೂರಲ್ಲಿ ಮತ್ತಷ್ಟು ಅಭಿವೃದ್ಧಿ ಕಾರ್ಯ ಮಾಡುವಂತೆ ಮನವಿ ಮಾಡಿದರು. ಈ ವೇಳೆ ಡಾ.ಯತೀಂದ್ರ ಮಾತನಾಡಿ, ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರಿಂದ ಈ ಸ್ಥಾನ ದೊರೆತಿದೆ. ಇದಕ್ಕಾಗಿ ಎಲ್ಲರಿಗೂ ನನ್ನ ಕೃತಜ್ಞತೆಗಳು. ಮೈಸೂರಿನ ಅಭಿವೃದ್ಧಿಗೆ ಶ್ರಮಿಸುವುದಾಗಿ ಭರವಸೆ ನೀಡಿದರು.

ಈ ವೇಳೆ ಜಿಲ್ಲಾ ಕಾಂಗ್ರೆಸ್ ಅಲ್ಪಸಂಖ್ಯಾತ ಘಟಕದ ಜಿಲ್ಲಾಧ್ಯಕ್ಷ ಮೋಸಿನ್‌ಖಾನ್, ನಗರ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಶಶಾಂಕ್, ಯುವ ಕಾಂಗ್ರೆಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ರೋಹಿತ್ ಸಿಂಗ್, ಪದವೀಧರ ಘಟಕದ ನಗರಾಧ್ಯಕ್ಷ ರಾಘವೇಂದ್ರ, ಉಸಾಮಖಾನ್, ಯುವ ಮುಖಂಡರಾದ ದಿಲೀಪ್‌ಕುಮಾರ್, ನೌಫಿಲ್ ಅಹಮದ್, ರಾಜ್ಯ ಯುವ ಕಾಂಗ್ರೆಸ್ ಸಂಚಾಲಕ ಅಬ್ರಾರ್ ಮತ್ತಿತರರು ಇದ್ದರು.

ಲ್ಯಾಪ್‌ಟಾಪ್ ವಿತರಣೆ



ಕಟ್ಟಡ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸದ ಅನುಕೂಲಕ್ಕಾಗಿ ಕಾರ್ಮಿಕ ಇಲಾಖೆಯಿಂದ ವಿತರಿಸುವ ಲ್ಯಾಪ್‌ಟಾಪ್ ಅನ್ನು ಪೈಂಟರ್ ಅಂತೋನಿಕ್ರೂಸ್ ಅವರ ಮಗಳು ಸೇರಿದಂತೆ ಹಲವು ವಿದ್ಯಾರ್ಥಿಗಳಿಗೆ ಜಿಲ್ಲಾ ಕಾರ್ಮಿಕ ಅಧಿಕಾರಿ ರಾಜೇಶ್ ಜಾಧವ್, ಕರ್ನಾಟಕ ರಾಜ್ಯ ಕಟ್ಟಡ ಕಾರ್ಮಿಕರ ಕೇಂದ್ರ ಸಂಘದ ರಾಜ್ಯಾಧ್ಯಕ್ಷ ಪಿ.ರಾಜು, 1ನೇ ವೃತ್ತ ಕಾರ್ಮಿಕ ನಿರೀಕ್ಷಕಿ ಮಂಗಳಗೌರಿ ವಿತರಣೆ ಮಾಡಿದರು.

ಮೈಸೂರಿನ ರೋಟರಿ ಕ್ಲಬ್, ಸಿಲಿಕಾನ್ ಸಿಟಿ ಇಂಟರ್ ನ್ಯಾಷನಲ್ ಸ್ಕೂಲ್ ವತಿಯಿಂದ ಪರಿಸರ ದಿನಾಚರಣೆ



ಚಾಮುಂಡಿಬೆಟ್ಟದ ತಪ್ಪಲಿನ ಲಲಿತಾದ್ರಿಪುರದ ಸಿಲಿಕಾನ್ ಸಿಟಿ ಇಂಟರ್ ನ್ಯಾಷನಲ್ ಸ್ಕೂಲ್ ಆವರಣದಲ್ಲಿ ಪರಿಸರ ದಿನ ಅಂಗವಾಗಿ ಸಸಿ ನೆಡುವ ಕಾರ್ಯಕ್ಕೆ ಚಾಲನೆ ನೀಡಲಾಯಿತು.

ಮೈಸೂರು, ಜೂ. 11– ಮೈಸೂರಿನ ರೋಟರಿ ಕ್ಲಬ್ ಸಂಸ್ಥೆಗಳ ವಲಯ – 8 ಮತ್ತು ಸಿಲಿಕಾನ್ ಸಿಟಿ ಇಂಟರ್ ನ್ಯಾಷನಲ್ ಸ್ಕೂಲ್ ವತಿಯಿಂದ ಪರಿಸರ ದಿನಾಚರಣೆ ಅಂಗವಾಗಿ 1000 ಸಸಿಗಳನ್ನು ನೆಡುವ ಕಾರ್ಯಕ್ರಮಕ್ಕೆ ಚಾಮುಂಡಿಬೆಟ್ಟದ ತಪ್ಪಲಿನ ಲಲಿತಾದ್ರಿಪುರದ ಸಿಲಿಕಾನ್ ಸಿಟಿ ಇಂಟರ್‌ನ್ಯಾಷನಲ್ ಸ್ಕೂಲ್ ಆವರಣದಲ್ಲಿ ಚಾಲನೆ ನೀಡಲಾಯಿತು.

ರೋಟರಿ ಇಂಟರ್‌ನ್ಯಾಷನಲ್ 3181ರ ಜಿಲ್ಲೆಯ ಜಿಲ್ಲಾ ಗವರ್ನರ್ ರೋಟರಿಯನ್ ವಿಕ್ರಮದತ್ತಾ ಈ ವೇಳೆ ಮಾತನಾಡಿ, ಅಂತರರಾಷ್ಟ್ರೀಯ ಗುಣಮಟ್ಟದ ಶಿಕ್ಷಣ ನೀಡಲು ಮೈಸೂರಿನಲ್ಲಿ ಪ್ರಾರಂಭಿಸಲಾಗಿರುವ ಸಿಲಿಕಾನ್ ಸಿಟಿ ಇಂಟರ್ ನ್ಯಾಷನಲ್ ಸ್ಕೂಲ್ ಆವರಣದಲ್ಲಿ ರೋಟರಿ ಸಂಸ್ಥೆಗಳು, ಅರಣ್ಯ ಇಲಾಖೆ ಸಹಯೋಗದೊಂದಿಗೆ 1000 ಸಸಿಗಳನ್ನೂ ನೆಡುವ ಕಾರ್ಯಕ್ರಮ ಮಾಡುತ್ತಿರುವುದು ಶಿಕ್ಷಣದ ಜೊತೆಗೆ, ಪರಿಸರ ಸಂರಕ್ಷಣೆ ಬಗ್ಗೆ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲಾಗುತ್ತಿದೆ ಎಂದರು.

ರೋಟರಿಯ ಏಳೂ ಪ್ರಮುಖ ಗುರಿಗಳಲ್ಲಿ ಪರಿಸರ ಮತ್ತು ವಿದ್ಯೆಯ ಬಗ್ಗೆ ಮಹತ್ವ ನೀಡಲಾಗಿದೆ. ರೋಟರಿ ಸಂಸ್ಥೆಯೂ ಪರಿಸರದ ಬಗ್ಗೆ ಸದಾ ಕಾಳಜಿಯನ್ನು ಹೊಂದಿ ಉತ್ತಮ ಸೇವೆ ಸಲ್ಲಿಸುತ್ತಿದೆ. ಎಲ್ಲಾ ಸಂಘ ಸಂಸ್ಥೆಗಳನ್ನು ಒಗ್ಗೂಡಿಸಿಕೊಂಡು ಈ ಸೇವಾ ಕಾರ್ಯವನ್ನು ಮುಂದುವರಿಸಿಕೊಂಡು ಹೋಗುತ್ತೇವೆ ಎಂದು ತಿಳಿಸಿದರು.

ಮೈಸೂರು ವಿಭಾಗದ ಡಿಸಿಎಫ್ ಡಾ. ಕೆ.ಎನ್.ಬಸವರಾಜ ಮಾತನಾಡಿ, ಪ್ರಕೃತಿ ಮಡಿಲಿನಲ್ಲಿರುವ ಚಾಮುಂಡಿಬೆಟ್ಟದ ಸುಂದರ ವಾತಾವರಣದ ಈ ಶಾಲೆಯಲ್ಲಿ ಸಸಿಗಳನ್ನು ಬೆಳೆಸುತ್ತಿರುವುದು ಶ್ಲಾಘನೀಯ. ಅರಣ್ಯ ಇಲಾಖೆ ವತಿಯಿಂದ ಈ ವರ್ಷ 3 ಲಕ್ಷದ 30 ಸಾವಿರ ಸಸಿಗಳನ್ನು ರೈತರು ಮತ್ತು ಸಾರ್ವಜನಿಕರಿಗೆ ರಿಯಾಯಿತಿ ದರದಲ್ಲಿ 1 ಸಸಿಗೆ ರೂ.3 ರೂಪಾಯಿಯಿಂದ 6 ರೂಪಾಯಿವರೆಗೆ ಕೊಡಲಾಗುತ್ತಿದೆ. ಈ ವರ್ಷ ಅರಣ್ಯ ಇಲಾಖೆ ವತಿಯಿಂದಲೂ ಒಂದು ಲಕ್ಷ ಸಸಿಗಳನ್ನು ನೆಡಲಾಗುತ್ತಿದೆ ಎಂದರು.

ಸಿಲಿಕಾನ್ ಸಿಟಿ ಇಂಟರ್‌ನ್ಯಾಷನಲ್ ಸ್ಕೂಲ್‌ನ ಕಾರ್ಯದರ್ಶಿ ಎಲ್.ರವಿ, ಮೈಸೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಮಾಜಿ ಸದಸ್ಯ ಡಾ.ಈ.ಸಿ. ನಿಂಗರಾಜ್‌ಗೌಡ, ಸಹಾಯಕ ಗವರ್ನರ್ ರೋಟರಿಯನ್ ಎಂ. ರಾಜೀವ್, ರೋಟರಿಯನ್ ಕೇಶವಪ್ರಕಾಶ್, ವಲಯ ಸೇನಾನಿ ರೋಟರಿಯನ್ ಎಂ.ಮೋಹನ್, ರೋಟರಿಯನ್ ಕೆ.ಎನ್.ಸಂತೋಷ್, ಎನ್.ಕಿರಣ್, ಎಂ.ಎಸ್.ಉಮಶಂಕರ್ ಆರಾಧ್ಯ, ರೋಟರಿಯನ್ ಮುರಳೀಧರ್, ರೋಟರಿಯನ್ ಗೋವರ್ಧನ್ ಯಾದವ್, ರೋಟರಿಯನ್ ಪ್ರಭಾಕರ್, ವೈಲ್ಡ್ ಲೈಫ್ ಫೋಟೋಗ್ರಾಫರ್ ರೋಟರಿಯನ್ ದಿನೇಶ್ ಬಸವಪಟ್ಟಣ, ದಿಲೀಪ್ ಆರಾಧ್ಯ ಮತ್ತಿತರರು ಉಪಸ್ಥಿತರಿದ್ದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆ–2 ಹಿನ್ನೆಲೆ ನಿಷೇಧಾಜ್ಞೆ ಜಾರಿ

ಮೈಸೂರು, ಜೂ.11–ಜೂನ್ 14ರಿಂದ 22ರವರೆಗೆ ಎಸ್.ಎಸ್.ಎಲ್.ಸಿ ಪರೀಕ್ಷೆ-2 ಮೈಸೂರು ನಗರದ 07 ಮತ್ತು ಗ್ರಾಮಾಂತರ ವ್ಯಾಪ್ತಿಯ 10 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಪರೀಕ್ಷಾ ಸಮಯದಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗಳು ಜರುಗದಂತೆ ಸುವ್ಯವಸ್ಥಿತವಾಗಿ ಪರೀಕ್ಷಾ ಕಾರ್ಯಗಳನ್ನು ನಡೆಸಲು ಕಲಂ 144ರಡಿಯಲ್ಲಿ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ನಿಷೇಧಾಜ್ಞೆಯನ್ನು ಹೊರಡಿಸಲಾಗಿದೆ. ಪರೀಕ್ಷಾ ದಿನಗಳಂದು ಪರೀಕ್ಷೆಗಳು ಪ್ರಾರಂಭವಾಗುವ ಅರ್ಧ ಗಂಟೆ ಮುಂಚಿತವಾಗಿ ಮತ್ತು ಪರೀಕ್ಷಾ ಅವಧಿ ಮುಗಿಯುವವರೆಗೆ ಪರೀಕ್ಷಾ ಕೇಂದ್ರಗಳ ಸಮೀಪದಲ್ಲಿರುವ ಎಲ್ಲಾ ಜೆರಾಕ್ಸ್ ಮತ್ತು ಸೈಬರ್ ಕೇಂದ್ರಗಳನ್ನು ಮುಚ್ಚುವಂತೆ ಆದೇಶ ಹೊರಡಿಸಲಾಗಿದ್ದು, ಈ ಆದೇಶವು ಪರೀಕ್ಷಾರ್ಥಿಗಳಿಗೆ ಹಾಗೂ ಪರೀಕ್ಷಾ ಸಿಬ್ಬಂದಿಗೆ ಅನ್ವಯಿಸುವುದಿಲ್ಲ ಎಂದು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ



ಮೈಸೂರಿನ ಸರ್.ಎಂ.ವಿಶ್ವೇಶ್ವರಯ್ಯ ನಲ್ಲಿ ಮತ್ತು ಒಳಚರಂಡಿ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಸಂಘದ ಕಚೇರಿಯಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ ಆಚರಿಸಲಾಯಿತು. ಈ ವೇಳೆ ಅಧ್ಯಕ್ಷ ಜಯನಗರ ಮಹೇಶ್, ಕಾರ್ಯದರ್ಶಿ ರವಿಕುಮಾರ್, ಖಜಾಂಚಿ ಪ್ರಕಾಶ್, ನಿರ್ದೇಶಕರಾದ ಚಂದ್ರೇಗೌಡ, ಯೋಗೇಶ್, ಶಿವರಾಜ್, ರುದ್ರಸ್ವಾಮಿ, ಸಂತೋಷ್ ಕುಮಾರ್, ಜಾಕೀರ್ ಹುಸೇನ್, ಸದಸ್ಯರಾದ ಕುಮಾರ್, ರಮೇಶ್, ದೇವರಾಜ್ ಇದ್ದರು.

ಮಹರ್ಷಿ ವಿದ್ಯಾಸಂಸ್ಥೆಯಲ್ಲಿ ಅಕ್ಷರಭ್ಯಾಸ



ಮಹರ್ಷಿ ಸಂಸ್ಥೆಯ ನರ್ಸರಿ ವಿಭಾಗದ ಪುಟಾಣಿಗಳಿಗೆ ಅಕ್ಷರಭ್ಯಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಹಿಂದೂ ಸಂಸ್ಕೃತಿಯ ಪ್ರಾಮುಖ್ಯತೆಯ ಪ್ರತೀಕವಾದ ಅಕ್ಷರಭ್ಯಾಸವು ದೇವಿ ಸರಸ್ವತಿಯನ್ನು ಆರಾಧಿಸುವುದರೊಂದಿಗೆ ಪ್ರಾರಂಭವಾಯಿತು. ಪ್ರಾಂಶುಪಾಲರಾದ ಕೆ.ಆರ್.ಗೋಪಾಲಸ್ವಾಮಿ, ಎ.ಕುಮಾರ್, ಅನಿತಾ, ಪ್ರಿಯಾಂಕ, ಶಿಕ್ಷಕಿಯರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಸುರಕ್ಷಿತ ಆಹಾರದಿಂದ ಉತ್ತಮ ಆರೋಗ್ಯ



ಮೈಸೂರು, ಜೂ.11–ನಾವು ಸೇವಿಸುವ ಆಹಾರ ನಮ್ಮ ದೈಹಿಕ ಹಾಗೂ ಮಾನಸಿಕ ಆರೋಗ್ಯ ರಕ್ಷಿಸುತ್ತದೆ. ಹೀಗಾಗಿ, ಉತ್ತಮ ಗುಣಮಟ್ಟದ ಆಹಾರ ಸೇವಿಸುವುದು ಅಗತ್ಯ ಎಂದು ಕಡಕೊಳ ಹೆಲ್ತ್ ಇನ್ಸ್‌ಪೆಕ್ಟರ್ ಮಂಜುನಾಥ್ ಹೇಳಿದರು.

ಎಸ್.ಪ್ರಕಾಶ್ ಪ್ರಿಯದರ್ಶನ ಸ್ನೇಹ ಬಳಗದ ವತಿಯಿಂದ ವಿಶ್ವ ಆಹಾರ ಸುರಕ್ಷತಾ ದಿನದ ಅಂಗವಾಗಿ ಎಂ ಜಿ ರಸ್ತೆ ಸಿದ್ದಪ್ಪ ವೃತ್ತದ ಬಳಿ ಇರುವ ಸಿಎಸ್‌ಐ ಗರ್ಲ್ಸ್ ಬೋರ್ಡಿಂಗ್ ವಸತಿ ನಿಲಯದಲ್ಲಿ ಮಕ್ಕಳಿಗೆ ಹಣ್ಣು, ಹಂಪಲು, ಲೇಖನ ಸಾಮಗ್ರಿಗಳ ವಿತರಿಸಿ ಸುರಕ್ಷಿತ ಆಹಾರ ಸೇವನೆ ಕುರಿತು ನಡೆದ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.


ನಮ್ಮ ದೈನಂದಿನ ಆಹಾರ ಕ್ರಮ ದೈಹಿಕ ಹಾಗೂ ಮಾನಸಿಕ ಯೋಗಕ್ಷೇಮ ಸೂಚಿಸುತ್ತದೆ. ಆಹಾರ ಸುರಕ್ಷಿತ ಎಂಬುದು ಮನುಷ್ಯನ ಸಮಗ್ರ ಯೋಗಕ್ಷೇಮಕ್ಕೆ ಅಗತ್ಯವಾಗಿದೆ. ಉತ್ತಮ ಆಹಾರ ಸೇವನೆ ಮಾಡಿ. ಕಲುಷಿತ ಆಹಾರ ಸೇವನೆ ಹಲವು ರೋಗಗಳಿಗೆ ಕಾರಣವಾಗುತ್ತದೆ. ಇದು ಮಕ್ಕಳು, ಗರ್ಭಿಣಿಯರು ಹಾಗೂ ವೃದ್ಧರಿಗೆ ತೀವ್ರ ಸಮಸ್ಯೆಯಾಗುತ್ತದೆ. ಕಲುಷಿತ ಆಹಾರ ಸೇವನೆಯಿಂದ ಹರಡುವ ಕಾಯಿಲೆಗಳು ಕುಟುಂಬದ ಆರ್ಥಿಕ ಅಭಿವೃದ್ಧಿಗೆ ಸಮಸ್ಯೆಯಾಗುತ್ತದೆ ಎಂದರು.

ಜೆಡಿಎಸ್ ಕಾರ್ಯಾಧ್ಯಕ್ಷ ಪ್ರಕಾಶ್ ಪ್ರಿಯದರ್ಶನ್, ಪತ್ರಿಕಾ ವಿತರಕ ಸಂಘದ ಅಧ್ಯಕ್ಷ ಹೋಮದೇವ್, ಸುಬ್ರಮಣಿ, ಮಹದೇವ್, ಹರ್ಷಿತ್, ಅಕ್ಷಯ್ ಪ್ರಿಯದರ್ಶನ್ ಇನ್ನಿತರರು ಹಾಜರಿದ್ದರು.

ಮೈಸೂರಲ್ಲಿ ರಾಜ್ಯಮಟ್ಟದ ಪ್ರಥಮ ಯೋಗ ಸಮ್ಮೇಳನ

ಮೈಸೂರು, ಜೂ.11– ಕರ್ನಾಟಕ ಯೋಗ ಶಿಕ್ಷಕರ ಒಕ್ಕೂಟದ ವತಿಯಿಂದ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಮೈಸೂರಿನ ವಿನೋಬ ರಸ್ತೆಯಲ್ಲಿರುವ ಕಲಾಮಂದಿರದಲ್ಲಿ ಜೂನ್ 22 ಹಾಗೂ 23ರ ಶನಿವಾರ ಮತ್ತು ಭಾನುವಾರ ಬೆಳಗ್ಗೆ 10ರಿಂದ ಸಂಜೆ 5ರವರೆಗೆ ರಾಜ್ಯಮಟ್ಟದ ಪ್ರಥಮ ಯೋಗ ಸಮ್ಮೇಳನವನ್ನು ಆಯೋಜಿಸಲಾಗಿದೆ. ಸಮ್ಮೇಳನದ ಸರ್ವಾಧ್ಯಕ್ಷರಾಗಿ ಹಿರಿಯ ಯೋಗ ವಿದ್ವಾಂಸರು, ಭಾರತೀ ಯೋಗಧಾಮದ ಸಂಸ್ಥಾಪಕರಾದ ಡಾ.ಕೆ.ಎಲ್.ಶಂಕರನಾರಾಯಣ ಜೋಯಿಸರು ಆಯ್ಕೆಯಾಗಿದ್ದಾರೆ.

ಸಮ್ಮೇಳನದಲ್ಲಿ ಶ್ರೀ ರಾಮಕೃಷ್ಣಾಶ್ರಮದ ಅಧ್ಯಕ್ಷ ಶ್ರೀ ಮುಕ್ತಿದಾನಂದಜೀ ಮಹಾರಾಜ್ ಹಾಗೂ ದತ್ತಪೀಠದ ಶ್ರೀ ವಿಜಯಾನಂದ ತೀರ್ಥ ಸ್ವಾಮೀಜಿಯವರು ಸಾನ್ನಿಧ್ಯ ವಹಿಸಲಿದ್ದಾರೆ. ಕಾರ್ಯಕ್ರಮದ ಉದ್ಘಾಟನೆಯನ್ನು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ನೆರವೇರಿಸಲಿದ್ದಾರೆ. ಯೋಗ ಶಿಕ್ಷಕ ಎನ್.ಅನಂತ ಬರೆದಿರುವ ಮೈಸೂರು ಯೋಗ ಪರಂಪರೆ ಕೃತಿಯನ್ನು ಮೈಸೂರು-ಕೊಡಗು ಸಂಸದರಾದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಬಿಡುಗಡೆಗೊಳಿಸಲಿದ್ದಾರೆ. ಸಮ್ಮೇಳನದ ಅಂಗವಾಗಿ ಹೊರತರಲಿರುವ ಯೋಗಸಿರಿ ಸ್ಮರಣ ಸಂಚಿಕೆಯನ್ನು ಬೆಂಗಳೂರಿನ ಪತಂಜಲಿ ಯೋಗಾಶ್ರಮದ ಅಧ್ಯಕ್ಷರಾದ ಪ್ರಕಾಶ್ ಗುರೂಜಿ ಬಿಡುಗಡೆ ಮಾಡಲಿದ್ದಾರೆ.



ಮುಖ್ಯ ಅತಿಥಿಗಳಾಗಿ ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರದ ಸಹಾಯಕ ನಿರ್ದೇಶಕ ಡಾ.ಲಕ್ಷ್ಮೀನಾರಾಯಣ ಶೆಣೈ, ಸರ್ಕಾರಿ ಪ್ರಕೃತಿಚಿಕಿತ್ಸೆ ಮತ್ತು ಯೋಗ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ಗಜಾನನ ಹೆಗಡೆ, ಶಾಸಕರಾದ ಜಿ.ಟಿ.ದೇವೇಗೌಡ, ಶ್ರೀವತ್ಸ, ಡಾ.ತಿಮ್ಮಯ್ಯ, ಹರೀಶ್‌ಗೌಡ, ಸಿ.ಎನ್. ಮಂಜೇಗೌಡ, ಮುಡಾ ಅಧ್ಯಕ್ಷ ಕೆ.ಮರೀಗೌಡ ಇನ್ನಿತರರು ಪಾಲ್ಗೊಳ್ಳಲಿದ್ದಾರೆ.

ಸಂಜೆ ನಡೆಯುವ ಸಮಾರೋಪ ಸಮಾರಂಭವನ್ನು ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ.ಮಹದೇವಪ್ಪ ಉದ್ಘಾಟಿಸಲಿದ್ದು, ಯೋಗ ಸಂಬಂಧಿತ ಕೃತಿಗಳನ್ನು ಮೈಸೂರು ವಿವಿ ಕುಲಪತಿ ಪ್ರೊ. ಲೋಕನಾಥ್ ಬಿಡುಗಡೆಗೊಳಿಸಲಿದ್ದಾರೆ. ಇದೇ ಸಂದರ್ಭ ನಾಡಿನ ಯೋಗ ಸಾಧಕರಿಗೆ ಯೋಗ ರತ್ನಾಕರ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಕಾರ್ಯಕ್ರಮದಲ್ಲಿ ಸರ್ಕಾರಿ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಮಹಾ ವಿದ್ಯಾಲಯ, ಬೋಧಕ ಆಸ್ಪತ್ರೆ ವಿದ್ಯಾರ್ಥಿಗಳು, ಸರ್ಕಾರಿ ಆಯುರ್ವೇದ ಮಹಾವಿದ್ಯಾಲಯ, ಮೈಸೂರು ವಿವಿ ದೈಹಿಕ ಶಿಕ್ಷಣ ವಿಭಾಗದ ವಿದ್ಯಾರ್ಥಿಗಳು ಸೇರಿದಂತೆ ರಾಜ್ಯದ ಅನೇಕ ಯೋಗ ಸಂಘಟನೆಗಳ ಯೋಗ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಳ್ಳಲಿದ್ದಾರೆ ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

ಸಮ್ಮೇಳನದಲ್ಲಿ ಗೋಷ್ಠಿಗಳು


ಸಮ್ಮೇಳನದ ಅಂಗವಾಗಿ ವಿವಿಧ ಗೋಷ್ಠಿಗಳನ್ನು ಆಯೋಜಿಸಲಾಗಿದ್ದು, ಯೋಗದ ಪ್ರಾಚೀನತೆ ಕುರಿತು ಹಿರಿಯ ವಿದ್ವಾಂಸರಾದ ಡಾ.ಹೆಚ್.ವಿ. ನಾಗರಾಜರಾವ್, ಪತಂಜಲಿಯ ಯೋಗ ಸೂತ್ರಗಳಲ್ಲಿ ವೈಜ್ಞಾನಿಕ ನೋಟ ಕುರಿತು ಯೋಗ ವಿದ್ವಾಂಸ ಯು.ಜೆ.ಆದರ್ಶ, ಭಗವದ್ಗೀತೆಯಲ್ಲಿ ಯೋಗದ ಅನಾವರಣ ಕುರಿತು ಯೋಗಾಚಾರ್ಯ ಎಂ.ಪಿ.ವಿಜಯಕುಮಾರ್, ಆಧ್ಯಾತ್ಮಿಕ ಸಾಧನೆಗೆ ಯೋಗ ಕುರಿತು ನಿವೃತ್ತ ವೈದ್ಯಶಾಸ್ತ್ರ ಪ್ರಾಧ್ಯಾಪಕರಾದ ಡಾ.ಎಸ್.ಪಿ. ಯೋಗಣ್ಣ, ಯೋಗದ ವೈಜ್ಞಾನಿಕ ಸಂಶೋಧನೆಗಳ ಪಕ್ಷಿನೋಟ ಕುರಿತು ಖ್ಯಾತ ವೈದ್ಯಸಾಹಿತಿ ಡಾ.ನಾ.ಸೋಮೇಶ್ವರ ಹಾಗೂ ಚಿಕಿತ್ಸೆಯಾಗಿ ಯೋಗ ಕುರಿತು ಯೋಗತಜ್ಞ ಡಾ.ನಾರಾಯಣ ಹೆಗಡೆ ವಿಚಾರ ಮಂಡಿಸಲಿದ್ದಾರೆ.

ವಿವಿಧ ಗೋಷ್ಠಿಗಳ ಅಧ್ಯಕ್ಷತೆಯನ್ನು ಹಿರಿಯ ಯೋಗಾಚಾರ್ಯರು ವಹಿಸಲಿದ್ದಾರೆ. ಗೋಷ್ಠಿಗಳ ನಡುವೆ ಆದಿಯೋಗ ಶಿವ, ಯೋಗದರ್ಶಿನಿ, ಯೋಗ ನೃತ್ಯ, ನಾದಯೋಗ ಮುಂತಾದ ಪ್ರಾತ್ಯಕ್ಷಿಕೆಗಳ ಪ್ರದರ್ಶನವಿದೆ.

ಮೈಸೂರು ಮಿತ್ರ

ಇಡೀ ಮಾನವ ಸಮುದಾಯ ಬಸವಮಯವಾಗಲಿ

ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅಭಿಪ್ರಾಯ



ತಿ.ನರಸೀಪುರದಲ್ಲಿ ನಡೆದ ಗ್ರಾಮಾಂತರ ಬಸವ ಜಯಂತಿ, ಶಿವರಾತ್ರಿ ರಾಜೇಂದ್ರ ಶ್ರೀ ಹಾಗೂ ಸಿದ್ಧಗಂಗೆಯ ಡಾ.ಶಿವಕುಮಾರಸ್ವಾಮೀಜಿ ಜಯಂತ್ಯುತ್ಸವವನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಉದ್ಘಾಟಿಸಿದರು.

ತಿ.ನರಸೀಪುರ, ಜೂ.11– ಇಡೀ ಮಾನವ ಸಮುದಾಯ ಬಸವಮಯವಾಗಬೇಕು ಎಂಬುದು ನಮ್ಮೆಲ್ಲರ ಆಶಯ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅಭಿಪ್ರಾಯಪಟ್ಟರು.

ಪಟ್ಟಣದ ಮಹದೇವಪ್ಪ ಸ್ಮಾರಕ ಭವನದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಯುವ ಘಟಕ ಹಾಗೂ ಬಸವ ಬಳಗಗಳ ಸಹಯೋಗದಲ್ಲಿ ಮಂಗಳವಾರ ನಡೆದ ಗ್ರಾಮಾಂತರ ಬಸವ ಜಯಂತಿ ಹಾಗೂ ಸುತ್ತೂರು ಶಿವರಾತ್ರಿ ರಾಜೇಂದ್ರಶ್ರೀ ಹಾಗೂ ಸಿದ್ಧಗಂಗೆ ಡಾ.ಶಿವಕುಮಾರಸ್ವಾಮೀಜಿ ಅವರ ಜಯಂತ್ಯುತ್ಸವದಲ್ಲಿ ಅವರು ಮಾತನಾಡಿದರು.

ಪ್ರತಿಯೊಬ್ಬರೂ ಬಸವ ಶರಣರಾಗಬೇಕು. ನಾನು ಎಂದರೆ ಬಸವ ಶರಣ ಎನ್ನುವಂತಾಗಬೇಕು. ಅಲ್ಲಿ ಪ್ರತಿಯೊಂದು ಇದೆ. ಲಿಂಗ, ಜಾತಿ ತಾರತಮ್ಯವಿಲ್ಲ. ವೈಚಾರಿಕತೆ ಇದೆ. ವೈಚಾರಿಕ ಪ್ರಜ್ಞೆ ಇದೆ. ಈ ಬಸವ ತತ್ವಗಳನ್ನು ನಾವೆಲ್ಲರೂ ಪಾಲಿಸಿದಾಗ ಮಾತ್ರ ಸಮುದಾಯ ಬಸವಮಯವಾಗುತ್ತದೆ. ಗೌತಮ ಬುದ್ಧ ಅವರು ಜಾತ್ಯಾತೀತ ಸಮಾಜ, ಮಾನವೀಯತೆ, ಅನುಕಂಪ, ಪ್ರೀತಿ ಮೌಲ್ಯಗಳ ಸಂದೇಶ ಸಾರಿದ್ದರು. ಅದರ ಅನುಕರಣೆಯೇ ಬಸವಣ್ಣನವರು. ಅವರು ಅದೇ ಹಾದಿಯಲ್ಲಿ ಸಾಗಿ ಮಾನವೀಯತೆ ಸಂದೇಶ ಸಾರಿ ಸಮ ಸಮಾಜ ನಿರ್ಮಾಣಕ್ಕೆ ಒತ್ತು ನೀಡಿದರು. ಜನರು ಬುದ್ಧ, ಬಸವಣ್ಣ, ಅಂಬೇಡ್ಕರ್ ಅವರ ಬಗ್ಗೆ ಅಧ್ಯಯನ ಮಾಡುತ್ತಾರೆ. ಆದರೆ ಅವರ ತತ್ವಾದರ್ಶಗಳಂತೆ ನಡೆಯುವುದಿಲ್ಲ. ನಮ್ಮ ಹವ್ಯಾಸಗಳು ಬೇರೆ ಬೇರೆ ರೀತಿ ಇರುತ್ತವೆ. ಮನುಷ್ಯ ಹುಟ್ಟಿದಾಗ ಜಾತಿ ಧರ್ಮಗಳಿರಲಿಲ್ಲ ಎಂದ ಅವರು, ಬಸವಣ್ಣನವರು ಕಳಬೇಡ ಕೊಲಬೇಡ ಹುಸಿಯ ನುಡಿಯಬೇಡ ಎಂದಿದ್ದಾರೆ. ಹೀಗಾಗಿ ಅಸ್ಪೃಶ್ಯತೆ, ದೌರ್ಜನ್ಯ ಇರಬಾರದು ಎಂದರು.

ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿ ಮಾತನಾಡಿದ ಸುತ್ತೂರು ಶ್ರೀಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಬಸವಣ್ಣನವರು ಸಂಕುಚಿತ ಅರ್ಥಗಳಿಗೆ ಎಡೆ ಇಲ್ಲದಂತೆ ಮನುಷ್ಯನ ಬೌದ್ಧಿಕ, ಮಾನಸಿಕ ವಿಕಾಸ ಹಾಗೂ ಸರ್ವತೋಮುಖ ಅಭಿವೃದ್ಧಿಗೆ ರಾಗ–ದ್ವೇಷ ಬಿಟ್ಟು ಪ್ರೀತಿ, ವಾತ್ಸಲ್ಯದಿಂದ ಬದುಕಬೇಕಾದ ರೀತಿ ನೀತಿ ಬೋಧಿಸಿದ್ದರು. ಜನ ಭಾಷೆಯನ್ನು ದೈವ ಭಾಷೆಯನ್ನಾಗಿಸಿದ್ದ ಬಸವಣ್ಣನವರು ಭಗವಂತ ಮತ್ತು ಭಕ್ತರ ನಡುವೆ ನೇರ ಸಂಬಂಧ ಇದೆ ಎಂಬುದನ್ನು ಪ್ರತ್ಯಕ್ಷವಾಗಿ ತೋರಿಸಿಕೊಟ್ಟಿದ್ದರು. ಸರಳ ವಚನಗಳನ್ನು ಸುಲಭವಾಗಿ ಮನುಷ್ಯನಿಗೆ ಅರ್ಥವಾಗುವ ರೀತಿ ಬೋಧಿಸಿದ್ದರು ಎಂದರು.

ಭಾರತದ ಜ್ಞಾನ ಜಗತ್ತಿನಲ್ಲಿಯೇ ದೊಡ್ಡದಾಗಿದೆ. ಇಲ್ಲಿರುವಷ್ಟು ಅಪೂರ್ವ ಜ್ಞಾನ ಜಗತ್ತಿನ ಯಾವುದೇ ದೇಶದಲ್ಲಿ ಸಿಗಲು ಸಾಧ್ಯವಿಲ್ಲ. ಇಂದು ವೈಜ್ಞಾನಿಕವಾಗಿ ಅನೇಕ ಸಂಶೋಧನೆಗಳು ನಡೆಯುತ್ತಿವೆಯೋ ಇವೆಲ್ಲವನ್ನೂ ನಮ್ಮ ಋಷಿ ಮುನಿಗಳು, ತಪಸ್ವಿಗಳು ಅವರ ದಿವ್ಯ ಜ್ಞಾನದಿಂದಲೇ ಪಡೆದುಕೊಂಡಿದ್ದರು ಎಂಬುದು ಭಾರತೀಯರ ಹೆಮ್ಮೆಯ ಸಂಗತಿ ಎಂದ ಅವರು, ಬಸವಣ್ಣ ಹಾಗೂ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ 2 ದೇಹ ಒಂದೇ ಆತ್ಮ ಎನ್ನುವ ಹಾಗೆ ಸಮಾಜಕ್ಕೆ ಸೇವೆ ಸಲ್ಲಿಸಿದ್ದರು ಎಂದರು.

ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷ ತೊಟ್ಟವಾಡಿ ಮಹದೇವಸ್ವಾಮಿ ಮಾತನಾಡಿ, ಸಚಿವರು ತಾಲೂಕಿನಲ್ಲಿ ಬಸವ ಭವನ ನಿರ್ಮಾಣದ ಜೊತೆಗೆ ತಾಲೂಕು ಕಚೇರಿ ಮುಂದೆ ಬಸವೇಶ್ವರರ ಪುತ್ಥಳಿ ನಿರ್ಮಿಸಲು ಅನುವು ಮಾಡಿಕೊಡಬೇಕೆಂದು ಬೇಡಿಕೆ ಸಲ್ಲಿಸಿದರು.

ಬಸವ ಜಯಂತಿ ಅಂಗವಾಗಿ ಮೆರವಣಿಗೆ ಶ್ರೀಗುಂಜಾ ನರಸಿಂಹಸ್ವಾಮಿ ದೇವಾಲಯದಿಂದ ಹೊರಟು ಪ್ರಮುಖ ಬೀದಿಗಳಲ್ಲಿ ಸಾಗಿತ್ತು. ಈ ವೇಳೆ ವಾಟಾಳು ಮಠದ ಸಿದ್ಧಲಿಂಗ ಶಿವಾಚಾರ್ಯ ಸ್ವಾಮೀಜಿ, ಮಾಡ್ರಹಳ್ಳಿ ಪಟ್ಟದ ಮಠದ ಶಾಂತ ಮಲ್ಲಿಕಾರ್ಜುನ ಸ್ವಾಮೀಜಿ, ಮುಡುಕನಪುರ ಹಲವಾರ ಮಠದ ಷಡಕ್ಷರಿ ದೇಶಿಕೇಂದ್ರಸ್ವಾಮಿ, ನಿಲಸೋಗೆ ಮಠದ ಮಲ್ಲಪ್ಪಸ್ವಾಮಿ, ಬಿಜೆಪಿ ಮುಖಂಡ ಡಾ.ರೇವಣ್ಣ, ಮೈಸೂರು ಜಿಲ್ಲಾ ಉಪಾಧ್ಯಕ್ಷ ಸುರೇಶ್, ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಸಿದ್ದಪ್ಪ, ಪ್ರಧಾನ ಕಾರ್ಯದರ್ಶಿ ಪರಶಿವ ಮೂರ್ತಿ, ಖಜಾಂಚಿ ವಿಎನ್.ಸುದೇಶ್, ಯುವ ಘಟಕದ ಅಧ್ಯಕ್ಷ ಬಿ.ಎಂ.ವಿಜಯಕುಮಾರ್, ಉಪನ್ಯಾಸಕ ಕುಮಾರಸ್ವಾಮಿ, ನಿರ್ದೇಶಕರಾದ ಸಿ.ಬಿ.ಹುಂಡಿ ಚಿನ್ನಸ್ವಾಮಿ, ಜಿಲ್ಲಾ ಯುವ ಘಟಕ ಕಾರ್ಯದರ್ಶಿ ಆಡಿಟರ್ ಮಂಜುನಾಥ್, ಕುರುಬೂರು ಶಿವು, ಪುರಸಭಾ ಸದಸ್ಯ ಕಿರಣ್, ಮಾಜಿ ಸದಸ್ಯ ಎನ್. ಲೋಕೇಶ್, ಜಿಲ್ಲಾ ಉಪಾಧ್ಯಕ್ಷ ಸುರೇಶ್, ಮಹದೇಶ್ವರ ಭವನ್ ಮಾಲೀಕ ರಾಜಣ್ಣ, ಕುಮಾರಣ್ಣ, ಕುರುಬೂರು ಶಾಂತರಾಜು, ಯುವ ಘಟಕದ ಪ್ರಧಾನ ಕಾರ್ಯದರ್ಶಿ ಕಿರಗಸೂರು ಮಹದೇವ ಸ್ವಾಮಿ, ಕಾರ್ಯದರ್ಶಿ ಶಾಮಿಯಾನ ನಾಗೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಡಿ. ಬಸವರಾಜು, ಭೈರಾಪುರ ಗ್ರಾಪಂ ಮಾಜಿ ಅಧ್ಯಕ್ಷ ವೆಂಕಟೇಶ್ ಹಾಜರಿದ್ದರು.

ಮಹದೇವಪ್ಪ ಸೂಪರ್ ಸಿಎಂ...!

ಎಲ್ಲಾ ಸಮುದಾಯಗಳನ್ನು ಒಗ್ಗೂಡಿಸಿಕೊಂಡು ಸಾಗುವ ಧರ್ಮವಿದ್ದರೆ ಅದು ಲಿಂಗಾಯಿತ ಧರ್ಮ. ದೇಶಕ್ಕೆ ಶಿಕ್ಷಣದ ಕ್ರಾಂತಿಯನ್ನೇ ಹಬ್ಬಿಸಿದ ರಾಜೇಂದ್ರ ಶ್ರೀಗಳು ಎಲ್ಲಾ ಸಮುದಾಯದವರನ್ನು ಸಮಾನವಾಗಿ ಕಾಣುತ್ತಿದ್ದರು. ಹಾಗಾಗಿ ಈಗ ಸರ್ಕಾರದಲ್ಲಿ ಸೂಪರ್ ಸಿಎಂ ರಂತೆ ಕೆಲಸ ನಿರ್ವಹಿಸುತ್ತಿರುವ ಉಸ್ತುವಾರಿ ಸಚಿವ ಡಾ.ಮಹದೇವಪ್ಪನವರು ಬುದ್ಧ, ಬಸವ, ಅಂಬೇಡ್ಕರ್ ಅನುಯಾಯಿಯಾಗಿದ್ದಾರೆ. ಯಾರೂ ಮಾಡದ ಸಾಧನೆಯನ್ನು ಸಚಿವರಾಗಿ ಮಾಡಿದ್ದಾರೆ. ಹಾಗಾಗಿ ತಿ.ನರಸೀಪುರದಲ್ಲಿ ಶ್ರೀರಾಜೇಂದ್ರ ಸ್ವಾಮಿಗಳ ವೃತ್ತ ಹಾಗೂ ಶಿವಕುಮಾರ ಸ್ವಾಮೀಜಿಗಳ ಹೆಸರನ್ನು ಜೋಡಿ ರಸ್ತೆಗೆ ಇಡಲು ಕ್ರಮ ವಹಿಸಬೇಕು.

- ಗೌರಿಶಂಕರ ಸ್ವಾಮೀಜಿ, ಎಂ.ಎಲ್.ಹುಂಡಿ ಮಠಾಧ್ಯಕ್ಷ.

ಪ್ರತಿ ಟನ್ ಕಬ್ಬಿಗೆ 4 ಸಾವಿರ ರೂ. ನಿಗದಿಗೆ ಒತ್ತಾಯ



ನಂಜನಗೂಡು, ಜೂ.11– ಪ್ರಸಕ್ತ ಸಾಲಿನಲ್ಲಿ ಪ್ರತಿ ಟನ್ ಕಬ್ಬಿಗೆ ಸರ್ಕಾರ 4 ಸಾವಿರ ರೂ. ನಿಗದಿ ಮಾಡಬೇಕು ಎಂದು ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಹಳ್ಳಿಕೆರೆ ಹುಂಡಿ ಭಾಗ್ಯರಾಜ್ ಒತ್ತಾಯಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರ ಈ ಬಾರಿ ಟನ್ ಕಬ್ಬಿಗೆ 4 ಸಾವಿರ ರೂ. ನಿಗದಿ ಮಾಡುವ ಮೂಲಕ ರೈತರಿಗೆ ನೆರವಾಗಬೇಕು. ಕಳೆದ 2 ವರ್ಷಗಳಿಂದ ಸಕ್ಕರೆ ಕಾರ್ಖಾನೆಗಳು ಟನ್ ಕಬ್ಬಿಗೆ 150 ರೂ. ಬಾಕಿ ಉಳಿಸಿಕೊಂಡಿದ್ದು, ಆ ಹಣವನ್ನು ಸರ್ಕಾರ ಮಧ್ಯ ಪ್ರವೇಶಿಸಿ ಕೊಡಿಸಬೇಕು. ಕಾರ್ಖಾನೆ ಮುಂಭಾಗ ತೂಕದ ಯಂತ್ರ ಅಳವಡಿಸಿ ರೈತರಿಗೆ ತೂಕದ ವಿಚಾರದಲ್ಲಿ ನಡೆಯುತ್ತಿರುವ ಮೋಸ ತಡೆಯಬೇಕು. ತಜ್ಞರ ಸಮಿತಿ ರಚಿಸಿ ಇಳುವರಿ ಕಡಿಮೆಯಾಗುತ್ತಿರುವ ಬಗ್ಗೆ ಪರಿಶೀಲಿಸಬೇಕು. ಬಾಳೆ ಬೆಳೆ ನಾಶವಾದ ಸಂದರ್ಭ ರೈತರಿಗೆ ಎಕರೆಗೆ 1 ಲಕ್ಷ ಬೆಳೆ ಪರಿಹಾರ ನೀಡಬೇಕು. ಸರ್ಕಾರ ಬಾಕಿ ಉಳಿಸಿಕೊಂಡಿರುವ ಹಾಲು ಉತ್ಪಾದಕರ 700 ಕೋಟಿ ರೂ.ಗಳನ್ನು ನೀಡಬೇಕು. ನಮ್ಮ ಬೇಡಿಕೆಗಳಿಗೆ ಸರ್ಕಾರ 10 ದಿನದೊಳಗೆ ಸ್ಪಂದಿಸದಿದ್ದರೆ ರಾಜ್ಯಾದ್ಯಂತ ಜಿಲ್ಲಾಧಿಕಾರಿಗಳ ಕಚೇರಿ ಎದುರು ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದಿಂದ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಚಿಕ್ಕಸ್ವಾಮಿ, ದೇವನೂರು ನಾಗೇಂದ್ರ, ಅಂಬಳೆ ಮಹದೇವಸ್ವಾಮಿ, ಶಿವಣ್ಣ, ರೇವಣ್ಣ, ಮಲ್ಲಣ್ಣ ಉಪಸ್ಥಿತರಿದ್ದರು.

ಕೊತ್ತೇಗಾಲದಲ್ಲಿ ಕ್ಷಯರೋಗ ನಿರ್ಮೂಲನಾ ಸಭೆ



ಸರಗೂರು, ಜೂ.11– ಕ್ಷಯರೋಗದ ಬಗ್ಗೆ ನಿರ್ಲಕ್ಷ್ಯ ವಹಿಸದೆ ಪ್ರಾಥಮಿಕ ಹಂತದಲ್ಲೇ ವೈದ್ಯರನ್ನು ಭೇಟಿ ಮಾಡಿ ಚಿಕಿತ್ಸೆ ಪಡೆಯುವಂತೆ ಶಾಂತಿಪುರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಶರತ್ ಸಲಹೆ ನೀಡಿದರು.

ತಾಲೂಕಿನ ಕೊತ್ತೇಗಾಲ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ಸಿಇಟಿಐ ಮತ್ತು ಎನ್‌ಟಿಇಪಿ ತಂಡ, ತಾಲೂಕು ಆರೋಗ್ಯ ಕೇಂದ್ರ, ಶಾಂತಿಪುರ ಪ್ರಾಥಮಿಕ ಆರೋಗ್ಯ ಕೇಂದ್ರ, ಕೊತ್ತೇಗಾಲ ಗ್ರಾಪಂ ವ್ಯಾಪ್ತಿಯ ಕ್ಷಯರೋಗ ನಿರ್ಮೂಲನಾ ಸಭೆಯಲ್ಲಿ ಮಾತನಾಡಿದ ಅವರು, ಕ್ಷಯರೋಗ ಮರಣದ 10 ಕಾರಣಗಳಲ್ಲಿ ಒಂದಾಗಿದೆ. ಕ್ಷಯರೋಗ ಮೈಕ್ರೋ ಬ್ಯಾಕ್ಟೀರಿಯಂ ಟ್ಯೂಬರ್ಕ್ಯುಲೋಸಿಸ್ ಎಂಬ ಬ್ಯಾಕ್ಟೀರಿಯಾದಿಂದ ಉಂಟಾಗುತ್ತದೆ. ಕ್ಷಯರೋಗ ಪ್ರಾಥಮಿಕವಾಗಿ ಉಸಿರಾಟದ ಮೇಲೆ ಪರಿಣಾಮ ಬೀರುವ ಒಂದು ಸಾಂಕ್ರಾಮಿಕ ಕಾಯಿಲೆ. ಇದು ಜಠರ, ಕರುಳು, ಮಸ್ಕ್ಯುಲೋಸ್ಕೆಲಿಟಲ್ ಸಿಸ್ಟಮ್, ನರಮಂಡಲ ಇತರ ವ್ಯವಸ್ಥೆಗಳ ಮೇಲೆ ಪರಿಣಾಮ ಬೀರಬಹುದು. ಇದು ಸುಪ್ತ ಅಥವಾ ಸಕ್ರಿಯ ಸೋಂಕಿನಂತೆ ಕಂಡು ಬರಬಹುದು. ಸಕ್ರಿಯ ಪ್ರಕರಣಗಳು ಕೆಮ್ಮು, ಹೆಮೊಪ್ಟಿಸಿಸ್ (ಕಫದಲ್ಲಿ ರಕ್ತ), ಜ್ವರ, ತೂಕ ನಷ್ಟ, ಇತ್ಯಾದಿ ರೋಗಲಕ್ಷಣಗಳೊಂದಿಗೆ ಹರಡುವ ಖಾಯಿಲೆಯಾಗಿದ್ದು, ಜ್ವರ, ಕೆಮ್ಮು ಕಂಡು ಬಂದರೆ ತಪಾಸಣೆ ಮಾಡಿಸಿಕೊಳ್ಳುವುದು ಸೂಕ್ತ. ಆದ ಕಾರಣ ಕೊತ್ತೇಗಾಲ ಗ್ರಾಪಂ ವ್ಯಾಪ್ತಿಯಲ್ಲಿ ಕ್ಷಯರೋಗ ಮುಕ್ತ ಮಾಡಲು ಸಾರ್ವಜನಿಕರ ಸಲಹೆ ಸಹಕಾರ ಅಗತ್ಯ ಎಂದರು.

ಎನ್‌ಟಿಇಪಿ ಟಿಬಿ ಪ್ರಾಜೆಕ್ಟ್ ಡಿಟಿಓ ಮೊಹಮ್ಮದ್ ಶಿರಾಜ್ ಅಹಮದ್, ಸಿಎಪಿ ಟಿಬಿ ಪ್ರಾಜೆಕ್ಟ್ ನಿರ್ದೇಶಕರಾದ ರಮಣ್ ಅರೋರಾ ಮಾತನಾಡಿದರು. ಈ ವೇಳೆ ಕ್ಷಯರೋಗದಿಂದ ಗುಣಮುಖರಾದ ಐವರಿಗೆ ಆಹಾರ ಧಾನ್ಯಗಳ ಕಿಟ್ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಡಾ.ಅಂಕಿತ ಮೋಖಾಶಿ, ಡಾ.ಯುಕ್ತನಿಧಿ, ಡೆವಿನಿಲ ಚಟರ್ಜಿ ಹರ್ಷ ಅಗರ್‌ವಾಲ್, ಕೊತ್ತೇಗಾಲ ಪಿಡಿಒ ನಾಗೇಂದ್ರ, ಗ್ರಾಪಂ ಅಧ್ಯಕ್ಷ ಚಲುವಪ್ಪ, ಉಪಾಧ್ಯಕ್ಷೆ ವಿಮಲ, ಸದಸ್ಯರಾದ ಮಹದೇವಯ್ಯ, ಸವಿತಾ ಹಾಗೂ ಸದಸ್ಯರು, ಶಿಕ್ಷಕರಾದ ನಾಗೇಂದ್ರಪ್ಪ, ಶಾಲಾ ಶಿಕ್ಷಕ ವೃಂದ, ಆರೋಗ್ಯ ಇಲಾಖೆ ಸಹಾಯಕ ಎಸ್.ಟಿ.ಎಸ್. ಉಮೇಶ್, ಸಿಹೆಚ್‌ಓ ನೀಲಾರಾಣಿ, ಪಿಹೆಚ್‌ಸಿಓ ಸೌಮ್ಯ, ಎಂ.ಎಲ್.ಜಗದೀಶ್, ಆಶಾ ಕಾರ್ಯಕರ್ತೆಯರು, ಇತರರಿದ್ದರು.

ಹೆಳವರಹುಂಡಿಯಲ್ಲಿ ಕಣ್ಣಿನ ಉಚಿತ ತಪಾಸಣಾ ಶಿಬಿರ



ಆಲಗೂಡು ಪಿಎಸಿಎಸ್‌ನಲ್ಲಿ ಕಣ್ಣಿನ ಉಚಿತ ತಪಾಸಣಾ ಶಿಬಿರ ನಡೆಯಿತು.

ತಿ.ನರಸೀಪುರ, ಜೂ.11– ಯಾವುದೇ ನೋವಿಲ್ಲದೆ, ಅನಸ್ತೇಷಿಯಾ ಬಳಸದೇ ಉಚಿತವಾಗಿ ಅತ್ಯಾಧುನಿಕ ತಂತ್ರಜ್ಞಾನ ಬಳಸಿ ಕಣ್ಣಿನ ಲೇಸರ್ ಆಪರೇಷನ್ ಮಾಡಲಾಗುತ್ತಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆಯುವಂತೆ ಭೈರವೇಶ್ವರ ನೇತ್ರಾಲಯ ಸೂಪರ್ ಸ್ಪೆಷಾಲಿಟಿ ಕಣ್ಣಿನ ಆಸ್ಪತ್ರೆ ವ್ಯವಸ್ಥಾಪಕ ಸುರೇಶ್ ತಿಳಿಸಿದರು.

ತಾಲೂಕಿನ ಹೆಳವರಹುಂಡಿ ಗ್ರಾಮದ ಆಲಗೂಡು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಸರ್ಕಾರಿ ವಿಮಾ ರೈತರ ಯಶಸ್ವಿನಿ ಯೋಜನೆಯಡಿ ಆಯೋಜಿಸಿದ್ದ ಕಣ್ಣಿನ ಉಚಿತ ತಪಾಸಣಾ ಶಿಬಿರದಲ್ಲಿ ರೋಗಿಗಳಿಗೆ ಕಣ್ಣು ತಪಾಸಣೆ ನಡೆಸಿ ಅವರು ಮಾತನಾಡಿದರು.

ಯಶಸ್ವಿನಿ ಕಾರ್ಡ್ ಹೊಂದಿರುವವರಿಗೆ ಉಚಿತವಾಗಿ ಕಣ್ಣಿನ ತಪಾಸಣೆ ಮತ್ತು ಅವಶ್ಯವಿರುವವರಿಗೆ ಲೇಸರ್ ಆಪರೇಷನ್ ನಡೆಸಲಾಗುತ್ತದೆ. ನಮ್ಮ ಆಸ್ಪತ್ರೆಯಲ್ಲಿ ಆಧುನಿಕ ತಂತ್ರಜ್ಞಾನದೊಂದಿಗೆ ಕಣ್ಣಿನ ತಪಾಸಣೆ ನಡೆಸಿ ಕಣ್ಣಿನ ತೊಂದರೆ ಇರುವವರಿಗೆ ಇಂಜೆಕ್ಷನ್ ಇಲ್ಲದೇ ಹೊಲಿಗೆ ರಹಿತ ಲೆನ್ಸ್ ಅಳವಡಿಸುವ ಸೌಲಭ್ಯ ಹೊಂದಲಾಗಿದೆ. ಕಣ್ಣಿನ ಆಪರೇಷನ್ ಮಾಡುವ ವೇಳೆ ಕೈ ಆಪರೇಷನ್ ಮಾಡುವುದಿಲ್ಲ. ಅನಸ್ತೇಷಿಯಾ ನೀಡದೇ ಆಧುನಿಕ ತಂತ್ರಜ್ಞಾನದ ಮೂಲಕ ಲೇಸರ್ ಆಪರೇಷನ್ ಮಾಡಲಾಗುತ್ತದೆ. ಆಪರೇಷನ್ ಮಾಡುವುದನ್ನು ರೋಗಿಯೂ ಸಹ ನೇರವಾಗಿ ಟಿವಿಯಲ್ಲಿ ನೋಡಬಹುದಾಗಿದೆ ಎಂದು ತಿಳಿಸಿದ ಅವರು, ರೈತರಿಗೆ ಅನುಕೂಲವಾಗುವ ಉದ್ದೇಶದಿಂದ ಈ ಶಿಬಿರ ಮಾಡಲಾಗಿದ್ದು, ಇದರ ಸದುಪಯೋಗಕ್ಕೆ ಯಶಸ್ವಿನಿ ಕಾರ್ಡ್ ಹೊಂದಿರುವ ರೈತರು ಮುಂದಾಗಬೇಕೆಂದು ಕರೆ ನೀಡಿದರು.

ಕೃಷಿ ಪತ್ತಿನ ಸಹಕಾರ ಸಂಘದ ಮಾಜಿ ಅಧ್ಯಕ್ಷ ಬಿ.ವೀರಭದ್ರಪ್ಪ ಮಾತನಾಡಿ, ಕಣ್ಣು ಮಾನವನ ದೇಹದ ಅತೀ ಸೂಕ್ಷ್ಮ ಅಂಗ. ಇದನ್ನು ಅತೀ ಜಾಗರೂಕತೆಯಿಂದ ಕಾಪಾಡಿಕೊಳ್ಳಬೇಕು. ಕಣ್ಣಿನ ದೃಷ್ಟಿ ಎಲ್ಲರಿಗೂ ಮಹತ್ವದ್ದು ಅದರಲ್ಲೂ ವಿಶೇಷವಾಗಿ ವಯೋವೃದ್ಧರೇ ಹೆಚ್ಚಿನ ಸಂಖ್ಯೆಯಲ್ಲಿ ಕಣ್ಣಿನ ಪೊರೆಗೆ ತುತ್ತಾಗುತ್ತಿದ್ದಾರೆ. ನಿತ್ಯ ಜೀವನದ ಕೆಲಸ ಕಾರ್ಯಗಳನ್ನು ನಿರ್ವಹಿಸಲು ಅವರಿಗೆ ಈ ಶಿಬಿರ ಆಯೋಜಿಸಲಾಗಿದೆ ಎಂದರು.

ಈ ವೇಳೆ ಡಾ.ಮಂಜುನಾಥ್, ಡಾ.ಚಂದನ, ಸಹಕಾರ ಅಭಿವೃದ್ಧಿ ಅಧಿಕಾರಿ ರಾಜಣ್ಣ, ಸಿಇಓ ಸೋಮಣ್ಣ, ಮಾಜಿ ಸದಸ್ಯ ನಿಂಗರಾಜು ಮತ್ತಿತರಿದ್ದರು.

ವಿದ್ಯಾರ್ಥಿಗಳು ಕ್ರೀಡಾ ಮನೋಭಾವ ಬೆಳೆಸಿಕೊಳ್ಳಿ



ಮಕ್ಕಳ ಕ್ರೀಡಾಕೂಟಕ್ಕೆ ಚಾಲನೆ ನೀಡಲಾಯಿತು.

ಹುಣಸೂರು, ಜೂ.11– ವಿದ್ಯಾರ್ಥಿಗಳು ಕ್ರೀಡಾ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಹುಣಸೂರು ತಾಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಕೆ.ಮನು ಸಲಹೆ ನೀಡಿದರು.

ತಾಲೂಕಿನ ಬಿಳಿಕೆರೆ ಗ್ರಾಪಂ ಡಿಜಿಟಲ್ ಗ್ರಂಥಾಲಯದಲ್ಲಿ ಅಂತರರಾಷ್ಟ್ರೀಯ ಕ್ರೀಡಾ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಮಕ್ಕಳ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕ್ರೀಡೆ ಮಾನಸಿಕ ಹಾಗೂ ದೈಹಿಕ ಆರೋಗ್ಯಕ್ಕೆ ಸಹಕಾರಿ. ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಬೇಕು ಎಂದರು.

ಈ ವೇಳೆ ಚೆಸ್, ಕೇರಂ, ಹಾವು ಏಣಿ ಆಟ, ಲ್ಯೂಡೋ, ಗುಂಡು ಎಸೆತ, ರಿಂಗ್ ಎಸೆತ ಸ್ಪರ್ಧೆಗಳಲ್ಲಿ ಮಕ್ಕಳು ಉತ್ಸಾಹದಿಂದ ಪಾಲ್ಗೊಂಡಿದ್ದರು. ಈ ಸಂದರ್ಭ ಶಾಲೆ ಮುಖ್ಯೋಪಾಧ್ಯಾಯರು, ಗ್ರಾಪಂ ಪಿಡಿಓ, ಗ್ರಂಥಪಾಲಕ ಕೃಷ್ಣ ಸೇರಿದಂತೆ ಇನ್ನಿತರರಿದ್ದರು.

ಶ್ರದ್ಧೆಯಿಂದ ವಿದ್ಯೆ ಕಲಿತು ಜೀವನದಲ್ಲಿ ಯಶಸ್ಸು ಗಳಿಸಿ

ಮುಡಾ ಮಾಜಿ ಅಧ್ಯಕ್ಷ ಹೆಚ್.ಎನ್.ವಿಜಯ್ ಸಲಹೆ



ಚುಂಚನಕಟ್ಟೆ, ಜೂ.11– ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸದ ವೇಳೆ ಶ್ರದ್ಧೆಯಿಂದ ಕಲಿತರೆ ಜೀವನದಲ್ಲಿ ಯಶಸ್ಸು ಗಳಿಸಲು ಸಾಧ್ಯ ಎಂದು ಮುಡಾ ಮಾಜಿ ಅಧ್ಯಕ್ಷ ಹೆಚ್.ಎನ್.ವಿಜಯ್ ತಿಳಿಸಿದರು.

ಸಾಲಿಗ್ರಾಮ ತಾಲೂಕಿನ ಹರದನಹಳ್ಳಿಯಲ್ಲಿ ಅಖಿಲ ಭಾರತ ಮಟ್ಟದ ವೈದ್ಯಕೀಯ ಪ್ರವೇಶಾತಿ ಪರೀಕ್ಷೆಯಲ್ಲಿ 720ಕ್ಕೆ 671 ಅಂಕ ಪಡೆಯುವ ಮೂಲಕ ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿರುವ ತಾಲೂಕಿನ ಗಾಯನಹಳ್ಳಿ ಗ್ರಾಮದ ಜಿ.ಎಸ್.ನಟರಾಜ್ ಮತ್ತು ಜ್ಯೋತಿ ದಂಪತಿ ಪುತ್ರ ಜಿ.ಎನ್.ತರುಣ್ ಅವರನ್ನು ಸನ್ಮಾನಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬರೂ ತಮ್ಮ ಮಕ್ಕಳಿಗೆ ಕಡ್ಡಾಯವಾಗಿ ಶಿಕ್ಷಣ ಕೊಡಿಸಬೇಕು. ಗ್ರಾಮೀಣ ವಿದ್ಯಾರ್ಥಿಗಳು ಯಾವುದೇ ಅಳುಕಿಲ್ಲದೆ ನಿಖರ ಗುರಿ ಇಟ್ಟುಕೊಂಡು ತಮ್ಮ ಕಲಿಕೆಯ ಅವಧಿಯಲ್ಲಿ ಉತ್ತಮವಾಗಿ ಅಭ್ಯಾಸ ಮಾಡುವ ಮೂಲಕ ಸಮಾಜದಲ್ಲಿ ಉನ್ನತ ಸ್ಥಾನಮಾನಗಳನ್ನು ಪಡೆಯಬೇಕು. ಆ ಮೂಲಕ ತಮ್ಮ ಗ್ರಾಮಕ್ಕೆ, ಕಲಿಸಿದ ಗುರುಗಳಿಗೆ ಹಾಗೂ ತಂದೆ ತಾಯಿಯರಿಗೆ ಒಳ್ಳೆಯ ಹೆಸರನ್ನು ತರಬೇಕು. ಇದಕ್ಕೆ ವಿದ್ಯಾರ್ಥಿ ತರುಣ್ ಮಾದರಿಯಾಗಿದ್ದಾನೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಯಾವುದೇ ವ್ಯಕ್ತಿ ತಮಗೆ ದೊಡ್ಡ ಸ್ಥಾನಮಾನ ದೊರೆತಾಗ ತಮ್ಮ ಸುತ್ತಮುತ್ತಲು ಇರುವ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವಂತಹ ಕೆಲಸ ಮಾಡುವ ಮೂಲಕ ಸಮಾಜಕ್ಕೆ ತಮ್ಮದೇ ಆದ ಕೊಡುಗೆ ನೀಡಬೇಕು ಎಂದು ಕರೆ ನೀಡಿದರು.

ಈ ಸಂದರ್ಭ ಮಹಿಳಾ ಉದ್ಯಮಿ ಸವಿತಾ, ತಾಪಂ ಮಾಜಿ ಸದಸ್ಯ ಎ.ಟಿ. ಗೋವಿಂದೇಗೌಡ, ಸಿಡಿಸಿ ಉಪಾಧ್ಯಕ್ಷ ಎಸ್.ಎಂ.ಪರೀಕ್ಷಿತ್, ಗ್ರಾಪಂ ಮಾಜಿ ಸದಸ್ಯ ನಟರಾಜ್, ಜ್ಯೋತಿ, ಕೆಟಿ.ಮೋಹನ್ ಕುಮಾರ್, ಯುವ ಮುಖಂಡರಾದ ಕೃಷ್ಣೇಗೌಡ, ಪ್ರದೀಪ್ ಸೇರಿದಂತೆ ಹಲವರಿದ್ದರು.



ಬೀದಿ ನಾಟಕದ ಮೂಲಕ ಅರಿವು

ಹೆಚ್.ಡಿ.ಕೋಟೆ ತಾಲೂಕಿನ ಯಲಮತ್ತೂರು ಕಿರಿಯ ಪ್ರಾಥಮಿಕ ಶಾಲಾವರಣದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಸ್ವಚ್ಛತೆ, ಬಾಲ್ಯವಿವಾಹ, ಶಿಕ್ಷಣ, ಶೌಚಾಲಯ ಬಳಕೆ ಬಗ್ಗೆ ಸಾರ್ವಜನಿಕರಿಗೆ ಸ್ನೇಹಜೀವಿ ನಾಟಕ ಮಂಡಳಿ ಬೀದಿ ನಾಟಕ ಪ್ರದರ್ಶಿಸಿ ಅರಿವು ಮೂಡಿಸಿತು. ಈ ವೇಳೆ ಕೃಷ್ಣಮೂರ್ತಿ, ಮಲಮ್ಮ, ಮುಕುಂದ ರಾಜು, ಸುರೇಶ, ಮಹದೇವಸ್ವಾಮಿ, ಮಹದೇವಮ್ಮ, ನೀಲಮ್ಮ, ರವಿ, ಸುವರ್ಣ, ಸಂಘದ ಸದಸ್ಯರು, ಶಾಲಾ ಮಕ್ಕಳು ಇತರರಿದ್ದರು.

ಬೈಕ್ ಕಳವು ಮಾಡುತ್ತಿದ್ದ ಕಳ್ಳನ ಬಂಧನ



ನಂಜನಗೂಡು, ಜೂ.11– ಬೈಕ್‌ಗಳನ್ನು ಕಳವು ಮಾಡುತ್ತಿದ್ದ ಚಾಲಾಕಿ ಕಳ್ಳನನ್ನು ಬಂಧಿಸುವಲ್ಲಿ ನಂಜನಗೂಡು ಪಟ್ಟಣ ಪೊಲೀಸರು ಯಶಸ್ವಿಯಾಗಿದ್ದಾರೆ.

ಚಾಮರಾಜನಗರದ ಕರಿನಂಜನಪುರ ಗ್ರಾಮದ ಶಂಕರಪ್ಪ(56) ಬಂಧಿತ ಆರೋಪಿ. ಈತನಿಂದ ಸುಮಾರು 15 ಲಕ್ಷ ಮೌಲ್ಯದ 19 ಬೈಕ್‌ಗಳನ್ನು ವಶಪಡಿಸಿಕೊಂಡಿದ್ದಾರೆ. ಈತ ನಗರದ ಶ್ರೀಕಂಠೇಶ್ವರ ದೇವಾಲಯದ ದಾಸೋಹ ಭವನದ ಮುಂಭಾಗ ನಿಲ್ಲಿಸಿ ದೇವರ ದರ್ಶನಕ್ಕೆ ತೆರಳುತ್ತಿದ್ದ ಭಕ್ತರ ಬೈಕ್‌ಗಳನ್ನು ಕಳವು ಮಾಡಿ ಚಾಮರಾಜನಗರ ಜಿಲ್ಲೆ ಹಾಗೂ ಗಡಿ ಗ್ರಾಮಗಳಿಗೆ ಮಾರಾಟ ಮಾಡುತ್ತಿದ್ದ ಎನ್ನಲಾಗಿದೆ. ಈ ಬಗ್ಗೆ ನಂಜನಗೂಡು ಪಟ್ಟಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು.

ಆರೋಪಿ ಬಂಧನಕ್ಕೆ ನಂಜನಗೂಡು ಪಟ್ಟಣ ಠಾಣೆ ಇನ್ಸ್‌ಪೆಕ್ಟರ್ ಬಸವರಾಜು ಮಾರ್ಗದರ್ಶನದಲ್ಲಿ ಎಸ್‌ಐ ಪ್ರಕಾಶ್ ಮೊದಲೂರು, ಅಪರಾಧ ವಿಭಾಗದ ಎಸ್‌ಐ ಮಾದೇಗೌಡರ ನೇತೃತ್ವದಲ್ಲಿ ಎಎಸ್‌ಐ ಎನ್.ಸತೀಶ್, ಹಫೀಜುಲ್ಲಾ ಷರೀಫ್, ಸಿಬ್ಬಂದಿಗಳಾದ ಶ್ರೀನಿವಾಸ, ಜಯರಾಮು, ಶಿವಕುಮಾರ್, ತಿಮ್ಮಯ್ಯ ಅವರನ್ನು ಒಳಗೊಂಡ ವಿಶೇಷ ತಂಡವನ್ನು ರಚಿಸಲಾಗಿತ್ತು. ತನಿಖೆ ಕೈಗೊಂಡಿದ್ದ ಪೊಲೀಸರು ಜೂ.8ರಂದು ಶ್ರೀಕಂಠೇಶ್ವರ ದೇವಾಲಯದ ಮುಂಭಾಗ ಗಸ್ತು ತಿರುಗುತ್ತಿದ್ದ ವೇಳೆ ಆರೋಪಿ ಶಂಕರಪ್ಪ ದಾಸೋಹ ಭವನದ ಮುಂಭಾಗ ಪಾರ್ಕಿಂಗ್‌ನಲ್ಲಿ ನಿಲ್ಲಿಸಿದ್ದ ಬೈಕ್‌ಗಳ ಹ್ಯಾಂಡಲ್‌ಗಳನ್ನು ಅಲುಗಾಡಿಸಿದ್ದು ಗಮನಕ್ಕೆ ಬಂದಿದ್ದು, ಕೂಡಲೇ ಆತನನ್ನು ವಶಕ್ಕೆ ಪಡೆದು ವಿಚಾರಣೆಗೊಳಪಡಿಸಿದಾಗ ತಪ್ಪೊಪ್ಪಿಕೊಂಡಿದ್ದು, ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ನಂಜನಗೂಡು ಪೊಲೀಸರ ಯಶಸ್ವಿ ಕಾರ್ಯಾಚರಣೆಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೀಮಾ ಲಾಟ್ಕರ್, ಉಪ ವರಿಷ್ಠಾಧಿಕಾರಿ ನಂದಿನಿ, ಅಪರ ಅಧೀಕ್ಷಕ ನಾಗೇಶ್, ಡಿವೈಎಸ್ಪಿ ರಘು, ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	**(ದೂ: 2521923)**
ಭಜೆ ವಾಯುವೇಗಂ (ತೆ)	2 ಪ್ರದರ್ಶನಗಳು
ಘಜಿನಿ (ತ)	2 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	**(ದೂ: 2422871)**
ವೆಪನ್ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	**(ದೂ: 2497199)**
ಕ್ರೂ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	**(ಮೊ:9900820093)**
ಡೆವಿಲ್ ಹಂಟರ್ (ತ)	4 ಪ್ರದರ್ಶನಗಳು
ಗಾಯಿತ್ರಿ	
ಜಡ್ಜ್‌ಮೆಂಟ್ (ಕ)	4 ಪ್ರದರ್ಶನಗಳು
ರಾಜಕಮಲ್	
ಇಂಡಿಯನ್ 1 (ತ)	4 ಪ್ರದರ್ಶನಗಳು
ಸಂಗಂ	
ಗರುಡನ್ (ತ)	4 ಪ್ರದರ್ಶನಗಳು
ಲಿಡೋ	
ರಾಬರ್ಟ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಘಜಿನಿ (ತ)	4 ಪ್ರದರ್ಶನಗಳು
ಪ್ರಭಾ	
ಎ (ಕ)	2 ಪ್ರದರ್ಶನಗಳು
ಡೆವಿಲ್ ಹಂಟರ್ (ತ)	2 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಬ್ಯಾಡ್ ಬಾಯ್ಸ್ ರೈಡ್ or ಡೈ (ಇ): ಬೆ.11.15ಕ್ಕೆ, ಮ.1.40ಕ್ಕೆ, ರಾ.7.25ಕ್ಕೆ, ರಾ.9.55ಕ್ಕೆ, ಘಜಿನಿ (ತ): ಸಂ.4ಕ್ಕೆ.
ಸ್ಕ್ರೀನ್ 2	ಯಂಗ್‌ಮ್ಯಾನ್ (ಕ): ಬೆ.10.40ಕ್ಕೆ, ವೆಪನ್ (ತ): ಮ.1.50ಕ್ಕೆ, ಗರುಡನ್ (ತ): ಸಂ.4.20ಕ್ಕೆ, ಮಿಸ್ಟರ್ ಅಂಡ್ ಮಿಸಸ್ ಮಹಿ (ಹಿಂ): ರಾ.7.05ಕ್ಕೆ, ರಾ.9.50ಕ್ಕೆ.
ಸ್ಕ್ರೀನ್ 3	ದಿ ಜಡ್ಜ್‌ಮೆಂಟ್ (ಕ): ಬೆ.10.40ಕ್ಕೆ, ಕಂಡೋರ್ ಮನೆ ಕಥೆ (ಕ): ಮ.1.45ಕ್ಕೆ, ಸಹರ (ಕ): ಸಂ.4.10ಕ್ಕೆ, ಸತ್ಯಭಾಮ (ತೆ): ರಾ.7.10ಕ್ಕೆ, ಗೋಲಂ (ಮ): ರಾ.9.55ಕ್ಕೆ.
ಸ್ಕ್ರೀನ್ 4	ಮುಂಜ್ಯಾ (ಹಿಂ): ಬೆ.10.30ಕ್ಕೆ, ರಾ.10.05ಕ್ಕೆ, ಇಂಡಿಯನ್ (ತ): ಸಂ.4.05ಕ್ಕೆ, ರಾ.7.05ಕ್ಕೆ, ಮನಮೆ (ತೆ): ಸಂ.4.05ಕ್ಕೆ, ರಾ.9.50ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಮುಂಜ್ಯಾ (ಇಂ): ಬೆ.11ಕ್ಕೆ, ಮ.1.45ಕ್ಕೆ, ಸಂ.4.30ಕ್ಕೆ, ರಾ.7.15ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಬ್ಯಾಡ್ ಬಾಯ್ಸ್ ರೈಡ್ or ಡೈ (ಇ): ಬೆ.11.50ಕ್ಕೆ, ಮ.2.30ಕ್ಕೆ, ಸಂ.5.10ಕ್ಕೆ, ರಾ.7.50ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 3	ಮನಮೆ (ತೆ): ಮ.12.45ಕ್ಕೆ, ರಾ.7ಕ್ಕೆ, ಮಿಸ್ಟರ್ ಅಂಡ್ ಮಿಸಸ್ ಮಹಿ (ಹಿಂ): ಸಂ.4ಕ್ಕೆ, ರಾ.10.15ಕ್ಕೆ.
ಸ್ಕ್ರೀನ್ 4	ರಾಬರ್ಟ್ (ಕ): ಮ.3.10ಕ್ಕೆ, ಸಹರಾ (ಕ): ಸಂ.6.35ಕ್ಕೆ, ಗರುಡನ್ (ತ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಅರಣ್‌ಮನೈ 4 (ತ): ಮ.1.30ಕ್ಕೆ, ರಾ.7.30ಕ್ಕೆ, ಸಹರ (ಕ): ಸಂ.4.30ಕ್ಕೆ.
ಸ್ಕ್ರೀನ್ 2	ಅನರ್ಥ (ಕ): ಸಂ.4.15ಕ್ಕೆ.
ಸ್ಕ್ರೀನ್ 3	ಕಂಡೋರ್ ಮನೆ ಕಥೆ (ಕ): ಮ.1.30ಕ್ಕೆ.
ಸ್ಕ್ರೀನ್ 4	

ಪಿವಿಆರ್ ಸಿನಿಮಾಸ್

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಗರುಡ ಮಾಲ್,

1ನೇ ಮಹಡಿ, ಮೊ.ನಂ: 9901373210

ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1.15ಕ್ಕೆ, ಮ.3.40ಕ್ಕೆ, ರಾ.7.15ಕ್ಕೆ, ರಾ.10ಕ್ಕೆ, ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10.05ಕ್ಕೆ, ಮ.12ಕ್ಕೆ, ಮ.3.10ಕ್ಕೆ, ಸಂ.6.20ಕ್ಕೆ, ರಾ.9.30ಕ್ಕೆ, ಸ್ಟಾರ್ (ತ): ಮ.1ಕ್ಕೆ, ರಾ.7.10ಕ್ಕೆ, ರಾ.10.30ಕ್ಕೆ, 4N6 (ಕ): ಮ.1.05ಕ್ಕೆ, ಅಂಜನೀಪುತ್ರ (ಕ): ಸಂ.4.15ಕ್ಕೆ, ಕೃಷ್ಣಮ್ಮ (ತೆ): ಸಂ.4.20ಕ್ಕೆ, ರಾ.10.15ಕ್ಕೆ, ಪವರ್ (ಕ): ಸಂ.6.40ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಆಂಧ್ರಪ್ರದೇಶದ ಎನ್‌ಡಿಎ ಮುಖ್ಯಮಂತ್ರಿಯಾಗಿ ಎನ್.ಚಂದ್ರಬಾಬು ನಾಯ್ಡು: ಜನಸೇನಾ ನಾಯಕರಾಗಿ ಪವನ್ ಕಲ್ಯಾಣ್ ಆಯ್ಕೆ



ಅಮರಾವತಿ: ಟಿಡಿಪಿ ಮುಖ್ಯಸ್ಥ ಎನ್ ಚಂದ್ರಬಾಬು ನಾಯ್ಡು ಅವರು ಆಂಧ್ರ ಪ್ರದೇಶ ವಿಧಾನಸಭೆಯ ಎನ್‌ಡಿಎ ನಾಯಕ ರಾಗಿ ಮಂಗಳವಾರ ಆಯ್ಕೆಯಾಗಿದ್ದಾರೆ.

ವಿಜಯವಾಡದಲ್ಲಿ ನಡೆದ ತೆಲುಗು ದೇಶಂ ಪಕ್ಷ, ಜನಸೇನಾ ಮತ್ತು ಬಿಜೆಪಿ ಶಾಸಕರ ಸಭೆಯಲ್ಲಿ ಎಲ್ಲ ಶಾಸಕರು ನಾಯ್ಡು ಅವರನ್ನು ಅವಿರೋಧವಾಗಿ ಆಯ್ಕೆ ಮಾಡಿದ್ದಾರೆ. ಆಂಧ್ರಪ್ರದೇಶ ಬಿಜೆಪಿ ಮುಖ್ಯಸ್ಥೆ ಡಿ. ಪುರಂದರೇಶ್ವರಿ ಮತ್ತು ಜನಸೇನಾ ಮುಖ್ಯಸ್ಥ ಪವನ್ ಕಲ್ಯಾಣ್ ಕೂಡ ಎನ್‌ಡಿಎ ಸಭೆಯಲ್ಲಿ ಭಾಗವಹಿಸಿ, ನಾಯ್ಡು ಅವರನ್ನು ಸಿಎಂ ಅಭ್ಯರ್ಥಿಯಾಗಿ ಬೆಂಬಲಿಸಿದರು.

ಇದಕ್ಕೂ ಮುನ್ನ ಬೆಳಗ್ಗೆ ನಾಯ್ಡು ಅವರು ಟಿಡಿಪಿ ಶಾಸಕಾಂಗ ಪಕ್ಷದ ನಾಯಕ ರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಟಿಡಿಪಿ ನಾಯಕ ಕೆ ಅಚ್ಚೆನ್ ನಾಯ್ಡು ತಿಳಿಸಿದ್ದಾರೆ.

ಜನಸೇನಾ ಪಕ್ಷದ ನಾಯಕರಾಗಿ ಪವನ್ ಕಲ್ಯಾಣ್: ಆಂಧ್ರಪ್ರದೇಶ ವಿಧಾನಸಭೆಯಲ್ಲಿ ಜನಸೇನಾ ಪಕ್ಷದ ನಾಯಕರನ್ನಾಗಿ ಪಕ್ಷದ ಮುಖ್ಯಸ್ಥ ಪವನ್ ಕಲ್ಯಾಣ್ ಅವರನ್ನು ಶಾಸಕರು ಮಂಗಳವಾರ ಆಯ್ಕೆ ಮಾಡಿದ್ದಾರೆ. ಟಿಡಿಪಿ ಮುಖ್ಯಸ್ಥ ಎನ್.ಚಂದ್ರಬಾಬು ನಾಯ್ಡು ಅವರನ್ನು ಸದನದಲ್ಲಿ ಶಾಸಕಾಂಗ ಪಕ್ಷದ ನಾಯಕನನ್ನಾಗಿ ಆಯ್ಕೆ ಮಾಡುವ ಎನ್‌ಡಿಎ ಶಾಸಕರ ಸಭೆಗೆ ಮುನ್ನ ಈ ಕ್ರಮ ಕೈಗೊಳ್ಳಲಾಗಿದೆ.

ತೆನಾಲಿ ಶಾಸಕ ಎನ್ ಮನೋಹರ್ ಅವರು ಪವನ್ ಕಲ್ಯಾಣ್ ಅವರ ಹೆಸರನ್ನು ವಿಧಾನಸಭೆಯ ಪಕ್ಷದ ನಾಯಕರನ್ನಾಗಿ ಪ್ರಸ್ತಾಪಿಸಿದರು. ಇದನ್ನು ಇತರ ಸದಸ್ಯರು ಸರ್ವಾನುಮತದಿಂದ ಬೆಂಬಲಿಸಿದರು ಎಂದು ಪಕ್ಷದ ಮೂಲಗಳು ತಿಳಿಸಿವೆ.

175 ಸದಸ್ಯ ಬಲದ ಸದನದಲ್ಲಿ ಜನ ಸೇನಾ 21 ಶಾಸಕರನ್ನು ಹೊಂದಿದೆ. ಆಂಧ್ರ ಪ್ರದೇಶದಲ್ಲಿ 164 ವಿಧಾನಸಭೆ ಕ್ಷೇತ್ರಗಳಲ್ಲಿ ಎನ್‌ಡಿಎ (ಟಿಡಿಪಿ–135, ಜನಸೇನಾ–21 ಮತ್ತು ಬಿಜೆಪಿ–8) ಬಹುಮತದೊಂದಿಗೆ ಭರ್ಜರಿ ಜಯ ಸಾಧಿಸಿದೆ.

ಅಮರಾವತಿಯೇ ಆಂಧ್ರದ ಏಕೈಕ ರಾಜಧಾನಿ

ನಿಯೋಜಿತ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಘೋಷಣೆ

ಅಮರಾವತಿ: ಆಂಧ್ರಪ್ರದೇಶದ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸುವ ಒಂದು ದಿನ ಮೊದಲು, ಟಿಡಿಪಿ ಮುಖ್ಯಸ್ಥ ಎನ್.ಚಂದ್ರಬಾಬು ನಾಯ್ಡು ಮಂಗಳವಾರ ಅಮರಾವತಿ ರಾಜ್ಯದ ಏಕೈಕ ರಾಜಧಾನಿಯಾಗಲಿದೆ ಎಂದು ಘೋಷಿಸಿದ್ದಾರೆ.

ಆಂಧ್ರಪ್ರದೇಶ ವಿಧಾನಸಭೆಯಲ್ಲಿ ಎನ್‌ಡಿಎ ನಾಯಕರಾಗಿ ಅವಿರೋಧ ವಾಗಿ ಆಯ್ಕೆಯಾದ ಬಳಿಕ ಟಿಡಿಪಿ, ಬಿಜೆಪಿ ಮತ್ತು ಜನಸೇನಾ ಶಾಸಕರ ಜಂಟಿ ಸಭೆಯನ್ನು ಉದ್ದೇಶಿಸಿ ಮಾತನಾಡಿದ ನಾಯ್ಡು ಈ ಘೋಷಣೆ ಮಾಡಿದರು.

ನಮ್ಮ ಸರ್ಕಾರದಲ್ಲಿ ಮೂರು ರಾಜಧಾನಿಗಳ ನೆಪದಲ್ಲಿ ಆಟ ನಡೆಯುವುದಿಲ್ಲ. ಇನ್ಮುಂದೆ ನಮ್ಮ ರಾಜಧಾನಿ ಅಮರಾವತಿ. ಅಮರಾವತಿಯೇ ಆಂಧ್ರ ಪ್ರದೇಶದ ಏಕೈಕ ರಾಜಧಾನಿ ಎಂದು ನಾಯ್ಡು ಹೇಳಿದರು. ವಿಭಜನೆ ನಂತರ ಅಸ್ತಿತ್ವಕ್ಕೆ ಬಂದ ಆಂಧ್ರಪ್ರದೇಶದ ಮೊದಲ ಮುಖ್ಯಮಂತ್ರಿಯಾಗಿ 2014 ರಿಂದ 2019ರವರೆಗೆ ಅಧಿಕಾರದಲ್ಲಿದ್ದ ಟಿಡಿಪಿ ವರಿಷ್ಠ ಎನ್.ಚಂದ್ರಬಾಬು ನಾಯ್ಡು, ಅಮರಾವತಿಯನ್ನು ರಾಜ್ಯದ ರಾಜಧಾನಿಯಾಗಿ ಘೋಷಿಸಿದ್ದರು.

ವಿಜಯವಾಡ ಮತ್ತು ಗುಂಟೂರು ನಗರಗಳ ನಡುವೆ ಇರುವ ಅಮರಾವತಿಯನ್ನು ಪರಿಸರಸ್ನೇಹಿ ಮತ್ತು ಸುಸ್ಥಿರ ಅಭಿವೃದ್ಧಿಯನ್ನು ಹೊಂದಿದ ನಗರವನ್ನಾಗಿ ರೂಪಿಸುವುದು ನಾಯ್ಡು ಅವರ ಯೋಜನೆಯಾಗಿತ್ತು. ಆದರೆ, 2019 ರಲ್ಲಿ ಟಿಡಿಪಿ ಅಧಿಕಾರವನ್ನು ಕಳೆದುಕೊಂಡಾಗ ಮತ್ತು ವೈಎಸ್ ಜಗನ್ ಮೋಹನ್ ರೆಡ್ಡಿ ನೇತೃತ್ವದ ವೈಎಸ್‌ಆರ್‌ಸಿಪಿ ಭರ್ಜರಿ ಜಯ ಸಾಧಿಸಿ ಅಧಿಕಾರಕ್ಕೇರಿದಾಗ ನಾಯ್ಡು ಅವರ ಈ ಯೋಜನೆಯನ್ನ ಕೈಬಿಟ್ಟಿತ್ತು ಮತ್ತು ಮೂರು ರಾಜಧಾನಿಗಳ ಹೊಸ ಸಿದ್ಧಾಂತವನ್ನು ಪ್ರತಿಪಾದಿಸಿತು.

ಇದೀಗ ಟಿಡಿಪಿ ಅಧಿಕಾರದ ಚುಕ್ಕಾಣಿ ಹಿಡಿಯಲಿರುವ ಕಾರಣ, ಈ ಯೋಜನೆಗೆ ಮರುಜೀವ ಸಿಕ್ಕಿದೆ. ಆಂಧ್ರಪ್ರದೇಶಕ್ಕೆ ಅಮರಾವತಿಯೇ ಏಕೈಕ ರಾಜಧಾನಿಯಾಗಲಿದೆ ಎಂದು ನಾಯ್ಡು ಘೋಷಿಸಿದ್ದಾರೆ. ಟಿಡಿಪಿ, ಬಿಜೆಪಿ ಮತ್ತು ಜನಸೇನಾ ಎನ್‌ಡಿಎ ಮೈತ್ರಿಕೂಟ ರಾಜ್ಯದಲ್ಲಿ ಇತ್ತೀಚೆಗೆ ಏಕಕಾಲಕ್ಕೆ ನಡೆದ ಲೋಕಸಭೆ ಮತ್ತು ವಿಧಾನಸಭೆ ಚುನಾವಣೆಯಲ್ಲಿ 164 ವಿಧಾನಸಭೆ ಮತ್ತು 21 ಲೋಕಸಭೆ ಸ್ಥಾನಗಳೊಂದಿಗೆ ಭರ್ಜರಿ ಜಯ ಸಾಧಿಸಿದೆ.

ಅಶ್ಲೀಲ ಪೆನ್‌ಡ್ರೈವ್ ನಕಲು ಮಾಡುವುದೂ ಪಾಪದ ಕೆಲಸ: ಹೈಕೋರ್ಟ್



ಬೆಂಗಳೂರು: ಲೈಂಗಿಕ ದೌರ್ಜನ್ಯದ ಪೆನ್‌ಡ್ರೈವ್‌ಗಳನ್ನು ನಕಲಿಸುವುದು ಮತ್ತು ಸೋರಿಕೆ ಮಾಡುವುದೂ ಅತ್ಯಂತ ಅಪಾಯಕಾರಿ ಮತ್ತು ಪಾಪದ ಕೆಲಸ ಎಂದು ಹೈಕೋರ್ಟ್ ಸೋಮವಾರ ಮೌಖಿಕವಾಗಿ ಅಭಿಪ್ರಾಯಪಟ್ಟಿದೆ.

ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಭಾಗಿಯಾಗಿದ್ದಾರೆ ಎನ್ನಲಾದ ಲೈಂಗಿಕ ದೌರ್ಜನ್ಯದ ಪೆನ್‌ಡ್ರೈವ್‌ಗಳನ್ನು ನಕಲಿಸಿ ಹಂಚಿದ್ದ ಪ್ರಮುಖ ಆರೋಪಿ ಶರತ್ ವಿರುದ್ಧದ ವಿಚಾರಣೆಗೆ ತಡೆಯಾಜ್ಞೆ ನೀಡಲು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ನಿರಾಕರಿಸಿದ್ದಾರೆ.

ಹೆಚ್ಚುವರಿ ಪಬ್ಲಿಕ್ ಪ್ರಾಸಿಕ್ಯೂಟರ್ ಬಿ.ಎನ್.ಜಗದೀಶ ಅವರು ಪ್ರಕರಣದಲ್ಲಿ ಶರತ್ ಪಾತ್ರವನ್ನು ಸೂಚಿಸುವ ತನಿಖಾ ದಾಖಲೆಗಳನ್ನು ನ್ಯಾಯಾಲಯದ ಮುಂದೆ ಇರಿಸಿದರು.

ವಿಶೇಷ ತನಿಖಾ ದಳದ ಅಧಿಕಾರಿಗಳು ಶರತ್ ಅವರಿಗೆ ಸೇರಿದ ಟ್ಯಾಬ್ಲೆಟ್ ಮತ್ತು ವಿವಿಧ ಸಿಡಿಗಳು, ಡಿವಿಆರ್ ಅನ್ನು ವಶಪಡಿಸಿಕೊಂಡಿದ್ದು, ಶರತ್ ಅವರನ್ನು ಕಸ್ಟಡಿಗೆ ನೀಡುವಂತೆ ಮನವಿ ಮಾಡಿದೆ. ಶರತ್ ಅವರನ್ನು ವಿಚಾರಣೆಗೆ ತೆಗೆದುಕೊಳ್ಳಲು ಕೇವಲ ಮಾಹಿತಿ ಇದ್ದರಷ್ಟೇ ಸಾಕಾಗುವುದಿಲ್ಲ. 30 ದಿನಗಳಾದರೂ ಶರತ್ ವಿರುದ್ಧ ಯಾವುದೇ ಅಪರಾಧಗಳು ಸಾಬೀತಾಗಿಲ್ಲ. ತನ್ನ ವಿರುದ್ಧದ ಕ್ರಿಮಿನಲ್ ಮೊಕದ್ದಮೆಗಳನ್ನು ರದ್ದುಗೊಳಿಸುವಂತೆ ಕೋರಿ ಶರತ್ ಹೈಕೋರ್ಟ್ ಮೆಟ್ಟಿಲೇರಿದ ಬಳಿಕ ತನಿಖಾ ಸಂಸ್ಥೆ ಇದನ್ನು ಗಂಭೀರವಾಗಿ ಪರಿಗಣಿಸಿದೆ ಎಂದು ವಾದಿಸಿದರು. ಈ ಪ್ರಕರಣ ರಾಜಕೀಯ ದ್ವೇಷದಿಂದ ಹುಟ್ಟಿಕೊಂಡಿದ್ದು, ಶರತ್ ವಿರುದ್ಧ ಯಾವುದೇ ಆರೋಪಗಳೂ ಇಲ್ಲ ಎಂದು ಹೇಳಿದರು.

ಈ ವೇಳೆ ಪ್ರತಿಕ್ರಿಯಿಸಿದ ನ್ಯಾಯಾಲಯವು, ಯಾವ ರಾಜಕೀಯ ದ್ವೇಷ ಇರಲಿ. ಇದನ್ನು ಯಾವುದೇ ವ್ಯಕ್ತಿ ಮಾಡಿದ್ದರೂ ಅದು ಪಾಪದ ಕೆಲಸ. ಇಂತಹ ಕೆಲಸದಿಂದ ಪುರುಷ ಏನನ್ನೂ ಕಳೆದುಕೊಳ್ಳುವುದಿಲ್ಲ. ಆದರೆ, ಮಹಿಳೆ ಅವಮಾನಕ್ಕೆ ಒಳಗಾಗುತ್ತಾಳೆಂದು ಅಭಿಪ್ರಾಯಪಟ್ಟಿತು.

ಮೈಸೂರು ಮಿತ್ರ
ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸ ಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತು ದಾರರೊಡನೆಯೇ ವ್ಯವಹರಿಸ ಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಕಾವೇರಿ ನೀರಾವರಿ ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಒಂದು ಉದ್ಯಮ)
ಕಾರ್ಯಪಾಲಕ ಇಂಜಿನಿಯರ್‌ರವರ ಕಛೇರಿ, ಕಾವೇರಿ ನೀರಾವರಿ ನಿಗಮ ನಿಯಮಿತ, ರೂಪರೇಖಾ ಮತ್ತು ತನಿಖಾ ವಿಭಾಗ, ಬನ್ನೂರು–571101.
ಫೋ: 08227–275653, ಫ್ಯಾಕ್ಸ್: 08227–275653
ಇ–ಮೇಲ್: eedidbannur@gmail.com

ಟೆಂಡರ್ ಪ್ರಕಟಣೆ ಸಂಖ್ಯೆ : 02/2024–25: ದಿನಾಂಕ:07.06.2024

(Karnataka Public Procurement Portal ಮೂಲಕ ಮಾತ್ರ) ನೊಂದಾಯಿಸಲ್ಪಟ್ಟ ಅರ್ಹ ಗುತ್ತಿಗೆದಾರರುಗಳಿಂದ ನೀರು ನಿರ್ವಹಣೆ ಕಾಮಗಾರಿಗಳಿಗೆ ಐಟಂವಾರು ಟೆಂಡರ್ ಅನ್ನು ಈ ಕಛೇರಿಯ ಟೆಂಡರ್ ಪ್ರಕಟಣೆ ಸಂಖ್ಯೆ 02/2024–25, ದಿನಾಂಕ:07.06.2024 ರಲ್ಲಿ ಒಟ್ಟು 6 ಕಾಮಗಾರಿಗಳಿಗೆ (ಅಂದಾಜು ಮೊತ್ತ ಕನಿಷ್ಠ ರೂ.41.00 ಲಕ್ಷಗಳು ಮತ್ತು ಗರಿಷ್ಠ ರೂ.49.80 ಲಕ್ಷಗಳು) ಕೆಡಬ್ಲ್ಯೂ–2 ರನ್ವಯ ಟೆಂಡರ್ ಆಹ್ವಾನಿಸಲಾಗಿದ್ದು, ಟೆಂಡರ್ ಸಲ್ಲಿಸುವ ದಿನಾಂಕ ಮತ್ತು ತೆರೆಯುವ ದಿನಾಂಕ ಹಾಗೂ ಇತರೆ ವಿವರಗಳನ್ನು Karnataka Public Procurement Portal ನಲ್ಲಿ ಪಡೆಯಬಹುದು ಅಥವಾ ಈ ಕೆಳಗೆ ಸಹಿ/– ಮಾಡಿರುವ ಕಛೇರಿಯಿಂದ ಪಡೆಯಬಹುದಾಗಿರುತ್ತದೆ.

DIPR/DDMYS-53/KSMCA-43/2024-25 ಸಹಿ/– ಕಾರ್ಯಪಾಲಕ ಅಭಿಯಂತರರು

ಕರ್ನಾಟಕ ಸರ್ಕಾರ
ಮುಖ್ಯ ವೈದ್ಯಾಧಿಕಾರಿಗಳ ಕಚೇರಿ
ಸಾರ್ವಜನಿಕ ಆಸ್ಪತ್ರೆ, ಶ್ರೀರಂಗಪಟ್ಟಣ, ಮಂಡ್ಯ ಜಿಲ್ಲೆ
E-mail: gh.srpatna@gmail.com
Phone no: 08236-295435
ಸಂಖ್ಯೆ:ಸಾಆಶ್ರೀ/ಸರಬ/37/2024–25 ದಿನಾಂಕ:10.06.2024

ಇ– ಪ್ರಕ್ಯೂರ್‌ಮೆಂಟ್ ಪ್ರಕಟಣೆ

2024–25 ನೇ ಸಾಲಿನ 31.03.2025 ರವರೆಗೆ ಮಾತ್ರ ಹೊರ ಗುತ್ತಿಗೆ ಆಧಾರದ ಮೇಲೆ ಗ್ರೂಪ್ ಡಿ ಕಾರ್ಮಿಕರ ಅರ್ಹ ಟೆಂಡರ್ದಾರರಿಂದ/ ಮಾನ್ಯತೆ ಪಡೆದ ಅಧಿಕೃತ ಸಂಸ್ಥೆಗಳಿಂದ ಕರ್ನಾಟಕ ಪಾರದರ್ಶಕ ಅಧಿನಿಯಮ 1999–2000 ಮೇರೆಗೆ ದ್ವಿಲಕೋಟೆ ಪದ್ಧತಿಯನ್ವಯ ಮೊಹರಾದ ಟೆಂಡರ್‌ಗಳನ್ನು ಮರು ಆಹ್ವಾನಿಸಲಾಗಿದೆ. ಟೆಂಡರ್ ಅಂದಾಜು ಮೊತ್ತ, ಇ.ಎಂ.ಡಿ ಮೊತ್ತ ಮತ್ತು ಇತರೆ ಟೆಂಡರ್‌ಗೆ ಸಂಬಂದಿಸಿದ ಮಾಹಿತಿಯನ್ನು www.eproc.karnataka.gov.in ವೆಬ್‌ಸೈಟ್ ನಿಂದ ಡೌನ್ ಲೋಡ್ ಮಾಡಿಕೊಂಡು ಸಲ್ಲಿಸುವ ಮೂಲಕ ಇ ಪ್ರಕ್ಯೂರ್ ಮೆಂಟ್ ನಲ್ಲಿ ಭಾಗವಹಿಸಬಹುದು. ಭರ್ತಿಮಾಡಿದ ಟೆಂಡರ್‌ಗಳನ್ನು **ದಿ:01.07.2024 ಸಂಜೆ 4 ಗಂಟೆಯೊಳಗೆ ಸಲ್ಲಿಸಬೇಕು.** ಹೆಚ್ಚಿನ ವಿವರಗಳನ್ನು ಮೇಲ್ಕಂಡ ಕಛೇರಿಯಿಂದ ಕಛೇರಿ ವೇಳೆಯಲ್ಲಿ ಪಡೆಯಬಹುದಾಗಿದೆ. ಅಥವಾ ವೆಬ್‌ಸೈಟ್‌ನಲ್ಲಿ ಕಾಣಬಹುದು.

ಸಹಿ/–ಮುಖ್ಯ ವೈದ್ಯಾಧಿಕಾರಿಗಳು, ಸಾರ್ವಜನಿಕ ಆಸ್ಪತ್ರೆ, ಶ್ರೀರಂಗಪಟ್ಟಣ, ಮಂಡ್ಯ ಜಿಲ್ಲೆ

ವಾಪಾಸಂಇ/ಸಹಿ–ಮಂ/ಕೆಎಸ್ಎಂಸಿಎ/034/2024–25

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ
ನಂ.49, ಪರಿಸರ ಭವನ, ಚರ್ಚ್ ಸ್ಟ್ರೀಟ್, ಬೆಂಗಳೂರು - 560 001.
ದೂ:080-25586520 / 25589112 ಫ್ಯಾಕ್ಸ್ : 080-25586321
ಇ ಮೇಲ್: contact@kspcb.gov.in ವೆಬ್‌ಸೈಟ್: https://kspcb.karnataka.gov.in

No.PCB 223 Infra EPH 2023/1011 ದಿನಾಂಕ: 06.06.2024

ಪರಿಸರ ಸಾರ್ವಜನಿಕ ಸಭೆಗಾಗಿ ಸೂಚನೆ

ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿಯವರು ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು ವರುಣಾ ಹೋಬಳಿ, ಕೋಚನಹಳ್ಳಿ ಗ್ರಾಮದ 234.38 ಎಕರೆ (94.85 ಹೆಕ್ಟೇರ್) ಪ್ರದೇಶದಲ್ಲಿ ಕೋಚನಹಳ್ಳಿ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿ ಪಡಿಸಲು ಉದ್ದೇಶಿಸಿರುತ್ತಾರೆ. ಈ ಪ್ರಸ್ತಾಪಿತ ಯೋಜನೆಗೆ ಪರಿಸರ ಆಘಾತ ಅಧ್ಯಯನ ಅಧಿಸೂಚನೆ ದಿನಾಂಕ 14.09.2006ರ ಪ್ರಕಾರ ಪರಿಸರ ವಿಮೋಚನಾ ಪತ್ರವನ್ನು ಪಡೆಯಬೇಕಾಗಿರುತ್ತದೆ ಮತ್ತು ಅದರ ಅಂಗವಾಗಿ ಸಾರ್ವಜನಿಕ ಪರಿಸರ ಆಲಿಕೆ ಸಭೆಯನ್ನು ನಡೆಸಬೇಕಾಗಿರುತ್ತದೆ. ಅದರಂತೆ ರಾಜ್ಯ ಮಟ್ಟದ ಪರಿಸರ ಆಘಾತ ಅಂದಾಜೀಕರಣ ಪ್ರಾಧಿಕಾರ, ಕರ್ನಾಟಕ ಇವರಿಂದ ಉಲ್ಲೇಖಿಸಿದ ನಿಯಮಗಳು (Terms of Reference, TOR) ಪತ್ರವನ್ನು File No.SEIAA 26 IND 2023, ದಿನಾಂಕ: 31.05.2023 ರಂದು ನೀಡಿರುತ್ತಾರೆ ಮತ್ತು ಪ್ರವರ್ತಕರ ಪತ್ರ ಸಂಖ್ಯೆ KIADB/EE-Mysuru/F.No./3007/2023-24 ದಿನಾಂಕ: 13.12.2023ರ ಹಾಗೂ ಪರಿಸರ ಅಧಿಕಾರಿ, ಪ್ರಾದೇಶಿಕ ಕಛೇರಿ, ಮೈಸೂರು–Iರವರ ಪತ್ರ ಸಂಖ್ಯೆ:ಕರಾಮಾನಿಮಂ/ಪ್ರಾ.ಕ–I (ಮೈ–ನಗರ)/ದೂರು/2024–2025/233, ದಿನಾಂಕ: 28.05.2024ರ ಪ್ರಕಾರ ಸಾರ್ವಜನಿಕ ಪರಿಸರ ಆಲಿಕೆ ಸಭೆಯನ್ನು ನಡೆಸಲು ಮಾನ್ಯ ಮೈಸೂರು ಜಿಲ್ಲಾಧಿಕಾರಿಗಳು ದಿನಾಂಕ: 08.07.2024 ರಂದು ಬೆಳಗ್ಗೆ 11.00 ಗಂಟೆಗೆ ನಿಗಧಿಪಡಿಸಿರುತ್ತಾರೆ. ಸದರಿ ಪರಿಸರ ಸಾರ್ವಜನಿಕ ಆಲಿಕೆ ಸಭೆಯ ವಿವರಗಳು ಈ ಕೆಳಕಂಡಂತಿವೆ.

1.	ಕಂಪನಿಯ ಹೆಸರು ಮತ್ತು ವಿಳಾಸ. ಕಾರ್ಯಪಾಲಕ ಅಭಿಯಂತರರು, ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ, ಮೇಟಗಳ್ಳಿ ಕೈಗಾರಿಕಾ ಪ್ರದೇಶ, ಕೆಆರ್‌ಎಸ್ ರಸ್ತೆ (ಏಕಾಂತ್ ಟೈರ್ ಹತ್ತಿರ), ಮೈಸೂರು–570016.
2.	ಉದ್ದೇಶಿತ ಯೋಜನೆಯ ಸ್ಥಳ: ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ವರುಣಾ ಹೋಬಳಿ, ಕೋಚನಹಳ್ಳಿ ಗ್ರಾಮದ 234.38 ಎಕರೆ (94.85 ಹೆಕ್ಟೇರ್) ಪ್ರದೇಶದಲ್ಲಿ ಕೋಚನಹಳ್ಳಿ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿ ಪಡಿಸುವ ಯೋಜನೆ ಹೊಂದಿದೆ.
3.	ಯೋಜನೆಯ ಕಾರ್ಯಾಚಟುವಟಿಕೆ: ಕೋಚನಹಳ್ಳಿ ಗ್ರಾಮದ 234.38 ಎಕರೆ (94.85 ಹೆಕ್ಟೇರ್) ಪ್ರದೇಶದಲ್ಲಿ ಕೋಚನಹಳ್ಳಿ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿಪಡಿಸುವ ಕುರಿತು.
4.	ಪರಿಸರ ಸಾರ್ವಜನಿಕ ಸಭೆಯ ಸ್ಥಳ, ದಿನಾಂಕ ಮತ್ತು ಸಮಯ: 08ನೇ ಜುಲೈ 2024 ರಂದು ಸೋಮವಾರ ಬೆಳಗ್ಗೆ 11.00 ಘಂಟೆಗೆ ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ವರುಣಾ ಹೋಬಳಿ, ಕೋಚನಹಳ್ಳಿ ಗ್ರಾಮದ 234.38 ಎಕರೆ (94.85 ಹೆಕ್ಟೇರ್) ಪ್ರದೇಶದಲ್ಲಿ ಕೋಚನಹಳ್ಳಿ ಕೈಗಾರಿಕಾ ಪ್ರದೇಶ.
5.	ಯೋಜನೆಯ ವೆಚ್ಚ: ರೂ.143.64 ಕೋಟಿ (ಯೋಜನಾ ಮೊತ್ತ)
6.	ಯೋಜನೆಯ ದಾಸ್ತವೇಜುಗಳನ್ನು ಸಾರ್ವಜನಿಕ ಪರಾಮರ್ಶೆಗೆ ಇಡುವ ಸ್ಥಳ: (ಅ) ಜಿಲ್ಲಾಧಿಕಾರಿಗಳ ಕಛೇರಿ, ಮೈಸೂರು ಜಿಲ್ಲೆ, (ಆ) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಕಛೇರಿ, ಜಿಲ್ಲಾ ಪಂಚಾಯತ್ ಮೈಸೂರು ಜಿಲ್ಲೆ, (ಇ) ತಹಶೀಲ್ದಾರ್ ಕಾರ್ಯಾಲಯ, ಮೈಸೂರು (ಈ) ಜಿಲ್ಲಾ ಕೈಗಾರಿಕಾ ಕೇಂದ್ರ, ಮೈಸೂರು ಜಿಲ್ಲೆ, (ಉ) ತಾಲ್ಲೂಕು ಪಂಚಾಯತ್ ಕಛೇರಿ, ಮೈಸೂರು (ಊ) ಗ್ರಾಮ ಪಂಚಾಯಿತಿ ಕಾರ್ಯಾಲಯ, ಕೋಚನಹಳ್ಳಿ, ಮೈಸೂರು ತಾಲ್ಲೂಕು (ಋ) ಹಿರಿಯ ಪರಿಸರ ಅಧಿಕಾರಿಗಳು, ಮೈಸೂರು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ಲಾಟ್ ಸಂಖ್ಯೆ: 436–ಡಿ, 1ನೇ ಮಹಡಿ, ಹೆಬ್ಬಾಳ ಕೈಗಾರಿಕಾ ಪ್ರದೇಶ, ಕೆಆರ್‌ಎಸ್ ರಸ್ತೆ, ಮೇಟಗಳ್ಳಿ, ಮೈಸೂರು–570016. (ೠ) ಪ್ರಾದೇಶಿಕ ಕಛೇರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಮೈಸೂರು–1, ಪ್ಲಾಟ್ ಸಂಖ್ಯೆ: 436–ಡಿ, ಹೆಬ್ಬಾಳ ಕೈಗಾರಿಕಾ ಪ್ರದೇಶ, ಕೆಆರ್‌ಎಸ್ ರಸ್ತೆ, ಮೇಟಗಳ್ಳಿ, ಮೈಸೂರು–570016. (ಎ) ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಮಂತ್ರಾಲಯ, ದಕ್ಷಿಣ ವಲಯ ಕಛೇರಿ, ನಂ.ಇ–3/240, ಕೇಂದ್ರೀಯ ಸದನ, 4ನೇ ಮಹಡಿ, ಇ ಮತ್ತು ಎಫ್ ವಿಂಗ್ಸ್, 17ನೇ ಮುಖ್ಯ ರಸ್ತೆ, 2ನೇ ಬ್ಲಾಕ್, ಕೋರಮಂಗಲ, ಬೆಂಗಳೂರು–560 034, (ಐ) ಸಹಾಯ ಕೇಂದ್ರ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ನೆಲ ಅಂತಸ್ತು, ನಂ.49, ಪರಿಸರ ಭವನ, ಚರ್ಚ್ ಸ್ಟ್ರೀಟ್, ಬೆಂಗಳೂರು–560 001.

ಸೂಚನೆ: ಯೋಜನಾ ಸ್ಥಳದಲ್ಲಿ ವಾಸವಾಗಿರುವ ಆಸಕ್ತ ನಿವಾಸಿಗಳು, ಪರಿಸರಾಸಕ್ತ ಗುಂಪುಗಳು ಮತ್ತು ಈ ಯೋಜನೆಯಿಂದ ತೊಂದರೆಗೊಳಗಾಗಬಹುದಾದ ಸಾರ್ವಜನಿಕರು ತಮ್ಮ ಸಲಹೆಗಳು, ಅನಿಸಿಕೆಗಳು, ಟೀಕೆ–ಟಿಪ್ಪಣಿಗಳು ಹಾಗು ಅಹವಾಲುಗಳನ್ನು ಮೌಖಿಕ/ಲಿಖಿತ/ಮಿಂಚಂಚೆ ಮೂಲಕ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ/ಅಧ್ಯಕ್ಷರು, ಪರಿಸರ ಸಾರ್ವಜನಿಕ ಸಮಿತಿ (ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ) ಇವರಿಗೆ ಈ ಅಧಿಸೂಚನೆ ಪ್ರಕಟವಾದ 30 ದಿನಗಳ ಒಳಗೆ ಸಲ್ಲಿಸತಕ್ಕದ್ದು. ಇಚ್ಛೆಯುಳ್ಳ ಸಾರ್ವಜನಿಕರು ಮೇಲೆ ತಿಳಿಸಿರುವ ದಿನದಂದು ಪರಿಸರ ಸಾರ್ವಜನಿಕ ಸಭೆಯಲ್ಲಿ ಪಾಲ್ಗೊಳ್ಳಬಹುದಾಗಿದೆ. ಹೆಚ್ಚಿನ ವಿವರಗಳನ್ನು ಮಂಡಳಿಯ ಜಾಲತಾಣ ವೆಬ್‌ಸೈಟ್ : kspcb.karnataka.gov.in ನಲ್ಲಿ ಪಡೆಯಬಹುದು.

ಸಹಿ/–
ಸದಸ್ಯ ಕಾರ್ಯದರ್ಶಿ

DIPR/MYS/KAVITA/58/24-25